ಸಂಪುಟ: 04 ಸಂಚಿಕೆ: 198 ಪುಟಗಳು: 08 ಸೋಮವಾರ 30 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಜೀವನ ಎಂಬುದು ಕಠಿಣ ಸತ್ಯ,ಅದನ್ನು ಎದುರಿಸಿ, ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

## ಗಣೇಶೋತ್ಸವ ನಿಲ್ಲಿಸುವ ಷಡ್ಯಂತ್ರ, ಪಿತೂರಿ ನಡೆಯುತ್ತಿದೆ: ಯತ್ನಾಳ್

• ಉದಯವಾಹಿನಿ, ದಾವಣಗೆರೆ

ನಾಗಮಂಗಲದಿಂದ ದಾವಣಗೆರೆ ಸೇರಿದಂತೆ ಎಲ್ಲಾ ಕಡೆ ಗಣೇಶೋತ್ಸವದ ಮೇಲೆ ಕಲ್ಲು ತೂರಾಟ, ಹಿಂದು ಸಮಾಜದ ಮುಖಂಡರ ಮೇಲೆ ಕೇಸ್ ದಾಖಲಾಗಲು ಕಾಂಗ್ರೆಸ್ ಸರ್ಕಾರದ ತುಷ್ಟೀಕರಣವೇ ಕಾರಣ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ದೂರಿದರು. ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಗಣೇಶೋತ್ಸವ ನಿಲ್ಲಿಸುವ ಷಡ್ಯಂತ್ರ, ಪಿತೂರಿ ವ್ಯವಸ್ಥಿತವಾಗಿ ನಡೆಸಲಾಗುತ್ತಿದೆ ಎಂದು ದೂರಿದರು.

ನಾಗಮಂಗಲದಲ್ಲಿನ ಗಣೇಶೋತ್ಸವ ಸಂದರ್ಭದಲ್ಲಿ ಪ್ರಚೋದನೆ ನೀಡಿದವರು ಬೇರೆ. ಒಂದರಿಂದ ಮೂವತ್ತೆರಡುವರೆಗೆ ಕೇಸ್ ಹಾಕಲಾಗಿದೆ ಎಂದು ದೂರಿದರು. ದಾವಣಗೆರೆಯಲ್ಲಿ ಗಣೇಶೋತ್ಸವ ಸಂದರ್ಭದಲ್ಲಿ ಸವಾಲು ಹಾಕಿದ್ದವರು ಯಾರು ಎಂದು ಪ್ರಶ್ನಿಸಿದ ಅವರು ಸವಾಲು ಹಾಕಿದವರಿಗೆ ಹಿಂದುಗಳು ಉತ್ತರ ನೀಡ ಬಾರದಾ ಮಹಾನ್ ನಾಯಕರನ್ನು ನೀಡಿದ ಹಿಂದೂಗಳು ಷಂಡರಲ್ಲ. ಅಚ್ಚರಿ ಎನ್ನುವಂತೆ ಹಿಂದೂ ಮುಖಂಡ ಸತೀಶ್ ಪೂಜಾರಿ ಅವರ ವಂಶವೃಕ್ಷ ಕೇಳಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಭಾಷಣ ಮಾಡುವಾಗಲೇ ಮಲ್ಲಿಕಾರ್ಜುನ್ ಖರ್ಗೆ ಅಸ್ವಸ್ಥ

• ಉದಯವಾಹಿನಿ, ನವದಹೆಲಿ

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ (82) ಅವರು ಇಂದು ಭಾಷಣ ಮಾಡುವಾಗಲೇ ವೇದಿಕೆ ಮೇಲೆ ದಿಢೀರ್ ಆಗಿ ಅಸ್ವಸ್ಥರಾದ ಘಟನೆ ಜಮ್ಮು-ಕಾಶ್ಮೀರದ ಕಥುವಾದಲ್ಲಿ ನಡೆದಿದೆ.

ಜಮ್ಮು ಕಾಶ್ಮೀರದ ಚುನಾವಣೆ ಪ್ರಚಾರದ ಕಾರ್ಯಕ್ರಮದಲ್ಲಿ ಭಾಗಿಯಾಗಿ ವೇದಿಕೆ ಭಾಷಣ ಮಾಡುತ್ತಿದ್ದ ಅವರ ಧ್ವನಿಯು ತೀವ್ರವಾಗಿ ಕಟ್ಟಿಕೊಂಡಿದ್ದಲ್ಲದೇ, ಅವರಿಗೆ ಮಾತನಾಡಲೂ ಆಗದಷ್ಟು ಆಯಾಸ ಅನುಭವಿಸಿದ್ದಾರೆ. ಕೂಡಲೇ ವೇದಿಕೆ ಮೇಲಿದ್ದ ಕೆಲ ಕಾಂಗ್ರೆಸ್ ನಾಯಕರು ಹಾಗೂ ಖರ್ಗೆ ಅವರ ಭದ್ರತಾ ಸಿಬ್ಬಂದಿ ಅವರ ನೆರವಿಗೆ ಬಂದು, ಕುಡಿಯಲು ನೀರು ಕೊಟ್ಟಿದ್ದ ಪ್ರಸಂಗ ನಡೆದಿದೆ. ಬಳಿಕ ಕುಳಿತುಕೊಂಡು ಖರ್ಗೆ ಅವರು ಭಾಷಣ ಮಾಡಲು ಮುಂದಾದಾಗಲೂ ಅವರು ತೀವ್ರ ಆಯಾಸ ಅನುಭವಿಸಿದ್ದಾರೆ. ಸದ್ಯ ಖರ್ಗೆ ಅವರ ಆರೋಗ್ಯ ಸ್ಥಿರವಾಗಿದೆ ಎಂದು ತಿಳಿದುಬಂದಿದೆ.

## ಎಚ್‌ಡಿಕೆ ಏನು ಮಾತನಾಡುತ್ತಾರೆ ಎಂಬುದು ಅವರಿಗೇ ಗೊತ್ತಿರಲ್ಲ

• ಉದಯವಾಹಿನಿ, ಬೆಂಗಳೂರು

ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ವಿಚಾರ ಗೊತ್ತಿದೆ. ಕೆಪಿಸಿಸಿ ಕಚೇರಿಯಿಂದಲೇ ಪತ್ರ ಬಹಿರಂಗವಾಗಿದೆ ಎಂಬ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ತಿರುಗೇಟು ನೀಡಿರುವ ಡಿಸಿಎಂ ಡಿ.ಕೆ.ಶಿವಕುಮಾರ್, ಕುಮಾರಸ್ವಾಮಿ ಅವರು ಏನು ಮಾತನಾಡುತ್ತಾರೆ ಎಂಬುದು ಅವರಿಗೇ ಗೊತ್ತಿರುವುದಿಲ್ಲ ಎಂದಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿಸಿಎಂ, ಕೆಪಿಸಿಸಿ ಕಚೇರಿಗೂ ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ಅವರಿಗೂ ಏನು ಸಂಬಂಧ? ಎಂದು ಪ್ರಶ್ನಿಸಿದರು.

ನಾನು ನಿನ್ನೆ ಊರಿನಲ್ಲೇ ಇರಲಿಲ್ಲ, ಸಾತನೂರು, ಕನಕಪುರದಲ್ಲಿ ಕ್ಷೇತ್ರದ ಕೆಲಸ ಸಂಬಂಧ ಪ್ರವಾಸ ಕೈಗೊಂಡಿದ್ದೆ. ಕುಮಾರಸ್ವಾಮಿ ಅವರು ಕೆಪಿಸಿಸಿ ನೆನೆಸಿಕೊಂಡರೆ ನಾನು ಏನು ತಾನೇ ಮಾತನಾಡಲು ಸಾಧ್ಯ ಎಂದರು. ಕುಮಾರಸ್ವಾಮಿ ತಮ್ಮ ಬಳಿ 7 ಸಚಿವರ ಅಕ್ರಮಗಳ ಬಗ್ಗೆ ದಾಖಲೆಗಳಿವೆ ಎಂದು ಹೇಳುತ್ತಿದ್ದಾರೆ. ಅವರ ಬಳಿ ದಾಖಲೆಗಳು ಇದ್ದರೆ ಬಿಡುಗಡೆ ಮಾಡಲಿ. ಚಂದ್ರಶೇಖರ್ ಅವರನ್ನು ನಾನು ನೋಡಿಯೂ ಇಲ್ಲ, ಮಾತನಾಡಿಯೂ ಇಲ್ಲ, ನನಗೆ ಅವರು ಸಿಕ್ಕಿಯೂ ಇಲ್ಲ ಗೊತ್ತೂ ಇಲ್ಲ ಎಂದರು.

## ಇದು ಅಹಂಕಾರದ ಪರಮಾವಧಿ: ಜ್ಞಾನವಿದ್ರೆ ಕ್ಷಮೆಯಾಚಿಸಲಿ

• ಉದಯವಾಹಿನಿ, ಹುಬ್ಬಳ್ಳಿ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ವಾಕ್ಸಮರಕ್ಕೆ ಸಂಬಂಧಿಸಿದಂತೆ ಇದೀಗ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಪ್ರತಿಕ್ರಿಯಿಸಿದ್ದು, ಎಡಿಜಿಪಿ ಚಂದ್ರಶೇಖರ್ ಅವರಿಗೆ ವಾರ್ನಿಂಗ್ ಕೊಟ್ಟಿದ್ದಾರೆ. ತಮ್ಮ ವಿರುದ್ಧ ಸಾಲು ಸಾಲು ಆರೋಪ ಮಾಡಿದ್ದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಗರಂ ಆಗಿದ್ದ ಎಡಿಜಿಪಿ ಚಂದ್ರಶೇಖರ್, ಹೆಚ್.ಡಿ.ಕೆಯವರನ್ನು ಪರೋಕ್ಷವಾಗಿ ಹಂದಿಗೆ ಹೋಲಿಸಿ ಕೌಂಟರ್ ಕೊಟ್ಟಿದ್ದರು.

ಎಡಿಜಿಪಿ ಚಂದ್ರಶೇಖರ್ ಹೇಳಿಕೆಗೆ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಅಧಿಕಾರಿಯಾದವರು ಗೌರವಯುತ ಪದ ಬಳಕೆ ಮಾಡುವುದು ಕರ್ತವ್ಯ. ನಾನು ನೋಡಿದಂತೆ ಹೆಚ್.ಡಿ.ಕೆ ಏಕವಚನದಲ್ಲಿ ಮಾತನಾಡುವವರಲ್ಲ. ಆದರೆ ಅಧಿಕಾರಿ ಕೆಟ್ಟ ಪದ ಬಳಕೆ ಮಾಡಿದ್ದಾರೆ. ಇದು ಅಧಿಕಾರಿಯ ಅಹಂಕಾರದ ಪರಮಾವಧಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಧಿಕಾರಿಗೆ ಜ್ಞಾನವಿದ್ದರೆ ಮೊದಲು ಕ್ಷಮೆಯಾಚಿಸಲಿ. ಕೇಡರ್ ಕಂಟ್ರೋಲ್ ನಲ್ಲಿ ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು. ಇದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ಒಬ್ಬ ಅಧಿಕಾರಿಯ ಪತ್ರ ಕಾಂಗ್ರೆಸ್ ಗೆ ಮುಳುವಾಗಲಿದೆ. ಈ ಸರ್ಕಾರ ಖಾಯಂ ಎಂಬ ಭ್ರಮೆಯಲ್ಲಿದ್ದರೆ ಬೆಲೆ ತೆರಬೇಕಾಗುತ್ತದೆ. ಅತ್ಯಂತ ಕೆಟ್ಟ ಭಾಷೆ ಬಳಸಿರುವುದು ಸರ್ಕಾರದ ಆಡಳಿತಕ್ಕೆ ಹಿಡಿದ ಕೈಗನ್ನಡಿ ಎಂದು ಕಿಡಿಕಾರಿದ್ದಾರೆ.

## ಹಿಂದೂ ಧರ್ಮವನ್ನು ನಿಂದಿಸಿ ಹೊಸ ವಿವಾದ ಸೃಷ್ಟಿಸಿದ ಭಗವಾನ್

• ಉದಯವಾಹಿನಿ, ಮೈಸೂರು


ಹಿಂದೂ ಧರ್ಮದ ಬಗ್ಗೆ ಕೆಟ್ಟದಾಗಿ ಮಾತನಾಡಿ, ನಿಂದಿಸಿರುವ ಪ್ರೊ.ಕೆ.ಎಸ್.ಭಗವಾನ್ ಹೊಸ ವಿವಾದ ಸೃಷ್ಟಿಸಿದ್ದಾರೆ.

**ಯಾರು ಹೀನರೋ ಅವರು ಹಿಂದೂ**

ಮೈಸೂರಿನಲ್ಲಿ ಮಹಿಷ ದಸರಾದಲ್ಲಿ ಮಾತನಾಡಿದ ಪ್ರೊ.ಕೆ.ಎಸ್.ಭಗವಾನ್, ಯಾರು ಹೀನರೋ ಅವರು ಹಿಂದೂಗಳು. ಹಿಂದೂ ಎಂದರೆ ಹಿಂದಕ್ಕೆ ಹೋಗುವ ಜನ. ಹಿಂದೂಗಳು ಎಂದೂ ಮುಂದಕ್ಕೆ ಬರುವುದಿಲ್ಲ. ಹಾಗೂ ಬೇರೆಯವರನ್ನು ಮುಂದೆ ಬರಲು ಬಿಡುವುದೂ ಇಲ್ಲ. ಹಿಂದೂ ಧರ್ಮ ಅಂದರೆ ಅದು ಹಿಂದೂಗಳ ಧರ್ಮವಲ್ಲ. ಹಿಂದೂ ಧರ್ಮ ಎಂದರೆ ಅದು ಬ್ರಾಹ್ಮಣರ ಧರ್ಮ. ಅಲ್ಲಿ ಗಂಡಸರು ಮಾತ್ರ ಬ್ರಾಹ್ಮಣರು ಅಂತಾರೆ. ಹೆಂಗಸರನ್ನು ಬ್ರಾಹ್ಮಣರು ಎನ್ನಲ್ಲ ಶೂದ್ರರು ಅಂತಾರೆ.

ಮಾನ ಮರ್ಯಾದೆ ಇದ್ದರೆ ಮೊದಲು ದೇವಸ್ಥಾನಗಳಿಗೆ ಹೋಗುವುದನ್ನು ನಿಲ್ಲಿಸಬೇಕು ಎಂದು ನಾಲಿಗೆ ಹರಿಬಿಟ್ಟಿದ್ದಾರೆ. ಜ್ಞಾನದ ಹಸಿವು ಇಲ್ಲದ ಕಾರಣ ಹಲವರು ಗುಲಾಮರಾಗಿದ್ದಾರೆ.

ನಾನು ಕಳೆದ 50 ವರ್ಷಗಳಿಂದ ದೇವಸ್ಥಾನಕ್ಕೆ ಹೋಗುವುದಿಲ್ಲ. ದೇವಸ್ಥಾನಕ್ಕೆ ಹೋಗದಿದ್ದರೆ ಏನೂ ಆಗಲ್ಲ. ದೇವಸ್ಥಾನಕ್ಕೆ ಹೋದರೆ ದುಡ್ಡು ಹಾಕ್ತೀರಾ, ಕಾಯಿ ಕೊಟ್ಟರೆ ಅರ್ಧ ಕಾಯಿ ಇಟ್ಟುಕೊಂಡು ಅರ್ಧ ಕೊಡುತ್ತಾರೆ. ದೇವಸ್ಥಾನಕ್ಕೆ ಹೋದರೆ ಕಳೆದುಕೊಳ್ಳುತ್ತೇವೆ. ಶೂದ್ರರಿಗೆ ಮಾನ ಮರ್ಯಾದೆ ಇದ್ದರೆ ದೇವಸ್ಥಾನಕ್ಕೆ ಹೋಗುವುದು ನಿಲ್ಲಿಸಿ ಎಂದಿದ್ದಾರೆ.



ಮನುಸ್ಮೃತಿಯಲ್ಲಿ ಶೂದ್ರ ಎಂದರೆ ಸೂಳೆಗೆ ಹುಟ್ಟಿದವನು ಅಂತಾ ಇದೆ. ನಾವು ಶೂದ್ರರು ಎಂದು ಒಪ್ಪಿಕೊಳ್ಳಬೇಕಾ? ಹೀಗೆಂದು ಹೇಳುವ ಹಿಂದೂ ಧರ್ಮದಲ್ಲಿ ನಾವಿರಬೇಕಾ? ಹಿಂದೂ ಧರ್ಮ ನಮ್ಮದಲ್ಲ. ನಮಗೆ ಹಿಂದೂ ಧರ್ಮ ಬೇಕಾಗಿಲ್ಲ. ಎಲ್ಲರೂ ಬೌದ್ಧ ಧರ್ಮವನ್ನು ನಂಬಿ. ನಾನು ಹೇಳಿದ್ದನ್ನು ನಂಬಿ ಎಂದು ಬುದ್ಧ ಹೇಳಲ್ಲ. ನಾನು ಹೇಳಿದ್ದನ್ನು ಕೇಳಬೇಕು ಇಲ್ಲದಿದ್ದರೆ ಸ್ವರ್ಗ ಸಿಗಲ್ಲ ಅಂತ ಏಸು ಹೇಳ್ತಾರೆ. ನನ್ನ ಮಾತು ಕೇಳದಿದ್ದರೆ ಮೋಕ್ಷ ಸಿಗಲ್ಲ ಎಂದು ಪ್ರವಾದಿ ಹೇಳ್ತಾರೆ. ನಾನು ಹೇಳಿದ್ದು ಕೇಳದಿದ್ದರೆ ನರಕಕ್ಕೆ ಹೋಗ್ತೀರಾ ಎಂದು ಕೃಷ್ಣ ಹೇಳ್ತಾರೆ. ಆದರೆ ನಾನು ಹೇಳಿದ್ದನ್ನು ನಂಬಿ ಎಂದು ಬುದ್ಧ ಹೇಳಿಲ್ಲ. ನಾವು ಬೌದ್ಧ ಧರ್ಮಕ್ಕೆ ಹೋಗಬೇಕು. ಶೂದ್ರ ಎಂಬ ಗುಲಾಮರನ್ನು ಎಕ್ಕಡದಲ್ಲಿ ಹೊಡೆಯಬೇಕು -ಪ್ರೊ.ಕೆ.ಎಸ್. ಭಗವಾನ್

# ಮಳೆಗೆ ತತ್ತರಿಸಿದ ನೇಪಾಳ ಬಲಿ ಪಡೆದ ಬೇತಾಳ

**226 ಮನೆಗಳು ಮುಳುಗಡೆ**

- ನೇಪಾಳದಲ್ಲಿ ವರುಣಾರ್ಭಟ, ನೇಪಾಳದಲ್ಲಿ ಭಾರಿ ಮಳೆಯಿಂದ ಅನಾಹುತ
- ನೇಪಾಳದಲ್ಲಿ ಜಲಪ್ರಳಯಕ್ಕೆ 100ಕ್ಕೂ ಹೆಚ್ಚು ಜನರು ಬಲಿ
- ಭೂಕುಸಿತದಿಂದ ಹಲವರು ನಾಪತ್ತೆ
- ಭರದಿಂದ ಸಾಗಿದ ರಕ್ಷಣಾ ಕಾರ್ಯಾಚರಣೆ



1 ಮಹಾಮಳೆಗೆ ಹಿಮಾಲಯದ ದೇಶ ತತ್ತರ, ಉಕ್ಕಿ ಹರಿಯುತ್ತಿರುವ ನದಿಗಳು.

2 ಕಳೆದ 24 ಗಂಟೆಗಳಲ್ಲಿ 129 ಮಂದಿ ಸಾವು, ಇನ್ನೂ 68 ಮಂದಿ ನಾಪತ್ತೆ.

3 ಕಳೆದ 54 ವರ್ಷಗಳಲ್ಲಿಯೇ ಅತ್ಯಧಿಕ ಮಳೆ, 323 ಮಿಮೀ ಮಳೆ ದಾಖಲು

• ಉದಯವಾಹಿನಿ, ಕಠಂಡು

ನೇಪಾಳದಾದ್ಯಂತ ಧಾರಾಕಾರ ಮಳೆಯಿಂದ ಉಂಟಾದ ಪ್ರವಾಹ ಮತ್ತು ಭೂಕುಸಿತದಿಂದ 100ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದಾರೆ.ಕಳೆದೆರಡು ದಿನಗಳಿಂದ ಸುರಿಯುತ್ತಿರುವ ವರ್ಷಧಾರೆಯಿಂದ ಜಲಪ್ರಳಯ ಉಂಟಾಗಿದ್ದು, ಪೂರ್ವ ಮತ್ತು ಮಧ್ಯ ನೇಪಾಳದ ದೊಡ್ಡ ನಗರಗಳು ಮುಳುಗಿವೆ, ದೇಶದ ಕೆಲವು ಭಾಗಗಳಲ್ಲಿ ಹಠಾತ್ ಪ್ರವಾಹಗಳು ಜನರು ಕಂಗಾಲಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರವಾಹ, ಭೂಕುಸಿತ ಮತ್ತು ಪ್ರವಾಹದಲ್ಲಿ 64 ಜನರು ನಾಪತ್ತೆಯಾಗಿದ್ದಾರೆ ಕಠಂಡು ಕಣಿವೆಯಲ್ಲಿ ಅತಿಹೆಚ್ಚು 48 ಸಾವುಗಳು ಸಂಭವಿಸಿವೆ. 45 ಜನರು ಗಾಯಗೊಂಡಿದ್ದಾರೆ.

**ಭದ್ರತಾ ಸಿಬ್ಬಂದಿ ನಿಯೋಜನೆ**

ಕಳೆದ 54 ವರ್ಷಗಳಲ್ಲಿಯೇ ನೇಪಾಳದಲ್ಲಿ ದಾಖಲೆಯ ಮಳೆಯಾಗಿದ್ದು, 24 ಗಂಟೆಗಳ ಒಳಗೆ 323 ಮಿಮೀ ಮಳೆ ಸುರಿದಿದೆ. ರಕ್ಷಣಾ ಕಾರ್ಯಾಚರಣೆಗೆ ನೆರವಾಗಲು ಹೆಲಿಕಾಪ್ಟರ್‌ಗಳು ಮತ್ತು ಮೋಟಾರ್ ಬೋಟ್‌ಗಳ ಜತೆ 3 ಸಾವಿರಕ್ಕೂ ಅಧಿಕ ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿದೆ. ಮಳೆ ಸಂಬಂಧಿ ಅನಾಹುತಗಳಿಂದ 42 ಸಾವಿರಕ್ಕೂ ಮನೆಗಳಿಗೆ ಹಾನಿಯಾಗುವ ಸಾಧ್ಯತೆ ಇದೆ. ರಾಜಧಾನಿ ಕಠ್ಮಂಡು ಸುತ್ತಮುತ್ತಲಿನ ನದಿಗಳು ಉಕ್ಕಿ ಹರಿಯುತ್ತಿದ್ದು, ಸಮೀಪದ ಮನೆಗಳು ಜಲಾವೃತಗೊಂಡಿವೆ. ಕಠ್ಮಂಡುವಿನ ಮುಖ್ಯ ನದಿ ಬಾಗಮತಿಯು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ.

**ತುರ್ತುಸಭೆ ಕರೆದ ನೇಪಾಳ ಸರ್ಕಾರ**


ಏತನ್ಮಧ್ಯೆ, ಹುಡುಕಾಟ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ಹೆಚ್ಚಿಸುವ ಪ್ರಯತ್ನದಲ್ಲಿ, ಹಂಗಾಮಿ ಪ್ರಧಾನ ಮಂತ್ರಿ ಮತ್ತು ನಗರಾಭಿವೃದ್ಧಿ ಸಚಿವ ಪ್ರಕಾಶ್ ಮಾನ್ ಸಿಂಗ್ ಅವರು ಗೃಹ ಸಚಿವರು, ಗೃಹ ಕಾರ್ಯದರ್ಶಿ ಮತ್ತು ಭದ್ರತಾ ಏಜೆನ್ಸಿಗಳ ಮುಖ್ಯಸ್ಥರು ಸೇರಿದಂತೆ ವಿವಿಧ ಸಚಿವರನ್ನು ಒಳಗೊಂಡ ತುರ್ತು ಸಭೆ ಕರೆದಿದ್ದಾರೆ. ನೇಪಾಳದಾದ್ಯಂತ ಮೂರು ದಿನಗಳ ಕಾಲ ಎಲ್ಲಾ ಶಾಲೆಗಳನ್ನು ಮುಚ್ಚಲು ಮತ್ತು ನಡೆಯುತ್ತಿರುವ ಎಲ್ಲಾ ಪರೀಕ್ಷೆಗಳನ್ನು ಸ್ಥಗಿತಗೊಳಿಸಲು ಸರ್ಕಾರ ಆದೇಶಿಸಿದೆ.

ಸುಮಾರು 195 ಮನೆಗಳು ಮತ್ತು ಎಂಟು ಸೇತುವೆಗಳು ಹಾನಿಗೊಳಗಾಗಿವೆ. ಭದ್ರತಾ ಸಿಬ್ಬಂದಿ ಸುಮಾರು 3,100 ಜನರನ್ನು ರಕ್ಷಿಸಿದ್ದಾರೆ. 40-45 ವರ್ಷಗಳಲ್ಲಿ ಕಠಂಡು ಕಣಿವೆಯಲ್ಲಿ ಇಂತಹ ವಿನಾಶಕಾರಿ ಪ್ರವಾಹವನ್ನು ನೋಡಿರಲಿಲ್ಲ ಎಂದು ಸ್ಥಳೀಯರು ಹೇಳಿದ್ದಾರೆ. ಸಾವಿನ ಸಂಖ್ಯೆ 102 ಕ್ಕೆ ತಲುಪಿದೆ ಎಂದು ಸಶಸ್ತ್ರ ಪೊಲೀಸ್ ಪಡೆ ಹೇಳಿಕೆಯಲ್ಲಿ ತಿಳಿಸಿದೆ. ಕಠಂಡುವಿನಲ್ಲಿ ಈ ರೀತಿ ಪರಿಸರ ವೈಪರಿತ್ಯ ನಾನು ಹಿಂದೆಂದೂ ನೋಡಿಲ್ಲ ಎಂದು ಇಂಟರ್ನ್ಯಾಶನಲ್ ಸೆಂಟರ್ ಫಾರ್ ಇಂಟಿಗ್ರೇಟೆಡ್ ಮೌಂಟೇನ್ ಡೆವಲಪ್ಮೆಂಟ್ನ ಹವಾಮಾನ ಮತ್ತು ಪರಿಸರ ತಜ್ಞ ಅರುಣ್ ಭಕ್ತ ಶ್ರೇಷ್ಠ ಹೇಳಿದರು.

ಪೂರ್ವ ಮತ್ತು ಮಧ್ಯ ನೇಪಾಳದ ಹೆಚ್ಚಿನ ಭಾಗಗಳಲ್ಲಿ ನಿರಂತರ ಮಳೆ ಸುರಿದ ನಂತರ ಕಠ್ಮಂಡುವಿನ ಮುಖ್ಯ ನದಿ ಬಾಗತಿ ಅಪಾಯದ ಮಟ್ಟಕ್ಕಿಂತ ಮೇಲೆ ಹರಿಯುತ್ತಿದೆ ಎಂದು. ಬಂಗಾಳಕೊಲ್ಲಿಯಲ್ಲಿ ಕಡಿಮೆ ವಾಯುಭಾರ ಕುಸಿತದಿಂದ ಮುಂಗಾರು ಮಳೆ ಸಾಮಾನ್ಯಕ್ಕಿಂತ ಹೆಚ್ಚು ಸುರಿದಿದೆ ಇದನ್ನು ಅಸಾಧಾರಣವಾದ ಮಳೆಗೆ ಎನ್ನಬಹುದು ಎಂದು ಅದು ಹೇಳಿದೆ. ಹವಾಮಾನ ಬದಲಾವಣೆಯು ಏಷ್ಯಾ ದಾದ್ಯಂತ ಮಳೆಯ ಪ್ರಮಾಣ, ಸಮಯವನ್ನು ಬದಲಾಯಿಸುತ್ತಿದೆ ಎಂದು ವಿಜ್ಞಾನಿಗಳು ಹೇಳುತ್ತಾರೆ.

ಇದೇ ಮಳೆ ಹೆಚ್ಚಳ, ಪ್ರವಾಹದ ಪ್ರಭಾವದ ಹೆಚ್ಚಳಕ್ಕೆ ಪ್ರಮುಖ ಕಾರಣವೆಂದು ವ್ಯಾಖ್ಯಾನಿಸಲಾಗಿದೆ.

### ಯೋಧರಿಂದ ರಕ್ಷಣಾ ಕಾರ್ಯ



ಕಾತ್ಮಂಡುವಿನಲ್ಲಿ ಸುಮಾರು 226 ಮನೆಗಳು ಮುಳುಗಡೆಯಾಗಿವೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸುಮಾರು 3,000 ಭದ್ರತಾ ಸಿಬ್ಬಂದಿಯ ರಕ್ಷಣಾ ತಂಡವನ್ನು ನಿಯೋಜಿಸಲಾಗಿದೆ. ಈ ಮಧ್ಯೆ, ಹಂಗಾಮಿ ಪ್ರಧಾನಿ ಹಾಗೂ ನಗರಾಭಿವೃದ್ಧಿ ಸಚಿವ ಪ್ರಕಾಶ್ ಮನ್ ಸಿಂಗ್ ಅವರು ಗೃಹ ಸಚಿವಾಲಯ, ಇತರ ಸಚಿವಾಲಯಗಳ ತುರ್ತು ಸಭೆ ನಡೆಸಿ ರಕ್ಷಣಾ ಕ್ರಮಗಳ ಬಗ್ಗೆ ಚರ್ಚಿಸಿದ್ದಾರೆ.ಕಾತ್ಮಂಡುವಿನಲ್ಲಿ 24ಗಂಟೆಗಳಿಗೂ ಹೆಚ್ಚು ಕಾಲ ವಿದ್ಯುತ್ ಪೂರೈಕೆ ಸ್ಥಗಿತಗೊಂಡಿದ್ದು, ಶನಿವಾರ ಸಂಜೆಯಿಂದ ಮತ್ತೆ ವಿದ್ಯುತ್ ಪೂರೈಕೆ ಪುನಾರಂಭಗೊಂಡಿದೆ. ಹಿಮಾಲಯನ್ ದೇಶದಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಅನೇಕ ಪ್ರದೇಶಗಳು ಜಲಾವೃತವಾಗಿವೆ. ಸುಮಾರು 200 ನೆರೆ ಹಾಗೂ ಭೂ ಕುಸಿತ ಘಟನೆಗಳು ವರದಿಯಾಗಿವೆ. ಈ ಸಂಖ್ಯೆ ಮತ್ತಷ್ಟು ಹೆಚ್ಚುವ ಸಾಧ್ಯತೆ ಇದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮುಂಗಾರು ಸಂದರ್ಭದಲ್ಲಿ ದಕ್ಷಿಣ ಏಷ್ಯಾದಲ್ಲಿ ಮಳೆ ಸಂಬಂಧಿ ಅನಾಹುತಗಳು ಸಾಮಾನ್ಯ. ಆದರೆ ಹವಾಮಾನ ವೈಪರೀತ್ಯದ ಕಾರಣದಿಂದಾಗಿ ಇತ್ತೀಚಿನ ದಿನಗಳಲ್ಲಿ ವಿಪತ್ತುಗಳ ತೀವ್ರತೆ ಹಾಗೂ ಮರುಕಳಿಕೆ ಹೆಚ್ಚಾಗಿದೆ ಎಂದು ಪರಿಣತರು ಹೇಳುತ್ತಾರೆ.

## ಸರ್ಕಾರಕ್ಕೆ ಶೀಘ್ರ ಜನ ಸರಿಯಾದ ಪಾಠ ಕಲಿಸುತ್ತಾರೆ: ಸಂಸದ

• ಉದಯವಾಹಿನಿ, ಶಿವಮೊಗ್ಗ



ಕಳೆದ ಎರಡು ತಿಂಗಳಿನಿಂದ ಸಿದ್ದರಾಮಯ್ಯ - ಮುಡಾ ವಿಚಾರದ ಬಗ್ಗೆ ಚರ್ಚೆ ನಡೆಯುತ್ತಿದೆ. ಮುಡಾ ಹಗರಣದ ಬಗ್ಗೆ ಮಾತಾನಾಡಿದಾಗ ಬಿಜೆಪಿಯವರು ರಾಜ್ಯಪಾಲರ ಕಚೇರಿ ದುರುಪಯೋಗ ಮಾಡಿಕೊಂಡಿದ್ದರು ಎಂದರು. ರಾಜ್ಯಪಾಲರ ಕಚೇರಿ ಬಿಜೆಪಿ ಕಚೇರಿ ಮಾಡಿಕೊಂಡಿದ್ದಾರೆಂದು ಕಾಂಗ್ರೆಸ್ ನವರು ಆರೋಪ ಮಾಡಿದರು.

ಈಗ ಕಾನೂನಿನ ಚೌಕಟ್ಟಿನಲ್ಲಿ ಕೋರ್ಟ್ ಆದೇಶ ಮಾಡಿದೆ. ಹೈಕೋರ್ಟ್ ಆದೇಶ ಮಾಡಿದರೂ ಮೊಂಡುವಾದ ಮಾಡುತ್ತಿದ್ದಾರೆ ಎಂದು ಸಂಸದ ಬಿ.ವೈ.ರಾಘವೇಂದ್ರ ಹೇಳಿದರು. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ನಿರ್ಮಲಾ ಸೀತಾರಾಮನ್, ನಳಿಲ್ ಕುಮಾರ್ ಕಟೀಲ್, ವಿಜಯೇಂದ್ರ ಮೇಲೆ ರಾಜಕೀಯ ದ್ವೇಷಕ್ಕಾಗಿ ಎಫ್ಐಆರ್ ಮಾಡಿದ್ದಾರೆ. ಅವರ ಮೇಲೆ ಎಫ್ಐಆರ್ ಮಾಡಿ ಜನರ ದಿಕ್ಕು ತಪ್ಪಿಸುವಂತಹ ಕೆಲಸ ಮಾಡುತ್ತಿದ್ದಾರೆ. ಸಂವಿಧಾನ ಬದ್ಧವಾಗಿ ಬಾಂಡ್ ಪೇಪರ್ ತೆಗೆದುಕೊಂಡು ಚುನಾವಣೆ ಎದುರಿಸಿದ್ದಾರೆ. ದುರುದ್ದೇಶದಿಂದ ಜನರ ಚಿಂತನೆಯನ್ನು ಬೇರೆ ಕಡೆ ಸೆಳೆಯಲು ಹೀಗೆ ಮಾಡುತ್ತಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಹಗುರವಾಗಿ ಅಧಿಕಾರಿಗಳಿಂದ ಮಾತನಾಡಿಸುತ್ತಿದ್ದಾರೆ ಎಂದರು.

## 'ಸಿಎಂ' ಆಗಲು ಕೆಲವರು ಸಾವಿರ ಕೋಟಿ ಹಣ ಇಟ್ಕೊಂಡು ಕಾಯ್ತಿದಾರೆ : ಶಾಸಕ ಯತ್ನಾಳ್ ಹೊಸ ಬಾಂಬ್

• ಉದಯವಾಹಿನಿ, ದಾವಣಗೆರೆ

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಲೇಬೇಕು ಎಂದು ವಿಪಕ್ಷಗಳು ಅಗ್ರಹಿಸುತ್ತಿವೆ. ಇದರ ಬೆನ್ನಲ್ಲೇ ಬಿಜೆಪಿಯ ಶಾಸಕ ಬಸನಗೌಡ ಪಾಟೀಲ ಹೊಸ ಬಾಂಬ್ ಒಂದನ್ನು ಸಿಡಿಸಿದ್ದು, ಕೆಲವರು ಸಿಎಂ ಸ್ಥಾನಕ್ಕಾಗಿ ಸಾವಿರಾರು ಕೋಟಿ ಹಣ ಇಟ್ಟುಕೊಂಡು ಕಾಯುತ್ತಿದ್ದಾರೆ ಎಂದು ಸ್ಫೋಟಕವಾದ ಹೇಳಿಕೆ ನೀಡಿದ್ದಾರೆ. ಭಾನುವಾರ ದಾವಣಗೆರೆಯಲ್ಲಿ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕೆಲವರು ಸಿಎಂ ಆಗಲು ಸಾವಿರ ಕೋಟಿ ಹಣ ಇಟ್ಟುಕೊಂಡು ಕಾಯುತ್ತಿದ್ದಾರೆ. ಇದರಲ್ಲಿ ಕಾಂಗ್ರೆಸ್‌ನವರೂ ಇದ್ದಾರೆ, ಬೇರೆ ಪಕ್ಷದವರೂ ಇದ್ದಾರೆ. ಸಾವಿರ ಕೋಟಿ ಹಣ ಇಟ್ಟುಕೊಂಡು ಸಿಎಂ ಆಗಲು ಸಿದ್ಧರಿದ್ದಾರೆ ಎಂದು ಸ್ಫೋಟಕ ವಾದಂತಹ ಹೇಳಿಕೆಯನ್ನು ನೀಡಿದ್ದಾರೆ.


ಬಿಜೆಪಿಯಲ್ಲಿ ಭಿನ್ನಮತ ಇದೆ. ಪಕ್ಷದ ಗೊಂದಲಗಳ ಬಗ್ಗೆ ಹೈಕಮಾಂಡ್‌ಗೆ ಮಾಹಿತಿ ರವಾನೆ ಮಾಡಲಾಗಿದೆ. ಬಹಿರಂಗ ಹೇಳಿಕೆ ನೀಡದಂತೆ ಹೈಕಮಾಂಡ್ ಸೂಚಿಸಿದೆ. ಹೀಗಾಗಿ ನಾವು ಹೆಚ್ಚು ಮಾತಾಡಲ್ಲ. ಬಿಜೆಪಿ ರಾಜ್ಯಾಧ್ಯಕ್ಷರ ಬದಲಾಯಿಸುವ ಅಧಿಕಾರ ನಮಗಿಲ್ಲ. ಹೈಕಮಾಂಡ್ ಈ ಬಗ್ಗೆ ನಿರ್ಧಾರ ಕೈಗೊಳ್ಳುತ್ತೆ. ಹೈಕಮಾಂಡ್ ಯಾವ ನಿರ್ಧಾರ ಕೈಗೊಳ್ಳುತ್ತೋ ಕಾದು ನೋಡುತ್ತೇವೆ ಎಂದರು.

# ನೀವೊಬ್ಬ ಐಪಿಎಸ್ ಅಧಿಕಾರಿಯಾಗಿರಲು ಅನರ್ಹ

## ಕುಮಾರಸ್ವಾಮಿಗೆ ಹಂದಿ ಎಂದ ಐಪಿಎಸ್ ಅಧಿಕಾರಿ ವಿರುದ್ಧ ಜೆಡಿಎಸ್ ಕಿಡಿ: ಕೂಡಲೇ ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶನ ಹಂಚಿಕೆ ಹಗರಣ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿದ್ದ ರಾಜ್ಯ ಪಾಲರ ತೀರ್ಮಾನವನ್ನು ಕರ್ನಾಟಕ ಹೈಕೋರ್ಟ್ ಎತ್ತಿ ಹಿಡಿದಿದೆ. ಜೊತೆಗೆ ಜನಪ್ರತಿನಿಧಿಗಳ ಕೋರ್ಟ್ ನಲ್ಲೂ ಸಹ ಸಿಎಂ ಸಿದ್ದರಾಮಯ್ಯಗೆ ಹಿನ್ನೆಡೆಯಾಗಿದೆ.ಸಿಎಂ ವಿರುದ್ಧ ಲೋಕಾಯುಕ್ತ ತನಿಖೆಗೆ ಆದೇಶ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ಪ್ರತಿಪಕ್ಷಗಳು ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸುತ್ತಿದೆ.



ಈ ರಾಜಕೀಯ ಬೆಳವಣಿಗೆ ಬೆನ್ನಲ್ಲೇ ಮತ್ತೊಂದು ಬೆಳವಣಿಗೆ ಇದೀಗ ಚರ್ಚೆಗೆ ಗ್ರಾಸವಾಗಿದೆ. ಲೋಕಾಯುಕ್ತ ಎಸ್‌ಐಟಿ ಎಡಿಜಿಪಿ, ಹಿರಿಯ ಐಪಿಎಸ್ ಅಧಿಕಾರಿ ಚಂದ್ರಶೇಖರ್ ವಿರುದ್ಧ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಏಕಾಏಕಿ ಆರೋಪ ಮಾಡಿದ್ದಾರೆ. ತಮ್ಮ ವಿರುದ್ಧ ಆರೋಪ ಮಾಡಿದ ಕುಮಾರಸ್ವಾಮಿ ವಿರುದ್ಧ ಪತ್ರದ ಮೂಲಕ ಐಪಿಎಸ್ ಅಧಿಕಾರಿ ಚಂದ್ರಶೇಖರ್ ತಿರುಗೇಟು ನೀಡಿದ್ದು, ಹಂದಿಗೆ ಹೋಲಿಸಿದ್ದಾರೆ.

ಗೃಹ ಸಚಿವ ಜಿ.ಪರಮೇಶ್ವರ್ ಅವರೇ, ಕೇಂದ್ರ ಸಚಿವರಾದ ಕುಮಾರಸ್ವಾಮಿ ಅವರ ಬಗ್ಗೆ ಕೀಳು ಮಟ್ಟದ ಪದ ಬಳಸಿರುವ ಈ ಭ್ರಷ್ಟ ಅಧಿಕಾರಿ ವಿರುದ್ಧ ಕ್ರಮ ಜರುಗಿಸಿ. ಐಪಿಎಸ್ ಅಧಿಕಾರಿ ಎಂ. ಚಂದ್ರಶೇಖರ್ ಅವರ ಅಕ್ರಮಗಳ ಬಗ್ಗೆಯೂ ಸರ್ಕಾರ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಜೆಡಿಎಸ್ ಆಗ್ರಹಿಸಿದೆ.

**ಪಾರದರ್ಶಕ ತನಿಖೆ ಅಸಾಧ್ಯ**

ಲೋಕಾಯುಕ್ತ ವಿಶೇಷ ತನಿಖಾ ದಳದ ಎಡಿಜಿಪಿಯಾಗಿರುವ ಎಂ. ಚಂದ್ರಶೇಖರ್ ಓರ್ವ ಭ್ರಷ್ಟ ಅಧಿಕಾರಿ ಈತನ ವಿರುದ್ಧ ಹಲವು ದೂರುಗಳು ದಾಖಲಾಗಿದ್ದು ಆರೋಪ ಪಟ್ಟಿ ಕೂಡ ಸಲ್ಲಿಕೆಯಾಗಿವೆ. ಹಲವು ಅಪರಾಧ ಮಾಡಿರುವ ಇಂತಹ ಕಳಂಕಿತ ಅಧಿಕಾರಿಗಳಿಂದ ಮುಕ್ತ, ನ್ಯಾಯ ಸಮ್ಮತ, ಪಾರದರ್ಶಕ ತನಿಖೆ ಅಸಾಧ್ಯ

ಈ ಹೇಳಿಕೆ ಬಿಡುಗಡೆ ಬೆನ್ನಲ್ಲೇ ಹಿರಿಯ ಪೊಲೀಸ್ ಅಧಿಕಾರಿ ಚಂದ್ರಶೇಖರ್ ವಿರುದ್ಧ ಜೆಡಿಎಸ್ ಕಿಡಿಕಾರಿದೆ. 'ಕಳ್ಳನ ಮನಸ್ಸು ಹುಳ್ಳಳ್ಳಗೆ'. ಐಪಿಎಸ್ ಅಧಿಕಾರಿ ಎಂ. ಚಂದ್ರಶೇಖರ್ ಅವರೇ ನಿಮ್ಮ ಮೇಲಿನ ಆರೋಪಗಳು ನಿಜವಲ್ಲವಾದರೇ, ಕಾನೂನಿನಡಿಯಲ್ಲಿ ಉತ್ತರ ನೀಡಬಹುದಿತ್ತು. ಅದನ್ನು ಬಿಟ್ಟು ನೀವೊಬ್ಬ ಐಪಿಎಸ್ ಅಧಿಕಾರಿ ಎಂಬುದನ್ನು ಮರೆತು, ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ವಿರುದ್ಧ ಹತಾಶೆ, ಸಿಟ್ಟು, ಆಕ್ರೋಶದಿಂದ ಕೀಳು ಮಟ್ಟದ, ಅವಹೇಳನಕಾರಿ ಪದಗಳನ್ನು ಬಳಸಿ ಉತ್ತರಿಸಿದ್ದೀರಿ. ನಿಮ್ಮ ಅಕ್ರಮ, ಭ್ರಷ್ಟಾಚಾರಗಳನ್ನು ದಾಖಲೆಗಳ ಸಮೇತ ಮಾಧ್ಯಮಗಳ ಮುಂದೆ ಬಯಲು ಮಾಡಿದ್ದು ಅಪರಾಧವೇ? ಅದಕ್ಕೆ ಕೇಂದ್ರ ಸಚಿವರ ಕುರಿತು ನೀವು ಕೀಳು ಮಟ್ಟದ ಪದ ಬಳಸಿರುವುದು ಅಕ್ಷಮ್ಯ. ನೀವೊಬ್ಬ ಐಪಿಎಸ್ ಅಧಿಕಾರಿಯಾಗಿರಲು ಅನರ್ಹ.

ಭೂ ವ್ಯವಹಾರವೊಂದರಲ್ಲಿ 20 ಕೋಟಿಗೆ ಬೇಡಿಕೆ ಇಟ್ಟಿದ್ದ ಕಡು ಭ್ರಷ್ಟ ಅಧಿಕಾರಿ ನೀವೇ ಅಲ್ಲವೇ..? ಈ ಸಂಬಂಧ ನಿಮ್ಮ ವಿರುದ್ಧ ಇನ್ಸ್‌ಪೆಕ್ಟರ್ ಒಬ್ಬರು ದೂರು ನೀಡಿದ್ದಾರೆ. ಬೆಂಗಳೂರಿನಲ್ಲಿ ನಿಮ್ಮ ಪತ್ನಿ ಹೆಸರಿನಲ್ಲಿ ರಾಜಕಾಲುವೆ ಮೇಲೆ ನಿರ್ಮಿಸುತ್ತಿರುವ ಬಹು ಮಹಡಿಯ ವಾಣಿಜ್ಯ ಕಟ್ಟಡವನ್ನು ಎಷ್ಟು ಕೋಟಿ ಲಂಚ ಪಡೆದು ಕಟ್ಟುತ್ತಿದ್ದೀರಿ ತಿಳಿಸುವಿರಾ? ಕೆರೆಯನ್ನು ಒತ್ತುವರಿ ಮಾಡಿಕೊಂಡಿರುವ ಅಕ್ರಮಗಳ ಬಗ್ಗೆಯೂ ತನಿಖೆ ನಡೆಯಬೇಕಲ್ಲವೇ..?.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,740 /Gram(24ct) ₹7,095/Gram(22ct) ಬೆಳ್ಳಿ: ₹96.00/Gram

# ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಿಡಿ

## ಎಡಿಜಿಪಿ ಚಂದ್ರಶೇಖರ್ ಒಬ್ಬ ಕ್ರಿಮಿನಲ್, ಬ್ಲ್ಯಾಕ್ ಮೇಲರ್, ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಸಚಿವರು ಉತ್ತರ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಎಡಿಜಿಪಿ ಚಂದ್ರಶೇಖರ್ ಒಬ್ಬ ಬ್ಲ್ಯಾಕ್ ಮೇಲರ್, ಕ್ರಿಮಿನಲ್ ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಗುಡುಗಿದರು. ಆತ ತನ್ನ ಸಹೋದ್ಯೋಗಿಗಳಿಗೆ ಬರೆದಿರುವ ಪತ್ರವನ್ನು ಚೆನ್ನಾಗಿ ತಯಾರು ಮಾಡಿದ್ದಾರೆ.

ಆ ಪತ್ರವನ್ನು ಯಾರು, ಎಲ್ಲಿ ತಯಾರು ಮಾಡಿಕೊಟ್ಟರು ಎನ್ನುವುದು ನನಗೂ ಚೆನ್ನಾಗಿ ಗೊತ್ತಿದೆ. ಉತ್ತರ ಕೊಡುವ ಜಾಗದಲ್ಲಿ, ಸಂದರ್ಭದಲ್ಲಿ ಇದಕ್ಕೆ ಉತ್ತರ ಕೊಡುತ್ತೇನೆ ಎಂದು ಅವರು ಹೇಳಿದರು. ಅಧಿಕಾರಿ ತನ್ನ ಸಹೋದ್ಯೋಗಿಗಳಿಗೆ ಬರೆದಿರುವ ಪತ್ರದ ಬಗ್ಗೆ ಭಾನುವಾರ ಬೆಳಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಸಚಿವರು ಉತ್ತರಿಸಿದರು. ಲೋಕಾಯುಕ್ತರಿಗೆ ರಾಜ್ಯಪಾಲರು ಬರೆದ ಪತ್ರವು ಸರಕಾರಿ ಪ್ರಾಯೋಜಿತ ಒಂದು ನಿರ್ದಿಷ್ಟ ಸುದ್ದಿ ವಾಹಿನಿಗೆ ಸೋರಿಕೆ ಆಗಿತ್ತು. ಅದನ್ನು ಸೋರಿಕೆ ಮಾಡಿದ್ದು ಯಾರು ಎನ್ನುವುದು ಎಲ್ಲರಿಗೂ ಗೊತ್ತಿದೆ. ಆದರೆ, ಅದು ರಾಜಭವನದಿಂದಲೇ ಸೋರಿಕೆ ಆಗಿರಬೇಕೆಂದು ಕಥೆ ಕಟ್ಟಿ, ರಾಜಭವನ ಸಿಬ್ಬಂದಿಯನ್ನೇ ತನಿಖೆ ಮಾಡಬೇಕು, ಅನುಮತಿ ಕೊಡಿ ಎಂದು ಅಧಿಕಾರಿ ಚಂದ್ರಶೇಖರ್ ತನ್ನ ಉನ್ನತ ಅಧಿಕಾರಿಗೆ ಪತ್ರ ಬರೆದಿದ್ದರು. ಹೀಗಾಗಿ ಆ ಅಧಿಕಾರಿಯ ದರ್ಪ ಹಾಗೂ ಆತನ ಹಿನ್ನೆಲೆಯ ಬಗ್ಗೆ ನಾನು ದಾಖಲೆಗಳ ಸಮೇತ ಮಾತನಾಡಿದ್ದೇನೆ ಎಂದು ಸಚಿವರು ಹೇಳಿದರು.

**ಹೆಚ್‌ಡಿಕೆ ಟೀಕಾ ಪ್ರಹಾರ**

**ಸಿಎಂ ಸಿದ್ದರಾಮಯ್ಯ ಹಾಗೂ ಅವರ ಪಟಾಲಂಗೆ ನನ್ನ ರಾಜೀನಾಮೆ ಕೇಳುವ ನೈತಿಕತೆ ಇಲ್ಲ. ಸಿದ್ದರಾಮಯ್ಯ ಮೆಚ್ಚಿಸಲು ನಾನು ರಾಜೀನಾಮೆ ಕೊಡಬೇಕಾ ನಾನು ತಪ್ಪು ಮಾಡಿಲ್ಲ, ತಪ್ಪು ಮಾಡಿಲ್ಲ ಅಂದ್ಮೇಲೆ ರಾಜೀನಾಮೆ ಯಾಕೆ ಕೊಡಲಿ ಸುಳ್ಳು ಹೇಳ್ತಿರೋದು ನಾನಲ್ಲ ಎಂದು ಟೀಕಾ ಪ್ರಹಾರ ನಡೆಸಿದರು.**

**ಪೊಲೀಸ್ ಠಾಣೆಗೆ ಈ ಅಧಿಕಾರಿ ವಿರುದ್ಧ ನಾನು ದೂರು ಕೊಟ್ಟಿದ್ದೀನಾ ಅವರ ಕೈಕೆಳಗೆ ಕೆಲಸ ಮಾಡುವ ಇನ್‌ಸ್ಪೆಕ್ಟರ್‌ಗೆ 20 ಕೋಟಿ ಡಿಮ್ಯಾಂಡ್ ಇಟ್ಟು ಸಿಕ್ಕಿಬಿದ್ದಿದ್ದಾನೆ. ಆ ಇನ್‌ಸ್ಪೆಕ್ಟರ್ ಈ ಅಧಿಕಾರಿ ವಿರುದ್ಧ ದೂರು ನೀಡಿದ್ದಾರೆ. ತಕ್ಷಣ 2 ಕೋಟಿ ತಂದು ಕೊಡಬೇಕು ಎಂದು ಬ್ಲಾಕ್ ಮೇಲ್ ಮಾಡಿದ್ದು ಈತನೇ ಅಲ್ಲವೇ ಎಫ್‌ಐಆರ್ ಹಾಕಿದ ನಂತರ ಕೇಸ್ ಕೋರ್ಟ್ ಮುಂದೆ ಇದೆಯಲ್ಲ.. ಇದೇನಾ ಆತನ ಸತ್ಯಮೇವ ಜಯತೆ ಎಂದು ಸಚಿವರು ಕಿಡಿಕಾರಿದರು.**

ನಾನು ದಾಖಲೆ, ವಿಷಯ ಇಲ್ಲದೆ ಮಾತನಾಡುವುದಿಲ್ಲ. ಅಧಿಕಾರಿ ಬರೆದಿರುವ ಪತ್ರವನ್ನು ಚೆನ್ನಾಗಿ ಸಿದ್ಧ ಮಾಡಿ ಕೊಟ್ಟಿದ್ದಾರೆ. ನಾನು ಶನಿವಾರ ಬೆಳಗ್ಗೆ ಮಾಧ್ಯಮಗೋಷ್ಠಿ ಮಾಡಿದ ಮೇಲೆ, ಸಂಜೆ ಆ ಅಧಿಕಾರಿ ಎಲ್ಲಿ ಹೋಗಿದ್ದ ಎನ್ನುವುದು ಗೊತ್ತಿದೆ.

ಅವರ ಪತ್ರವನ್ನು ಅಲ್ಲಿ ಯಾವ ಕಾನೂನು ಪಂಡಿತರು ರೆಡಿ ಮಾಡಿಕೊಟ್ಟರು, ಅವರೊಂದಿಗೆ ಇನ್ನೊಬ್ಬರು ಯಾರಿದ್ದರು ಎನ್ನುವುದು ನನಗೆ ಗೊತ್ತಿದೆ ಎಂದು ಸಚಿವರು ಹೇಳಿದರು.

ನಾನು ದಾಖಲೆ ಇಟ್ಕೊಂಡೇ ನಿನ್ನೆ ಮಾತಾಡಿದ್ದೇನೆ. ಈತ ಆಂಧ್ರ ಪ್ರದೇಶ ಮೂಲದವನು, ಹಿಮಾಚಲ ಪ್ರದೇಶ ಕೇಡರ್ ಅಧಿಕಾರಿ 25 ವರ್ಷಗಳಿಂದ ಇಲ್ಲಿದ್ದಾರೆ.

ಯಾರು ಯಾರನ್ನು ಹಿಡಿದು ಇಲ್ಲಿಗೆ ಬಂದಿದ್ದೀರಿ ಆತ ಬಳಕೆ ಮಾಡಿರುವ ಭಾಷೆ ಆತನ ಸಂಸ್ಕೃತಿಯನ್ನು ತೋರಿಸುತ್ತದೆ.

ಯಾರು ಯಾರ ಜತೆ ಈತನ ಕ್ರಿಮಿನಲ್ ನಂಟಿದೆ ಎನ್ನುವುದನ್ನು ದಾಖಲೆ ಸಮೇತ ಹೇಳಿದ್ದೇನೆ. ಒಬ್ಬ ಕೇಂದ್ರ ಮಂತ್ರಿ ಬಗ್ಗೆ ಯಾವ ಭಾಷೆ ಬಳಸಿದ್ದಾನೆ ಎನ್ನುವುದು ಎಲ್ಲರಿಗೂ ಗೊತ್ತಾಗಿದೆ ಎಂದು ಸಚಿವರು ಹೇಳಿದರು.

**ಪತ್ರದಲ್ಲಿ ಸತ್ಯಮೇವ ಜಯತೆ ಎಂದು ಆತ ಬರೆದಿದ್ದಾರೆ. ನಾನು ಹೋರಾಟ ಮಾಡುತ್ತಿರುವುದು ಕೂಡ ಅದೇ ಉದ್ದೇಶಕ್ಕೆ. ಶನಿವಾರ ಅಷ್ಟು ದಾಖಲೆಗಳ ಸಮೇತ ಈ ವ್ಯಕ್ತಿ ಬಗ್ಗೆ ಹೇಳಿದ್ದು ಕೂಡ ಸತ್ಯಮೇವ ಜಯತೆ ಕಾರಣಕ್ಕಾಗಿಯೇ ಎಂದು ಕುಮಾರಸ್ವಾಮಿ ಅವರು ಹೇಳಿದರು.**

## ಸರ್ಕಾರದಲ್ಲಿ ಹೆಚ್ಚುತ್ತಿದೆ ಸಿಎಂ ಕುರ್ಚಿ ದಂಗಲ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಸಿಎಂ ಕುರ್ಚಿಯ ದಂಗಲ್ ದಿನೇ ದಿನೇ ಜಾಸ್ತಿಯಾಗುತ್ತಿದೆ ಎಂದು ರಾಜ್ಯ ಬಿಜೆಪಿ ಕಿಡಿಕಾರಿದೆ.


ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಸ್ವಪಕ್ಷದಲ್ಲಿಯೇ ಸ್ವಾತಂತ್ರ್ಯವಿಲ್ಲದಂತಾಗಿದೆ. ಅವರ ಸಿಎಂ ಆಗುವ ಹಗಲುಕನಸಿನ ಆಸೆಗೆ ಸಿದ್ದರಾಮಯ್ಯ ಅವರು ಸಮಾಜ ಕಲ್ಯಾಣ ಸಚಿವರ ಮೂಲಕ ತಣ್ಣೀರು ಎರಚಿದ್ದಾರೆ. ದುರ್ಬಲ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಈಗ ಸಿದ್ದರಾಮಯ್ಯ ಬೆಂಬಲಿಗರನ್ನು ನಿಯಂತ್ರಿಸಲು ಸಾಧ್ಯವಾಗುತ್ತಿಲ್ಲ ಎಂದು ಟಾಂಗ್ ನೀಡಿದೆ. ಅಧಿಕಾರದ ಮೂಲಕ ತಮ್ಮ ಸ್ವಕುಟುಂಬದ ''ಕಲ್ಯಾಣ'' ಮಾಡಿಕೊಂಡ ಸಿದ್ದರಾಮಯ್ಯ ಅವರು ಕೋರ್ಟ್ ಛೀಮಾರಿ ಹಾಕಿದರೂ ಕುರ್ಚಿಯಿಂದ ಏಳಲೂ ಸಿದ್ಧವಿಲ್ಲ! ಪಕ್ಷ ಕಟ್ಟಿದ ಡಿಕೆಶಿಗೆ ಕಾಂಗ್ರೆಸ್ ಹೈಕಮಾಂಡ್ ಕೂಡಾ ಮನ್ನಣೆ ನೀಡುತ್ತಿಲ್ಲ. ಡಿಕೆಶಿ ಅವರದ್ದು ಈಗ ತಿರುಕನ ಕನಸಾಗಿದೆ. ಅವರ ತಾಯಿ ಗೌರಮ್ಮ ಹೇಳಿದ ಭವಿಷ್ಯ ನಿಜವಾಗುತ್ತಿದೆ. ಮುಖ್ಯಮಂತ್ರಿ ಕುರ್ಚಿ ಮೇಲೆ ಡಿ.ಕೆ. ಶಿವಕುಮಾರ್ ಕುಳಿತುಕೊಳ್ಳಲು ವಲಸೆ ನಾಯಕ ಸಿದ್ದರಾಮಯ್ಯ ಎಂದಿಗೂ ಬಿಡುವುದಿಲ್ಲ! Congress VS Congress ಕಿತ್ತಾಟ ಕರ್ನಾಟಕದ ಅಭಿವೃದ್ಧಿಗೆ ಮತ್ತಷ್ಟು ಮಾರಕವಾಗುವುದು ಖಚಿತ-ನಿಶ್ಚಿತ-ಖಂಡಿತ ಎಂದು ಟೀಕಿಸಿದೆ.

## ದೇವನಹಳ್ಳಿ ಧ್ಯಾನ, ಆಟದೊಂದಿಗೆ ಭರ್ಜರಿ ಊಟ

• ಉದಯವಾಹಿನಿ,ದೇವನಹಳ್ಳಿ

ಪ್ರಕೃತಿ ಹಸಿರು ವಾತಾವರಣದಲ್ಲಿ ಭಜನೆ, ಧ್ಯಾನ ಮನಸ್ಸಿಗೆ ಶಾಂತರಸದ ಅನುಭವ ನೀಡುತ್ತದೆ. ತಿನ್ನಲು ಬಂದ ಗ್ರಾಹಕರಿಗೆ ಮೊಬೈಲ್ ಪ್ರಪಂಚ ಬಿಟ್ಟು, ಸಾಂಪ್ರದಾಯಿಕ ಆಟವಾಡಲು ಪ್ರೋತ್ಸಾಹಿಸಿ ವಿವಿಧ ಬಗೆಯ ಖಾದ್ಯಗಳನ್ನು ಉಣಬಡಿಸುತ್ತಿದೆ ಪಟ್ಟಣದ ಕೋಟೆ ಸಮೀಪದಲ್ಲಿರುವ 'ಚಾಯ್ ಪಾರ್ಕ್'.

ವ್ಯಾಯಾಮಕ್ಕೆ, ಆಟಕ್ಕೆ, ಹರಟೆಗೆ ಇದು ನೆಚ್ಚಿನ ಸ್ಥಳವಾಗಿದ್ದು, ನಿತ್ಯ ಬೆಳಗ್ಗೆ ಮಟ್ಕಾ, ಮಸಾಲ ಪುಡಿ, ತುಪ್ಪದ ಇಡ್ಲಿ ಸೇರಿದಂತೆ ಮಸಾಲ ತಟ್ಟೆ ಇಡ್ಲಿ ವಿಶೇಷವಾಗಿದ್ದರೇ ಮಧ್ಯಾಹ್ನ ತುಪ್ಪದ ಹುಟ್ಟಿಗೆ ರೊಟ್ಟಿ, ಕಾಯಿ, ಬೆಳೆ, ಶೇಂಗಾ ಹೋಳಿಗೆಯ ಭಾರಿ ಭೋಜನ ಸಿಗುತ್ತದೆ. ಇದು ಕೇವಲ ಹೋಟೇಲ್ ಮಾತ್ರವಲ್ಲದೇ ಧ್ಯಾನ ಕೇಂದ್ರವಾಗಿದ್ದು, 'ಶ್ರೀ ರಾಮ ಜಯ ರಾಮ' ಸ್ತೋತ್ರವೂ ನಿರಂತರವಾಗಿ ಪಠಣೆಯಾಗುತ್ತಿರುತ್ತದೆ. ದೈಹಿಕ ದೃಢತೆಗಾಗಿ ವ್ಯಾಯಾಮ ಮಾಡಬಹುದು. ವಿವಿಧ ರೀತಿಯ ಜರೋ ಬಂಡಿ, ಉಯ್ಯಾಲೆಯಂತಹ ಹೊರಾಂಗಣ ಆಟ, ಚೌಕಾ ಬಾರ, ಅಳುಗುಳಿ ಮನೆ ಸೇರಿದಂತೆ ಚೆಸ್, ಕ್ಯಾರೆಮ್, ಹಾವು ಏಣಿ ಆಟವೂ ಇಲ್ಲಿದೆ. ಆಟವಾಡುತ್ತಾ, ಆಟುತ್ತಾ ಇಲ್ಲಿ ಸಿಗುವ ಉತ್ತರ ಭಾರತೀಯ ಖಾದ್ಯದಿಂದ ಹಿಡಿದು ಚೈನೀಸ್ ತಿನಿಸುಗಳು ಬಾಯನ್ನು ಚಪ್ಪರಿಸುವಂತೆ ಮಾಡುತ್ತದೆ. ಹರಟೆ ಸೇರಿರುವ ಹಿರಿಯರ ಗುಂಪಿಗಂತೂ ಮಸಾಲ, ಬ್ಲಾಕ್, ತುಲಸಿ, ಎಲ್ಲೈಟ್, ತಂದೂರಿ, ಲೆಮನ್, ಶುಂಠಿ, ಚಾಕೊಲೇಟ್ ಸೇರಿದಂತೆ ತರಹೇವಾರಿ ಕಾಫಿ, ಟೀಗಳು ನಾಲಿಗೆಗೆ ಹಬ್ಬ ತರಿಸಲಿದ್ದು, ನೆಂಚಿಕೊಳ್ಳಲು ಸಾಲ್ಟೆಡ್, ಚೀಸೀ, ಪೆರಿ ಪೆರಿ ಫ್ರೈಸ್‌ಗಳು ಜತೆಯಾಗಲಿದೆ.



**ಜಂಕ್ ಫುಡ್‌ನಿಂದ ದೂರ ಇರೋಣ, ಒಂದೆರೆಡು ಗಂಟೆ ಟ್ರೆಡ್ ಮಿಲ್‌ನಲ್ಲಿ ಮಾಡುವ ಆರೋಗ್ಯ ಕಾಳಜಿ ಇರುವವರಿಗಾಗಿಯೇ ಕಾಳುಗಳು, ಸೌತೆಕಾಯಿ, ಮೆಕ್ಕೆ ಜೋಳ, ಟೊಮೊಟೊ ಸಲಾಡ್ ಇದೆ. ಶಕ್ತಿವರ್ಧನೆಗಾಗಿ ಕಾಫಿಯೊಂದಿಗೆ ಈರುಳ್ಳಿ, ಚಿಲ್ಲಿ ಗಾರ್ಲಿಕ್, ಚೀಸ್ ಪಕೋಡ, ವಡಾಪಾವ್, ಮೊಮೊಸ್ ಸಹ ಇವರಲ್ಲಿ ಲಭ್ಯವಿದೆ.**

## ಲಾಸ್ಯ ವರ್ಧನ ಟ್ರಸ್ಟ್ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ಗೊಂಬೆ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಮಲ್ಲೇಶ್ವರದ ಈಸ್ಟ್ ಲಿಂಕ್ ರಸ್ತೆಯಲ್ಲಿರುವ ಲಾಸ್ಯ ವರ್ಧನ ಟ್ರಸ್ಟ್ ವತಿಯಿಂದ ಅಕ್ಟೋಬರ್ 3 ರಿಂದ 12ರ ವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು, ಗೊಂಬೆ ಪ್ರದರ್ಶನವನ್ನು ಏರ್ಪಡಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ ; ಸಾಂಸ್ಕೃತಿಕ ಕಾರ್ಯಕ್ರಮಗಳು (ಪ್ರತಿದಿನ ಸಂಜೆ 6-00ಕ್ಕೆ) ಅಕ್ಟೋಬರ್ 3 ರಂದು ಪ್ರಾರ್ಥನೆ ಆರ್. ಪ್ರವರ್ಧನ್, ಸಂಗೀತ: ಪ್ರಣವ ಸಂಗೀತ ಶಾಲೆಯ ವಿದ್ಯಾರ್ಥಿಗಳಿಂದ, ನೃತ್ಯ ಪ್ರಸ್ತುತಿ : ಲಾಸ್ಯ ವರ್ಧನ ಟ್ರಸ್ಟ್ ವಿದ್ಯಾರ್ಥಿಗಳಿಂದ. ಅಕ್ಟೋಬರ್ 4 ರಂದು ಸಂಗೀತ : ಕು|| ಎ. ಭುವನ, ಸಮೂಹ ನೃತ್ಯ : ಸಾಧನ ಸಂಗಮ ಟ್ರಸ್ಟ್ ಕಲಾವಿದರಿಂದ, ಭರತನಾಟ್ಯ : ಕು|| ಚಂದನಪ್ರಿಯ. ಅಕ್ಟೋಬರ್ 5 ರಂದು ಸಂಗೀತ : ಕು|| ಕೆ.ಸಿ. ಲಲಿತ, ಭರತ ನಾಟ್ಯ ಚಂಪಕ ಅಕಾಡೆಮಿ ಮೈಸೂರು. ಅಕ್ಟೋಬರ್ 6 ರಂದು ಕರ್ನಾಟಕ ಶಾಸ್ತ್ರೀಯ ಸಂಗೀತ : ಚಿ|| ಆರ್. ಪ್ರವರ್ಧನ್ ಮತ್ತು ಸಂಗಡಿಗರು, ಭರತನಾಟ್ಯ ಸಮೂಹ ನೃತ್ಯ : ಶ್ರೀ ಕಲೈಕೋವಿಲ್ ನಾಟ್ಯಪಲ್ಲಿ ವಿದ್ಯಾರ್ಥಿಗಳಿಂದ.

ಅಕ್ಟೋಬರ್ 7 ರಂದು ಶ್ರೀಮತಿ ಇಂದು ಇವರಿಂದ ಉಪನ್ಯಾಸ, ಡಾ|| ಪೂರ್ಣವಂದಿತ ವೆಂಕಟರಾಮ್ ಇವರಿಂದ ಭರತನಾಟ್ಯ, ಅಕ್ಟೋಬರ್ 8 ರಂದು ಕು|| ಆರ್ಯ ಶ್ಯಾಮ್ ಪ್ರಸಾದ್ ಮತ್ತು ಸಂಗಡಿಗರು ಸಂಗೀತ, ಶ್ರೀಕಂಠೇಶ್ವರ ಕಲಾ ಕೇಂದ್ರದ ವಿದ್ಯಾರ್ಥಿಗಳಿಂದ ಭರತನಾಟ್ಯ ಸಮೂಹ ನೃತ್ಯ, ಅಕ್ಟೋಬರ್ 9 ರಂದು ವರ್ಲ್ಡ್9 ಕಿನ್ನಕೋಲ್ ಅಕಾಡೆಮಿಯ ವಿದ್ಯಾರ್ಥಿಗಳಿಂದ ಕೊನ್ನಕೋಲ್ ಲಯ ವಿನ್ಯಾಸ , ಜತಿನ್ ಅಕಾಡೆಮಿಯ ವಿದ್ಯಾರ್ಥಿಗಳಿಂದ ಕೂಚಿಪುಡಿ ನೃತ್ಯ, ಅಕ್ಟೋಬರ್ 10 ರಂದು ಕು|| ವಿದ್ಯಾ ಶ್ರೀ ಹೆಚ್.ಎನ್. ಇವರಿಂದಭರತನಾಟ್ಯ, ಶ್ರದ್ಧಾ ಡ್ಯಾನ್ಸ್ ಸೆಂಟರ್ ವಿದ್ಯಾರ್ಥಿಗಳಿಂದ ಭರತನಾಟ್ಯ.

ಅಕ್ಟೋಬರ್ 11 ರಂದು ಶ್ರೀಮತಿ ರಮ್ಯಾ ಸುಧೀರ್ ಅವರ ನಿರ್ದೇಶನದಲ್ಲಿ ಗಾನಸುಧಾ ಸಂಗೀತ ಶಾಲೆಯ ವಿದ್ಯಾರ್ಥಿಗಳಿಂದ ಮಿಶ್ರ ಮಾಧುರ್ಯ (ಭಾವಗೀತೆ, ಜಾನಪದ ಗೀತೆ ಮತ್ತು ಭಕ್ತಿಗೀತೆಗಳ ಗಾಯನ) ವಾದ್ಯ ಸಹಕಾರ : ಶ್ರೀ ಟಿ.ಎಸ್. ರಮೇಶ್ (ಕೀ-ಬೋರ್ಡ್), ಶ್ರೀ ಎಂ. ಮೋಹನ್ (ತಬಲಾ) ನಂತರ ಲಾಸ್ಯ ವರ್ಧನ ಟ್ರಸ್ಟ್ ವಿದ್ಯಾರ್ಥಿಗಳಿಂದ ನೃತ್ಯ ವೈಭವ. ವಿಳಾಸ : ಲಾಸ್ಯ ವರ್ಧನ ಟ್ರಸ್ಟ್, 'ಕೇಶವಕಲ್ಪ', 9, ಈಸ್ಟ್ ಲಿಂಕ್ ರಸ್ತೆ, 2ನೇ ಬಿ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003

## ದೂಳು ಮುಕ್ತ ಪುರಸಭೆಗೆ ಕ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಆನೇಕಲ್

ಪಟ್ಟಣದ ಪುರಸಭೆಯಿಂದ ರಸ್ತೆಗಳ ಸ್ವಚ್ಛತೆಗಾಗಿ ಯಂತ್ರಗಳ ಮೂಲಕ ರಸ್ತೆ ಸ್ವಚ್ಛತೆ ಕಾರ್ಯಕ್ಕೆ ಪುರಸಭೆ ಅಧ್ಯಕ್ಷೆ ಸುಧಾನಿರಂಜನ್ ಮತ್ತು ಉಪಾಧ್ಯಕ್ಷೆ ಭುವನಾ ದಿನೇಶ್ ಚಾಲನೆ ನೀಡಿದರು. ಪುರಸಭೆ ಅಧ್ಯಕ್ಷೆ ಸುಧಾ ನಿರಂಜನ್ ಮಾತನಾಡಿ, ಆನೇಕಲ್ ಪಟ್ಟಣದಲ್ಲಿ ಸ್ವಚ್ಛತೆಯನ್ನು ಕಾಪಾಡುವುದು ಸವಾಲಾಗಿದೆ.

ಸ್ವಚ್ಛತೆಗೆ ಸಾರ್ವಜನಿಕರ ಸಹಕಾರ ಅತ್ಯಂತ ಮುಖ್ಯವಾಗಿದೆ. ಮುಖ್ಯ ರಸ್ತೆಗಳನ್ನು ದೂಳು ಮುಕ್ತ ರಸ್ತೆಯನ್ನಾಗಿ ಮಾಡುವ ನಿಟ್ಟಿನಲ್ಲಿ ಸ್ವಚ್ಛತಾ ಯಂತ್ರಗಳಿಗೆ ಚಾಲನೆ ನೀಡಲಾಗಿದೆ ಎಂದರು.

ರಸ್ತೆ ಸ್ವಚ್ಛತೆಗಾಗಿ ಪುರಸಭೆಯ ಪೌರ ಕಾರ್ಮಿಕರು ಪ್ರತಿದಿನ ಬೆಳಗ್ಗೆ ಶ್ರಮವಹಿಸುತ್ತಿದ್ದರು. ಸ್ವಚ್ಛತಾ ಯಂತ್ರದಿಂದಾಗಿ ಪೌರ ಕಾರ್ಮಿಕರಿಗೆ ಹೆಚ್ಚಿನ ಅನುಕೂಲವಾಗಿದೆ. ರಸ್ತೆಗಳಲ್ಲಿ ಧೂಳಿನಿಂದಾಗಿ ಸಂಚರಿಸುವುದು ಕಷ್ಟವಾಗಿತ್ತು.

ದ್ವಿಚಕ್ರ ವಾಹನ ಸವಾರರು ಪರದಾಡುವಂತಾಗಿತ್ತು. ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸ್ವಚ್ಛತಾ ಪರಿಕರಗಳನ್ನು ಖರೀದಿಸಲಾಗಿದೆ ಎಂದರು. ದೂಳು ಮುಕ್ತ ಪುರಸಭೆಯನ್ನಾಗಿ ಮಾಡಲು ಹೆಚ್ಚಿನ ಗಮನ ವಹಿಸಲಾಗಿದೆ.

ಸಾರ್ವಜನಿಕರು ತಮ್ಮ ಮನೆಗಳ ಕಸವನ್ನು ಹಸಿ ಮತ್ತು ಒಣ ಕಸಗಳಾಗಿ ವಿಂಗಡಿಸಿ ಪುರಸಭೆ ವಾಹನಕ್ಕೆ ನೀಡಬೇಕು.

ಪೌರಕಾರ್ಮಿಕರು ಪ್ರತಿದಿನ ಮುಖ್ಯ ರಸ್ತೆಗಳನ್ನು ಸ್ವಚ್ಛಗೊಳಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಪೌರಕಾರ್ಮಿಕರ ಶ್ರಮ ಶ್ಲಾಘನೀಯ ಎಂದರು.

**ಪುರಸಭೆ ಉಪಾಧ್ಯಕ್ಷೆ ಭುವನಾ ದಿನೇಶ್ ಮಾತನಾಡಿ, ಆನೇಕಲ್ ದಸರಾ ನಮ್ಮೆಲ್ಲರ ಹೆಮ್ಮೆಯಾಗಿದೆ. ಪಟ್ಟಣದಲ್ಲಿ ನಡೆಯುವ ವೈಭವದ ದಸರಾ ಹಬ್ಬದಲ್ಲಿ ಸಾವಿರಾರು ಮಂದಿ ಪಾಲ್ಗೊಳ್ಳಲಿದ್ದಾರೆ. ಸಾರ್ವಜನಿಕರಿಗೆ ದೂಳಿನ ಸಮಸ್ಯೆ ಪರಿಹರಿಸಲು ಕ್ರಮ ವಹಿಸಲಾಗಿದೆ ಎಂದರು.**

## ಸಿಎಂ ಸಿದ್ದರಾಮಯ್ಯ ಕಂಡಲ್ಲೆಲ್ಲ ಕಪ್ಪುಪಟ್ಟಿ ಪ್ರದರ್ಶನಕ್ಕೆ ಬಿಜೆಪಿ ಸಜ್ಜು

• ಉದಯವಾಹಿನಿ, ಬೆಂಗಳೂರು



ಮುಡಾ ಹಗರಣದಲ್ಲಿ ಎಫ್‌ಐಆರ್ ದಾಖಲಾದ ಬಳಿಕವೂ ರಾಜೀನಾಮೆ ನೀಡದಿರುವ ಸಿದ್ದರಾಮಯ್ಯ ವಿರುದ್ಧ ಹೋರಾಟ ತೀವ್ರಗೊಳಿಸಲು ನಿರ್ಧರಿಸಿ ರುವ ಬಿಜೆಪಿ ರಾಜ್ಯ ಘಟಕವು ಹಳ್ಳಿಯಿಂದ ದಿಲ್ಲಿ ವರೆಗೆ ಪ್ರತಿಭಟನೆ ನಡೆಸುವುದಕ್ಕೆ ಚರ್ಚೆ ಪ್ರಾರಂಭಿಸಿದೆ. ಆದರೆ ಹೋರಾಟ ಇನ್ನೂ ತೀಕ್ಷ್ಣಗೊಳ್ಳದೆ ಇರುವುದು ಕಾರ್ಯಕರ್ತರಲ್ಲಿ ಬೇಸರ ಮೂಡಿಸಿದೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಎಲ್ಲಾ ಜಿಲ್ಲಾಧ್ಯಕ್ಷರಿಗೂ ಸೂಚನೆ ಕಳುಹಿ ಸಿದ್ದು, ಶುಕ್ರವಾರ ಮೈಸೂರಿನಲ್ಲಿ ನಡೆಸಿದ ಹೋರಾಟದ ಮಾದರಿಯಲ್ಲಿ ಸಿದ್ದರಾಮಯ್ಯ ಯಾವ ಜಿಲ್ಲೆಗೆ ಭೇಟಿ ನೀಡಿದರೂ ಗೋ ಬ್ಯಾಕ್ ಸಿದ್ದರಾಮಯ್ಯ' ಘೋಷಣೆ ಮೊಳಗಿಸುವಂತೆ ನಿರ್ದೇಶನ ನೀಡಿದ್ದಾರೆ.

**ಪ್ರತಿಭಟನೆ ಹೇಗೆ**

- ಸಿಎಂಗೆ ಹೋದಲ್ಲಿ, ಬಂದಲ್ಲಿ ಕಪ್ಪುಪಟ್ಟಿ ಪ್ರದರ್ಶಿಸುವುದು
- ಗೋ ಬ್ಯಾಕ್ ಸಿದ್ದರಾಮಯ್ಯ' ಘೋಷಣೆ ಮೊಳಗಿಸುವುದು
- ಎಲ್ಲಾ ಜಿಲ್ಲೆಗಳಲ್ಲೂ ಇದೇ ಮಾದರಿ ಹೋರಾಟ ನಡೆಸುವುದು
- ಅಧಿಕಾರದಿಂದ ಕೆಳಗಿಳಿಯುವವ ರೆಗೂ ರಾಜ್ಯಾದ್ಯಂತ ಪ್ರತಿಭಟನೆ
- ದಿಲ್ಲಿಗೆ ತೆರಳಿ ಜಂತರ್‌ಮಂತರ್‌ನಲ್ಲೂ ಸಿಎಂ ರಾಜೀನಾಮೆಗೆ ಆಗ್ರಹ

## ಸಾರ್ವಜನಿಕರರ ಗಮನಕ್ಕೆ: ದ್ವಿ-ಚಕ್ರ ವಾಹನಗಳ ಕಳ್ಳತನ ತಪ್ಪಿಸಿ !

### ಬೆಂಗಳೂರು ನಗರ ಪೊಲೀಸ್ ಇಲಾಖೆ ಯು ಸಾರ್ವಜನಿಕ ಪ್ರಕಟ, ಎರಡು ಸಾವಿರ ವಾಹನಗಳು ಹೊಸದಾಗಿ ನೋಂದಣಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ದ್ವಿಚಕ್ರ ವಾಹನಗಳು ಎಷ್ಟು ರಸ್ತೆಗೆ ಇಳಿಯುತ್ತಿವೆಯೋ ಅಷ್ಟೇ ಪ್ರಮಾಣದಲ್ಲಿ ಅವುಗಳ ಕಳ್ಳತನ ಕೂಡ ನಡೆಯುತ್ತಿದೆ. ಈ ಕಳ್ಳತನಕ್ಕೆ ಬಹುಮುಖ್ಯ ಕಾರಣ, ದ್ವಿ-ಚಕ್ರ ವಾಹನಗಳನ್ನು ಸುರಕ್ಷಿತವಾಗಿ ಇಡುವುದಕ್ಕೆ ರಕ್ಷಣಾ ತಂತ್ರಗಳನ್ನು ಅಳವಡಿಸಿಕೊಳ್ಳದೇ ಇರುವುದಾಗಿದೆ.

ಹಾಗಾದ್ರೆ, ದ್ವಿ-ಚಕ್ರ ವಾಹನಗಳ ಕಳ್ಳತನ ತಡೆಗಟ್ಟುವುದು ಹೇಗೆ ಎನ್ನುವ ಬಗ್ಗೆ ಮುಂದಿದೆ ಮಾಹಿತಿ.

ಬೆಂಗಳೂರು ನಗರ ಪೊಲೀಸ್ ಇಲಾಖೆಯು ಸಾರ್ವಜನಿಕ ಪ್ರಕಟಣೆಯಲ್ಲಿ ಈ ಮಾಹಿತಿ ಹಂಚಿಕೊಂಡಿದೆ. ಬೆಂಗಳೂರು ನಗರದಲ್ಲಿ ಒಟ್ಟು ಸುಮಾರು 80 ಲಕ್ಷ ದ್ವಿ-ಚಕ್ರ ವಾಹನಗಳಿದ್ದು, ಪ್ರತಿದಿನ ಸುಮಾರು ಒಂದೂವರೆಯಿಂದ ಎರಡು ಸಾವಿರ ವಾಹನಗಳು ಹೊಸದಾಗಿ ನೋಂದಣಿಯಾಗುತ್ತಿದ್ದು, ಇವುಗಳಲ್ಲಿ ಕಳೆದ ಮೂರು ವರ್ಷಗಳಿಂದ ಪ್ರತಿನಿತ್ಯ ಸರಾಸರಿ ಅಂದಾಜು 14 ರಿಂದ 16 ವಾಹನಗಳು ಕಳ್ಳತನವಾಗುತ್ತಿರುತ್ತವೆ ಎಂದು ಹೇಳಿದೆ.

**ಮೇಲ್ಕಂಡ ಕಳ್ಳತನವನ್ನು ತಡೆಗಟ್ಟುವಲ್ಲಿ ಕೈಗೊಳ್ಳಬಹುದಾದ ಕ್ರಮಗಳು:** Anti-theft ಕ್ರಮಗಳನ್ನು ಪರಿಣಾಮಕಾರಿಯಾಗಿ ಅಳವಡಿಸಿಕೊಳ್ಳುವುದು. ವಾಹನಗಳಿಗೆ ಜಿ.ಪಿ.ಎಸ್ ಸಿಸ್ಟಮ್ ಅಳವಡಿಸುವುದು.

Wheel Locking ಸಿಸ್ಟಮ್‌ಗಳನ್ನು ಅಳವಡಿಸುವುದು.

Hand lock ಗಳು ಗಟ್ಟಿಮುಟ್ಟಾಗಿರುವಂತೆ ನೋಡಿಕೊಳ್ಳುವುದು. CCTV ಇರುವ ವ್ಯಾಪ್ತಿ ಪ್ರದೇಶದಲ್ಲೇ ನಿಲ್ಲಿಸುವುದು. ನಿರ್ಜನ ಪ್ರದೇಶಗಳಲ್ಲಿ ವಾಹನಗಳನ್ನು ನಿಲ್ಲಿಸುವುದನ್ನು ತಪ್ಪಿಸುವುದು. ವಾಹನ ನಿಲ್ಲಿಸಿದಾಗ ಕೀ ಬಿಟ್ಟು ಹೋಗದೇ ಇರುವುದು. ನಕಲಿ ಕೀ ಬಳಸಿ ಅಥವಾ ಸರ್ಕ್ಯೂಟ್ ಬ್ರೇಕ್ ಮಾಡಿ ವಾಹನ ಕಳ್ಳತನಕ್ಕೆ ಪ್ರಯತ್ನಿಸಿದಲ್ಲಿ ಸೈರನ್ ಆಗುವಂತಹ ವ್ಯವಸ್ಥೆ ಅಥವಾ ಮೊಬೈಲ್‌ಗೆ ಮಾಹಿತಿ ಬರುವಂತಹ ವ್ಯವಸ್ಥೆ ಮಾಡಿಕೊಳ್ಳುವುದು.

**14 ರಿಂದ 16 ವಾಹನಗಳು ಕಳ್ಳತನ**

**ಮೇಲ್ಕಂಡ ಅಂಶಗಳನ್ನು ಪರಿಣಾಮಕಾರಿ ಬಳಸುವುದರಿಂದ ವಾಹನ ಕಳ್ಳತನವನ್ನು ತಡೆಹಿಡಿಯಬಹುದಾಗಿದೆ ಎಂಬುದಾಗಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಹೇಳಿದ್ದಾರೆ.**

**ದ್ವಿ-ಚಕ್ರ ವಾಹನಗಳ ಕಳ್ಳತನಕ್ಕೆ ಕಾರಣಗಳು**

- 1. ವಾಹನಗಳನ್ನು ಸೂಕ್ತ ಎಚ್ಚರಿಕೆ ಇಲ್ಲದೆ ನಿಲ್ಲಿಸುವುದು.
- 2. ವಾಹನ ನಿಲ್ಲಿಸಿದಾಗ ಅದರಲ್ಲಿಯೇ ವಾಹನದ ಕೀಯನ್ನು ಬಿಟ್ಟು ಹೋಗುವುದು.
- 3. ಸುಲಭವಾಗಿ ಹ್ಯಾಂಡಲ್ ಲಾಕ್‌ಗಳನ್ನು ಮುರಿಯುವಂತಹ ವಾಹನಗಳನ್ನು ಬಳಸುವುದು.
- 4. ಸೂಕ್ತ ಸುರಕ್ಷತಾ ಕ್ರಮಗಳಿಲ್ಲದ ಹಳೆಯ ವಾಹನಗಳನ್ನು ಬಳಸುವುದು.
- 5.ಸಿ.ಸಿ ಟಿ.ವಿ ಕವರೇಜ್ ಇಲ್ಲದ ಸ್ಥಳಗಳಲ್ಲಿ ವಾಹನಗಳನ್ನು ನಿಲ್ಲಿಸುವುದು.
- 6. ಸಾರ್ವಜನಿಕರಿಗೆ ಕಾಣದಂತೆ ನಿರ್ಜನ ಮತ್ತು ಕತ್ತಲಿನ ಪ್ರದೇಶಗಳಲ್ಲಿ ವಾಹನ ನಿಲ್ಲಿಸುವುದು.
- 7. ಸೂಕ್ತ anti-theft measurement ಗಳನ್ನು ಅಳವಡಿಸದೇ ಇರುವುದು.

**ಬೆಂಗಳೂರು ನಗರದ ಸಾರ್ವಜನಿಕರಿಗೆ ನಗರದಲ್ಲಿ ಆಗುತ್ತಿರುವ ಈ ದ್ವಿ-ಚಕ್ರ ವಾಹನಗಳ ಕಳ್ಳತನ ತಡೆಗಟ್ಟುವ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮ ವಹಿಸಲು ನಗರ ಪೊಲೀಸ್ ವತಿಯಿಂದ ಈ ಕೆಳಕಂಡ ಸೂಚನೆಗಳನ್ನು ನೀಡಲಾಗುತ್ತಿದೆ.**



**ಸಿದ್ಧಸೂಕ್ತಿ**

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ರಾಜ್ಯಮಟ್ಟದ ಶಿಕ್ಷಕರ ಹಬ್ಬ

ನಿನ್ನೆ ಬೆಂಗಳೂರಿನ ಟೌನ್ ಹಾಲ್ ನಲ್ಲಿ ಶಿಕ್ಷಕರ ಹಬ್ಬ. ನೂರಾ ಮೂವತ್ತೊಂದು ಶಿಕ್ಷಕ - ಶಿಕ್ಷಕಿಯರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಸಭಾಂಗಣ ಮೇಲೆ ಕೆಳಗೆ ಕಿಕ್ಕಿರಿದು ತುಂಬಿತ್ತು. ತಪೋವನ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಅದರಲ್ಲೂ ವಿಶೇಷವಾಗಿ ಗುರ್ವಷ್ಟಕ ಗಾನ ಗಮನ ಸೆಳೆಯಿತು. ನಿರ್ಮಾಣ ಕಲಾ ತಂಡದ ಮಹಿಳೆಯರ ನವದುರ್ಗೆಯರ ಅಯಿ ಗಿರಿ ನಂದಿನಿ ವಿಶೇಷ ನೃತ್ಯ ಮಹಿಷ ವಧೆ ಮನಸೂರೆಗೊಂಡಿತು. ದಾವಣಗೆರೆಯ ಚೈತನ್ಯ ಗುರುಕುಲ ಶಾಲೆಯ ಮಕ್ಕಳ ಮಲ್ಲಗಂಭ ಪ್ರತಿಭಾ ಪ್ರದರ್ಶನ ರೋಮಾಂಚನಗೊಳಿಸಿತು. ಮರದ ನುಣುಪಾದ ಎಣ್ಣೆ ಕಂಭದ ಮೇಲೆ ಪ್ರದರ್ಶಿಸುವ ವಿಶೇಷ ಯೋಗ ಪ್ರತಿಭಾಭಂಗಿಯೇ ಮಲ್ಲಗಂಭ. ರಾಮಾಯಣ ಮಹಾಭಾರತ ಕಾಲದಲ್ಲಿ ಪ್ರಚಲಿತದಲ್ಲಿದ್ದ ವಿಶೇಷ ದೇಶೀ ಕ್ರೀಡೆ. ಸಮ್ಮಾನ ಕಾರ್ಯಕ್ರಮದ ವೇದಿಕೆಯೂ ಕಿಕ್ಕಿರಿದಿತ್ತು. ಯಾರು ಏನೆಂಬುದು ಅವರವರೇ ಬಲ್ಲರು! ಒರ್ವರ ಕತ್ತು ಕೈಗಳಲ್ಲಿ ತೂಕದ ಬಂಗಾರ ಭಾರವಾಗಿ ದೀಪಸ್ತಂಭದ ಎದುರು ಅವರಿವರನ್ನು ತಳ್ಳಿ ನುಗ್ಗಿ ಅಡ್ಡ ನಿಂತಿತ್ತು. ನಾನು ನನ್ನೊಂದಿಗೆ ಮುಕ್ತೇಶ್ವರ ಸ್ವಾಮೀಜಿ ಉತ್ಸವದ ಮೂರ್ತಿಗಳು. ಅವರಿವರು ಅಂಥಿಂಥವರು ಹಾಗೆ ಹೀಗೆ ಮಾತನಾಡಿದ್ದನ್ನು ಕೇಳಿಸಿಕೊಂಡು ಎಲ್ಲರ ಸಮ್ಮಾನ ಜಾತ್ರೆ ಮುಗಿದ ಬಳಿಕ ಶಾಲು ಹೊದಿಸಿಕೊಂಡು ಕೆಳಗಿಳಿದೆ.

## ಸ್ಥಗಿತಗೊಂಡ ಮೆಟ್ರೋ ರೈಲು - ನಿಲ್ದಾಣದಲ್ಲೇ ಉಳಿದ ಪ್ರಯಾಣಿಕರು.!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ತಾಂತ್ರಿಕ ದೋಷದಿಂದ ನೇರಳೆ ಮಾರ್ಗದ ಮೆಟ್ರೋ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದ್ದು, ಮೆಟ್ರೋ ರೈಲು ನಿಂತಲ್ಲೇ ನಿಂತುಕೊಂಡಿರುವಂತಹ ಘಟನೆ ನಗರದಲ್ಲಿ ನಡೆದಿದೆ. ವೈಟ್‌ಫೀಲ್ಡ್ ಮೆಟ್ರೊ ನಿಲ್ದಾಣದಲ್ಲಿ ತಾಂತ್ರಿಕ ದೋಷದಿಂದಾಗಿ ವೈಟ್‌ಫೀಲ್ಡ್ (ಕಾಡುಗೋಡಿ) ಐಟಿಪಿಎಲ್ ನಡುವೆ ಇಂದು ಬೆಳಿಗ್ಗೆ 08.25 ಗಂಟೆಯಿಂದ 8.55 ಗಂಟೆಯವರೆಗೆ ರೈಲು ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಂಡಿತ್ತು. ತಾಂತ್ರಿಕ ಸಮಸ್ಯೆ ಹಿನ್ನೆಲೆ ಹಸಿರು ಮಾರ್ಗದಲ್ಲಿ ಸಂಚರಿಸುತ್ತಿದ್ದ ಪ್ರಯಾಣಿಕರು ಪರದಾಡುವಂತಾಗಿದೆ. ಸದ್ಯ ಬಿಎಂಆರ್‌ಸಿಎಲ್ ಸಿಬ್ಬಂದಿ ಸಮಸ್ಯೆ ಸರಿಪಡಿಸಿ ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು. ಈ ವೇಳೆ ನೇರಳೆ ಮಾರ್ಗದಲ್ಲಿ ಈ ಸಮಯದಲ್ಲಿ ಚಲ್ಲಘಟ್ಟದಿಂದ ಐಟಿಪಿಎಲ್ ಮೆಟ್ರೋ ನಿಲ್ದಾಣಗಳ ನಡುವೆ ಶಾರ್ಟ್ ಲೂಪ್ ರೈಲು ಸೇವೆಗಳು ನಡೆಸಲಾಯಿತು. 8.55ಕ್ಕೆ ಸಿಬ್ಬಂದಿಗಳು ದೋಷವನ್ನು ಸರಿಪಡಿಸಿದ್ದು, ಬಳಿಕ ಎಂದಿನಂತೆ ಸಂಚಾರ ಪ್ರಾರಂಭವಾಗಿದೆ. ಮೆಟ್ರೋದಲ್ಲಿ ಉಂಟಾದ ತಾಂತ್ರಿಕ ದೋಷದಿಂದ ಪ್ರಯಾಣಿಕರಿಗೆ ಉಂಟಾದ ಅನಾನುಕೂಲತೆಗೆ ವಿಷಾದಿಸುತ್ತೇವೆ ಎಂದು ಬಿ.ಎಂ ಆರ್ ಸಿ ಎಲ್ ಅಧಿಕಾರಿಗಳು ತಿಳಿಸಿದ್ದು, ಹಸಿರು ಮಾರ್ಗದಲ್ಲಿ ಯಾವುದೇ ವ್ಯತ್ಯಯವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಕೇಕ್ ತಯಾರಿಕೆಗೆ ಬಳಸುವ ಬಣ್ಣದಲ್ಲೂ ಕ್ಯಾನ್ಸರ್ ಕಾರಕ ಕೆಮಿಕಲ್ ಪತ್ತೆ!

• ಉದಯವಾಹಿನಿ, ಬೆಂಗಳೂರು



ಗೋಬಿ, ಕಬಾಬ್, ಪಾನಿಪುರಿ ಆಯ್ತು ಇದೀಗ, ಕೇಕ್‌ಗೆ ಬಳಸುವ ಪದಾರ್ಥಗಳಲ್ಲೂ ಕ್ಯಾನ್ಸರ್‌ಕಾರಕ ಅಂಶ ಪತ್ತೆಯಾಗಿದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ತಿಳಿಸಿದೆ. ಕೇಕ್‌ಗೆ ಬಳಸುವ ಪದಾರ್ಥಗಳು ಕಲಬರಿಕೆಯಿಂದ ಕೂಡಿವೆ ಎಂಬ ಅನುಮಾನ ವ್ಯಕ್ತವಾದ ಹಿನ್ನೆಲೆಯಲ್ಲಿ ಆಹಾರ ಇಲಾಖೆ ಅಧಿಕಾರಿಗಳು ಕೇಕ್ ಮಾದರಿಗಳನ್ನು ಸಂಗ್ರಹಿಸಿದರು. ಪರಿಶೀಲನೆಗೆ ಒಳಪಡಿಸಿದಾಗ 12 ಮಾದರಿ ಕೇಕ್‌ಗಳಲ್ಲಿ ಕ್ಯಾನ್ಸರ್ ಕಾರಕ ಅಂಶಗಳು ಪತ್ತೆಯಾಗಿವೆ. ರೆಡ್ ವೆಲ್ವೆಟ್ ಹಾಗೂ ಬ್ಲಾಕ್ ಫಾರೆಸ್ಟ್ ಕೇಕ್‌ನಲ್ಲಿ ಹೆಚ್ಚು ಬಣ್ಣ ಬಳಕೆ ಮಾಡುವುದರಿಂದ, ಇದು ಮನುಷ್ಯನ ಆರೋಗ್ಯಕ್ಕೆ ಹಾನಿ ಉಂಟು ಮಾಡುತ್ತದೆ. ರುಚಿ ಎನಿಸುವ ಕೇಕ್ ತಿನ್ನುವ ಮುನ್ನ ಎಚ್ಚರಿಕೆ ವಹಿಸಬೇಕಿದೆ. ಈ ಕೃತಕ ಬಣ್ಣಗಳಿಂದ ಆರೋಗ್ಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಹೀಗಾಗಿ ರೆಡ್ ವೆಲ್ವೆಟ್ ಹಾಗೂ ಬ್ಲಾಕ್ ಫಾರೆಸ್ಟ್ ಕೇಕ್‌ಗೆ ಬಣ್ಣ ಬಳಕೆಗೆ ನಿರ್ಬಂಧಿಸಲಾಗಿದೆ. ಆಹಾರ ಸುರಕ್ಷತಾ ಇಲಾಖೆಯ ಸೂಚನೆ ಪಾಲಿಸುವಂತೆ ಕೇಕ್ ತಯಾರಿಕರಿಗೆ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

## ಅ. 2ರಂದು ಗ್ರಾಮ ಪಂಚಾಯಿತಿಗಳಲ್ಲಿ ವಿಶೇಷ ಗ್ರಾಮ ಸಭೆ ನಡೆಸಲು ಸುತ್ತೋಲೆ

• ಉದಯವಾಹಿನಿ, ಬೆಂಗಳೂರು

ಗ್ರಾಮ ಪಂಚಾಯಿತಿಗಳಲ್ಲಿ ಅ.2ರಂದು ವಿಶೇಷ ಗ್ರಾಮ ಸಭೆ ಕರೆಯಲು ಸರ್ಕಾರ ಸುತ್ತೋಲೆ ಹೊರಡಿಸಿದೆ. ಜನರ ಯೋಜನೆ ಅಭಿಯಾನ ಅನುಷ್ಠಾನಕ್ಕೆ ಅ. 2ರಂದು ವಿಶೇಷ ಗ್ರಾಮ ಸಭೆ ನಡೆಸಬೇಕು. ಸಭೆಯಲ್ಲಿ 2025 -26ನೇ ಸಾಲಿನ ಸಮಗ್ರ ಸಹಭಾಗಿತ್ವ ವಾರ್ಷಿಕ ಕ್ರಿಯಾ ಯೋಜನೆ ಸಿದ್ಧಪಡಿಸಲು ಸೂಚಿಸಲಾಗಿದೆ. 232 ತಾಲ್ಲೂಕುಗಳ ಆಯ್ದ ಗ್ರಾಮ ಪಂಚಾಯಿತಿಗಳಲ್ಲಿ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಸೂಚನೆ ಅನ್ವಯ ಸಭೆ ಆಯೋಜಿಸಲು ತಿಳಿಸಲಾಗಿದೆ. ಉನ್ನತ್ ಭಾರತ ಅಭಿಯಾನದಡಿ ದೇಶದ ಅನೇಕ ಉನ್ನತ ಶಿಕ್ಷಣ ಸಂಸ್ಥೆಗಳ ಬೋಧಕರು, ವಿದ್ಯಾರ್ಥಿಗಳ ಒಳ ಗೊಂಡಂತೆ ಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಲಹೆಗಳನ್ನು ನೀಡಿ ಉತ್ತಮ ಯೋಜನೆಗಳನ್ನು ಸಿದ್ಧಪಡಿಸಲು ಸಹಕರಿಸುತ್ತಾರೆ. ಈ ಹಿನ್ನೆಲೆಯಲ್ಲಿ ಉತ್ತಮ ಶಿಕ್ಷಣ ಸಂಸ್ಥೆ ಬೋಧಕರು, ವಿದ್ಯಾರ್ಥಿಗಳನ್ನು ಸಭೆಯಲ್ಲಿ ತೊಡಗಿಸಿಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ.

## ಬಿಜೆಪಿಯಿಂದ ಸ್ವಚ್ಛತಾ ಅಭಿಯಾನ

• ಉದಯವಾಹಿನಿ, ದೇವನಹಳ್ಳಿ

ಬಿಜೆಪಿ ಅಧಿಕಾರ ಅಥವಾ ಚುನಾವಣೆಗಾಗಿ ದುಡಿಯುವ ಪಕ್ಷ ವಲ್ಲ. ಜನ ಸಾಮಾನ್ಯರ ಏಳಿಗೆಗೆ, ರಾಷ್ಟ್ರದ ಹಿತಕ್ಕಾಗಿ ದುಡಿಯುತ್ತಿರುವ ವಿಶ್ವದ ಅತಿ ದೊಡ್ಡ ರಾಜಕೀಯ ಪಕ್ಷ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಎಂ.ರವಿಕುಮಾರ್ ತಿಳಿಸಿದರು. ಪಟ್ಟಣದ ದೇವನಹಳ್ಳಿ ರೈಲ್ವೆ ನಿಲ್ದಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮ ದಿನದ ಅಂಗವಾಗಿ ಶನಿವಾರ ಸೇವಾ ಪಾಕ್ಷಿಕದ ಹಿನ್ನೆಲೆಯಲ್ಲಿ ಆಯೋಜಿಸಲಾಗಿದ್ದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಪ್ರಧಾನಿಗಳ ಹುಟ್ಟುಹಬ್ಬದ ಪ್ರಯುಕ್ತ ದೇಶಾದ್ಯಂತ ಸೇವಾ ಪಾಕ್ಷಿಕ ಅಭಿಯಾನ ಹಮ್ಮಿಕೊಂಡಿದ್ದೇವೆ. ಅದರಂತೆ ಮಹಿಳಾ ಮೋರ್ಚಾದ ಪದಾಧಿಕಾರಿಗಳು ರೈಲ್ವೆ ನಿಲ್ದಾಣವನ್ನು ಸ್ವಚ್ಛಗೊಳಿಸುವ ಅರ್ಥಪೂರ್ಣ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ ಎಂದರು. ಮಹಿಳಾ ಮೋರ್ಚಾದ ಪುನೀತಾ, ಪಂಡಿತ್ ದೀನ್ ದಯಾಳ್ ಅವರ ಹುಟ್ಟು ಹಬ್ಬ ಸೆ.2 ಅದರಂತೆ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಹುಟ್ಟುಹಬ್ಬವೂ ಅ.2ರಂದು ಆಚರಣೆ ಮಾಡುವುದರಿಂದ ಈ ಒಂದು ತಿಂಗಳು ವಿವಿಧ ಸೇವಾ ಕಾರ್ಯಕ್ರಮಗಳನ್ನು ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು.

# ಕನಕಪುರದ 'ಕೈ' ಕೋಟೆ ವಶಕ್ಕೆ ಜೆಡಿಎಸ್ ತಂತ್ರ: ರಾಜಕೀಯ ವೈರತ್ವಕ್ಕೆ ಮತ್ತಷ್ಟು ತುಪ್ಪ

## ಸದಸ್ಯತ್ವ ನೋಂದಣಿ ಅಭಿಯಾನ ಆರಂಭಿಸಿರುವ ಜೆಡಿಎಸ್, ಕನಕಪುರದಲ್ಲಿ ಸದಸ್ಯತ್ವ ಹೆಚ್ಚಳಕ್ಕೆ ವಿಶೇಷ ಒತ್ತು

• **ಉದಯವಾಹಿನಿ ರಾಮನಗರ**

ಉಪ ಚುನಾವಣೆ ಎದುರು ನೋಡುತ್ತಿರುವ ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಪ್ರತಿನಿಧಿಸುತ್ತಿದ್ದ ಚನ್ನಪಟ್ಟಣವನ್ನು 'ಕೈ'ವಶ ಮಾಡಿಕೊಳ್ಳಲು ಕಾಂಗ್ರೆಸ್ ನಾಯಕ ಡಿ.ಕೆ. ಶಿವಕುಮಾರ್ ಒಂದೆಡೆ ಬೆವರು ಹರಿಸುತ್ತಿದ್ದರೆ, ಮತ್ತೊಂದೆಡೆ ಅವರ ಸ್ವಕ್ಷೇತ್ರವಾದ ಕನಕಪುರದಲ್ಲಿ ಜೆಡಿಎಸ್ ತನ್ನ ನೆಲೆ ಗಟ್ಟಿ ಮಾಡಿಕೊಳ್ಳುವಲ್ಲಿ ಕಾರ್ಯೋನ್ಮುಖವಾಗಿದೆ.


ಪಕ್ಷ ಬಲವರ್ಧನೆಗಾಗಿ ಸದಸ್ಯತ್ವ ನೋಂದಣಿ ಅಭಿಯಾನ ಆರಂಭಿಸಿರುವ ಜೆಡಿಎಸ್, ಕನಕಪುರದಲ್ಲಿ ಸದಸ್ಯತ್ವ ಹೆಚ್ಚಳಕ್ಕೆ ವಿಶೇಷ ಒತ್ತು ಕೊಟ್ಟಿದೆ. ಪಟ್ಟಣದಲ್ಲಿ ನಡೆಯಲಿರುವ ಅಭಿಯಾನದಲ್ಲಿ ಪಾಲ್ಗೊಂಡು ಪಕ್ಷಕ್ಕೆ ಬಲ ತುಂಬಲು ಎಚ್‌ಡಿಕೆ ಪುತ್ರ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕ ಸುರೇಶ್ ಬಾಬು ಸೇರಿದಂತೆ ರಾಜ್ಯಮಟ್ಟದ ನಾಯಕರು ಕನಕಪುರಕ್ಕೆ ಬರುತ್ತಿದ್ದಾರೆ.

**ಮೇಲಕ್ಕೇಳದ ಜೆಡಿಎಸ್:** ಒಂದು ಕಾಲದಲ್ಲಿ ಜೆಡಿಎಸ್ ಕೋಟೆಯಾಗಿದ್ದ ಕನಕಪುರವನ್ನು ಜೆಡಿಎಸ್‌ನ ಪಿ.ಜಿ. ಆರ್. ಸಿಂಧ್ಯ ಪ್ರತಿನಿಧಿಸುತ್ತಿದ್ದರು.

> **ಡಿ.ಕೆ ಸಹೋದರರ ಎದುರು ನಿಲ್ಲಲಾಗದೆ ತೆರೆಮರೆಗೆ ಸರಿದಿದ್ದ ಕಾರ್ಯಕರ್ತರೀಗ ಮುನ್ನೆಲೆಗೆ ಬರತೊಡಗಿದ್ದಾರೆ. ಅನಸೂಯ ಅವರು ಬಂದಾಗಲೆಲ್ಲಾ ಹೆಚ್ಚಿನ ಕಾರ್ಯಕರ್ತರು ಸೇರತೊಡಗಿದ್ದಾರೆ. ಮುಂಬರುವ ಚುನಾವಣೆಯಲ್ಲಿ ಡಿಕೆಶಿ ಕೋಟೆ ಬೇಧಿಸಲು, ಅವರ ನೇತೃತ್ವದಲ್ಲಿ ಈಗಿನಿಂದಲೇ ಮೈತ್ರಿಕೂಟ ತಯಾರಿ ನಡೆಸುತ್ತಿದೆ ಎಂಬ ಮಾತುಗಳು ಕ್ಷೇತ್ರದಲ್ಲಿ ಕೇಳಿಬರುತ್ತಿವೆ.**

ಪಕ್ಕದ ಸಾತನೂರು ಕ್ಷೇತ್ರದಲ್ಲಿ ಡಿ.ಕೆ. ಶಿವಕುಮಾರ್ ಕಾಂಗ್ರೆಸ್‌ನಿಂದ ಗೆಲ್ಲುತ್ತಿದ್ದರು. ಕ್ಷೇತ್ರ ಪುನರ್ ವಿಂಗಡಣೆಯಾದಾಗ ಕನಕಪುರದಲ್ಲಿ ಸಾತನೂರು ವಿಲೀನವಾಯಿತು. ಬಳಿಕ ಕನಕಪುರ ಶಿವಕುಮಾರ್ 'ಕೈ'ವಶವಾಯಿತು. ಅಂದಿನಿಂದ ಕ್ಷೇತ್ರದಲ್ಲಿ ಜೆಡಿಎಸ್ ಮೇಲಕ್ಕೆದ್ದಿಲ್ಲ.

ರಾಮನಗರ ಜಿಲ್ಲೆ ರಚನೆಯಾದ ಬಳಿಕ, ಜಿಲ್ಲೆಯಲ್ಲಿ ತಮ್ಮ ಹಿಡಿತ ಸಾಧಿಸಲು ರಾಜಕೀಯ ವೈರಿಗಳಾಗಿರುವ ಎಚ್‌ಡಿಕೆ ಮತ್ತು ಡಿಕೆಶಿ ಪೈಪೋಟಿ ನಡೆಸುತ್ತಲೇ ಬಂದಿದ್ದಾರೆ. ಜಿಲ್ಲೆಯ 4 ಕ್ಷೇತ್ರಗಳ ಪೈಕಿ 3ರಲ್ಲಿ ಜೆಡಿಎಸ್ ಗೆಲ್ಲುತ್ತಿತ್ತು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಕೇವಲ ಚನ್ನಪಟ್ಟಣದಲ್ಲಷ್ಟೇ ಗೆದ್ದು ಒಂದು ಸ್ಥಾನಕ್ಕಿಳಿದಿದೆ.


ಉದಯವಾಹಿನಿ ಚಿತ್ರ

ಲೋಕಸಭಾ ಚುನಾವಣೆಯಲ್ಲಿ ಎಚ್‌ಡಿಕೆ ಮಂಡ್ಯಕ್ಕೆ ಹೋಗಿ ಗೆದ್ದು ಕೇಂದ್ರ ಸಚಿವರಾಗಿರುವುದರಿಂದ, ಚನ್ನಪಟ್ಟಣ ಖಾಲಿಯಾಗಿದೆ.

ಮತ್ತೊಂದೆಡೆ, ಬೆಂಗಳೂರು ಗ್ರಾಮಾಂತರದಲ್ಲಿ ಶಿವಕುಮಾರ್ ಸಹೋದರ ಡಿ.ಕೆ. ಸುರೇಶ್ ಅವರು, ಬಿಜೆಪಿಯಿಂದ ಕಣಕ್ಕಿಳಿದ ಎಚ್‌ಡಿಕೆ ಬಾಮೈದ ಡಾ. ಸಿ.ಎನ್. ಮಂಜುನಾಥ್ ಎದುರು ಸೋತಿದ್ದಾರೆ.

### ಬಿಜೆಪಿ-ಜೆಡಿಎಸ್ ಕಾರ್ಯಕರ್ತರಿಗೆ ಉತ್ಸಾಹ

**ಬೆಂಗಳೂರು ಗ್ರಾಮಾಂತರದಿಂದ ಗೆದ್ದಿರುವ ಡಾ. ಸಿ.ಎನ್. ಮಂಜುನಾಥ್ ಪರವಾಗಿ, ಅವರ ಪತ್ನಿ ಅನಸೂಯ ಅವರು ಕನಕಪುರದಲ್ಲಿ ಹೆಚ್ಚು ಸಕ್ರಿಯವಾಗಿ ಕೆಲಸ ಮಾಡಿದರು. 8 ವಿಧಾನಸಭಾ ಕ್ಷೇತ್ರಗಳ ಪೈಕಿ ಕನಕಪುರದಲ್ಲೇ ಹೆಚ್ಚು ಬೀಡು ಬಿಟ್ಟು, ನಿರೀಕ್ಷೆಗೂ ಮೀರಿ ಮತಗಳು ಬರಲು ಕಾರಣರಾದರು. ಚುನಾವಣೆ ನಂತರವೂ ಅನಸೂಯ ಅವರು ಕ್ಷೇತ್ರದ ಸಂಪರ್ಕ ಬಿಟ್ಟಿಲ್ಲ. ಪತಿ ಜೊತೆ ಹಾಗೂ ಕೆಲವೊಮ್ಮೆ ತಾವೊಬ್ಬರೇ ಕ್ಷೇತ್ರದ ವಿವಿಧ ಕಾರ್ಯಕ್ರಮಗಳಿಗೆ ಬಂದು ಹೋಗುತ್ತಾ, ಬಿಜೆಪಿ-ಜೆಡಿಎಸ್ ಕಾರ್ಯಕರ್ತರಿಗೆ ಉತ್ಸಾಹ ತುಂಬುತ್ತಿದ್ದಾರೆ.**

ವಿಧಾನಸಭಾ ಚುನಾವಣೆಯಲ್ಲಿ ಡಿಕೆಶಿ ಮೇಲಾಗಿರುವುದು ಹಾಗೂ ಲೋಕಸಭಾ ಚುನಾವಣೆಯಲ್ಲಿ ಎಚ್‌ಡಿಕೆಗೆ ಕೈ ಮೇಲಾಗಿರುವುದು, ಇಬ್ಬರ ನಡುವಣ ರಾಜಕೀಯ ವೈರತ್ವಕ್ಕೆ ಮತ್ತಷ್ಟು ತುಪ್ಪ ಸುರಿದಿದೆ. ಅಂದಿನಿಂದ ಒಬ್ಬರನ್ನೊಬ್ಬರು ಹಣಿಯಲು ಹವಣಿಯಲು ಕಾದು ಕುಳಿತಿದ್ದಾರೆ ಎನ್ನುತ್ತಾರೆ ಸ್ಥಳೀಯ ರಾಜಕಾರಣಿಗಳು. ತಮ್ಮನ ಸೋಲಿನ ಸೇಡು ತೀರಿಸಿಕೊಳ್ಳಲು ಡಿಕೆಶಿ ಚನ್ನಪಟ್ಟಣ ಗೆಲುವಿಗೆ ಪಣ ತೊಟ್ಟಿದ್ದಾರೆ.

**ಕಾಂಗ್ರೆಸ್ ಕೋಟೆ ಬೇಧಿಸಲು ತಂತ್ರ**

ಪರಿಸ್ಥಿತಿಗೆ ಅನುಗುಣವಾಗಿ ಅಲ್ಲಿ ಸುರೇಶ್ ಅವರನ್ನು ಕಣಕ್ಕಿಳಿಸಲು ಅಥವಾ ತಾವೇ ನಿಲ್ಲುವ ಆಲೋಚನೆಯೂ ಅವರಲ್ಲಿದೆ. ಡಿಕೆಶಿಗೆ ತಿರುಗೇಟು ಕೊಡಲು ಎಚ್‌ಡಿಕೆ ಕೂಡ ಪ್ರತಿತಂತ್ರ ಹೆಣೆದಿದ್ದಾರೆ. ಮುಂಬರುವ ಚುನಾವಣೆ ಹೊತ್ತಿಗೆ ಕನಕಪುರದಲ್ಲಿ ಪಕ್ಷ ಬಲಪಡಿಸಿ, ಬಿಜೆಪಿ ಬೆಂಬಲದೊಂದಿಗೆ ಕಾಂಗ್ರೆಸ್ ಕೋಟೆ ಬೇಧಿಸಲು ತಂತ್ರ ರೂಪಿಸಿದ್ದಾರೆ ಎಂಬ ಮಾತುಗಳು ಕ್ಷೇತ್ರದಲ್ಲಿ ಕೇಳಿ ಬರುತ್ತಿವೆ.

# ಸಣ್ಣ ಸಮುದಾಯಗಳಿಗೆ ಪ್ರೋತ್ಸಾಹ ಅಗತ್ಯ: ಕೊತ್ತೂರು ಮಂಜುನಾಥ್

• **ಉದಯವಾಹಿನಿ ಕೋಲಾರ**

ಸಮಾಜದಲ್ಲಿ ಸಣ್ಣಪುಟ್ಟ ಸಮುದಾಯಗಳನ್ನು ಪ್ರೋತ್ಸಾಹಿಸಿ ಬೆಂಬಲಿಸಿದಾಗ ಮಾತ್ರವೇ ಅ ಸಮುದಾಯಗಳು ಕೂಡ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತದೆ ಎಂದು ಶಾಸಕ ಕೊತ್ತೂರು ಜಿ.ಮಂಜುನಾಥ್ ತಿಳಿಸಿದರು

ನಗರದ ಕೆ.ವಿ.ಆರ್.ಸಿ ಸಮುದಾಯ ಭವನದಲ್ಲಿ ಭಾನುವಾರ ನಾಮಧಾರಿ ನಗರ್ತ ಫೌಂಡೇಶನ್ ವತಿಯಿಂದ ಸಮುದಾಯದ ಸಮ್ಮಿಲನ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಮಾಜದಲ್ಲಿ ಸುಮಾರು 71 ಸಣ್ಣಪುಟ್ಟ ಅಲೆಮಾರಿ ಸಮುದಾಯಗಳು ಇದ್ದು ಅವರು ನಿರಂತರವಾಗಿ ಕಾರ್ಯಕ್ರಮಗಳನ್ನು ಆಯೋಜಿಸಿ ಗುರುತಿಸಿಕೊಳ್ಳಬೇಕಾಗಿದೆ ತಮ್ಮ ಮಕ್ಕಳಿಗೆ ವಿದ್ಯಾಭ್ಯಾಸ ನೀಡಿ ಉನ್ನತ ಮಟ್ಟದ ಅಧಿಕಾರಿಗಳಾಗಿ ಮಾಡುವ ಜವಾಬ್ದಾರಿ ಸಮುದಾಯದ ಮುಖಂಡರ ಮೇಲೆ ಇದೆ ಎಂದರು. ಸಣ್ಣಪುಟ್ಟ ಸಮುದಾಯಗಳು ಮುಖ್ಯವಾಹಿನಿಗೆ ಬಂದು ಸದೃಢರಾಗಬೇಕಬೇಕಾದರೆ ಮೊದಲು ಶಿಕ್ಷಣ ಮತ್ತು ಉದ್ಯೋಗದಿಂದ ಸಾಧ್ಯ, ಸಮುದಾಯದ ನಿರಂತರ ಕಾರ್ಯಕ್ರಮಗಳಿಗೆ ಸಮುದಾಯ ಭವನವನ್ನು ನಿರ್ಮಿಸಲು ಜಾಗವನ್ನು ನೀಡಲಾಗುತ್ತದೆ ಜೊತೆಗೆ ಅನುದಾನವನ್ನು ಕೊಡಲಾಗುತ್ತದೆ ಜೊತೆಗೆ ಮಕ್ಕಳ ಶೈಕ್ಷಣಿಕ ವಿದ್ಯಾಭ್ಯಾಸಕ್ಕಾಗಿ ಹಾಸ್ಟಲ್ ವ್ಯವಸ್ಥೆ ಮಾಡಲಾಗುತ್ತದೆ ಕೂಡಲೇ ಸರ್ಕಾರದೊಂದಿಗೆ ಪ್ರಸ್ತಾಪನೆ ಮಾಡಲಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್ ಮಾತನಾಡಿ, ಪುಟ್ಟ ಸಮುದಾಯದವರು ಎಂಬ ಮೇಲುಕೀಳು ಇಲ್ಲದೇ ಸಮಾಜದಲ್ಲಿ ಪ್ರಯತ್ನಗಳನ್ನು ಮಾಡಿ ಯಶಸ್ಸು ಗಳಿಸಬೇಕು ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ಸಮಾನ ಹಕ್ಕಿದೆ, ಎಲ್ಲರಂತೆ ಸಮಾಜದ ಮುಖ್ಯವಾಹಿನಿಗೆ ಬರುವ ಗುರಿಯನ್ನು ಇಟ್ಟುಕೊಳ್ಳಬೇಕು, ಸಣ್ಣಪುಟ್ಟ ಸಮಾಜದಲ್ಲಿ ಮಾತ್ರವೇ ಒಗ್ಗಟ್ಟು ಹೆಚ್ಚಾಗಿದ್ದು ಮಕ್ಕಳನ್ನು ಶೈಕ್ಷಣಿಕವಾಗಿ ಮುಂದೆ ತಂದು ತಮ್ಮ ಗುರಿಯನ್ನು ಸಾಧಿಸಲು ಪ್ರೋತ್ಸಾಹ ನೀಡಬೇಕು

> **ಯಾವುದೇ ಸಮಾಜದಲ್ಲಿ ಆದರೂ ಮಕ್ಕಳನ್ನು ಗುರುತಿಸಿ ವಿದ್ಯಾಭ್ಯಾಸದಲ್ಲಿ ಪ್ರೋತ್ಸಾಹಿಸಿದಾಗ ಸಮುದಾಯ ಅಭಿವೃದ್ಧಿ ಹೊಂದುವಂತೆ ಮಾಡಲು ಸಾಧ್ಯ ಮಕ್ಕಳು ಸಾಧನೆ ಮಾಡಿದಾಗ ಗುರುತಿಸುವ ಕೆಲಸವನ್ನು ಪ್ರತಿಯೊಬ್ಬರೂ ಮಾಡಬೇಕು ಯಾವ ಕ್ಷೇತ್ರದಲ್ಲಿ ಆಸಕ್ತಿ ಇದೆ ಅದೇ ಕ್ಷೇತ್ರದ ಕಡೆಗೆ ಒಲವು ತೋರಿಸಬೇಕು ಒಂದಿಷ್ಟು ಮಕ್ಕಳನ್ನು ಸ್ಪರ್ಧಾತ್ಮಕ ಪರೀಕ್ಷೆಗೆ ದಾರಿ ತೋರಿಸಬೇಕು**
> **-ಡಿ.ದೇವರಾಜ್, ಬೆಂಗಳೂರು ಡಿಸಿಪಿ**

ಎಂದರು.ವೇದಿಕೆಯಲ್ಲಿ ನಗರಸಭೆ ಅಧ್ಯಕ್ಷೆ ಲಕ್ಷ್ಮೀದೇವಮ್ಮ ರಮೇಶ್, ನಾಮಧಾರಿ ನಗರ್ತ ಫೌಂಡೇಶನ್ ಅಧ್ಯಕ್ಷ ಜಿ.ಆನಂದಪ್ಪ, ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್ ನಗರಸಭೆ ನಿವೃತ್ತ ಪೌರಾಯುಕ್ತ ರಾಮಪ್ರಸಾದ್, ಮುಖಂಡರಾದ ವಿಶ್ವನಾಥ್, ರಾಮಕೃಷ್ಣ, ನಾಗರಾಜಶೆಟ್ಟಿ, ಮಂಜುನಾಥ್ ಮುಳಬಾಗಿಲು ನಗರಸಭೆ ಸದಸ್ಯ ಪ್ರಸಾದ್, ಜಯರಾಮ್, ಸೋಮಶೇಖರ್, ಸರೋಜ ಮುಂತಾದವರು ಇದ್ದರು

# ಕೇಂದ್ರದಿಂದ ಸೇಡಿನ ಕ್ರಮ: ಮೀನಾಕ್ಷಿ ಸುಂದರಂ

• **ಉದಯವಾಹಿನಿ ತುಮಕೂರು**

ಕೇಂದ್ರ ಸರ್ಕಾರ ಎನ್‌ಡಿಎ ಹೊರತಾದ ಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳ ಮೇಲೆ ಸೇಡು ತೀರಿಸಿಕೊಳ್ಳುತ್ತಿದೆ. ಜನರು ಬದುಕಲಾಗದ ಹೊಸ ಕಾನೂನು ಜಾರಿ ಮಾಡುತ್ತಿದೆ ಎಂದು ಸಿಪಿಎಂ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ ಮೀನಾಕ್ಷಿ ಸುಂದರಂ ಆಕ್ರೋಶ ವ್ಯಕ್ತಪಡಿಸಿದರು.ನಗರದಲ್ಲಿ ಹಮ್ಮಿಕೊಂಡಿದ್ದ ಸಿಪಿಎಂ ಜಿಲ್ಲಾ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ದುಡಿಯುವ ಜನರಿಗೆ ನ್ಯಾಯೋಚಿತ ಪಾಲು ಕೊಡುತ್ತಿಲ್ಲ. ಜನರನ್ನು ಒಡೆದು ಆಳುವ ಕೆಲಸ ಮಾಡುತ್ತಿದೆ. ಸಂವಿಧಾನ ವಿರೋಧಿ ಪ್ರಯತ್ನ ನಡೆಸುತ್ತಿದೆ. ಇದು ಖಂಡನೀಯ, ಸರ್ಕಾರ ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಸಿದರು.

ಸಿಪಿಎಂ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ ಸೈಯದ್ ಮುಜೀಬ್, 'ರೈತರ, ಬಡವರ ಭೂಮಿ ಕಿತ್ತುಕೊಂಡು ಬಂಡವಾಳಗಾರರಿಗೆ ಕೊಡುತ್ತಿದ್ದಾರೆ. ಬಗರ್ ಹುಕುಂ ಸಾಗುವಳಿದಾರರಿಗೆ ಸಾಗುವಳಿ ಚೀಟಿ, ನಿವೇಶನ ರಹಿತರಿಗೆ ವಸತಿ– ನಿವೇಶನ ನೀಡಲು ಭೂಮಿ ಸಿಗುವುದಿಲ್ಲ, ಅದೇ ಬಂಡವಾಳಗಾರರಿಗೆ ಕೊಡಲು ಎಲ್ಲಿಂದ ಬರುತ್ತದೆ' ಎಂದು ಪ್ರಶ್ನಿಸಿದರು.


ಉದಯವಾಹಿನಿ ಚಿತ್ರ

> **ಸರ್ಕಾರಿ ಇಲಾಖೆಗಳಲ್ಲಿ ಲಂಚದ ಹಾವಳಿ ಹೆಚ್ಚಾಗಿದ್ದು, ಅಧಿಕಾರಿಗಳು ಬಡವರ ಪ್ರಾಣದ ಜತೆ ಚೆಲ್ಲಾಟ ಆಡುತ್ತಿದ್ದಾರೆ. ಇದನ್ನು ನಿಲ್ಲಿಸದಿದ್ದರೆ ಮುಂದಿನ ದಿನಗಳಲ್ಲಿ ಸಿಪಿಎಂ ಹೋರಾಟ ನಡೆಸಲಾಗುವುದು**
> **-ಬಿ.ಉಮೇಶ್, ಸಿಪಿಎಂ ಜಿಲ್ಲಾ ಕಾರ್ಯದರ್ಶಿ ಮಂಡಳಿಯ ಸದಸ್ಯ**


# ಮಡಿಕೇರಿ ದಸರಾ: ವೇದಿಕೆ ನಿರ್ಮಾಣವೇ ಆರಂಭವಾಗಿಲ್ಲ

• **ಉದಯವಾಹಿನಿ ಮಡಿಕೇರಿ**

ಮಡಿಕೇರಿ ದಸರಾ ಜನೋತ್ಸವಕ್ಕೆ ಇರುವುದು ಇನ್ನು ಐದೇ ದಿನ. ಆದರೂ, ವೇದಿಕೆ ಇನ್ನೂ ಸಿದ್ಧಗೊಂಡಿಲ್ಲ. ಕನಿಷ್ಠ ಪಕ್ಷ ವೇದಿಕೆ ನಿರ್ಮಾಣದ ಜವಾಬ್ದಾರಿಯನ್ನೂ ನೀಡಲಾಗಿಲ್ಲ. ಕರಗೋತ್ಸವಕ್ಕಿರುವುದು ಇನ್ನು ನಾಲ್ಕೇ ದಿನ. ಆದಾಗ್ಯೂ, ಅನುದಾನ ಎಷ್ಟು ಎಂಬುದು ಮಾತ್ರ ಘೋಷಣೆಯಾಗಿಲ್ಲ.ಇದು ಮಡಿಕೇರಿ ದಸರೆ ಮತ್ತು ಕರಗೋತ್ಸವದ ಪ್ರಸ್ತುತ ಸ್ಥಿತಿ.

ನಾಡಿನ ಸಾಂಸ್ಕೃತಿಕ ಇತಿಹಾಸದಲ್ಲಿ ಸ್ಥಾನ ಪಡೆದಿರುವ ಕರಗೋತ್ಸವ ಅ. 3ರಂದು ಆರಂಭವಾಗಲಿದೆ. ಆದರೂ, ರಸ್ತೆ ಗುಂಡಿ ಮುಚ್ಚುವ ಕಾರ್ಯ ನಡೆದಿಲ್ಲ. ಅ. 4ರಂದು ಮಡಿಕೇರಿ ದಸರಾ ಜನೋತ್ಸವದ ಸಾಂಸ್ಕೃತಿಕ ಕಾರ್ಯಕ್ರಮಗಳು ಆರಂಭವಾಗಲಿವೆ. ಅದು ನಡೆಯುವ ಗಾಂಧಿ ಮೈದಾನವು ಕೆಸರುಮಯವಾಗಿಯೇ ಇದೆ. ಕಾರ್ಯಕ್ರಮಗಳು ನಡೆಯಬೇಕಾದ ವೇದಿಕೆ ನಿರ್ಮಾಣ ಕುರಿತು ಇನ್ನೂ ಅಂತಿಮ ತೀರ್ಮಾನವೇ ಆಗಿಲ್ಲ.

ಕೊನೆ ಗಳಿಗೆಯಲ್ಲಿ ವೇದಿಕೆ ನಿರ್ಮಾಣಕ್ಕೆ ಟೆಂಡರ್ ಕರೆದ ಪರಿಣಾಮ ಹಾಕಿದವರು ಕೇವಲ ಇಬ್ಬರು ಮಾತ್ರ.


ಉದಯವಾಹಿನಿ ಚಿತ್ರ

> **ಸರ್ಕಾರಿ ಏಜೆನ್ಸಿ ಕೊಟ್ಟಿರುವ ಪ್ರಸ್ತಾವ ಕುರಿತು ಜಿಲ್ಲಾಧಿಕಾರಿಯೊಂದಿಗೆ ಚರ್ಚಿಸಿ ಇಂದು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು**
> **– ರಮೇಶ್, ಪೌರಾಯುಕ್ತ**

ಅವರು ನಮೂದಿಸಿರುವ ಹಣವು ಕಳೆದ ವರ್ಷ ಖರ್ಚಾಗಿದ್ದಕ್ಕಿಂತ ದುಪ್ಪಟ್ಟು ಎಂಬ ಕಾರಣಕ್ಕೆ ಇವರಿಗೆ ನೀಡದಿರಲು ತೀರ್ಮಾನಿಸಲಾಗಿದೆ. ಹಾಗಾಗಿ, ಇದೀಗ ನಗರಸಭೆ ಸರ್ಕಾರಿ ಏಜೆನ್ಸಿಯೊಂದರ ಮೊರೆ ಹೋಗಿದೆ.

ಬೆಂಗಳೂರಿನಿಂದ ಬಂದ ಏಜೆನ್ಸಿಯವರು ವೇದಿಕೆ ನಿರ್ಮಾಣದ ಜಾಗ ಮೊದಲಾದ ಅಂಶಗಳನ್ನು ಪರಿಶೀಲಿಸಿ ತೆರಳಿದ್ದಾರೆ. ಅವರು ಎಷ್ಟು ಖರ್ಚಾಗುತ್ತದೆ ಎಂದು ಪ್ರಸ್ತಾವ ಕೊಟ್ಟಿದ್ದಾರೆ ಎಂಬುದು ಮಾತ್ರ ಗೊತ್ತಾಗಿಲ್ಲ.

# ಇಸ್ಕಾನ್‌ಗೆ 5.23 ಎಕರೆ 'ಸರ್ಕಾರಿ ಬೀಳು' ಜಾಗ: ಸಚಿವರ ಶಿಫಾರಸು

• **ಉದಯವಾಹಿನಿ ಚಿಕ್ಕಬಳ್ಳಾಪುರ**

ತಾಲ್ಲೂಕಿನ ಯರ್ರಮಾರೇನಹಳ್ಳಿ ಗ್ರಾಮದಲ್ಲಿ 5.23 ಎಕರೆ 'ಸರ್ಕಾರಿ ಬೀಳು' ಜಾಗವನ್ನು ಇಸ್ಕಾನ್ ಸಂಸ್ಥೆಗೆ ಮಂಜೂರು ಮಾಡುವ ಯತ್ನಗಳು ಸರ್ಕಾರದ ಮಟ್ಟದಲ್ಲಿ ನಡೆದಿವೆ.

ಈ ಸಂಬಂಧ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ, ಪ್ರಾದೇಶಿಕ ಆಯುಕ್ತರಿಗೆ ವರದಿ ಸಹ ಸಲ್ಲಿಸಿದ್ದಾರೆ.

ಮಂಡಿಕಲ್ಲು ಹೋಬಳಿಯಲ್ಲಿ ಭೂಮಿಗೆ ಬೇಡಿಕೆ ಮತ್ತು ಬೆಲೆ ಹೆಚ್ಚಿದೆ. ರಿಯಲ್ ಎಸ್ಟೇಟ್ ವ್ಯವಹಾರ ನಡೆಸುವವರ ಪ್ರಕಾರ ಇಲ್ಲಿ ಎಕರೆಗೆ ಕನಿಷ್ಠ 40 ಲಕ್ಷಕ್ಕೂ ಹೆಚ್ಚಿನ ಮೌಲ್ಯವಿದೆ. ರಾಷ್ಟ್ರೀಯ ಹೆದ್ದಾರಿ 44ರಿಂದ ಪ್ರಸ್ತಾವಿತ ಜಮೀನು 22 ಕಿ.ಮೀ ದೂರದಲ್ಲಿ ಇದೆ.

**ಎಕರೆಗೆ ಕನಿಷ್ಠ 40 ಲಕ್ಷಕ್ಕೂ ಹೆಚ್ಚಿನ ಮೌಲ್ಯ**

ಉಪವಿಭಾಗಾಧಿಕಾರಿ ನೀಡಿರುವ ಪರಿಶೀಲನಾ ವರದಿಯ ಪ್ರಕಾರ ಯರರಮಾ ರೇನ ಹಳ್ಳಿ ಗ್ರಾಮದಲ್ಲಿ ಖುಷ್ಕಿ ಜಮೀನು ಬೆಲೆ ಎಕರೆಗೆ 5 ಲಕ್ಷವಿದೆ. ಚಿಕ್ಕಬಳ್ಳಾಪುರ ತಾಲ್ಲೂಕಿನ ಮಂಡಿಕಲ್ಲು ಹೋಬಳಿಯ ಯರ್ರಮಾರೇನಹಳ್ಳಿ ಸರ್ವೆ ನಂಬರ್ 187ರಲ್ಲಿ 4.38 ಎಕರೆ ಮತ್ತು ಸರ್ವೆ ನಂಬರ್ 191ರಲ್ಲಿ 25 ಗುಂಟೆ ಸೇರಿ ಒಟ್ಟು 5.23 ಎಕರೆ ಜಮೀನನ್ನು ಅಕ್ಷಯ ಪಾತ್ರ ಯೋಜನೆಯ ಅಡುಗೆ ಮನೆ ಮತ್ತು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದ ಗ್ರಾಮೀಣ ಮಕ್ಕಳಿಗೆ ಶಾಲೆ ನಿರ್ಮಾಣಕ್ಕೆ ಕೊಡುವಂತೆ ಇಸ್ಕಾನ್ ಅಧ್ಯಕ್ಷರು, ಕಂದಾಯ ಸಚಿವರಿಗೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಉನ್ನತ ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಿದ್ದರು.

ಉದಯವಾಹಿನಿ ಚಿತ್ರ

### ಜಿಲ್ಲಾಧಿಕಾರಿಗೆ ವರದಿ

**ಸಚಿವರು ಮತ್ತು ಶಾಸಕರ ಸೂಚನೆ ಹಿನ್ನೆಲೆಯಲ್ಲಿ ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರರು ಪರಿಶೀಲಿಸಿ ಜಿಲ್ಲಾಧಿಕಾರಿ ಅವರಿಗೆ ವರದಿ ಸಲ್ಲಿಸಿದ್ದಾರೆ. ಈ ಎಲ್ಲವನ್ನೂ ಪರಿಗಣಿಸಿ ಜಿಲ್ಲಾಧಿಕಾರಿ ಪ್ರಾದೇಶಿಕ ಆಯುಕ್ತರಿಗೆ ವರದಿ ಸಲ್ಲಿಸಿದ್ದಾರೆ.**

ಕಂದಾಯ ಸಚಿವರು, ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳುವುದು' ಎಂದು ಷರಾ ಬರೆದಿದ್ದಾರೆ. ಅಲ್ಲದೆ ಈ ಮನವಿಯನ್ನು ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಶಾಸಕರು ಸಹ ಸೂಚಿಸಿದ್ದಾರೆ.

# ಎಚ್‌ಡಿಕೆ ಬಳಿ 7 ಸಚಿವರ ದಾಖಲೆ ಇದ್ದರೆ ಬಿಡುಗಡೆ ಮಾಡಲಿ: ಡಿಕೆಶಿ

• **ಉದಯವಾಹಿನಿ ಕನಕಪುರ**

ಏಳು ಸಚಿವರಿಗೆ ಸಂಬಂಧಿಸಿದ ದಾಖಲೆ ನನ್ನ ಬಳಿ ಇವೆ ಎನ್ನುತ್ತಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವನ್ನು ಬಿಡುಗಡೆ ಮಾಡಲಿ. ಮಾಡಬೇಡಿ ಎಂದು ಅವರನ್ನು ಹಿಡಿದುಕೊಂಡವರು ಯಾರು? ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು.

ನನ್ನ ಬಳಿ ಇರುವ ದಾಖಲೆ ಬಿಡುಗಡೆ ಮಾಡಿದರೆ ಏಳು ಸಚಿವರು ರಾಜಿ ನಾಮೆ ಕೊಡಬೇಕಾಗುತ್ತದೆ' ಎಂಬ ಕುಮಾರಸ್ವಾಮಿ ಹೇಳಿಕೆಗೆ ತಾಲ್ಲೂಕಿನ ಸಾತನೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ದಾಖಲೆ ಬಿಡುಗಡೆ ಮಾಡಬೇಡಿ ಎಂದವರು ಯಾರು? ಮೊದಲು ಬಿಡುಗಡೆ ಮಾಡಲಿ' ಎಂದರು.

**ಸಿ.ಎಂ ಹುದ್ದೆ ಅರ್ಥದಲ್ಲಿ ಹೇಳಿಲ್ಲ:** ರಾಜ್ಯದ ಸೇವೆ ಮಾಡಲು ನಾನು ಪ್ರಯತ್ನ ಮಾಡುತ್ತಿದ್ದೇನೆ. ನಾನಿಲ್ಲಿ ಡಿಸಿಎಂ ಆಗಿ ಬಂದಿಲ್ಲ. ವಿಧಾನಸೌಧದಲ್ಲಷ್ಟೇ ನಾನು ಡಿಸಿಎಂ. ಇಲ್ಲಿ ನಾನು ನಿಮ್ಮ ಪ್ರತಿನಿಧಿ' ಎಂದು ಕನಕಪುರದ ಕಾಲೇಜಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿವಕುಮಾರ್ ಹೇಳಿದರು.


ಉದಯವಾಹಿನಿ ಚಿತ್ರ

ನಂತರ ಸುದ್ದಿಗಾರರ ಜೊತೆ ಮಾತನಾಡಿದ ಡಿಸಿಎಂ, 'ನೀವೆಲ್ಲಾ ಸೇವೆ ಮಾಡುವುದಕ್ಕೆ ಅವಕಾಶ ಕೊಟ್ಟಿದ್ದೀರಿ ಎಂದಿದ್ದೇನೆ. ಮುಖ್ಯಮಂತ್ರಿ ಆಗುವುದಾಗಿ ನಾನು ಹೇಳಿಲ್ಲ. ನೀವು ಬೇರೆ ರೀತಿ ಕಲ್ಪನೆ ಮಾಡಿಕೊಂಡು ಏನೇನೊ ಸೃಷ್ಟಿಸಬೇಡಿ.

ಈಗ ಡಿಸಿಎಂ ಆಗಿ ರಾಜ್ಯದ ಸೇವೆ ಮಾಡುತ್ತಿಲ್ಲವೆ. ಅದನ್ನು ಮಕ್ಕಳಿಗೆ ತಿಳಿಸಬೇಕಲ್ಲವೆ? ಅದನ್ನೇ ಭಾಷಣದಲ್ಲಿ ಹೇಳಿದ್ದೇನೆ' ಎಂದರು.

> **ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ರಾಜೀನಾಮೆ ಕೊಡುವ ಪ್ರಶ್ನೆಯೇ ಇಲ್ಲ. ಈ ವಿಷಯವನ್ನು ನಾನು ಹಾಗೂ ಎಐಸಿಸಿ ಅಧ್ಯಕ್ಷರು ಕೂಡ ಸ್ಪಷ್ಟಪಡಿಸಿದ್ದೇವೆ. ವಿರೋಧ ಪಕ್ಷದಲ್ಲಿರುವ ಬಿಜೆಪಿ ಮತ್ತು ಜೆಡಿಎಸ್ ಏನು ಬೇಕಾದರೂ ಹೇಳಬಹುದು. ಅದಕ್ಕೆಲ್ಲಾ ನಾವು ತಲೆ ಕೆಡಿಸಿಕೊಳ್ಳಬೇಕಿಲ್ಲ -ಡಿಕೆಶಿ, ಡಿಸಿಎಂ**

# ಸಿದ್ದರಾಮಯ್ಯ ತೇಜೋವಧೆ: ಆರೋಪ

• **ಉದಯವಾಹಿನಿ ತುಮಕೂರು**

ಮುಡಾ ನಿವೇಶನ ಹಗರಣ ಮುಂದಿಟ್ಟುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ತೇಜೋವಧೆ ಮುಂದುವರಿಸಿದರೆ ಹೋರಾಟ ಮಾಡಬೇಕಾಗುತ್ತದೆ ಎಂದು ಶೋಷಿತ ಸಮುದಾಯಗಳು ಹಾಗೂ ಹಿಂದುಳಿದ ವರ್ಗಗಳ ಸಮುದಾಯಗಳ ಮುಖಂಡರು ಎಚ್ಚರಿಸಿದರು.

ಮುಖಂಡರಾದ ಕೆಂಚಮಾರಯ್ಯ, ಚಿಕ್ಕರಾಜು, ನರಸೀಯಪ್ಪ, ಕುಮಾರಸ್ವಾಮಿ ಇತರರು ಶನಿವಾರ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಸಿದ್ದರಾಮಯ್ಯ ಅವರಿಗೆ ಬೆಂಬಲ ವ್ಯಕ್ತಪಡಿಸಿದರು.

ಮುಡಾ ಹಗರಣದ ಕಪ್ಪು ಚುಕ್ಕೆ ಇಟ್ಟು, ರಾಜಕೀಯ ಜೀವನಕ್ಕೆ ಇತಿಶ್ರೀ ಹಾಡಲು ಹೊರಟಿರುವ ಬಿಜೆಪಿ, ಜೆಡಿಎಸ್ ಪಕ್ಷಗಳ ಹುನ್ನಾರ ಕೈಗೂಡಲು ಎಂದಿಗೂ ಅವಕಾಶ ನೀಡುವುದಿಲ್ಲ. ಕಾಂಗ್ರೆಸ್ ಮುಕ್ತ-ಕರ್ನಾಟಕ ಮಾಡಲು ಅವಕಾಶ ಕೊಡುವುದಿಲ್ಲ ಎಂದು ಹೇಳಿದರು. ರಾಜಕೀಯ ದ್ವೇಷದಿಂದ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣ ಮುನ್ನೆಲೆಗೆ ತರಲಾಗಿದೆ. ರಾಜಕೀಯವಾಗಿ ಮುಗಿಸಲು ಮುಂದಾಗಿದ್ದಾರೆ. ಬಡವರು, ಹಿಂದುಳಿದವರಿಗೆ ಶಕ್ತಿ ತುಂಬುವಂತಹ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವರ ಜನಪ್ರಿಯತೆ ಸಹಿಸದೆ ಇಂತಹ ಕೃತ್ಯಕ್ಕೆ ಇಳಿದಿದ್ದಾರೆ. ರಾಜೀನಾಮೆಗೆ ಒತ್ತಾಯಿಸುವುದು ಮುಂದುವರಿದರೆ ಹೋರಾಟ ನಡೆಸಲಾಗುವುದು ಎಂದರು.

ಮುಖ್ಯಮಂತ್ರಿಯಾಗಿದ್ದ ಸಮಯದಲ್ಲಿ ಜಾರಿಗೆ ತಂದಿರುವ ಅನ್ನಭಾಗ್ಯ, ಕ್ಷೀರಭಾಗ್ಯ, ಗೃಹಲಕ್ಷ್ಮಿ, ಶಕ್ತಿ, ಗೃಹಜ್ಯೋತಿ, ವಿದ್ಯಾನಿಧಿ ಯೋಜನೆಗಳು ಅತಿ ಹೆಚ್ಚು ಬಡವರನ್ನು ತಲುಪಿವೆ. ಇದನ್ನು ಸಹಿಸದೆ ಕುತಂತ್ರ ನಡೆಸಿ ಅಧಿಕಾರದಿಂದ ಕೆಳಗೆ ಇಳಿಸುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದರು.

# ಹರಿಜನ ನಿಧಿಗೆ 560 ನೀಡಿದ್ದ ಗೌರಿಬಿದನೂರು ಜನ

## ದೇಶಕ್ಕೆ ಸ್ವಾತಂತ್ರ್ಯ ಕೊಡಿಸುವಲ್ಲಿ ಮಹತ್ತರ ಪಾತ್ರವಹಿಸಿದ್ದ ಮಹಾತ್ಮ ಗಾಂಧೀಜಿಯವರ ಹೆಜ್ಜೆ ಗುರುತುಗಳು ಗೌರಿಬಿದನೂರಿನಲ್ಲಿ

• **ಉದಯವಾಹಿನಿ ಗೌರಿಬಿದನೂರು**

ದೇಶಕ್ಕೆ ಸ್ವಾತಂತ್ರ್ಯ ಕೊಡಿಸುವಲ್ಲಿ ಮಹತ್ತರ ಪಾತ್ರವಹಿಸಿದ್ದ ಮಹಾತ್ಮ ಗಾಂಧೀಜಿಯವರ ಹೆಜ್ಜೆ ಗುರುತುಗಳು ಗೌರಿಬಿದನೂರಿನಲ್ಲಿ ಇವೆ. 1934ರ ಜ. 4 ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ನೆರೆಯ ಹಿಂದೂಪುರದಲ್ಲಿ ದೇಣಿಗೆ ಸಂಗ್ರಹಿಸಿದ್ದ ಗಾಂಧೀಜಿ ಅವರು ಬೆಂಗಳೂರಿಗೆ ತೆರಳುತ್ತಿದ್ದರು.

ವಿದುರಾಶ್ವತ್ಥದ ರೈಲ್ವೆ ನಿಲ್ದಾಣದಲ್ಲಿ ಕೆಲ ನಿಮಿಷಗಳ ಕಾಲ ಭಾಷಣ ಮಾಡಿ ನಂತರ ನಗರಕ್ಕೆ ಬಂದು ಒಂದು ವೃತ್ತದಲ್ಲಿ ಭಾಷಣ ಮಾಡಿದ್ದರು. ಆ ನೆನಪಿಗಾಗಿ ಆ ವೃತ್ತವನ್ನು ಈಗ ಮಹಾತ್ಮ ಗಾಂಧೀಜಿ ವೃತ್ತ ಎನ್ನಲಾಗುತ್ತಿದೆ. ಗಾಂಧೀಜಿ ಅವರನ್ನು ಎತ್ತಿನ ಬಂಡಿಯಲ್ಲಿ ಮುಖ್ಯ ವೃತ್ತಕ್ಕೆ ಕರೆತರಲಾಗಿತ್ತು.

ಗೌರಿಬಿದನೂರು ಪಟ್ಟಣದ ಜನರು ಹರಿಜನ ನಿಧಿಗಾಗಿ 560 ನೀಡಿ ಗಾಂಧೀಜಿ ಅವರನ್ನು ಸನ್ಮಾನಿಸಿದರು.

ಗಾಂಧೀಜಿ ಅವರು ಒಮ್ಮೆ ರೈಲಿನಲ್ಲಿ ಬೆಂಗಳೂರಿಗೆ ಸಾಗುವಾಗ ಗೌರಿಬಿದನೂರು ನಿಲ್ದಾಣದಲ್ಲಿ ಇಳಿದು ಕೆಲ ಕಾಲ ಗೌರಿಬಿದನೂರು ನಾಗರಿಕರೊಂದಿಗೆ ಸ್ವಾತಂತ್ರ್ಯ ಚಳವಳಿಯ ಬಗ್ಗೆ ಚರ್ಚೆ ನಡೆಸಿದ್ದರು. ಆಗ ನನಗೆ 13 ವರ್ಷ ವಯಸ್ಸಾಗಿತ್ತು. ನಾನು ಸಹ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿದ್ದೆ, ಬ್ರಿಟಿಷರು ಒಂದು ತಿಂಗಳಿಗೂ ಹೆಚ್ಚು ಕಾಲ ನನ್ನನ್ನು ಜೈಲಿನಲ್ಲಿ ಇರಿಸಿದ್ದರು ಎಂದು ಸ್ವಾತಂತ್ರ್ಯ ಹೋರಾಟಗಾರ

> **ವಿದುರಾಶ್ವತ್ಥದಲ್ಲಿ 1938 ಏ.25 ರಂದು ಬ್ರಿಟಿಷರು ಹತ್ಯಾಕಾಂಡ ನಡೆಸಿದ್ದರು. ಈ ಹತ್ಯಾಕಾಂಡದಲ್ಲಿ 32 ಮಂದಿ ಸ್ವಾತಂತ್ರ್ಯ ಹೋರಾಟಗಾರರು, ನಾಗರಿಕರು ಹುತಾತ್ಮರಾಗಿದ್ದಾರೆ. ಈ ವಿಷಯ ತಿಳಿದ ಮಹಾತ್ಮ ಗಾಂಧಿ ಅವರು ರಾಮ ರಾಜ್ಯವಾಗಿದ್ದ ಮೈಸೂರು ಸಂಸ್ಥಾನದಲ್ಲಿ ಇಂತಹ ರಾಕ್ಷಸ ಕೃತ್ಯ ನಡೆಯಬಾರದಾಗಿತ್ತು ಎಂದು ವಿಷಾದ ವ್ಯಕ್ತಪಡಿಸಿದ್ದರು. ಈ ಘಟನೆಯ ಬಗ್ಗೆ ಹರಿಜನ ಪತ್ರಿಕೆಯಲ್ಲಿಯೂ ಪ್ರಸ್ತಾಪಿಸಿದ್ದರು.**

**ಸ್ಥಳೀಯವಾಗಿ ನಡೆದ ಘಟನೆಗಳು**


ಉದಯವಾಹಿನಿ ಚಿತ್ರ

ಗೌರಿಬಿದನೂರಿನ ಎಂ.ಜೆ ಬ್ರಹ್ಮಯ್ಯ ನೆನಪಿಸಿಕೊಳ್ಳುವರು. ಈ ಸಂದರ್ಭದಲ್ಲಿ ಸ್ಥಳೀಯ ವರ್ತಕರಿಂದ ಸ್ವಾತಂತ್ರ್ಯ ಸಂಗ್ರಾಮಕ್ಕಾಗಿ ದೇಣಿಗೆ ಸಂಗ್ರಹಿಸಿದ್ದರು. ತಾಲ್ಲೂಕು ಪಂಚಾಯಿತಿ ಆವರಣದಲ್ಲಿದ್ದ ಸರ್ಕಾರಿ ಕಚೇರಿಯ ಆವರಣದಲ್ಲಿ ಹೋರಾಟಗಾರರೊಂದಿಗೆ ಮಜ್ಜಿಗೆ ಕುಡಿದು ಸ್ವಾತಂತ್ರ್ಯ ಹೋರಾಟದ ಕೆಲವು ವಿಚಾರಗಳನ್ನು ಚರ್ಚಿಸಿ ಬಳಿಕ ಬೆಂಗಳೂರಿನತ್ತ ಸಾಗಿದ್ದರು ಎನ್ನಲಾಗಿದೆ.

1934ರ ಸಂದರ್ಭದಲ್ಲಿ ಸ್ವಾತಂತ್ರ್ಯ ಹೋರಾಟಕ್ಕೆ ಸಂಬಂಧಿಸಿದಂತೆ ಸ್ಥಳೀಯವಾಗಿ ನಡೆದ ಘಟನೆಗಳು ಮತ್ತು ರಾಷ್ಟ್ರೀಯ ವಿಷಯಗಳ ಅಧ್ಯಯನಕ್ಕೆ ವಿದುರಾಶ್ವತ್ಥದ ವೀರಸೌಧದಲ್ಲಿನ ಗ್ರಂಥಾಲಯದಲ್ಲಿ ದೊಡ್ಡ ಮಟ್ಟದಲ್ಲಿ ಗ್ರಂಥಗಳಿವೆ.

ಇಲ್ಲಿನ ಪರಿಸ್ಥಿತಿ ತಿಳಿದುಕೊಳ್ಳಲು ಮಹಾತ್ಮ ಗಾಂಧಿ ಅವರು ಸರ್ದಾರ್ ವಲ್ಲಭಾಯಿ ಪಟೇಲ್ ಹಾಗೂ ಆಚಾರ್ಯ ಕೃಪಲಾನಿ ಅವರನ್ನು ವಿದುರಾಶ್ವತ್ಥಕ್ಕೆ ಕಳುಹಿಸಿದ್ದರು.

ಇವರ ವರದಿಯ ಆದರದ ಮೇಲೆ ವಿಚಾರಣೆಗಾಗಿ ವೇಪಾರಾಮೇಶಂ ಕಮಿಟಿಯನ್ನು ಬ್ರಿಟಿಷ್ ಸರ್ಕಾರ ರಚಿಸಿತು. ಹೀಗೆ ಮಹಾತ್ಮರ ಗುರುತುಗಳು ಗೌರಿಬಿದನೂರಿನಲ್ಲಿಯೂ ಪುಟ್ಟದಾಗಿವೆ. ಆದರೆ ಅವರಿಂದ ಪ್ರಭಾವಿತರಾದ ಅಂದಿನ ಜನ ಸಮೂಹ ತಾಲ್ಲೂಕಿನಲ್ಲಿ ದೊಡ್ಡ ಮಟ್ಟದ್ದಾಗಿತ್ತು. ಅದಕ್ಕೆ ನಿದರ್ಶನ ವಿದುರಾಶ್ವತ್ಥದ ಘಟನೆ.

ತಾಲ್ಲೂಕಿಗೆ ಗಾಂಧಿ ಅವರ ಜೊತೆಗಿನ ನಂಟುಗಳನ್ನು ಸ್ಮರಿಸುವಾಗ ಮುಖ್ಯವಾಗಿ ಗುರುತಾಗುವುದು ಶಿಕ್ಷಣ ತಜ್ಞ ಎಚ್.ನರಸಿಂಹಯ್ಯ ಅವರು. ಗೌರಿಬಿದನೂರು ತಾಲ್ಲೂಕಿನ ಹೊಸೂರಿನ ಅವರು ಗಾಂಧೀವಾದಿ ಎಂದೇ ಅವರು ನಾಡಿಗೆ ಪರಿಚಿತರು.

### ನರಸಿಂಹಯ್ಯ ಕನ್ನಡಕ್ಕೆ ತರ್ಜುಮೆ

**ಎಚ್. ನರಸಿಂಹಯ್ಯ ಅವರು ಬಾಲಕನಿದ್ದಾಗ ಬೆಂಗಳೂರಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಒಮ್ಮೆ ಗಾಂಧೀಜಿ ಬೆಂಗಳೂರಿಗೆ ಬಂದಿರುತ್ತಾರೆ. ಹಿಂದಿಯಲ್ಲಿ ಗಾಂಧೀಜಿ ಅವರು ಭಾಷಣ ಮಾಡುವಾಗ ಅಲ್ಲಿರುವವರಿಗೆ ಹಿಂದಿ ಅರ್ಥವಾಗುವುದಿಲ್ಲ. ಆಗ ಬಾಲಕ ಎಚ್. ನರಸಿಂಹಯ್ಯ ಕನ್ನಡಕ್ಕೆ ತರ್ಜುಮೆ ಮಾಡುತ್ತಾರೆ. ಆಗ ಗಾಂಧೀಜಿ ಅವರು ನರಸಿಂಹಯ್ಯನವರ ಭುಜದ ಮೇಲೆ ಕೈ ಹಾಕಿ ಪ್ರಶಂಸೆ ವ್ಯಕ್ತಪಡಿಸುತ್ತಾರೆ. ಗಾಂಧೀಜಿ ಅವರ ಪ್ರಭಾವಕ್ಕೆ ಒಳಗಾದ ನರಸಿಂಹಯ್ಯ ಅವರು ಬದುಕಿನ ಕೊನೆಯವರೆಗೂ ಸರಳ ಉಡುಗೆ, ಸರಳ ಬಟ್ಟೆ, ವಾಸಿಸಲು ಸಣ್ಣ ಕೋಣೆ ಹೀಗೆ ಸರಳ ಬದುಕನ್ನು ರೂಢಿಕೊಳ್ಳುತ್ತಾರೆ.**

## ಮಿನಿ ನ್ಯೂಸ್

### ಸಿಎಂ ವಿರುದ್ಧ ತೊಡೆ ತಟ್ಟಿರುವ ಸ್ನೇಹಮಯಿ ಕೃಷ್ಣಗೆ ಭಾರೀ ಸಂಕಷ್ಟ

• **ಉದಯವಾಹಿನಿ, ಮೈಸೂರು**



ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ಹೋರಾಟದಲ್ಲಿ ತೊಡಿ ತಟ್ಟಿ ದೂರು ನೀಡಿದ್ದ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ವಿರುದ್ಧ ಮಹಿಳೆಯೋರ್ವಳು ದೂರು ದಾಖಲಿಸಿದ್ದು ಇದೀಗ ಬೆಳಕಿಗೆ ಬಂದಿದೆ. ಕಳೆದ ಆ.21ರಂದು ನಂಜನಗೂಡು ಪೊಲೀಸ್ ಠಾಣೆಯಲ್ಲಿ ಬಿಎನ್‌ಎಸ್ 2023 ಅಡಿ ಸೆಕ್ಷನ್ 85, 126(2), 74, 352, 351(2), 79, 3(5)ರಡಿ ಪ್ರಕರಣ ದಾಖಲಾಗಿದೆ.

ತನ್ನ ಗಂಡ ಈಗಾಗಲೇ ಹೃದಯಾಘಾತದಿಂದ ಮೃತಪಟ್ಟಿದ್ದು, ಈ ಸಂಬಂಧದ ಡೆತ್ ಬೆನಿಫಿಷರಿ ಹಣ ಹಾಗೂ ನನ್ನ ಒಡವೆ ಪಡೆಯುವ ವಿಚಾರದ ಪ್ರಕರಣ ಕುರಿತಂತೆ ನ್ಯಾಯಾಲಯದಲ್ಲಿ ಪ್ರಕರಣ ಮುಗಿಸಿ ತಾಯಿ ಜೊತೆ ಮನೆಗೆ ಬರುತ್ತಿದ್ದೆ. ಆಗ ನನ್ನ ಮೇಲೆ ದಾಳಿ ಮಾಡಿದ್ದಾರೆ ಎಂದು ಮಹಿಳೆ ಆರೋಪಿಸಿ ದೂರು ದಾಖಲಿಸಿದ್ದಾರೆ. ಆದರೆ ಆ ಮಹಿಳೆ ಮಾಡುತ್ತಿರುವ ಆರೋಪಗಳೆಲ್ಲ ಸುಳ್ಳಾಗಿದ್ದು, ಆ ದಿನದಂದು ನಾನು ಮೈಸೂರಿನಲ್ಲಿ ಇದ್ದೆ. ಮುಡಾದ ಹಗರಣದಲ್ಲಿ ಭಾಗಿಯಾಗಿರುವವರೆಲ್ಲಾ ಸೇರಿಕೊಂಡು ನನ್ನನ್ನ ಮುಗಿಸುವ ಹುನ್ನಾರ ನಡೆಸಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಪ್ರತ್ಯಾರೋಪ ಮಾಡಿದ್ದಾರೆ.

### ಕುಮಾರಸ್ವಾಮಿಯವರನ್ನ ಹಂದಿ ಎಂದು ಚಂದ್ರಶೇಖರ್ ಕರೆದಿಲ್ಲ: ಸಿದ್ದರಾಮಯ್ಯ

• **ಉದಯವಾಹಿನಿ ಮೈಸೂರು**



ಲೋಕಾಯುಕ್ತ ಎಸ್‌ಐಟಿ ಎಡಿಜಿಪಿ ಚಂದ್ರಶೇಖರ್ ಕುಮಾರಸ್ವಾಮಿಯವರನ್ನು ನೇರವಾಗಿ ಟೀಕಿಸಿಲ್ಲ, ಬದಲಾಗಿ ಬರ್ನಾಡ್ ಶಾ ಅವರ ಹೇಳಿಕೆಯನ್ನು ಉಲ್ಲೇಖಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ಚಂದ್ರಶೇಖರ್‌ರನ್ನು ಗುರಿಯಾಗಿಸಿ ಹೆಚ್‌ಡಿ ಕುಮಾರಸ್ವಾಮಿ ಅವರು ಭ್ರಷ್ಟ ಅಧಿಕಾರಿ, ಬ್ಲ್ಯಾಕ್ ಮೇಲರ್ ಎಂಬಿತ್ಯಾದಿ ಆರೋಪಗಳನ್ನು ಮಾಡಿದ್ದ ಬೆನ್ನಲ್ಲೇ, ಚಂದ್ರಶೇಖರ್ ಸಹ ಹೆಚ್‌ಡಿಕೆ ವಿರುದ್ಧ ಖಾರವಾಗಿ ತಮ್ಮ ಸಿಬ್ಬಂದಿಗೆ ಪತ್ರ ಬರೆಯುವ ಮೂಲಕ ಟಾಂಗ್ ನೀಡಿ, ಹಂದಿಗಳೊಂದಿಗೆ ಗುದ್ದಾಟ ಬೇಡ ಎಂಬ ಬರ್ನಾಡ್ ಶಾ ಅವರ ಸಾಲನ್ನು ಬಳಸಿ ತಿರುಗೇಟು ನೀಡಿದ್ದರು. ಈ ಬಗ್ಗೆ ಸಿಎಂ ಪ್ರತಿಕ್ರಿಯೆ ನೀಡಿ, ಕುಮಾರಸ್ವಾಮಿ ತಪ್ಪು ಮಾಡಿದ್ದಾರೆ. ಅದಕ್ಕಾಗಿ ಅಧಿಕಾರಿಗಳ ವಿರುದ್ಧ ಟೀಕಿಸುತ್ತಿದ್ದಾರೆ. ಅವರಿಬ್ಬರ ನಡುವಿನ ಸಂಘರ್ಷದ ಬಗ್ಗೆ ನಾನು ಹೆಚ್ಚಾಗಿ ಮಾತನಾಡಲ್ಲ. ಕುಮಾರಸ್ವಾಮಿ ಅವರನ್ನೇನು ಹಂದಿ ಅಂತಾ ಕರೆದಿಲ್ಲ. ಬರ್ನಾಡ್ ಶಾ ಸಾಲುಗಳನ್ನು ಉಲ್ಲೇಖಿಸಿದ್ದಾರಷ್ಟೇ ಎಂದೂ ಸಿಎಂ ಸ್ಪಷ್ಟನೆ ನೀಡಿದ್ದಾರೆ.

### ದಸರಾ ಸಮಯದಲ್ಲಿ ರೇವ್ ಪಾರ್ಟಿ ಧಂ ನಶೆಯಲ್ಲಿ ಯುವತಿಯರು

• **ಉದಯವಾಹಿನಿ ಮೈಸೂರು**

ಸಾಂಸ್ಕೃತಿಕ ನಗರಿ ಮೈಸೂರಲ್ಲಿ ರೇವ್ ಪಾರ್ಟಿ ಮೇಲೆ ರೇಡ್ ಆಗಿದೆ. ಕೆಆರ್‌ಎಸ್ ಬ್ಯಾಕ್ ವಾಟರ್ ಮೀನಾಕ್ಷಿಪುರದಲ್ಲಿ 50 ಕ್ಕೂ ಹೆಚ್ಚು ಮಂದಿ ಕುಡಿದು, ಕುಣಿದು ಕುಪ್ಪಳಿಸಿ ಪಾರ್ಟಿ ಮಾಡ್ತಿರೋ ಬಗ್ಗೆ ಮಾಹಿತಿ ಸಿಕ್ಕ ಕೂಡಲೇ ಪೊಲೀಸರು ದಾಳಿ ಮಾಡಿದ್ದಾರೆ.

50 ಕ್ಕೂ ಹೆಚ್ಚು ಯುವಕ-ಯುವತಿಯರನ್ನ ವಶಕ್ಕೆ ಪಡೆಯಲಾಗಿದೆ. ದಾಳಿ ವೇಳೆ 15 ಯುವತಿಯರು ಪ್ರಜ್ಞೆ ತಪ್ಪಿ ಬಿದ್ದಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ರೇವ್ ಪಾರ್ಟಿಯಲ್ಲಿ ಮದ್ಯ ಹಾಗೂ ಗಾಂಜಾ ಸೇವನೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಪಿಎಸ್‌ಐ ಮಂಜುನಾಥ್ ನೇತೃತ್ವದಲ್ಲಿ ದಾಳಿ ನಡೆದಿದ್ದು, ಪೊಲೀಸರು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ. ಇನ್ನು, ಪಾರ್ಟಿಯಲ್ಲಿ ಯಾವುದೇ ಮಾದಕ ವಸ್ತು ಮಾದಕ ದ್ರವ್ಯ ಸಿಕ್ಕಿಲ್ಲ.ಮದ್ಯದ ಬಾಟಲ್ , ಸಿಗರೇಟ್ ಪ್ಯಾಕ್ ಸ್ಥಳದಲ್ಲಿ ಪತ್ತೆಯಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಅಲ್ಲಿದ್ದ ಎಲ್ಲರ ರಕ್ತದ ಮಾದರಿ ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಲಾಗುವುದು ಎಫ್‌ಎಸ್‌ಎಲ್ ತಂಡ ಸಹ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ವರದಿ ಬಂದ ನಂತರ ಈ ಬಗ್ಗೆ ನಿಖರ ಮಾಹಿತಿ ಸಿಗಲಿದೆ ಎಂದು ಎಸ್ ಪಿ ವಿಷ್ಣುವರ್ಧನ್ ಸ್ಪಷ್ಟನೆ ನೀಡಿದ್ದಾರೆ.

### ಸೇನಾ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶ

• **ಉದಯವಾಹಿನಿ ಕೋಲಾರ**

ತಾಂತ್ರಿಕ ದೋಷದಿಂದಾಗಿ ಸೇನಾ ಹೆಲಿಕಾಪ್ಟರ್‌ವೊಂದು ತುರ್ತು ಭೂಸ್ಪರ್ಶ ಮಾಡಿರುವ ಘಟನೆ ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕಿನ ಡಿ.ಕೆ.ಹಳ್ಳಿಯಲ್ಲಿ ನಡೆದಿದೆ. ಡಿ.ಕೆ.ಹಳ್ಳಿ ಗ್ರಾಮದ ಕೆರೆಯ ಅಂಗಳದಲ್ಲಿ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶವಾಗಿದೆ. ಹೆಲಿಕಾಪ್ಟರ್‌ನಲ್ಲಿದ್ದ ಅಧಿಕಾರಿಗಳು ಅಪಾಯದಿಂದ ಪಾರಾಗಿದ್ದಾರೆ. ತರಬೇತಿ ನಿಮಿತ್ತ ಸೇನಾ ಹೆಲಿಕಾಪ್ಟರ್ ಕೆಜಿಎಫ್-ಬಂಗಾರಪೇಟೆಯಲ್ಲಿ ಹಾರಾಟ ನಡೆಸುತ್ತಿತ್ತು. ಈ ವೇಳೆ ತಾಂತ್ರಿಕ ದೋಷದಿಂದಾಗಿ ತುರ್ತು ಭೂಸ್ಪರ್ಶ ಮಾಡಿದೆ ಎಂದು ತಿಳಿದುಬಂದಿದೆ.

### ಕಳ್ಳರ ಬೆನ್ನಟ್ಟುತ್ತಿದ್ದ ಪೊಲೀಸ್ ಕಾರು ಅಪಘಾತ: ಮೂವರಿಗೆ ಗಾಯ

• **ಉದಯವಾಹಿನಿ ಮಧುಗಿರಿ**

ಪಟ್ಟಣದಲ್ಲಿ ಮಹಿಳೆ ಬಳಿ 70 ಗ್ರಾಂ ಚಿನ್ನದ ಸರ ಕದ್ದು ಎಸ್ಕೇಪ್ ಆಗುತ್ತಿದ್ದ ಖದೀಮನನ್ನು ಪೊಲೀಸರು ಹಿಡಿಯಲು ಹೋಗಿ ಪ್ರಾಣಕ್ಕೆ ಕುತ್ತು ತಂದುಕೊಂಡಿರುವ ಘಟನೆ ಆಂದ್ರಪ್ರದೇಶದ ಮಣೂರು ಬಳಿ ನಡೆದಿದೆ. ನಿನ್ನೆ ಕಳ್ಳನೊಬ್ಬ ಮಹಿಳೆಯೊಬ್ಬರ ಚಿನ್ನ ಕದ್ದು ಪರಾರಿಯಾಗಿರುವ ಬಗ್ಗೆ ಮಧುಗಿರಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು.ದೂರಿನನ್ವಯ ಕಳ್ಳನನ್ನು ಹಿಡಿಯಲು ಹೊರಟ್ಟಿದ್ದ ಪೊಲೀಸರ ವಾಹನ ಅಪಘಾತಕ್ಕೀಡಾಗಿದ್ದು, ಮೂರು ಜನ ಗಂಭೀರ ಗಾಯಗೊಂಡಿದ್ದಾರೆ. ಮಧುಗಿರಿ ಪೊಲೀಸ್ ಠಾಣೆಯ ಕ್ರೈಂ ಸಿಬ್ಬಂದಿ ಪ್ರಕಾಶ್, ಮುದ್ದರಾಜು ಹಾಗೂ ರಮೇಶ್ ಗಾಯಾಳುಗಳು ಎಂದು ಗುರುತಿಸಲಾಗಿದೆ. ಕಳ್ಳನ್ನ ಹಿಡಿಯುವ ಬರದಲ್ಲಿ ಕಾರನ್ನು ವೇಗವಾಗಿ ಚಲಾಯಿಸುತ್ತಿದ್ದರು. ಈ ವೇಳೆ ಕಾರಿನ ಸ್ಟೇರಿಂಗ್ ಲಾಕ್ ಅದ ಹಿನ್ನಲೆ ಕಾರು ಪಲ್ಟಿ ಹೊಡೆದಿದೆ. ಪರಿಣಾಮ ಪೊಲೀಸರ ಕಣ್ಣು, ತಲೆ, ಕೈ, ಕಾಲುಗಳಿಗೆ ಗಂಭೀರ ಗಾಯಗಳಾಗಿವೆ. ಗಾಯಗೊಂಡ ಪೊಲೀಸರನ್ನು ಆಂಧ್ರದ ಧರ್ಮವರಂ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಆಂಧ್ರಪ್ರದೇಶದ ಧರ್ಮವರಂ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.


ಉದಯವಾಹಿನಿ ಚಿತ್ರ

ಅಂತರಾಳದಿಂದ... EDITORIAL

# ಐಟಿ ಕಾಯ್ದೆ ತಿದ್ದುಪಡಿ ರದ್ದು

## ಕೇಂದ್ರಕ್ಕೆ ಹೈಕೋರ್ಟ್ ತಪರಾಕಿ

ಈ ಘಟಕವು ಯಾವುದೇ ಸುದ್ದಿಯನ್ನು ನಕಲಿಯೆಂದು ನಿರ್ಧರಿಸಿದರೆ, ಆನ್ ಲೈನ್ ಸಂಸ್ಥೆಗಳು ತಕ್ಷಣ ಅವುಗಳನ್ನು ತೆಗೆದು ಹಾಕಬೇಕಾಗಿತ್ತು ಒಂದು ವೇಳೆ ತೆಗೆದುಹಾಕಲು ಹಿಂಜರಿದರೆ ಅವು ಕಾನೂನು ಕ್ರಮವನ್ನು ಎದುರಿಸಬೇಕಾಗಿತ್ತು ಈಗಾಗಲೇ ಎಲ್ಲಾ ಮುದ್ರಣ ಮಾಧ್ಯಮಗಳು, ಟಿವಿ ಚಾನೆಲಗಳನ್ನು ಭಾಗತಃ ಹಣದ ಮೂಲಕ ಕೊಂಡುಕೊಂಡಿರುವ ಸರಕಾರ, ಪರ್ಯಾಯ ಮಾಧ್ಯಮವಾಗಿ ಸರಕಾರದ ವಿರುದ್ಧ ಕೆಲಸ ಮಾಡುತ್ತಿರುವ ಆನ್‌ಲೈನ್ ವೇದಿಕೆಗಳನ್ನು ನಿಯಂತ್ರಿಸಲು ಈ ತಿದ್ದುಪಡಿಯನ್ನು ತಂದಿದೆ ಎನ್ನುವುದು ಮೇಲ್ನೋಟಕ್ಕೆ ಅರ್ಥವಾಗಿ ಬಿಡುತ್ತದೆ. ಇದರ ವಿರುದ್ಧ ಎಡಿಟರ್ಸ್ ಗಿಲ್ಡ್ ಸುದ್ದಿಪ್ರಸಾರ-ಡಿಜಿಟಲ್ ಸಂಘ ಮತ್ತು ಭಾರತೀಯ ಮ್ಯಾಗಝಿನ್‌ಗಳ ಸಂಘ ಹಾಗೂ ಸ್ಟಾಂಡ್ ಅಪ್ ಕಾಮಿಡಿಯನ್ ಕುನಾಲ್ ಕಾಮಾ ಅವರು ನ್ಯಾಯಾಲಯದ ಮೊರೆ ಹೋಗಿದ್ದರು. ಅವರ ಒಂದು ವರ್ಷ ಕಾಲದ ಸುದೀರ್ಘ ಹೋರಾಟಕ್ಕೆ ಇದೀಗ ಜಯಸಿಕ್ಕಿದೆ. ಮಾತ್ರವಲ್ಲ ಸರಕಾರಿ ವಿರೋಧಿ ಧ್ವನಿಗಳನ್ನು ಸಂಪೂರ್ಣವಾಗಿ ಮಟ್ಟ ಹಾಕಲು ಹೊರಟು ಕೇಂದ್ರ ಸರಕಾರ ತೀವ್ರ ಮುಜುಗರಕ್ಕೆ ಒಳಗಾಗಿದೆ.

> **ಮಾಹಿತಿ ತಂತ್ರಜ್ಞಾನ ನಿಯಮಗಳಿಗೆ ಕೇಂದ್ರ ಸರಕಾರ ತಂದಿರುವ ತಿದ್ದು ಪಡಿಯನ್ನು ಅಸಾಂವಿಧಾನಿಕ ಎಂದು ಘೋಷಿಸಿರುವ ಮುಂಬೈ ಹೈಕೋರ್ಟ್. ಕೊನೆಗೂ ಇದನ್ನು ರದ್ದು ಪಡಿಸಿದೆ. 2021ರ ಮಾಹಿತಿ ತಂತ್ರಜ್ಞಾನ ನಿಯಮಗಳಿಗೆ ಕಳೆದ ವರ್ಷ ಎಪ್ರಿಲ್ ತಿಂಗಳಲ್ಲಿ ತಿದ್ದುಪಡಿಯನ್ನು ಜಾರಿಗೆ ತಂದಿದ್ದು ಸಾಮಾಜಿಕ ಮಾಧ್ಯಮ ಮತ್ತು ಆನ್‌ಲೈನ್ ವೇದಿಕೆಗಳಲ್ಲಿ ಸರಕಾರಕ್ಕೆ ಸಂಬಂಧಿಸಿದ ವರದಿಗಳಲ್ಲಿರುವ ಸುಳ್ಳುಗಳನ್ನು ಪತ್ತೆ ಹೆಚ್ಚಲು ಒಂದು ಘಟಕವನ್ನು ಸ್ಥಾಪಿಸಲು ಮುಂದಾಗಿತ್ತು.**

ಭಾರತದ ಅತಿ ದೊಡ್ಡ ಸಮಸ್ಯೆಯೇ ನಕಲಿ ಸುದ್ದಿಗಳಾಗಿವೆ ವಿಪರ್ಯಾಸವೆಂದರೆ ಈ ನಕಲಿ ಸುದ್ದಿಗಳನ್ನು ಅಧಿಕೃತ ಪತ್ರಿಕೆಗಳು, ಟಿವಿ ಚಾನೆಲ್ ಗಳು ಮುಂದೆ ನಿಂತು ಹರಡುತ್ತವೆ. ದೇಶದ ಸಾಮಾಜಿಕ, ರಾಜಕೀಯ ಬದುಕಿನ ಮೇಲೆ ನಕಲಿ ಸುದ್ದಿ ಬೀರುತ್ತಿರುವ ದುಷ್ಪರಿಣಾಮಗಳ ಬಗ್ಗೆ ನಮ್ಮ ನ್ಯಾಯಾಲಯಗಳೇ ಹಲವು ಬಾರಿ ಕಳವಳ ವ್ಯಕ್ತಪಡಿಸಿವೆ ಮಾತ್ರವಲ್ಲ, ಅವುಗಳ ವಿರುದ್ಧಕ್ರಮ ತೆಗೆದುಕೊಳ್ಳಲು ಸೂಚನೆಗಳನ್ನು ನೀಡಿವೆ. ಇಷ್ಟಾದರೂ ಇಂತಹ ನಕಲಿ ಸುದ್ದಿಗಳ ವಿರುದ್ಧಕ್ರಮ ಕೈಗೊಳ್ಳುವಲ್ಲಿ ನಮ್ಮ ಕಾನೂನು ವ್ಯವಸ್ಥೆ ಸಂಪೂರ್ಣ ವಿಫಲವಾಗಿದೆ. ಇದಕ್ಕೆ ಮುಖ್ಯ ಕಾರಣವೆಂದರೆ, ನಮ್ಮ ಸರಕಾರ ನಿಂತಿರುವುದೇ ಇಂತಹ ನಕಲಿ ಐಟಿ ಸೆಲ್‌ಗಳ ತಳಹದಿಯ ಮೇಲೆ ಚುನಾವಣೆಗಳು ಹತ್ತಿರ ಬರುತ್ತಿರುವಂತೆ ರಾಜಕೀಯ ಪಕ್ಷಗಳ ಐಟಿ ಸೆಲ್‌ಗಳು ಕೋಮು ಪ್ರಚೋದಕ ನಕಲಿ ಸುದ್ದಿಗಳನ್ನು ಹರಡುವುದರಲ್ಲಿ ನಿರತವಾಗುತ್ತವೆ. ಈ ಮೂಲಕ ಜನರನ್ನು ಪ್ರಚೋದಿಸುತ್ತವೆ. ಕೋಮು ಉದ್ವಿಗ್ನ ವಾತಾವರಣವನ್ನು ಸೃಷ್ಟಿಸುತ್ತವೆ. ಇದರ ವಿರುದ್ಧ ದೂರು ನೀಡಿದರೂ, ಕಠಿಣ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗದೆ ಕಾನೂನು ಪಾಲಕರು ಕೈ ಚೆಲ್ಲುತ್ತಾರೆ. ಒಂದು ವೇಳೆ ಇಂತಹ ನಕಲಿ ಸುದ್ದಿಗಳನ್ನು ಹರಡುವ ಐಟಿ ಸೆಲ್ ಗ ವಿರುದ್ಧ ಕ್ರಮ ಕೈಗೊಳ್ಳಲು ಕಠಿಣ ಕಾನೂನನ್ನು ಜಾರಿಗೊಳಿಸಿದ್ದೇ ಆದರೆ, ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಮತ್ತು ಸಂಘಪರಿವಾರದ ಕಾರ್ಯಕರ್ತರು ಆ ಕಾನೂನಿನ ಕುಣಿಕೆಗೆ ಮೊದಲು ಸಿಲುಕಿಕೊಳ್ಳಬೇಕಾಗುತ್ತದೆ. ಇದೇ ಸಂದರ್ಭದಲ್ಲಿ ಪತ್ರಿಕೆಗಳು, ಟಿವಿ ಚಾನೆಲ್ ಗಳು ವದಂತಿಗಳನ್ನು ಪ್ರಚೋದನಕಾರಿ ಸುದ್ದಿಗಳನ್ನು ಪ್ರಸಾರ ಮಾಡುವುದರಲ್ಲಿ ಹಿಂದೆ ಬಿದ್ದಿಲ್ಲ. ವಿಪರ್ಯಾಸವೆಂದರೆ ಅಭಿವ್ಯಕ್ತಿಯ ಹೆಸರಿನಲ್ಲಿ ತನ್ನ ಕೃತ್ಯಗಳನ್ನು ಈ ಮಾಧ್ಯಮಗಳು ಸಮರ್ಥಿಸಿಕೊಳ್ಳುತ್ತಿವೆ. ಇಂತಹ ಸಂದರ್ಭದಲ್ಲಿ ಸಾಮಾಜಿಕ ಜಾಲತಾಣವನ್ನು ಪರ್ಯಾಯ ಮಾಧ್ಯಮವಾಗಿ ಬಳಸಿಕೊಂಡು ಕೆಲವು ವಸ್ತು ನಿಷ್ಠ ಬರಹಗಾರರು, ಪತ್ರಕರ್ತರು ಸರಕಾರದ ಜನವಿರೋಧಿ ನೀತಿಗಳು, ಆಡಳಿತದ ಬಗ್ಗೆ ಧ್ವನಿಯೆತ್ತುತ್ತಿದ್ದಾರೆ. ಸರಕಾರ ಈ ಧ್ವನಿಯನ್ನು ಬಗ್ಗು ಬಡಿಯುವ ಏಕೈಕ ಉದ್ದೇಶದಿಂದ ಐಟಿ ಕಾಯ್ದೆಗೆ ತಿದ್ದು ಪಡಿ ತಂದು, ಆನ್‌ಲೈನ್ ವೇದಿಕೆಗಳಿಗೆ ಕಣ್ಗಾವಲು ಸಮಿತಿಯನ್ನು ನೇಮಿಸಲು ಮುಂದಾಯಿತು. ಸಮಾಜವನ್ನು ಕಂಗೆಡಿಸುವ ಸುಳ್ಳುಸುದ್ದಿಗಳಿಗೆ ಕಣ್ಗಾವಲನ್ನು ನೇಮಿಸಬೇಕಾಗಿದ್ದ ಸರಕಾರ, ಈ ನಾಡಿನ ವಸ್ತು ನಿಷ್ಠ ಪತ್ರಕರ್ತರಿಂದ ತನ್ನ ಸರಕಾರದ ಮೇಲೆ ನಡೆಯಬಹುದಾದ ದಾಳಿಗಳನ್ನು ತಡೆಯಲು ಕ್ರಮ ಕೈಗೊಂಡಿತು. ತಿದ್ದುಪಡಿಯಲ್ಲಿ ಸರಕಾರ 'ನಕಲಿ, ಸುಳ್ಳು ಮತ್ತು ತಪ್ಪುದಾರಿಗೆಳೆಯುವ ಎನ್ನುವ ಪದಗಳನ್ನು ಬಳಸುತ್ತದೆ. ಅವುಗಳಿಗೆ ಸ್ಪಷ್ಟವಾದ ವ್ಯಾಖ್ಯಾನವಿಲ್ಲದೇ ಇರುವುದರಿಂದ ಅವುಗಳನ್ನು ತನ್ನ ಮೂಗಿನ ನೇರಕ್ಕೆ ಬಳಸಿಕೊಂಡು ತನ್ನ ಪರವಾಗಿಲ್ಲದೆ ಎಲ್ಲಾ ಸುದ್ದಿಗಳನ್ನು ನಕಲಿ, ಸುಳ್ಳು ಮತ್ತು ತಪ್ಪು ದಾರಿಗೆಳೆಯುವ ಸುದ್ದಿಗಳು ಎಂದು ಷರಾ ಬರೆಯುವ ಅಪಾಯವಿತ್ತು. ಈ ಕಾನೂನನ್ನು ಬಳಸಿಕೊಂಡು ಸರಕಾರದ ವಿರುದ್ದ ಬರುವ ಎಲ್ಲಾ ವರದಿಗಳನ್ನು ಟೀಕೆಗಳನ್ನು ನಿಷೇಧಿಸುವ, ಒಂದು ವೇಳೆ ಇವುಗಳನ್ನು ಆನ್‌ಲೈನ್ ಕಂಪೆನಿಗಳು ಅಳಿಸದೇ ಇದ್ದರೆ ಕಂಪೆನಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳುವ ಸಾಧ್ಯತೆಗಳಿದ್ದವು. ಒಂದು ರೀತಿಯಲ್ಲಿ ಸ್ವತಂತ್ರ ಮಾಧ್ಯಮವೆಂದು ಕರೆಯಲ್ಪಡುವ ಸಾಮಾಜಿಕ ಜಾಲತಾಣಗಳಲ್ಲಿ ಸರಕಾರದ ವಿರುದ್ಧ ಬರೆಯುವ ಜನಸಾಮಾನ್ಯರ ಎಲ್ಲಾ ಹಕ್ಕುಗಳನ್ನು ಈ ತಿದ್ದುಪಡಿಯು ಕಿತ್ತುಕೊಳ್ಳುತ್ತಿತ್ತು. ಸರಕಾರದ ವಿರುದ್ಧ ತಪ್ಪು ಮಾಹಿತಿಗಳನ್ನು ಹರಡಿದರೆ ಅದಕ್ಕೆ ಸಂಬಂಧಿಸಿ ಸ್ಪಷ್ಟೀಕರಣ ನೀಡುವ ಮತ್ತು ತಪ್ಪು ಮಾಹಿತಿ ಹರಡಿದ ವ್ಯಕ್ತಿಯನ್ನು ಗುರುತಿಸಿ ಆತನ ವಿರುದ್ದ ಕಾನೂನು ಕ್ರಮ ಕೈಗೊಳ್ಳುವ ಅಧಿಕಾರ ಸಂಬಂಧಿಸಿದ ಇಲಾಖೆಗೆ ಇದ್ದೇ ಇದೆ. ಇದಕ್ಕೆ ಬದಲಾಗಿ ಆನ್‌ಲೈನ್ ವೇದಿಕೆಗಳಲ್ಲಿ ಪ್ರಕಟವಾಗುವ ಸುದ್ದಿಯಲ್ಲಿ ಯಾವುದು ನಕಲಿ, ಯಾವುದು ಸುಳ್ಳು ಯಾವುದು ತಪ್ಪು ದಾರಿಗೆಳೆಯುವ ವರದಿ ಎನ್ನುವುದನ್ನು ತಾನೇ ನಿರ್ಧರಿಸಿ ತೀರ್ಪು ನೀಡಿ ಸಂಬಂಧಿಸಿದ ಹೇಳಿಕೆಯನ್ನು ಅಳಿಸಲು ಆದೇಶ ನೀಡುವುದು ಮತ್ತು ಅದನ್ನು ಅಳಿಸದೇ ಇದ್ದಲ್ಲಿ ಕಂಪೆನಿಯ ವಿರುದ್ಧ ಕ್ರಮ ತೆಗೆದುಕೊಳ್ಳಲು ಮುಂದಾಗುವುದು ಅತಿದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ದೇಶ ಎಂದು ಕೊಚ್ಚಿಕೊಳ್ಳುವ ಭಾರತಕ್ಕೆ ಖಂಡಿತ ಭೂಷಣವಲ್ಲ ಇದು ಅಳಿದುಳಿದ ಅಭಿ ವ್ಯಕ್ತಿಯ ಮಾರ್ಗವನ್ನು ಸಂಪೂರ್ಣ ಮುಚ್ಚಿ ಹಾಕಿ, ಪರೋಕ್ಷವಾಗಿ ಸರ್ವಾಧಿಕಾರಿ ಸರಕಾರವನ್ನು ಸ್ಥಾಪಿಸುವುದಕ್ಕೆ ಪೀಠಿಕೆಯಾಗಿದೆ. ಇದರ ವಿರುದ್ಧ ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಆಕ್ಷೇಪಗಳು ವ್ಯಕ್ತವಾಗಿದ್ದವು. ಐಟಿ ಕಂಪೆನಿಗಳ ಮುಖ್ಯಸ್ಥರೂ ತಮ್ಮ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. ಕಳೆದ ಜನವರಿಯಲ್ಲಿ ಈ ಬಗ್ಗೆ ದ್ವಿಪಕ್ಷೀಯ ವಿಭಾಗೀಯ ನ್ಯಾಯ ಪೀಠವು ಎರಡು ಅಭಿಪ್ರಾಯಗಳನ್ನು ವ್ಯಕ್ತಪಡಿಸಿತ್ತು.

---




• ಹಿಂದಿನ ಸಂಚಿಕೆಯಿಂದ **7ನೆಯ ಅಧ್ಯಾಯ**

ದಶರಥರಾಜನು ಋಷ್ಯಶೃಂಗಮುನಿಯನ್ನು ಮುಂದಿಟ್ಟುಕೊಂಡು ಶಂಖ ದುಂದುಭಿ ಭೇರಿ ನಿಸ್ಸಾಳ ಮೊದಲಾದ ಸಮಸ್ತ ವಾದ್ಯಧ್ವನಿಗಳು ಮೊಳಗಲು, ಕುರುಜು ತೋರಣ ಮೇಲುಕಟ್ಟುಗಳಿಂದಲೂ ಅನೇಕ ಪಾರಕರ ಉಗ್ಗಡಣೆಗಳಿಂದಲೂ ಸಮಸ್ತ ಭೂಷಣಗಳಿಂದಲೂ ಅಲಂಕರಿಸಲ್ಪಟ್ಟ ಅಯೋಧ್ಯಾ ಪಟ್ಟಣವನ್ನು ಪ್ರವೇಶಿಸಿದನು. ಪುರಜನರು ಪುಷ್ಪಾಂಜಲಿಯಿಂದಲೂ ಮಾಂಗಲಾರ್ಥವಾದ ಅರಳು ಗಳಿಂದಲೂ ಸತ್ಕಾರವನ್ನು ಮಾಡುತ್ತಿರಲು ದೇವೇಂದ್ರನು ಅಮರಾವತೀಪಟ್ಟಣಕ್ಕೆ ಕಾಶ್ಯಪ ಮುನೀಂದ್ರನನ್ನು ಕರೆತಂದ ರೀತಿಯಲ್ಲಿ ಋಷ್ಯಶೃಂಗಮುನಿಯನ್ನು ಆಯೋಧ್ಯಾಪಟ್ಟಣಕ್ಕೆ ಕರೆತಂದು ತನ್ನ ಅಂತಃಪುರವನ್ನು ಸೇರಿಸಿ ಅರ್ಘ್ಯಪಾದ್ಯಾಚಮನಾದಿ ಪೂಜೆಗಳನ್ನು ಮಾಡಿದನು. ಆ ರಾಜನ ಅಂತಃಪುರದ ಸ್ತ್ರೀಯರು ಶಾಂತಾದೇವಿಗೆ ಅನೇಕ ವಸ್ತ್ರಾಭರಣಾದಿಗಳಿಂದ ಸತ್ಕಾರವನ್ನು ಮಾಡಲು ಋಷ್ಯಶೃಂಗಮುನಿಯು ಅವಳೊಡನೆ ಆ ರಾಜನ ಅರಮನೆಯಲ್ಲಿ ಕೆಲವು ಕಾಲ ಸುಖದಿಂದಿದ್ದನು.

### ದಕರಥನು ಅಶ್ವಮೇಧ ಯಾಗ ಮಾಡಲು ನಿಶ್ಚಯಿಸಿದ್ದು

ಕೆಲವು ದಿವಸಗಳ ಮೇಲೆ ದಶರಥನು ಋಷ್ಯಶೃಂಗಮುನೀಶ್ವರನಿಗೆ ಸಾಷ್ಟಾಂಗನಮಸ್ಕಾರವನ್ನು ಮಾಡಿ ಆತನನ್ನು ಕುರಿತು ಮಹರ್ಷಿಗಳೆ, ನಾನು ಸಂತಾನಾರ್ಥವಾಗಿ ಮಾಡುವ ಆಶ್ವಮೇಧ ಯಾಗಕ್ಕೆ ನೀವು ಆರ್ತಿಜ್ಞವನ್ನು ಮಾಡಿ ರಕ್ಷಿಸಬೇಕು ಎಂದು ಪ್ರಾರ್ಥಿಸಿದನು. ಆ ಮುನೀಶ್ವರನು ಸಂತೋಷಪಟ್ಟು ' ಎಲೈ ದಶರಥರಾಯನೆ ಅಶ್ವಮೇಧಯಾಗಕ್ಕೆ ಬೇಕಾದ ವಸ್ತುಗಳನ್ನು ತರಿಸು, ಲಕ್ಷಣವಾದ ಕುದುರೆಯನ್ನು ಬಿಡಿಸು ಮನೋಹರವಾದ ಸ್ಥಳದಲ್ಲಿ ಯಜ್ಞಶಾಲೆಯನ್ನು ಕಟ್ಟಿಸು ಎಂದನು. ಆಗ ಸುಮಂತ್ರನು ವೇದವೇದಾಂಗತತ್ತ್ವಜ್ಞರಾದ ಬ್ರಾಹ್ಮಣರನ್ನು ಕರೆಯಿಸಿದನು. ಸುಯಜ್ಞ ವಾಮದೇವ ಜಾಬಾಲಿ ಕಾಶ್ಯಪ ಪುರೋಹಿತನಾದ ವಸಿಷ್ಠ ಮತ್ತು ಉತ್ತಮರಾದ ಅನೇಕ ಬ್ರಾಹ್ಮಣರು ಸಮೀಪಕ್ಕೆ ಬರಲು, ದಶರಥನು ಆ ಋಷಿಗಳನ್ನು ಎದುರುಗೊಂಡು ಸತ್ಕಾರಮಾಡಿ ಧರ್ಮಾರ್ಥಸಹಿತವಾದ ಮಾತುಗಳಿಂದ ಅತಿವಿನಯವಾಗಿ ಎಲೈ ಋಷಿಗಳಿರಾ, ಸಂತಾನಾರ್ಥವಾಗಿ ಚಿಂತೆಯುಳ್ಳವನಾದ ನನಗೆ ಸುಖವಿಲ್ಲ. ಆದಕಾರಣ ಸಂತಾನಾರ್ಥವಾಗಿ ಆಶ್ವಮೇಧಯಾಗವನ್ನು ಮಾಡುವುದಕ್ಕೆ ಯತ್ನ ಮಾಡಿದ್ದೇನೆ. ಋಷ್ಯಶೃಂಗಮುನೀಶ್ವರರ ಕೃಪೆಯಿಂದ ಯಾಗವನ್ನು ಪೂರೈಸಿ ಇಷ್ಟಾರ್ಥವನ್ನು ಪಡೆಯಲೆಣಿಸಿದ್ದೇನೆ ' ಎಂದು ಹೇಳಿದನು ಆ ಋಷಿಗಳು ನೀನು ಮಾಡಿದ ಯತ್ನವು ತುಂಬ ಚೆನ್ನಾಗಿದೆ. ಅವಶ್ಯವಾಗಿ ನಾಲ್ಕು ಮಂದಿ ಕುಮಾರರನ್ನು ಪಡೆಯುವೆ ಈ ಬುದ್ಧಿ ನಿನಗೆ ಹುಟ್ಟಿದ್ದರಿಂದ ಮಹಾಶ್ರೇಯಸ್ಸಾದೀತು ಎಂದು ಹೇಳಿದರು.

ಮುಂದುವರಿಯುವುದು...

---

# ಸ್ತನ ಕ್ಯಾನ್ಸರ್ ಜಾಗೃತಿ ಓಟ, ಬೃಹತ್ ಪಿಂಕ್ ಪವರ್ ರನ್

## ಆಕಾರದ ಮಾನವ ಸರಪಳಿಯೊಂದಿಗೆ ಗಿನ್ನೆಸ್ ರೆಕಾರ್ಡ್ ಪ್ರಯತ್ನ ಆರೋಗ್ಯ ರಕ್ಷಣೆಗೆ ಒತ್ತು ನೀಡಿದ ತೆಲಂಗಾಣ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಹೈದರಾಬಾದ್, ಸೆಪ್ಟೆಂಬರ್ ರತದಲ್ಲಿ ಸ್ತನ ಕ್ಯಾನ್ಸರ್ ಹೆಚ್ಚುತ್ತಿರುವ ಬಗ್ಗೆ ಜಾಗೃತಿ ಮೂಡಿಸಲು, ಎಂಇಐಎಲ್ ಮೇಘಾ ಎಂಜಿನಿಯರಿಂಗ್ ಮತ್ತು ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್) ಮತ್ತು ಸುಧಾ ರೆಡ್ಡಿ ಫೌಂಡೇಶನ್ಸ್ ಭಾನುವಾರ ಇಲ್ಲಿನ ಗಚಿಬೌಲಿ ಕ್ರೀಡಾಂಗಣದಲ್ಲಿ ಬೃಹತ್ ಪಿಂಕ್ ಪವರ್ ರನ್ -2024 ಮ್ಯಾರಥಾನ್ ಅನ್ನು ಆಯೋಜಿಸಿತ್ತು.

ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ, ಸ್ತನ ಕ್ಯಾನ್ಸರ್ ವಿರುದ್ಧದ ಹೋರಾಟದಲ್ಲಿ ಆರೋಗ್ಯ ಮತ್ತು ಆರಂಭಿಕ ಪತ್ತೆಯ ಮಹತ್ವವನ್ನು ಒತ್ತಿ ಹೇಳಿದರಲ್ಲದೆ, ಮ್ಯಾರಥಾನ್ ಓಟಗಾರರನ್ನು ತಮ್ಮ ಸ್ಫೂರ್ತಿದಾಯಕ ಮಾತುಗಳಿಂದ ಪ್ರೋತ್ಸಾಹಿಸಿದರು, ರಾಜ್ಯದ ಆರೋಗ್ಯ ಮೂಲಸೌಕರ್ಯವನ್ನು ಸುಧಾರಿಸುವ ಸರ್ಕಾರದ ಬದ್ಧತೆಯನ್ನು ಒತ್ತಿ ಹೇಳಿದರು. ಕುಟುಂಬಗಳು ಮತ್ತು ಸಮುದಾಯಗಳ ಯೋಗಕ್ಷೇಮದ ಅಡಿಪಾಯವಾಗಿರುವ ಮಹಿಳೆಯರ ಆರೋಗ್ಯವನ್ನು ಪೂರೈಸಲು ಆಸ್ಪತ್ರೆಗಳು ಮತ್ತು ಆರೋಗ್ಯ ಸೌಲಭ್ಯಗಳನ್ನು ಬಲಪಡಿಸುವ ಭರವಸೆ ನೀಡಿದರು. ಪಿಂಕ್ ಪವರ್ ರನ್ ಕಾರ್ಯಕ್ರಮವು ತೆಲಂಗಾಣದ ಮಹಿಳೆಯರಿಗೆ ಆರೋಗ್ಯಕರ, ಹೆಚ್ಚು ಸಶಕ್ತ ಭವಿಷ್ಯದ ಆರಂಭವನ್ನು ಸೂಚಿಸುತ್ತದೆ ಎಂದು ಅವರು ಹೇಳಿದರು. ಈ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕಾಗಿ ಮೇಘಾ ಕೃಷ್ಣರೆಡ್ಡಿ, ಸುಧಾ ರೆಡ್ಡಿ ಮತ್ತು ಭಾಗವಹಿಸಿದ ಎಲ್ಲರನ್ನೂ ಮುಖ್ಯಮಂತ್ರಿ ರೇವಂತ್ ರೆಡ್ಡಿ ಅಭಿನಂದಿಸಿದರು. ಈ ಬೃಹತ್ ಮ್ಯಾರಥಾನ್ ಸ್ತನ ಕ್ಯಾನ್ಸರ್ ಬಗ್ಗೆ ಇರುವ ಕಟ್ಟು ಕಥೆಗಳನ್ನು ತೊಡೆದುಹಾಕಲು, ಆರಂಭಿಕ ಪತ್ತೆ ಮತ್ತು ಚಿಕಿತ್ಸೆಯ ಉಪಕ್ರಮಗಳನ್ನು ಉತ್ತೇಜಿಸಲು ಮತ್ತು ಅದಮ್ಯ ಮಾನವ ಮನೋಭಾವವನ್ನು ಆಚರಿಸಲು ಎಲ್ಲಾ ವರ್ಗದ ಸಾವಿರಾರು ವ್ಯಕ್ತಿಗಳನ್ನು ಒಟ್ಟುಗೂಡಿಸಿತು.

ಪಿಂಕ್ ಪವರ್ ರನ್ 3 ಕಿ. ಮೀ., 5 ಕಿ. ಮೀ. ಮತ್ತು 10 ಕಿ. ಮೀ. ಓಟದ ವಿಭಾಗಗಳನ್ನು ಒಳಗೊಂಡಿತ್ತು, ಕ್ಯಾನ್ಸರ್ ವಿರುದ್ಧ ಹೋರಾಡಲು ಬದ್ಧರಾಗಿರುವ ಗಮನಾರ್ಹ ಸಂಖ್ಯೆಯ ಸ್ಪರ್ಧಿಗಳನ್ನು ಸೆಳೆಯಿತು.

ಸ್ಪರ್ಧಿಗಳಿಗೆ ವಿಶೇಷ ಓಟದ ಕಿಟ್‌ಗಳು, ಪೌಷ್ಟಿಕ ತಿಂಡಿಗಳು ಮತ್ತು ಮ್ಯಾರಥಾನ್ ಪೂರ್ವ ಮತ್ತು ನಂತರದ ವ್ಯಾಯಾಮದ ಸಲಹೆಗಳನ್ನು ನೀಡಲಾಯಿತು.

**ಸ್ತನ ಕ್ಯಾನ್ಸರ್ ವಿರುದ್ಧದ ಹೋರಾಟ**

ಸಾಮಾಜಿಕ ಕಳಕಳಿಯ ಈ ಬೃಹತ್ ಮ್ಯಾರಥಾನ್‌ಗೆ ತೆಲಂಗಾಣ ಆರೋಗ್ಯ ಸಚಿವ ದಾಮೋದರ್ ರಾಜಾ ನರಸಿಂಹ, ಎಂಇಐಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ವಿ. ಕೃಷ್ಣರೆಡ್ಡಿ ಮತ್ತು ಸುಧಾರೆಡ್ಡಿ ಫೌಂಡೇಶನ್ ಸಂಸ್ಥಾಪಕಿ ಸುಧಾರೆಡ್ಡಿ ಈ ರೋಮಾಂಚಕ ಪಿಂಕ್ ಪವರ್ ರನ್‌ಗೆ ಹಸಿರು ನಿಶಾನೆ ತೋರಿದರು. ಎಸ್‌ಆರ್ ಫೌಂಡೇಶನ್ ಅಧ್ಯಕ್ಷೆ ಶ್ರೀಮತಿ ಸುಧಾ ರೆಡ್ಡಿ, ಪಿಂಕ್ ಪವರ್ ರನ್ ಕೇವಲ **ಒಂದು ಓಟವಲ್ಲ;** ಇದು ಕ್ಯಾನ್ಸರ್‌ನಿಂದ ಬದುಕುಳಿದವರ ಸ್ಫೂರ್ತಿದಾಯಕ ಕಥೆಗಳನ್ನು ಹಂಚಿಕೊಳ್ಳಲು, ಇತರರನ್ನು ಪ್ರೇರೇಪಿಸಲು ಮತ್ತು ಬೆಂಬಲಿಸುವ ಸಮುದಾಯವನ್ನು ನಿರ್ಮಿಸಲು ಒಂದು ವೇದಿಕೆಯಾಗಿದೆ. ಒಟ್ಟಾಗಿ, ನಾವು ಮಾನಸಿಕ ಅಡೆತಡೆಗಳನ್ನು ಮುರಿಯಬಹುದು, ಸಾಮಾಜಿಕ ಪುರಾಣಗಳನ್ನು ಹೋಗಲಾಡಿಸಬಹುದು ಮತ್ತು ವ್ಯಕ್ತಿಗಳು ತಮ್ಮ ಆರೋಗ್ಯದ ಮೇಲೆ ಹಿಡಿತ ಸಾಧಿಸಲು ಅಧಿಕಾರ ನೀಡಬಹುದು ಎಂದು ನುಡಿದರು. ಸ್ತನ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸುವ ಮತ್ತು ಬಾಧಿತರಿಗೆ ಭರವಸೆ ನೀಡುವ ಗುರಿಯನ್ನು ಹೊಂದಿರುವ ಈ ಮಹತ್ವದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಕ್ಕಾಗಿ ನಾನು ಎಲ್ಲರಿಗೂ ಹೃತ್ಪೂರ್ವಕವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಇಂದು ತೆಗೆದುಕೊಳ್ಳುವ ಪ್ರತಿಯೊಂದು ಹೆಜ್ಜೆಯೂ ನಮ್ಮನ್ನು ಕ್ಯಾನ್ಸರ್ ಮುಕ್ತ ಜಗತ್ತಿಗೆ ಹತ್ತಿರ ತರುತ್ತದೆ ಎಂದು ಶ್ರೀಮತಿ ಸುಧಾ ರೆಡ್ಡಿ ಹೇಳಿದರು. 10 ಕಿ. ಮೀ. ಮ್ಯಾರಥಾನ್ ಓಟದಲ್ಲಿ, ಪುರುಷರ ವಿಭಾಗದಲ್ಲಿ ಲವ್ ಪ್ರೀತ್ ಗೆದ್ದರೆ, ಮೋಹನ್ ಮೊದಲ ರನ್ನರ್ ಅಪ್ ಸ್ಥಾನ ಮತ್ತು ಅರಿಶ್ ಯಾದವ್ ಎರಡನೇ ರನ್ನರ್ ಅಪ್ ಸ್ಥಾನ ಪಡೆದರು. 6 ವರ್ಷದ ಬಾಲಕಿ ಎನ್. ಪಾರ್ವತಿ 10 ಕಿ. ಮೀ. ಓಟವನ್ನು ಪೂರ್ಣಗೊಳಿಸಿ ಎಲ್ಲರ ಗಮನವನ್ನು ಸೆಳೆದಳು. ಮಹಿಳೆಯರ ವಿಭಾಗದಲ್ಲಿ, ಸೀಮಾ ವಿಜೇತರಾಗಿ ಹೊರಹೊಮ್ಮಿದರು, ಸಂಜೀವನಿ ಎರಡನೇ ರನ್ನರ್ ಅಪ್ ಸ್ಥಾನವನ್ನು ಪಡೆದರು. 10 ಕಿಮೀ ಮ್ಯಾರಥಾನ್‌ನ ವಿಜೇತರಿಗೆ ರೂ. 2,50,000, ಮೊದಲ ರನ್ನರ್ ಅಪ್‌ಗೆ ರೂ.1,75,000 ಮತ್ತು ಎರಡನೇ ರನ್ನರ್ ಅಪ್‌ಗೆ ರೂ. 1,00,000 ನೀಡಲಾಯಿತು.

5 ಕಿ. ಮೀ. ಮ್ಯಾರಥಾನ್‌ನಲ್ಲಿ, ಶಂಕರ್ ಲಾಲ್ ಪುರುಷರ ವಿಭಾಗದಲ್ಲಿ ಗೆದ್ದರು, ಅಖಿಲ ಕುಮಾರ್ ಮೊದಲ ರನ್ನರ್-ಅಪ್ ಮತ್ತು ಅಮನ್ ಕುಮಾರ್ ಎರಡನೇ ರನ್ನರ್-ಅಪ್ ಆಗಿದ್ದರು, ಎಲ್ಲರೂ ನಗದು ಬಹುಮಾನಗಳನ್ನು ಪಡೆದರು.

ಅಂತೆಯೇ, ಮಹಿಳೆಯರ ವಿಭಾಗದಲ್ಲಿ, ಪ್ರೀತಿ ವಿಜೇತರಾಗಿ ಹೊರಹೊಮ್ಮಿದರು, ಸೋನಿಕಾ ಮೊದಲ ರನ್ನರ್-ಅಪ್ ಆಗಿ ಮತ್ತು ರೀನು ಎರಡನೇ ರನ್ನರ್-ಅಪ್ ಆಗಿ ನಗದು ಬಹುಮಾನಗಳನ್ನು ಪಡೆದರು. 5 ಕಿ.ಮೀ ಮ್ಯಾರಥಾನ್‌ನ ವಿಜೇತರಿಗೆ ರೂ. 1,25,000, ಮೊದಲ ರನ್ನರ್ ಅಪ್‌ಗೆ ರೂ. 1,00,000 ಮತ್ತು ಎರಡನೇ ರನ್ನರ್ ಅಪ್‌ಗೆ ರೂ. 75,000 ನೀಡಲಾಯಿತು. ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಎಂಇಐಎಲ್ ಎಂ.ಡಿ ಕೃಷ್ಣರೆಡ್ಡಿ, ಸುಧಾ ರೆಡ್ಡಿ, ಉಷಾ ಲಕ್ಷ್ಮಿ ಮತ್ತು ಸರ್ಕಾರಿ ಅಧಿಕಾರಿ ಕ್ರಿಸ್ಟಿನಾ ಸೇರಿದಂತೆ ಇತರರು ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಭಾಗವಹಿಸಿದ್ದರು. ಸಂಪೂರ್ಣವಾಗಿ ಗುಲಾಬಿ ಬಣ್ಣದಲ್ಲಿ ಅಲಂಕರಿಸಲಾದ ಪಕ್ಷಿಯ ಬೃಹತ್ ಮಾನವ ಚಿತ್ರವನ್ನು ರಚಿಸಲು ಒಟ್ಟುಗೂಡಿದ ಸಾವಿರಾರು ಮಂದಿ ಯುವಕ, ಯುವತಿಯರು ಮತ್ತು ವೃದ್ಧರು ಗಿನ್ನೆಸ್ ವಿಶ್ವ ದಾಖಲೆಯನ್ನು ಸ್ಥಾಪಿಸುವ ಪ್ರಯತ್ನವುದ ಮೂಲಕ ಜಾಗೃತಿ ಮೂಡಿಸುವುದು ಈ ಮ್ಯಾರಥಾನ್ನಿನ ಉದ್ದೇಶಗಳಲ್ಲಿ ಒಂದಾಗಿತ್ತು. ಕಾರ್ಯಕ್ರಮವನ್ನು ಭವ್ಯವಾಗಿ ಯಶಸ್ವಿಗೊಳಿಸಿದ ತೆಲಂಗಾಣ ಸರ್ಕಾರ, ಒಲೆಕ್ಟ್ರಾ, ಎಐಜಿ ಆಸ್ಪತ್ರೆ, ಮ್ಯಾರಥಾನ್ ಓಟಗಾರರು ಮತ್ತು ಸ್ವಯಂ ಸೇವಕರಿಗೆ ತಮ್ಮ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸುವ ಮೂಲಕ ಸುಧಾ ರೆಡ್ಡಿ ಕಾರ್ಯಕ್ರಮವನ್ನು ಮುಕ್ತಾಯಗೊಳಿಸಿದರು.

**ಸುಧಾ ರೆಡ್ಡಿ ಬಗ್ಗೆ**

**ಮೇಘಾ ಎಂಜಿನಿಯರಿಂಗ್ ಮತ್ತು ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ (ಎಂಇಐಎಲ್) ನಿರ್ದೇಶಕರಾದ ಸುಧಾ ರೆಡ್ಡಿ ಅವರು ಮಹತ್ವಾಕಾಂಕ್ಷೆಯ ಉದ್ಯಮಿಯಾಗಿದ್ದು, ಕಾರ್ಪೊರೇಟ್ ಜಗತ್ತಿನಲ್ಲಿ ತಮ್ಮ ಛಾಪು ಮೂಡಿಸಿದ್ದಾರೆ. ಅವರು ಮೆಚ್ಚುಗೆ ಪಡೆದ ಕಲಾ ಉತ್ಸಾಹಿ ಮತ್ತು ಫ್ಯಾಷನ್ ಐಕಾನ್ ಆಗಿದ್ದು, ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ. ಭಾವೋದ್ರಿಕ್ತ ತಾಯಿಯಾಗಿ ಮತ್ತು ಮಹಿಳಾ ಸಬಲೀಕರಣದ ವಾದಿಯಾಗಿ, ಸುಧಾ ರೆಡ್ಡಿ ಅವರು ಸುಧಾ ರೆಡ್ಡಿ ಫೌಂಡೇಶನ್, ಯುನಿಸೆಫ್‌ನ ಗ್ಲೋಬಲ್ ಗಿಫ್ಟ್ ಫೌಂಡೇಶನ್, ಸ್ತನ ಕ್ಯಾನ್ಸರ್ ರಿಸರ್ಚ್ ಫೌಂಡೇಶನ್, ಫೈಟ್ ಹಂಗರ್ ಫೌಂಡೇಶನ್ ಮತ್ತು ಆಕ್ಷನ್ ಎಗೇನೆಸ್ಟ್ ಹಂಗರ್ ಮೂಲಕ ಸಾಮಾಜಿಕ ಕಾರ್ಯಗಳಿಗೆ ಗಮನಾರ್ಹ ಕೊಡುಗೆ ನೀಡಿದ್ದಾರೆ. ಸಮಾಜದ ಕಲ್ಯಾಣಕ್ಕೆ, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳ ಸಬಲೀಕರಣಕ್ಕೆ ಅವರ ಬದ್ಧತೆಯು ಅವರನ್ನು ಪ್ರಭಾವಿ ಮತ್ತು ಬಹುಮುಖಿ ನಾಯಕರಾಗಿ ಸ್ಥಾಪಿಸಿದೆ.**

---

# ತಿರುಪತಿ ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬು: ಷಡ್ಯಂತ್ರ

• ಉದಯವಾಹಿನಿ, ಬೆಂಗಳೂರು

ಜಗತ್ತಿನಾದ್ಯಂತ ಇರುವ ಕೋಟ್ಯಾಂತರ ಭಕ್ತರ ಶ್ರದ್ಧಾಸ್ಥಾನವಾಗಿರುವ ಶ್ರೀ ತಿರುಪತಿ ಬಾಲಾಜಿ ದೇವಸ್ಥಾನದಲ್ಲಿನ ಪ್ರಸಾದದ ಲಡ್ಡುವಿನಲ್ಲಿ ಪ್ರಾಣಿಗಳ ಕೊಬ್ಬನ್ನು ಬಳಸಲಾಗುತ್ತಿರುವುದು ಅತ್ಯಂತ ಗಂಭೀರ ವಿಷಯ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಇವರು ಬಹಿರಂಗಪಡಿಸಿದ ನಂತರ ಜಗತ್ತಿನಲ್ಲಿನ ಹಿಂದೂ ಜನಾಂಗದಲ್ಲಿ ತೀವ್ರ ಆಕ್ರೋಶದ ಅಲೆ ಭುಗಿಲೆದ್ದಿದೆ. ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬನ್ನು ಸೇರಿಸುವುದು, ಇದು ಕೇವಲ ಕಲಬೆರಿಕೆ ಅಲ್ಲದೆ ಹಿಂದೂಗಳ ಧರ್ಮಶ್ರದ್ಧೆಯ ಮೇಲೆ ಪ್ರಯತ್ನ ಪೂರ್ವಕವಾಗಿ ಮಾಡಿರುವ ಧಾರ್ಮಿಕ ಆಘಾತವಾಗಿದೆ.



ಉದಯವಾಹಿನಿ ಚಿತ್ರ

> **ಈಗ ಕೇವಲ ಈ ಪ್ರಸಾದದ ಲಡ್ಡುವಿನ ಪ್ರಕರಣದಲ್ಲಿ ಅಷ್ಟೇ ಅಲ್ಲದೆ, ಜಗನ್ ಮೋಹನ್ ರೆಡ್ಡಿ ಸರಕಾರ ಮತ್ತು ಅವರ ತಂದೆ ಸ್ಯಾಮ್ಯುಯೆಲ್ ರಾಜಶೇಖರ ರೆಡ್ಡಿ ಇವರ ಕಾರ್ಯಕಾಲದಲ್ಲಿ ತಿರುಪತಿ ದೇವಸ್ಥಾನಕ್ಕೆ ಸಂಬಂಧಿತ ತೆಗೆದುಕೊಂಡುರುವ ಎಲ್ಲಾ ನಿರ್ಣಯದ ವಿಸ್ತೃತ ವಿಚಾರಣೆ ನಡೆಸಬೇಕು. ಇದರಲ್ಲಿ ಹಿಂದೂ ಧರ್ಮವಿರೋಧಿ ನಿರ್ಣಯ ತೆಗೆದುಕೊಂಡಿದ್ದರೆ, ಅವು ಎಲ್ಲವೂ ತಕ್ಷಣವೇ ರದ್ದು ಪಡಿಸಬೇಕೆಂದು ಹಿಂದೂ ಜನಜಾಗೃತಿ ಸಮಿತಿ ಆಂಧ್ರಪ್ರದೇಶ ಸರಕಾರಕ್ಕೆ ಆಗ್ರಹಿಸಿದೆ.**

**ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ**

ಇದು ಹಿಂದೂಗಳ ಜೊತೆಗೆ ಮಾಡಿರುವ ವಿಶ್ವಾಸ ಘಾತವೇ ಆಗಿದೆ. ಮಾಜಿ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಇವರ ತಂದೆ ಸ್ಯಾಮ್ಯುಯೆಲ್ ರಾಜಶೇಖರ ರೆಡ್ಡಿ ಇವರು ಮುಖ್ಯಮಂತ್ರಿ ಆಗಿರುವಾಗ ಶ್ರೀ ತಿರುಪತಿ ಬಾಲಾಜಿ ದೇವಸ್ಥಾನದ ಪವಿತ್ರ ಲಡ್ಡು ತಯಾರಿಸುವ ಕಾಂಟ್ರಾಕ್ಟ್ ಒಂದು ಕ್ರೈಸ್ತ ಕಂಪನಿಗೆ ನೀಡಿದ್ದರು. ದೇವಸ್ಥಾನದ ಟ್ರಸ್ಟಿ ಸ್ಥಾನದಲ್ಲಿ ಕ್ರೈಸ್ತ ವ್ಯಕ್ತಿಯನ್ನು ನೇಮಿಸಿದ್ದರು. ದೇವಸ್ಥಾನ ಪರಿಸರದಲ್ಲಿ ಕ್ರೈಸ್ತ ಮಿಶನರಿಗಳ ಮತಾಂತರಕ್ಕೆ ಪ್ರೋತ್ಸಾಹ ನೀಡಿದ್ದರು ಮುಂತಾದ ಅನೇಕ ಪಾಪ ಕೃತ್ಯಗಳು ಆ ಕಾಲದಲ್ಲಿ ನಡೆದಿದ್ದವು. ಅದರದೇ ಮುಂದುವರೆದ ಭಾಗ ಎಂದರೆ ಈ ಪ್ರಸಾದದ ಲಡ್ಡುವಿನಲ್ಲಿ ಕೊಬ್ಬು ಸೇರಿಸಿ ಹಿಂದೂಗಳ ಧರ್ಮಭ್ರಷ್ಟ ಮಾಡುವ ಷಡ್ಯಂತ್ರ ರಚಿಸಲಾಗಿತ್ತು, ಎಂದು ಹಿಂದೂ ಜನಜಾಗೃತಿ ಸಮಿತಿಯ ಬೆಂಗಳೂರು ಜಿಲ್ಲೆಯ ಸಮನ್ವಯಕರಾದ ಶ್ರೀ. ಶರತ್ ಕುಮಾರ್ ಇವರು ಪ್ರತಿಪಾದಿಸಿದ್ದಾರೆ. ಯಾರು ಈ ಮಹಾ ಪಾಪ ಮಾಡಿದ್ದಾರೆ, ಅವರ ಮೇಲೆ ಧಾರ್ಮಿಕ ಭಾವನೆಗೆ ಧಕ್ಕೆ ತಂದಿರುವ ಪ್ರಕರಣದಲ್ಲಿ ದೂರು ದಾಖಲಿಸಿ ಅವರನ್ನು ತಕ್ಷಣ ಬಂಧಿಸಬೇಕು, ಎಂದು ಶರತ್ ಕುಮಾರ್ ಇವರು ಆಗ್ರಹಿಸಿದ್ದಾರೆ.

ಈ ಪ್ರಕರಣ ಎಂದರೆ ದೇವಸ್ಥಾನ ಸರಕಾರೀಕರಣದಿಂದ ಆಗಿರುವ ಎಲ್ಲಕ್ಕಿಂತ ದೊಡ್ಡ ದುಷ್ಪರಿಣಾಮ ಎಂದು ಹೇಳಬಹುದು. ದೇಶಾದ್ಯಂತದ ಎಲ್ಲಾ ದೇವಸ್ಥಾನದಲ್ಲಿ ಈ ರೀತಿಯ ಧರ್ಮಭ್ರಷ್ಟತೆ ಅಥವಾ ಹಿಂದೂ ಧರ್ಮ ವಿರೋಧಿ ಕೃತಿಗಳು ನಡೆಯುತ್ತಿಲ್ಲ ಅಲ್ಲವೇ ಇದನ್ನು ಪರಿಶೀಲಿಸುವ ಸಮಯ ಬಂದಿದೆ. ಕೆಲವು ದಿನಗಳ ಹಿಂದೆ ಉತ್ತರ ಪ್ರದೇಶದಲ್ಲಿ ಕಾವಡ ಯಾತ್ರೆಯಲ್ಲಿ ಸಹಭಾಗಿ ಆಗುವ ಭಕ್ತರು ಯಾವ ಹೋಟೆಲ್ ಅಥವಾ ಡಾಬಾದಲ್ಲಿ ತಂಗುತ್ತಿದ್ದರೋ ಅಲ್ಲಿಯ ಭೋಜನದಲ್ಲಿ ಉಗುಳುವುದು, ಮೂತ್ರ ವಿಸರ್ಜನೆ ಮಾಡುವುದು ಮುಂತಾದ ವಿಕೃತಿ ಬೆಳಕಿಗೆ ಬಂದಿದ್ದವು. ಹಾಗೂ ಅನೇಕ ದೇವಸ್ಥಾನದ ಹೊರಗೆ ದೇವರಿಗೆ ಅರ್ಪಿಸುವ ಹೂವು ಮತ್ತು ಹೂವಿನ ಹಾರದ ಮೇಲೆ ಕೂಡ ಉಗುಳು ಹಚ್ಚುವ ಘಟನೆಗಳು ಬಹಿರಂಗವಾಗಿದ್ದವು. ಕೇವಲ ಉಗುಳು ಜಿಹಾದ್ ಅಷ್ಟೇ ಅಲ್ಲದೆ ಈಗ ಪ್ರಸ್ತುತ ಮುಂಬಯಿಯಲ್ಲಿನ ಶ್ರೀಸಿದ್ಧಿವಿನಾಯಕ ದೇವಸ್ಥಾನದಿಂದ ಕೇರಳದವರೆಗಿನ ಅನೇಕ ದೇವಸ್ಥಾನದಲ್ಲಿನ ದೇವರ ಪ್ರಸಾದವನ್ನು ಹಲಾಲ್ ಉತ್ಪಾದನೆಯಿಂದ ತಯಾರಿಸಿರುವ ಘಟನೆಗಳು ಬೆಳಕಿಗೆ ಬಂದಿವೆ. ಧರ್ಮ ಪರಾಯಣ ಹಿಂದೂಗಳು ಇದನ್ನು ಎಂದಿಗೂ ಸಹಿಸಲು ಸಾಧ್ಯವಿಲ್ಲ, ಭಾರತೀಯ ಸಂವಿಧಾನವು ಪ್ರತಿಯೊಬ್ಬರಿಗೂ ಧರ್ಮಾಚರಣೆಯ ಸ್ವಾತಂತ್ರ್ಯ ನೀಡಿದ್ದರೂ ಅದರಲ್ಲಿ ಈ ರೀತಿ ತೊಂದರೆ ತರುವುದು ಗಂಭೀರ ಅಪರಾಧವಾಗಿದೆ. ಹಿಂದೂಗಳ ಧಾರ್ಮಿಕ ಅಧಿಕಾರದ ರಕ್ಷಣೆ ಮಾಡುವುದು ಸರಕಾರದ ಜವಾಬ್ದಾರಿ ಆಗಿದೆ.

ದೇವಸ್ಥಾನದಲ್ಲಿ ನೀಡುತ್ತಿರುವ ಪ್ರಸಾದವು ಸಾತ್ವಿಕ, ಶುದ್ಧ, ಪವಿತ್ರ ಇರಲೇಬೇಕು, ಆದರೆ ಅದನ್ನು ತಯಾರಿಸುವುದರಿಂದ ಹಿಡಿದು ವಿತರಣೆ ವ್ಯವಸ್ಥೆಯಲ್ಲಿನ ಪ್ರತಿಯೊಬ್ಬರೂ ಧರ್ಮಪರಾಯಣ ಹಿಂದೂಗಳೇ ಆಗಿರಬೇಕು, ಎಂದು ಆಗ್ರಹಿಸುವ ಸಮಯ ಬಂದಿದೆ. ಇದಕ್ಕಾಗಿ ಹಿಂದೂ ಸಮಾಜವು ಎಚ್ಚರಗೊಂಡು ನಮ್ಮ ದೇವಸ್ಥಾನ ಸಂಸ್ಕೃತಿ, ಭ್ರಷ್ಟ ಆಗದಂತೆ ರಕ್ಷಿಸಬೇಕು' ಎಂದು ಶರತ್ ಕುಮಾರ್ ಇವರು ಆಗ್ರಹಿಸಿದರು.

ಈ ವೇಳೆ ರಾಷ್ಟ್ರಧರ್ಮ ಸಂಘಟನೆಯ ಶ್ರೀ. ಸಂತೋಷ್ ಕೆಂಚಾಂಬ, ರಾಷ್ಟ್ರೀಯ ಅಸಂಘಟಿತ ಪುರೋಹಿತ ಕಾರ್ಮಿಕ ಪರಿಷತ್‌ನ ಕಾರ್ಯದರ್ಶಿಗಳಾದ ಡಾ. ಮಹೇಶ್ ಕುಮಾರ್ ಬಿ.ಎನ್, ಆಜಾದ್ ಬ್ರಿಗೇಡ್‌ನ ಅಧ್ಯಕ್ಷರಾದ ಶ್ರೀ. ಗಜೇಂದ್ರ ಸಿಂಗ್, ರಾಷ್ಟ್ರೀಯ ಹಿಂದೂ ಪರಿಷತ್‌ನ ಉಪಾಧ್ಯಕ್ಷರಾದ ಶ್ರೀ. ಸುರೇಶ ಗೌಡ, ಹಿಂದೂ ಮುಖಂಡರಾದ ವೆಂಕಟಸ್ವಾಮಿ ರೆಡ್ಡಿ, ಜ್ಯೋತಿ ಗೌಡ ಹಾಗೂ ಹಲವಾರು ಹಿಂದುತ್ವ ನಿಷ್ಠರು, ವೆಂಕಟೇಶ್ವರನ ಭಕ್ತರು ಭಾಗವಹಿಸಿದ್ದರು.

---

# ಕವನ ಸಂಕಲನ ಬಿಡುಗಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬಸವನಗುಡಿ ನ್ಯಾಷನಲ್ ಕಾಲೇಜಿನ ಡಾ.ಎಚ್.ಎನ್. ಸಭಾಂಗಣದಲ್ಲಿ ಕವಿ ಮತ್ತು ಪ್ರಗತಿಪರ ಚಿಂತಕರಾದ ಡಾ. ಮೂಡ್ನಾಕೋಡು ಚಿನ್ನಸ್ವಾಮಿ ಉದಯೋನ್ಮುಖ ಲೇಖಕ ಡಾ. ಬಿ.ಎಲ್. ಮುರಳೀಧರ್ ಅವರ ಮನಸು ಮನಸಿನಾ ಮಾತು ಎಂಬ ಶೀರ್ಷಿಕೆಯ ಚೊಚ್ಚಲ ಕವನ ಸಂಕಲನವನ್ನು ಬಿಡುಗಡೆ ಮಾಡಿದರು. ಈ ಕವನ ಸಂಕಲನದಲ್ಲಿ ನವ್ಯ, ನವೋದಯ ಮತ್ತು ಬಂಡಾಯ ಸಾಹಿತ್ಯದ ಸುಳುಹುಗಳಿದ್ದು ಹೊಸ ತಲೆಮಾರಿನ ದಲಿತ ಸಾಹಿತ್ಯದ ಶೈಲಿ ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಅವರು ವಿಶ್ಲೇಷಿಸಿದರು.

> **ಲೇಖಕ ಡಾ. ಬಿ.ಎಲ್. ಮುರಳೀಧರ್ ವೇದಿಕೆಯಲ್ಲಿ ಉಪಸ್ಥಿತರಿದ್ದು ಕೊರಾನಾ ಕಾಲಾವಧಿಯ ಬಿಡುವನ್ನು ಬಳಸಿ ಜೀವನಾನುಭವದ ಪ್ರೇರಣೆಯಿಂದ ಈ ಕವನ ಸಂಕಲನ ರಚಿಸಿದ್ದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಅಪಾರ ಸಂಖ್ಯೆಯ ಅಧ್ಯಾಪಕರು, ವಿದ್ಯಾರ್ಥಿಗಳು , ಸಾಹಿತ್ಯಾಸಕ್ತರು ಬಂಧು ಬಳಗದವರು ಲೇಖಕರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.**

ಕಾಲಚಕ್ರ ಸರಿದಂತೆ ಬದಲಾಗುತ್ತಿರುವ ಸಾಮಾಜಿಕ ಸ್ಥಿತಿಗತಿಗೆ ಅನುಗುಣವಾಗಿ ವಸ್ತು ವಿಷಯವನ್ನು ಕೃತಿಕಾರರು ಆಯ್ಕೆ ಮಾಡಿಕೊಂಡಿರುವುದು ಸಮಂಜಸ ಕ್ರಮವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಕೃತಿಯ ಕುರಿತು ಮಾತನಾಡಿದ ಸಾಹಿತ್ಯ ವಿಮರ್ಶಕ ಎಚ್. ದಂಡಪ್ಪನವರು ಡಾ. ಮುರಳೀಧರ್ ಅವರ ಕವನಗಳಲ್ಲಿ ಅಪಾರ ವೈವಿಧ್ಯತೆಯನ್ನು ಕಾಣಬಹುದಾಗಿದೆ ಎಂದು ನುಡಿದರು. ಮಾನವೀಯ ಮೌಲ್ಯಗಳ ಜೊತೆಗೆ ಕುಟುಂಬ ಸಂಬಂಧಗಳನ್ನು ಬೆಸೆದು ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿಯುವ ಪ್ರಯತ್ನ ಈ ಕವನ ಸಂಕಲನದಲ್ಲಿ ಅಡಗಿದೆ ಎಂದು ಅವರು ಪ್ರತಿಪಾದಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಸ್.ಎಂ.ಜಯಕರ ವಿದ್ಯಾರ್ಥಿಗಳಲ್ಲಿ ಸುಪ್ತವಾಗಿರುವ ಪ್ರತಿಭೆಯನ್ನು ಗುರುತಿಸಿ ಬೆಳಕಿಗೆ ತರಬೇಕಾದ ಅಗತ್ಯವನ್ನು ಒತ್ತಿ ಹೇಳಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಾಮಾಜಿಕ ಚಿಂತಕ ಡಾ. ಬಂಜಗೆರೆ ಜಯಪ್ರಕಾಶ್ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರಗತಿಯ ಆರ್ಭಟದಲ್ಲಿ ಕನ್ನಡ ಭಾಷೆಯ ಭವಿಷ್ಯ ಮಸುಕಾಗದಂತೆ ಎಚ್ಚರ ವಹಿಸಬೇಕೆಂದು ಗಣಕಯಂತ್ರ ಕ್ಷೇತ್ರದ ಪರಿಣಿತರಿಗೆ ಕಿವಿಮಾತು ಹೇಳಿದರು.

---

# ಸರ್ಕಾರಿ ನೌಕರರ ತರಬೇತಿ ವಿಶೇಷ ಭತ್ಯೆ ಏರಿಕೆ


• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸರ್ಕಾರ ರಚನೆ ಮಾಡಿದ್ದ ಕೆ. ಸುಧಾಕರ್ ರಾವ್ ನೇತೃತ್ವದ ರಾಜ್ಯ 7ನೇ ವೇತನ ಆಯೋಗ 558 ಪುಟಗಳ ಸಂಪುಟ-1ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಕೆ ಮಾಡಿದೆ. ಸರ್ಕಾರ ಸಚಿವ ಸಂಪುಟ ಸಭೆಯಲ್ಲಿ ಆಗಸ್ಟ್‌ನಿಂದಲೇ ಜಾರಿಗೆ ಬರುವಂತೆ ವರದಿಯನ್ನು ಜಾರಿಗೊಳಿಸು ಒಪ್ಪಿಗೆ ನೀಡಿದೆ.

ವರದಿಯಲ್ಲಿ ಸರ್ಕಾರಿ ನೌಕರರ ವೇತನ ಮಾತ್ರವಲ್ಲ ವಿವಿಧ ಭತ್ಯೆಗಳ ಏರಿಕೆ ಕುರಿತು ವಿವರಣೆ ನೀಡಲಾಗಿದೆ. ಇವುಗಳಲ್ಲಿ ತರಬೇತಿಗಾಗಿ ವಿಶೇಷ ಭತ್ಯೆಯೂ ಸೇರಿದೆ.

ತರಬೇತಿ ಸಂಸ್ಥೆಗಳಿಗೆ ಸಿಬ್ಬಂದಿಯಾಗಿ ನಿಯೋಜನೆಗೊಂಡ ನೌಕರರಿಗೆ ವಿಶೇಷ ಭತ್ಯೆ ಎಂದು ಆಯೋಗ ಹೇಳಿದೆ. ತರಬೇತಿ ಸಂಸ್ಥೆಗಳಲ್ಲಿ ಬೋಧಕ ಸಿಬ್ಬಂದಿಯಾಗಿ ಕಾರ್ಯ ನಿರ್ವಹಿಸಲು ನಿಯೋಜಿಸಲಾದ ನೌಕರರಿಗಾಗಿ ಗಣನೀಯ ಪ್ರಮಾಣದ ಪ್ರೋತ್ಸಾಹಕವನ್ನು ಮೂಲ ವೇತನದ ಸುಮಾರು ಶೇ.15 ರಷ್ಟು ವಿಶೇಷ ಭತ್ಯೆಯ ರೂಪದಲ್ಲಿ ನೀಡಲು 6ನೇ ರಾಜ್ಯ ವೇತನ ಆಯೋಗವು ಶಿಫಾರಸು ಮಾಡಿತ್ತು. ಅಸಾಧರಣ ನೌಕರರು ತರಬೇತಿ ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ ಬೋಧಕ ಸಿಬ್ಬಂದಿಯಾಗಿ ಕಾರ್ಯನಿರ್ವಹಿಸುವುದನ್ನು ಉತ್ತೇಜಿಸಲು ಈ ಶಿಫಾರಸನ್ನು ಮಾಡಲಾಗಿತ್ತು. ಈ ಸಂಸ್ಥೆಗಳಲ್ಲಿ ಪ್ರತಿಭಾನ್ವಿತ ವ್ಯಕ್ತಿಗಳ ಮೂಲಕ ಗುಣಮಟ್ಟದ ತರಬೇತಿಯನ್ನು ಒದಗಿಸುವುದು ಇದರ ಮೂಲ ಉದ್ದೇಶವಾಗಿತ್ತು. ಸರ್ಕಾರಿ ನೌಕರರ ತರಬೇತಿಯು ಪ್ರಮುಖ ಆದ್ಯತೆಯ ವಿಷಯವಾಗಬೇಕು ಎನ್ನುವುದು ಆಯೋಗದ ಅಭಿಪ್ರಾಯ. ಸರ್ಕಾರದ ಎಲ್ಲಾ ತರಬೇತಿ ಸಂಸ್ಥೆಗಳಲ್ಲಿ ಬೋಧಕ ಸಿಬ್ಬಂದಿಯಾಗಿ ನಿಯುಕ್ತಿಗೊಂಡ ಅಥವಾ ನಿಯೋಜನೆಗೊಂಡ ನೌಕರರಿಗೆ ಜಾರಿಯಲ್ಲಿರುವ ವಿಶೇಷ ಭತ್ಯೆಯನ್ನು ಶೇ.25 ರಷ್ಟು ಹೆಚ್ಚಿಸಲು ಆಯೋಗವು ಶಿಫಾರಸು ಮಾಡುತ್ತದೆ.

ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಮಹಾ ನಿರ್ದೇಶಕರೊಂದಿಗಿನ ಆಯೋಗದ ಸಮಾಲೋಚನೆಯ ಸಂದರ್ಭದಲ್ಲಿ ತರಬೇತಿ ಸಂಸ್ಥೆಗಳಿಗೆ ಯೋಗ್ಯ ಮತ್ತು ಪ್ರತಿಭಾನ್ವಿತ ನೌಕರರನ್ನು ನಿಯುಕ್ತಿಗೊಳಿಸಲು ಅಪೇಕ್ಷಿತ ಆದ್ಯತೆ ಮತ್ತು ಪ್ರಾಮುಖ್ಯತೆ ದೊರೆಯುತ್ತಿಲ್ಲವೆಂಬ ಅನಿಸಿಕೆ ಆಯೋಗಕ್ಕೆ ಬಂದಿದೆ. ಸಿಬ್ಬಂದಿ



> **ಈ ಸಂಸ್ಥೆಗಳಲ್ಲಿ ನಿಯೋಜನೆಗೊಂಡ ಮತ್ತು ನಿಯುಕ್ತಿಯಾದ ಸರ್ಕಾರಿ ನೌಕರರಿಗೆ ಮಾತ್ರ ಅನ್ವಯವಾಗುತ್ತದೆಯೇ ಹೊರತು ಸಂಸ್ಥೆಗಳಲ್ಲಿ ನೇರವಾಗಿ ಬೋಧಕ ನೇಮಕಗೊಂಡವರಿಗಲ್ಲ ಎಂದು ಆಯೋಗವು ಸ್ಪಷ್ಟಪಡಿಸಿದೆ. ಬೋಧಕ ಸಿಬ್ಬಂದಿಗೆ ವಿಶೇಷ ಭತ್ಯೆ: ಗ್ರೂಪ್-ಎ ಪ್ರಸಕ್ತ ಭತ್ಯೆ 8,000 ರೂ.ಗಳು. ಪ್ರಸ್ತಾವಿತ ಭತ್ಯೆ 10,000 ರೂ.ಗಳು. ಗ್ರೂಪ್-ಬಿ ಪ್ರಸಕ್ತ ಭತ್ಯೆ 6,000 ರೂ.ಗಳು. ಪ್ರಸ್ತಾವಿತ ಭತ್ಯೆ 7,500 ರೂ.ಗಳು. ಗ್ರೂಪ್-ಸಿ ಪ್ರಸಕ್ತ ಭತ್ಯೆ 4,000 ರೂ.ಗಳು ಪ್ರಸ್ತಾವಿತ ಭತ್ಯೆ 5,000 ರೂ.ಗಳು.**

ಆಡಳಿತ ಸುಧಾರಣೆ ಇಲಾಖೆಯು ಈ

> **ಪೊಲೀಸ್ ಇಲಾಖೆ ಸೇರಿದಂತೆ ಅನೇಕ ಇಲಾಖೆಗಳಿಗೆ ಈ ಭತ್ಯೆಯು ಅಸ್ತಿತ್ವದ ಬಗ್ಗೆಯೇ ಅರಿವಿಲ್ಲದಿರುವುದನ್ನು ಸಹ ಆಯೋಗವು ಪದೇ ಪದೇ ಗಮನಿಸಿದೆ. ಇಲಾಖಾ ಮುಖ್ಯಸ್ಥರು ಈ ಪ್ರಯೋಜನದ ಬಗ್ಗೆ ಸೂಕ್ತ ತಿಳುವಳಿಕೆ ಹೊಂದಿ, ತಮ್ಮ ವ್ಯಾಪ್ತಿಯ ತರಬೇತಿ ಸಂಸ್ಥೆಗಳಲ್ಲಿ ಸಾಧ್ಯವಾದಷ್ಟು ಅತ್ಯುತ್ತಮ ಸಿಬ್ಬಂದಿಯನ್ನು ಹೊಂದುವುದನ್ನು ಖಾತರಿಪಡಿಸಿಕೊಳ್ಳವುದು.**

ಪ್ರೋತ್ಸಾಹ ಧನವು ತರಬೇತಿಯ ಗುಣಮಟ್ಟದ ಮೇಲೆ ಉಂಟುಮಾಡಿರುವ ಪರಿಣಾಮದ ಮೌಲ್ಯಮಾಪನವನ್ನು ಕೈಗೊಳ್ಳುವುದು ಉಪಯುಕ್ತವಾಗಬಹುದು ಮತ್ತು ತರಬೇತಿ ಸಂಸ್ಥೆಗಳಲ್ಲಿ ಅಗತ್ಯವಾದ ಪ್ರತಿಭಾನ್ವಿತ ನೌಕರರನ್ನು ನಿಯುಕ್ತಿಗೊಳಿಸುವುದನ್ನು ಮತ್ತು ಕನಿಷ್ಠ ಮೂರು ವರ್ಷಗಳ ಅವಧಿಯನ್ನು ಪೂರ್ಣಗೊಳಿಸುವುದನ್ನು ಖಚಿತಪಡಿಸಿಕೊಳ್ಳಲು ಈ ಪ್ರೋತ್ಸಾಹಕವನ್ನು ಪರಿಣಾಮಕಾರಿಯಾಗಿ ಬಳಸಬೇಕು ಎಂಬುದು ಆಯೋಗದ ಅಭಿಪ್ರಾಯವಾಗಿದೆ ಎಂದು ಹೇಳಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ:** ವಾದಗಳು ಮತ್ತು ಜಗಳಗಳು ಮತ್ತು ಇತರರ ಜೊತೆ ಅನಾವಶ್ಯಕವಾಗಿ ದೋಷ ಕಂಡುಹಿಡಿಯುವದನ್ನು ತಪ್ಪಿಸಿ. ಪ್ರೇಮಜೀವನವು ಇಂದು ನಿಮ್ಮನ್ನು ಆಶೀರ್ವದಿಸಿರುವಂತೆ ತೋರುತ್ತದೆ.

**ವೃಷಭ:** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ಕುಟುಂಬದ ರಹಸ್ಯ ಸುದ್ದಿ ನಿಮಗೆ ಅಚ್ಚರಿ ನೀಡಬಹುದು.

**ಮಿಥುನ:** ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ಇಂದು ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ.

**ಕರ್ಕಾಟಕ:** ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ಕುಟುಂಬದ ಸದಸ್ಯರು ನಿಮ್ಮ ಅಭಿಪ್ರಾಯಗಳನ್ನು ಬೆಂಬಲಿಸುತ್ತಾರೆ.

**ಸಿಂಹ:** ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ಭೂಮಿ ಅಥವಾ ಯಾವುದೇ ಆಸ್ತಿಯಲ್ಲಿ ಹೂಡಿಕೆ ಮಾಡುವುದು ಇಂದು ನಿಮಗೆ ಮಾರಕವಾಗಬಹುದು.

**ಕನ್ಯಾ:** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಕುಟುಂಬದೊಂದಿಗಿನ ಬಂಧಗಳು ಮತ್ತು ಸಂಬಂಧಗಳ ನವೀಕರಣದ ಒಂದು ದಿನ.

**ತುಲಾ:** ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು.

**ವೃಶ್ಚಿಕ:** ವೃತ್ತಿ ಯೋಜನೆ ಆಟಗಳಷ್ಟೇ ಮುಖ್ಯ. ನಿಮ್ಮ ಪೋಷಕರನ್ನು ಸಂತೋಷಗೊಳಿಸು ಎರಡನ್ನೂ ಸಂಭಾಳಿಸಬೇಕು. ಪ್ರೇಮಜೀವನವು ಇಂದು ನಿಮ್ಮನ್ನು ಆಶೀರ್ವದಿಸಿರುವಂತೆ ತೋರುತ್ತದೆ.

**ಧನಸ್ಸು:** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ದೊಡ್ಡ ಯೋಜನೆಗಳನ್ನು ಮತ್ತು ಕಲ್ಪನೆಗಳಿರುವ ಯಾರಾದರೂ ನಿಮ್ಮ ಗಮನ ಸೆಳೆಯುತ್ತಾರೆ.

**ಮಕರ:** ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ– ನೀವು ಮತ್ತು ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ. ಯಾವುದೇ ಹೊಸ ಜಂಟಿ ಉದ್ಯಮಕ್ಕೆ ಬದ್ಧರಾಗಬೇಡಿ.

**ಕುಂಭ:** ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ.

**ಮೀನ:** ನೀವು ಕೆಲಸದಲ್ಲಿ ತುಂಬ ಒತ್ತಡ ಹೇರಿದಲ್ಲಿ ಕೋಪ ಹೆಚ್ಚಾಗುತ್ತದೆ. ಯಾವುದೇ ನಿರ್ಧಾರಗಳನ್ನು ತೆಗೆದುಕೊಳ್ಳುವ ಮೊದಲು ಇತರರ ಅವಶ್ಯಕತೆಗಳನ್ನು ತಿಳಿಯಲು ಪ್ರಯತ್ನಿಸಿ.

## ಸೆಕ್ಸ್ ನಿರಾಕರಿಸಿದ ಪತ್ನಿಯನ್ನು ಉಸಿರುಗಟ್ಟಿಸಿ ಕೊಡಲಿಯಿಂದ ಕೊಚ್ಚಿ ಕೊಂದ ಪತಿ

• ಉದಯವಾಹಿನಿ, ಕಲಬುರಗಿ



ವ್ಯಕ್ತಿಯೊಬ್ಬ ತನ್ನ ಪತ್ನಿಯನ್ನೇ ಕೊಡಲಿಯಿಂದ ಕೊಚ್ಚಿ ಕೊಲೆಗೈದಿರುವ ಘಟನೆ ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಬಟಗೇ ರಾ ಗ್ರಾಮದಲ್ಲಿ ನಡೆದಿದೆ. ಮೃತಳನ್ನು ನಾಗಮ್ಮ (42) ಎಂದು ಗುರುತಿಸಲಾಗಿದೆ. ಇಂದು ನಸುಕಿನ ಜಾವದಲ್ಲಿ ಈ ಘಟನೆ ನಡೆದಿದೆ.

ಪತ್ನಿಯನ್ನು ಹತ್ಯೆ ಮಾಡಿ ಬಳಿಕ ಆರೋಪಿ ಪತಿ ಶೇಖಪ್ಪ ಪೊಲೀಸ್ ಠಾಣೆಗೆ ತೆರಳಿ ತಾನಾಗಿಯೇ ಶರಣಾಗಿದ್ದಾನೆ. ತನಿಖೆ ನಡೆಸಿದಾಗ, ಶೇಖಪ್ಪ ರಾತ್ರಿಯಿಂದ ಎರಡು ಬಾರಿ ಸೆಕ್ಸ್‌ಗೆ ಒತ್ತಾಯ ಮಾಡಿದ್ದ. ಆದರೆ ಎರಡೂ ಬಾರಿಯೂ ಸೆಕ್ಸ್‌ಗೆ ನಿರಾಕರಿಸಿದ್ದಕ್ಕೆ ನಿನ್ನನ್ನು ಕೊಚ್ಚಿ ಹಾಕುತ್ತೇನೆ ಎಂದು ಬೆದರಿಕೆ ಹಾಕಿದ್ದ. ಈ ವೇಳೆ ಕೊಚ್ಚಿ ಹಾಕು ನೋಡೋಣ ಎಂದು ಪತ್ನಿ ಹೇಳಿದ್ದಾಳೆ. ಪತ್ನಿಯ ಮಾತನಿಂದ ರೊಚ್ಚಿಗೆದ್ದ ಶೇಖಪ್ಪ ಆಕೆಯನ್ನು ಹಗ್ಗದಿಂದ ಉಸಿರುಗಟ್ಟಿಸಿ ನಂತರ ಕೊಡಲಿಯಿಂದ ಕೊಚ್ಚಿ ಭೀಕರವಾಗಿ ಕೊಲೆ ಮಾಡಿದ್ದಾನೆ. ಈ ಸಂಬಂಧ ಸೇಡಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ.

## ಐಷಾರಾಮಿ ಕಾರಿನಲ್ಲಿ ಬಂದು ಹಸು ಕಳ್ಳತನ: ಸಿಸಿಟಿವಿಯಲ್ಲಿ ದೃಶ್ಯ ಸೆರೆ

• ಉದಯವಾಹಿನಿ, ಶಿವಮೊಗ್ಗ

ಇತ್ತೀಚೆಗೆ ಕರ್ನಾಟಕದಲ್ಲಿ ಗೋವು ಕಳ್ಳತನ ಹೆಚ್ಚಾಗಿದೆ. ಹಸು ಕಳ್ಳರು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದಾರೆ. ಪ್ರತ್ಯೇಕ ಪ್ರಕರಣದಲ್ಲಿ ರಾಜ್ಯದಲ್ಲಿ 2 ಹಸು ಕಳ್ಳತನವಾಗಿದೆ. ಶಿವಮೊಗ್ಗದ ಸೊರಬದಲ್ಲಿ ಫಾರ್ಚೂನರ್ ಕಾರಿನಲ್ಲಿ ಬಂದ ಖದೀಮರು ಹಸುವನ್ನು ಕದ್ದು ಪರಾರಿಯಾಗಿರುವ ಘಟನೆ ನಡೆದಿದೆ. ಹಸು ಕಳವು ಮಾಡುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. KA 01 MZ 5843 ಬೂದು ಬಣ್ಣದ ಫಾರ್ಚುನರ್ ಕಾರಿನಲ್ಲಿ ಬಂದು ಪರಾರಿಯಾಗಿದ್ದಾರೆ. ಘಟನೆ ಕುರಿತು ಸ್ಥಳೀಯರು ಸೊರಬ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಹೀಗಾಗಿ ಹಸು ಕಳ್ಳರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಮತ್ತೊಂದೆಡೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಕಳಲುಘಟ್ಟ ಗ್ರಾಮದಲ್ಲಿ ಎರಡು ಲಕ್ಷ ಬೆಲೆ ಬಾಳುವ ಹಸುಗಳನ್ನು ಕಳ್ಳತನ ಮಾಡಲಾಗಿದೆ. ರೈತ ತಿಮ್ಮಪ್ಪಯ್ಯ ಅವರ ಎರಡು ಹಸು ಮತ್ತು ಒಂದು ಕರು ಅನ್ನು ಕದ್ದು ಪರಾರಿಯಾಗಿದ್ದಾರೆ. ಮನೆಗೆ ಆಧಾರವಾಗಿದ್ದ ಹಸುಗಳನ್ನು ಕಳೆದುಕೊಂಡು ರೈತ ತಿಮ್ಮಪ್ಪಯ್ಯ ಕಂಗಾಲಾಗಿದ್ದಾರೆ.

## ಉಡುಪಿಯ ತಂಡಕ್ಕೆ ಸಂಸದ ಕೋಟ ಸಹಾಯ

• ಉದಯವಾಹಿನಿ, ಕುಂದಾಪುರ

ಉತ್ತರ ಭಾರತ ಪ್ರವಾಸಕ್ಕೆ ತೆರಳಿದ್ದ ಉಡುಪಿ ಜಿಲ್ಲೆಯ ಸುಮಾರು 80 ಮಂದಿ ಹಿರಿಯ ನಾಗರಿಕರಿದ್ದ ತಂಡವು ರೈಲುಗಳ ಸಂಚಾರ ವ್ಯತ್ಯಯದಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದು, ವಿಷಯ ತಿಳಿದ ಕೂಡಲೇ ಸ್ಪಂದಿಸಿದ ಉಡುಪಿ ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಪರ್ಯಾಯ ವ್ಯವಸ್ಥೆ ಮೂಲಕ ನೆರವಾಗಿದ್ದಾರೆ. ಉತ್ತರ ಭಾರತ ಪ್ರವಾಸ ಮುಗಿಸಿ ಮುಂಬಯಿಗೆ ಬಂದು ಮತ್ಸ್ಯಗಂಧ ರೈಲಿನಲ್ಲಿ ಊರಿಗೆ ಬರಬೇಕಿದ್ದ ಉಡುಪಿ ಜಿಲ್ಲೆಯ ಈ ತಂಡವು ರಾಂಚಿ ಮುಂಬಯಿ ಎಕ್ಸ್‌ಪ್ರೆಸ್ ರೈಲು 10 ಗಂಟೆ ವಿಳಂಬದಿಂದಾಗಿ ಮಾರ್ಗ ಮಧ್ಯೆ ಸಿಲುಕಿದ್ದರು. ಈ ತಂಡ ಮುಂಬಯಿ ತಲುಪುವ ಮೊದಲೇ ಮತ್ಸ್ಯಗಂಧ ರೈಲು ಹೊರಟಾಗಿತ್ತು. ಆದ್ದರಿಂದ ತಂಡವು ಸಂಸದರನ್ನು ಸಂಪರ್ಕಿಸಿತು. ಕೂಡಲೇ ಸಂಸದರು ರೈಲ್ವೇ ಸಚಿವಾಲಯದ ಜತೆ ಮಾತನಾಡಿ, ಮಂಗಳೂರಿಗೆ ಬರಬೇಕಾದ ಸಿಎಸ್‌ಟಿ– ಮಂಗಳೂರು ರೈಲಿಗೆ ವಿಶೇಷ ಬೋಗಿಯ ವ್ಯವಸ್ಥೆ ಮಾಡಿದರು. ರೈಲು ಮಂಡಳಿಯಿಂದ ಈ ಬಗ್ಗೆ ಸೆಂಟ್ರಲ್ ರೈಲ್ವೆಗೆ ಆದೇಶ ಬಂದ ಕೂಡಲೇ ಹೆಚ್ಚುವರಿ ಬೋಗಿ ಅಳವಡಿಕೆ ನಡೆದಿದ್ದು, ಸಮಸ್ಯೆಗೆ ಸಿಲುಕಿದ್ದ ತಂಡವು ಈ ರೈಲಿನ ವಿಶೇಷ ಬೋಗಿಯಲ್ಲಿ ಊರಿಗೆ ಪ್ರಯಾಣ ಬೆಳೆಸಿದರು. ಇದಕ್ಕೆ ಸಹಕರಿಸಿದ ರೈಲ್ವೇ ಖಾತೆ ರಾಜ್ಯ ಸಚಿವ ಸೋಮಣ್ಣ ಹಾಗೂ ಅವರ ಕಚೇರಿಯ ಸಿಬಂದಿಗೆ ಸಂಸದರು ಕೃತಜ್ಞತೆ ಸಲ್ಲಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ ದಿನ ಬೆಳಗ್ಗೆ 6ಕ್ಕೆ ಶಿಕ್ಷಕರಿಗೆ ಸಿಗಲಿದೆ ಪ್ರಶ್ನೆಪತ್ರಿಕೆ

### ಪ್ರಶ್ನೆಪತ್ರಿಕೆ ಸೋರಿಕೆ ಸಮಸ್ಯೆ ತಡೆಯಲು ಆಯಾ ದಿನದ ವಿಷಯಗಳ ಪ್ರಶ್ನೆಪತ್ರಿಕೆ ಅಂದೇ ಶಿಕ್ಷಕರ ಲಾಗಿನ್‌ಗೆ ಸಿಗಲಿದೆ

• ಉದಯವಾಹಿನಿ ದಾವಣಗೆರೆ

ಮುಖ್ಯ ಪರೀಕ್ಷೆ ಮಾದರಿಯಲ್ಲಿಯೇ ಪ್ರಸಕ್ತ ಸಾಲಿನ ಎಸೆಸೆಲ್ಸಿ ಅರ್ಧ ವಾರ್ಷಿಕ ಪರೀಕ್ಷೆ (ಸಂಕಲನಾತ್ಮಕ ಮೌಲ್ಯಮಾಪನ–01) ನಡೆಸಲು ಮುಂದಾಗಿರುವ ರಾಜ್ಯ ಪರೀಕ್ಷಾ ಮತ್ತು ಮೌಲ್ಯನಿರ್ಣಯ ಮಂಡಳಿಗೆ ಪ್ರಶ್ನೆಪತ್ರಿಕೆ ಸೋರಿಕೆ ಸಮಸ್ಯೆ ಎದುರಾಗಿತ್ತು. ಇದನ್ನು ತಡೆಯಲು ಪರೀಕ್ಷೆ ಮಧ್ಯಾಂತರದಲ್ಲಿಯೇ ಮಂಡಳಿ ಕ್ರಮ ಕೈಗೊಂಡಿದ್ದು, ಆಯಾ ದಿನದ ವಿಷಯಗಳ ಪ್ರಶ್ನೆಪತ್ರಿಕೆ ಅಂದೇ ಶಿಕ್ಷಕರ ಲಾಗಿನ್‌ಗೆ ಸಿಗಲಿದೆ.

**ಪ್ರಶ್ನೆ ಪತ್ರಿಕೆ ಸೋರಿಕೆ ಸಮಸ್ಯೆ**

ಮಂಡಳಿಯ ಈ ಕ್ರಮದಿಂದ ವೇಳಾಪಟ್ಟಿಯಲ್ಲಿ ನಿಗದಿಯಾಗಿರುವ ಆಯಾ ವಿಷಯ ಪರೀಕ್ಷೆಗಳಿಗೆ ಅದೇ ದಿನ ಬೆಳಗ್ಗೆ 6ಕ್ಕೆ ಶಿಕ್ಷಕರ ಲಾಗಿನ್‌ಗೆ ಪ್ರಶ್ನೆಪತ್ರಿಕೆ ಲಭಿಸಲಿವೆ. ಈ ಹೊಸ ಕ್ರಮದಿಂದಾಗಿ ಸೆ. 28ರಿಂದಲೇ ಶಾಲಾ ಮುಖ್ಯ ಶಿಕ್ಷಕರು ಬೆಳಗಿನ ಜಾವ ತಮ್ಮ ಲಾಗಿನ್‌ನಲ್ಲಿರುವ ಪ್ರಶ್ನೆಪತ್ರಿಕೆಯನ್ನು ಡೌನ್‌ಲೋಡ್ ಮಾಡಿಕೊಂಡು ಪರೀಕ್ಷಾ ಸಮಯಕ್ಕೆ ವಿತರಿಸಲು ಕ್ರಮ ವಹಿಸಬೇಕಾಗಿದೆ. ಒಂದು ವೇಳೆ ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪ್ರಶ್ನೆಪತ್ರಿಕೆಯ ಫೋಟೋ ತೆಗೆಯುವುದು, ಪ್ರಶ್ನೆಪತ್ರಿಕೆಯನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವುದು, ಪರೀಕ್ಷಾ ಕೇಂದ್ರಗಳಲ್ಲಿ ನಕಲು ಚೀಟಿ ಸರಬರಾಜು ಮಾಡುವುದು ಸೇರಿ ಇನ್ನಿತರ ಅಕ್ರಮ, ಅವ್ಯವಹಾರ ನಡೆದರೆ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಜರಗಿಸಲಾಗುವುದು ಎಂದು ಮಂಡಳಿ ಎಚ್ಚರಿಕೆಯನ್ನೂ ನೀಡಿದೆ. ಈ ಮೊದಲು ಮಂಡಳಿ ಆಯಾ ವಿಷಯ ಪರೀಕ್ಷೆಗೆ ಸಂಬಂಧಿಸಿ ಪ್ರಶ್ನೆಪತ್ರಿಕೆಗಳು ಒಂದು ದಿನ ಮುಂಚಿತವಾಗಿ ಮಧ್ಯಾಹ್ನ 1 ಗಂಟೆಗೆ ಮುಖ್ಯ ಶಿಕ್ಷಕರ ಲಾಗಿನ್‌ನಲ್ಲಿ ಲಭಿಸುವ ವ್ಯವಸ್ಥೆ ಮಾಡಿತ್ತು. ಮುಖ್ಯ ಶಿಕ್ಷಕರು ಒಟಿಪಿ ನಮೂದಿಸಿ ಪ್ರಶ್ನೆಪತ್ರಿಕೆ ಡೌನ್‌ಲೋಡ್ ಮಾಡಿ ಶಾಲೆಯಲ್ಲಿ ಇಲ್ಲವೇ ಝೆರಾಕ್ಸ್ ಅಂಗಡಿಗೆ ಹೋಗಿ ಝೆರಾಕ್ಸ್ ಮಾಡಿಸಿ, ಮರುದಿನ ಪರೀಕ್ಷಾ ಸಮಯಕ್ಕೆ ವಿತರಿಸುತ್ತಿದ್ದರು. ಈಗ ಮಂಡಳಿ ಆಯಾ ದಿನದ ವಿಷಯ ಪರೀಕ್ಷೆಯ ಪ್ರಶ್ನೆಪತ್ರಿಕೆಯನ್ನು ಆಯಾ ದಿನ ಬೆಳಗ್ಗೆ 6ಕ್ಕೆ ಲಾಗಿನ್‌ನಲ್ಲಿ ಲಭಿಸುವಂತೆ ಮಾಡಿರುವುದು ಮುಖ್ಯ ಶಿಕ್ಷಕರಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ.



ಉದಯವಾಹಿನಿ ಚಿತ್ರ

> ಅರ್ಧ ವಾರ್ಷಿಕ ಪರೀಕ್ಷೆಯಲ್ಲಿ ಶಾಲೆಯ ಫಲಿತಾಂಶ ಕಡಿಮೆಯಾದರೆ ಶಾಲೆಯ ಪ್ರತಿಷ್ಠೆಗೆ ಕುಂದು ಬರಬಹುದು ಎಂಬ ಉದ್ದೇಶದಿಂದಲೇ ಅನೇಕ ಶಾಲೆಗಳಲ್ಲಿ ಶಿಕ್ಷಕರು ಹಾಗೂ ಶಾಲಾಡಳಿತ ಮಂಡಳಿಗಳಿಂದ ಪ್ರಶ್ನೆಪತ್ರಿಕೆ ಸೋರಿಕೆ, ನಕಲಿಗೆ ಅವಕಾಶ ಮಾಡಿಕೊಡಲಾಗಿದೆ ಎನ್ನುತ್ತಾರೆ ಹೆಸರು ಹೇಳಲಿಚ್ಛಿಸದ ಶಿಕ್ಷಕರು.

**ಗುಣಾತ್ಮಕ ಶಿಕ್ಷಣದ ದೃಷ್ಟಿಯಿಂದ ಉತ್ತಮ**

ರಾಜ್ಯದಲ್ಲಿ ನಗರ ಸೇರಿ ಹಲವು ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ಕಂಪ್ಯೂಟರ್, ಝೆರಾಕ್ಸ್ ಯಂತ್ರಗಳಿಲ್ಲ. ಅಂಥ ಶಾಲೆಯ ಮುಖ್ಯ ಶಿಕ್ಷಕರು ಬೆಳಗ್ಗೆ 9 ಗಂಟೆಯೊಳಗೆ ಪ್ರಶ್ನೆಪತ್ರಿಕೆ ಡೌನ್‌ಲೋಡ್ ಮಾಡಿಕೊಂಡು, ಝೆರಾಕ್ಸ್ ಮಾಡಿಸಿ ಪರೀಕ್ಷಾ ಸಮಯ 10 ಗಂಟೆಗೆ ವಿದ್ಯಾರ್ಥಿಗಳಿಗೆ ಪ್ರಶ್ನೆ ಪತ್ರಿಕೆ ವಿತರಿಸಬೇಕಾಗಿದೆ. ವಿದ್ಯುತ್ ಕಡಿತ, ನೆಟ್‌ವರ್ಕ್ ಸಮಸ್ಯೆಗಳ ನಡುವೆ ಈ ಕೆಲಸ ನಿರ್ವಹಣೆ ಮುಖ್ಯ ಶಿಕ್ಷಕರಿಗೆ ಸವಾಲಾಗಿದೆ. ಒಟ್ಟಾರೆ ಪರೀಕ್ಷಾ ಮಂಡಳಿ ಕೈಗೊಂಡ ಕ್ರಮ ಅನುಷ್ಠಾನದಲ್ಲಿ ವ್ಯತ್ಯಾಸಗಳಾಗಿದ್ದರೂ ಈ ವ್ಯವಸ್ಥೆ ವಿದ್ಯಾರ್ಥಿಗಳ ಭವಿಷ್ಯ ಹಾಗೂ ಗುಣಾತ್ಮಕ ಶಿಕ್ಷಣದ ದೃಷ್ಟಿಯಿಂದ ಉತ್ತಮ ಎಂದೇ ಶಿಕ್ಷಣ ತಜ್ಞರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

> ಮುಖ್ಯ ಪರೀಕ್ಷೆ ಮಾದರಿಯಲ್ಲಿ ಅರ್ಧ ವಾರ್ಷಿಕ ಪರೀಕ್ಷೆಯಲ್ಲೂ ಪ್ರಶ್ನೆಪತ್ರಿಕೆ ಒಂದು ದಿನ ಮುಂಚಿತವಾಗಿ ಮುಖ್ಯ ಶಿಕ್ಷಕರ ಲಾಗಿನ್‌ಗೆ ಲಭಿಸುವ ವ್ಯವಸ್ಥೆ ಮಂಡಳಿ ಮಾಡಿತ್ತು. ಆದರೂ ರಾಜ್ಯದ ಅನೇಕ ಶಾಲೆಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿ ಮೊದಲೇ ಮಕ್ಕಳಿಗೆ ಉತ್ತರ ಬರೆಸುವ ಪ್ರಕರಣಗಳು ಕಂಡು ಬಂದಿದ್ದರಿಂದ ಈಗ ಆಯಾ ದಿನದ ಪ್ರಶ್ನೆಪತ್ರಿಕೆ ಅಂದೇ ಸಿಗುವಂತೆ ಮಾಡಲು ಮಂಡಳಿ ಕ್ರಮ ಕೈಗೊಂಡಿದೆ **–ಎಚ್.ಕೆ.ನಟರಾಜ**

## ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಸದೃಢ ಆರೋಗ್ಯವನ್ನು ಬೆಳೆಸಿಕೊಳ್ಳಬೇಕು

• ಉದಯವಾಹಿನಿ ಹರಪನಹಳ್ಳಿ

ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಎಚ್ಚರಿಕೆ ಹೊಂದಿ ಯುವ ಸಮೂಹ ದುಶ್ಚಟಗಳಿಗೆ ಬಲಿಯಾಗದೆ ದೂವಿದ್ದು ಸದೃಢ ಆರೋಗ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಆರೋಗ್ಯ ಇಲಾಖೆಯ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ವಿದ್ಯಾರ್ಥಿಗಳಿಗೆ ತಿಳಿಸಿದರು.

ಪಟ್ಟಣದ ಎಸ್.ಯು.ಜೆ.ಎಂ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಜಯನಗರ ಜಿಲ್ಲೆ ಇವರ ಸಹಕಾರದೊಂದಿಗೆ ಹಮ್ಮಿಕೊಂಡಿದ್ದ ವಿಶ್ವ ರೇಬಿಸ್ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ತಂಬಾಕು ಸೇವನೆಯಿಂದ ಮುಕ್ತರಾಗುವುದು ಮತ್ತು ರೇಬಿಸ್ ಕಾಯಿಲೆ ಹರಡುವುದನ್ನು ತಡೆಗಟ್ಟುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಆರೋಗ್ಯ ಇಲಾಖೆಯ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಭುವನೇಶ್ವರಿ ಮಾತನಾಡಿ ರೇಬಿಸ್ ಕಾಯಿಲೆ ಹರಡುವುದರ ಕುರಿತು ಹಾಗೂ ಆ ರೋಗದ ಲಕ್ಷಣಗಳು, ರೋಗ ಹರಡದಂತೆ ಮುನ್ನೆಚ್ಚರಿಕೆಯ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ತಾಲ್ಲೂಕು ವೈದ್ಯಾಧಿಕಾರಿ ಶ್ರೀ ಡಾ. ಪೃಥ್ವಿ, ಎಸ್.ಯು.ಜೆ.ಎಂ. ಪಿಯು ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿಯಾದ ಶ್ರೀ ಪ್ರವೀಣ್ ಸಿ.ಎಂ, ಉಪನ್ಯಾಸಕರಾದ ಶ್ರೀ ಎನ್ ಬಸಪ್ಪ, ಶ್ರೀ ಸಿ.ಎಂ ಕೊಟ್ರಯ್ಯ, ಶ್ರೀ ರವಿ ಗೋಸ್ರಿ ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ, ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಮುನ್ನೆಚ್ಚರಿಕೆಯ ಕ್ರಮ**

ಈ ವೇಳೆ ತಾಲ್ಲೂಕು ಕ್ಷಯ ರೋಗ ಮೇಲ್ವಿಚಾರಕರಾದ ಹನುಮಂತಪ್ಪನವರು ಮಾತನಾಡಿ ಕ್ಷಯ ರೋಗ ಹರಡುವ ಬಗ್ಗೆ ಅದರ ಲಕ್ಷಣಗಳಾದ ಕೆಮ್ಮು ನೆಗಡಿ ತೂಕ ಕಡಿಮೆಯಾಗುವಿಕೆ ಮತ್ತು ಅದನ್ನು ತಡೆಗಟ್ಟುವ ಮುನ್ನೆಚ್ಚರಿಕೆಯ ಕ್ರಮಗಳ ಕುರಿತು ಮಾಹಿತಿಯನ್ನು ತಿಳಿಸಿದರು.

## ಓಪಿಎಸ್ ಜಾರಿಗೊಳಿಸುವಂತೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ,ಚಿಂಚೋಳಿ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್ ಮತ್ತು ಯು.ಪಿ.ಎಸ್ ಬೇಡ ಓಪಿಎಸ್ ಜಾರಿಗೆ ಮಾಡಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ಎನ್.ಪಿ.ಎಸ್ ನೌಕರರ ಸಂಘದ ತಾಲ್ಲೂಕಾಧ್ಯಕ್ಷ ಶಿವಪ್ರಸಾದ್ ಒತ್ತಾಯಿಸಿದರು.

ಪಟ್ಟಣದಲ್ಲಿ ಎನ್ ಪಿಎಸ್ ನೌಕರರ ಸಂಘದ ವತಿಯಿಂದ ಓಪಿಎಸ್ ಜಾರಿಗೆಗೊಳಿಸುವಂತೆ ಆಗ್ರಹಿಸಿ ತಹಸೀಲ್ ಕಛೇರಿ ಎದುರು ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು,ಕೇಂದ್ರ ಸರ್ಕಾರವು ಎನ್ ಪಿಎಸ್ ಯೋಜನೆಯನ್ನು ಬದಲಾಯಿಸಿ ಏಕೀಕೃತ ಪಿಂಚಣಿ ಯೋಜನೆಯನ್ನು ಜಾರಿಗೆ ತರಲು ತೀರ್ಮಾನಿಸಿದೆ ಸದರಿ ಯೋಜನೆಯು ಸಹ ಷೇರು ಮಾರುಕಟ್ಟೆ ಆಧಾರಿತವಾಗಿದ್ದು ಸರ್ಕಾರಿ ನೌಕರರ ಸಂಧ್ಯಾಕಾಲದ ಬದುಕಿಗೆ ಯಾವುದೇ ಭದ್ರತೆಯನ್ನು ಒದಗಿಸುವ ಅಂಶಗಳು ಹೊಂದಿರುವುದಿಲ್ಲಾ ಆದರಿಂದ ರಾಷ್ಟ್ರದ್ಯಂತ ಗುರುವಾರ ಪ್ರತಿಭಟನೆ ಹಮ್ಮಿಕೊಂಡು ಓಪಿಎಸ್ ಜಾರಿಗೆ ಮಾಡುವಂತೆ ಮನವಿ ಮಾಡಲಾಗುವುದು ಎಂದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಮಧುಕರ, ಬಸಯ್ಯ ಗುತ್ತೇದಾರ, ಸೂರ್ಯಕಾಂತ, ಗಂಗಾಧರ, ಗಣಪತಿ ದೇವಕತೆ, ಮೀನಾಕ್ಷಿ,ಮುತ್ತಪ್ಪ, ಕೆಎಂ ಬಾರಿ, ಶ್ರೀಮಂತ ಕಟ್ಟಿಮನಿ ಅನೇಕರಿದ್ದರು.

## ಕ್ರೀಡೆಯಿಂದ ದೈಹಿಕ, ಮಾನಸಿಕ ಆರೋಗ್ಯ ವೃದ್ಧಿ

• ಉದಯವಾಹಿನಿ, ಶಿವಮೊಗ್ಗ

ಕ್ರೀಡೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ. ಆದ್ದರಿಂದ ಯುವಜನತೆ ಸೇರಿತೆ ನಾವೆಲ್ಲ ಕ್ರೀಡೆಯನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ವಿಧಾನ ಪರಿಷತ್ ಶಾಸಕರಾದ ಡಾ.ಧನಂಜಯ ಸರ್ಜಿ ಕರೆ ನೀಡಿದರು. ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಸೆ.29 ರಂದು ನೆಹರು ಒಳಾಂಗಣ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ 2024–25 ನೇ ಸಾಲಿನ ಬೆಂಗಳೂರು ಗ್ರಾಮಾಂತರ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಶಿವಮೊಗ್ಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಈ ವಿಭಾಗದಲ್ಲಿ ಬಾಡ್ಮಿಂಟನ್, ಈಜು, ಟೆನ್ನಿಸ್, ಹಾಕಿ, ಜುಡೋ ಮತ್ತು ಯೋಗ ಸ್ಪರ್ಧೆಗಳನ್ನು ನಗರದ ಒಳಾಂಗಣ ಕ್ರೀಡಾಂಗಣ, ಕ್ರೀಡಾ ಸಂಕೀರ್ಣ ಮತ್ತು ವಾಜಪೇಯಿ ಬಡಾ ವಣೆಯಲ್ಲಿ ಆಯೋಜಿಸಲಾಗಿತ್ತು. ಬೆಂಗಳೂರು ಗ್ರಾಮಾಂತರ, ಕೋಲಾರ, ರಾಮನಗರ, ಚಿತ್ರದುರ್ಗ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಜಿಲ್ಲೆಯ ಸುಮಾರು 600 ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಯವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರೇಖ್ಯಾನಾಯ್ಕ, ಹಿರಿಯ ಯೋಗ ತರಬೇತುದಾರಾದ ವನಶ್ರೀ, ಮಂಜಪ್ಪ ,ಕ್ರೀಡಾಪಟುಗಳು, ಕ್ರೀಡಾಸಕ್ತರು ಹಾಜರಿದ್ದರು.





ಉದಯವಾಹಿನಿ ಚಿತ್ರ

> ಕ್ರೀಡೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುವುದಲ್ಲದೆ, ಪರಿಪೂರ್ಣ ವಿದ್ಯೆಯ ಹೊರತಾಗಿ ಅತ್ಯುನ್ನತ ಸಾಧನೆಗೊಂದು ಅವಕಾಶ ಲಭ್ಯವಿದೆ. ಹಾಗಾಗಿ ಯುವ ಜನತೆ ದೈನಂದಿನ ಜೀವನದ ಶೈಲಿಯಲ್ಲಿ ಕ್ರೀಡೆ ಅಳವಡಿಸಿಕೊಳ್ಳುವುದು ಅಗತ್ಯ **–ಡಾ.ಧನಂಜಯ ಸರ್ಜಿ**


## ಸಪ್ತ ವ್ಯಸನಗಳಲ್ಲಿ ಮಧ್ಯಪಾನ ಅಪಾಯಕಾರಿ: ರಾಚೋಟೇಶ್ವರ ಶ್ರೀ

• ಉದಯವಾಹಿನಿ ಇಂಡಿ

ಸಪ್ತ ವ್ಯಸನಗಳಲ್ಲಿ ಮಧ್ಯಪಾನ ಅತ್ಯಂತ ಅಪಾಯಕಾರಿ ಮಧ್ಯಪಾನದ ಮೆಟ್ಟಿಲು ಜಾರಿದರೆ ಉಳಿದೆಲ್ಲವನ್ನು ಜಾರಿದಂತೆ, ಹೀಗಾಗಿ ಗುಟಕಾ, ತಂಬಾಕು, ಮಧ್ಯಪಾನ ಸೇರಿದಂತೆ ಇನ್ನಿತರ ವ್ಯಸನಗಳಿಂದ ವ್ಯಕ್ತಿ, ಕುಟುಂಬ ಮತ್ತು ಸಮಾಜದ ಮೇಲೆ ಪರಿಣಾಮ ಬಿರುತ್ತದೆ ಎಂದು ತಡವಲಗಾ ಗ್ರಾಮದ ಹಿರೇಮಠದ ಅಭಿನವ ರಾಚೋಟೇಶ್ವರ ಶ್ರೀಗಳು ಹೇಳಿದರು.

ಅವರು ಪಟ್ಟಣದ ಕಾಳಿಕಾ ದೇವಸ್ಥಾನದಲ್ಲಿ ತಾಲ್ಲೂಕಾ ಆಡಳಿತ ಇಂಡಿ, ಅಬಕಾರಿ ಇಲಾಖೆ, ಪುರಸಭೆ ಹಾಗೂ ಗ್ರಾ.ಪಂ ರೂಗಿ ಇವರ ಆಶ್ರಯದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆ ಸಹಯೋಗದಲ್ಲಿ ಬೊಳೆಗಾಂವ ಗ್ರಾಮವನ್ನು ಸರಾಯಿ ಮುಕ್ತ ಗ್ರಾಮಮಾಡಲು 1863 ನೇ ಮಧ್ಯವರ್ಜನ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದರು.

ಯುವಕರ ವ್ಯಸನಿಗಳ ಬದುಕಿನಲ್ಲಿ ಬೆಳಕನ್ನು ಕೊಡಬೇಕಾಗಿದೆ. ಮಧ್ಯ ವ್ಯಸನಿಗಳನ್ನು ಮನುಷ್ಯರನ್ನಾಗಿ ಮಾಡಬೇಕಾಗಿದೆ. ಸನ್ಮಾರ್ಗದಲ್ಲಿ ನಡೆದು ಪರಿವರ್ತನೆ ಯಾಗಲು ಕಂದಾಯ ಉಪ ವಿಭಾಗಾಧಿಕಾರಿಗಳು ಬೊಳೆಗಾಂವ ಗ್ರಾಮವನ್ನು ವ್ಯಸನ ಮುಕ್ತ ಗ್ರಾಮವಾಗಿ ಮಾಡಲು ಪಣ ತೊಟ್ಟಿರುವದು ಶ್ಲಾಘನೀಯ ಎಂದರು.



ಉದಯವಾಹಿನಿ ಚಿತ್ರ

ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ವ್ಯಸನ ಮುಕ್ತ ಸಮಾಜ ಕೇಂದ್ರದ ಅಧ್ಯಕ್ಷ ಪ್ರಕಾಶ ಬಿರಾದಾರ,ಜಿಲ್ಲಾ ನಿರ್ದೇಶಕ ಸಂತೋಷಕುಮಾರ, ಅಬಕಾರಿ ಇಲಾಖೆಯ ವಾದಿರಾಜ ಅಶ್ರೀತ, ಯೋಜನಾಧಿಕಾರಿ ಎಲ್.ಎಂ.ನಟರಾಜ, ಸರಸ್ವತಿ, ರಾಜೇಶ, ಲಕ್ಷ್ಮಿ ಬಡಿಗೇರ ಮಾತನಾಡಿದರು.

ವೇದಿಕೆಯ ಮೇಲೆ ತಹಸೀಲ್ದಾರ ಬಿ.ಎಸ್. ಕಡಕಬಾವಿ, ಶ್ರೀ ಶಾಂತೇಶ್ವರ ವಿದ್ಯಾವರ್ಧಕ ಸಂಸ್ಥೆಯ ಗೌರವ ಕಾರ್ಯದರ್ಶಿ ಪ್ರಭಾಕರ ಬಗಲಿ, ಅಬಕಾರಿ ಇಲಾಖೆಯ ರಾಹುಲ ನಾಯಕ, ಪರೀನಾ ವಣಕ್ಯಾಳ, ಪಿಡಿಒ ಬಸವರಾಜ ಬಬಲಾದ, ರೂಗಿ ಗ್ರಾ.ಪಂ ಅಧ್ಯಕ್ಷೆ ಸೋಮವ್ವ ಹೊಸಮನಿ,ಶಶಿಕಲಾ ಬೇಟಗೇರಿ, ಸುಧೀರ ಕರಕಟ್ಟಿ ಮತ್ತಿತರಿದ್ದರು.

ಭಾರತಿ ಮಾಳಾಬಾಗಿ, ಶ್ರೀಶೈಲ ಇಂಡಿ, ಜ್ಯೋತಿ ವಂದಾಲ,ದಿವಾಕರ ಪೂಜಾರಿ, ವಿಜಯಲಕ್ಷ್ಮಿ ಮತ್ತಿತರಿದ್ದರು.

> ಮಧ್ಯಪಾನದಂತಹ ದುಶ್ಚಟಗಳನ್ನು ಬಿಡುವದು ಯುವಕರ ಜವಾಬ್ದಾರಿ. ತಮ್ಮಲ್ಲಿರುವ ಅಂಧಕಾರ ಹೋಗಲಾಡಿಸಲು ಯುವಕರು ವ್ಯಸನ ಮುಕ್ತ ರಾಗುವದು ಮುಖ್ಯ, ಯಾವದೋ ಸಮಸ್ಯೆಗೆ ಸಿಲುಕಿ ವ್ಯಸನಿಗಳಾಗುತ್ತಿದ್ದು ಅದರಿಂದ ಕುಟುಂಬ ಸಮಾಜ ಮೇಲೆ ದುಷ್ಪರಿಣಾಮ ಬಿಳುತ್ತಿದ್ದು ಕುಟುಂಬದ ಆರ್ಥಿಕ ಸ್ಥಿತಿ ಕೆಟ್ಟು ಯುವಕರು ಬೀದಿ ಪಾಲಾಗುತ್ತದ್ದಾರೆ. ಅರಿವೇ ಗುರು ಎಂಬ ಮಂತ್ರ ಪಾಲಿಸಿ ತಮ್ಮಲ್ಲಿರುವ ಅರಿವನ್ನು ಒಳ್ಳೆಯತನಕ್ಕೆ ಬಳಸಿಕೊಳ್ಳಬೇಕಾಗಿದೆ **–ಅಬೀದ ಗದ್ಯಾಳ, ಕಂದಾಯ ಉಪವಿಬಾಗಾಧಿಕಾರಿ**

## ಪತಿಯಿಂದಲೇ ಪತ್ನಿಯ ಬರ್ಬರ ಹತ್ಯೆ: ಆರೋಪಿ ಬಂಧನ

• ಉದಯವಾಹಿನಿ, ಸೇಡಂ

ಪತಿಯಿಂದಲೇ ಪತ್ನಿ ಹತ್ಯೆಯಾದ ಘಟನೆ ತಾಲ್ಲೂಕಿನ ಬಟಗೇರಾ ಎಂಬಲ್ಲಿ ನಡೆದಿದೆ. ತಾಲ್ಲೂಕಿನ ಬಟಗೇರಾ(ಬಿ) ನಿವಾಸಿ ನಾಗಮ್ಮ ಶೇಕಪ್ಪ (45) ಕೊಲೆಯಾದ ಮಹಿಳೆ. ಪತಿ ಶೇಕಪ್ಪ ಮಾದ್ವಾರ (50) ಕೊಲೆ ಮಾಡಿದಾತ. ನಾಗಮ್ಮ ಅವರು ಶೇಕಪ್ಪ ಅವರ ಮೊದಲ ಪತ್ನಿಯಾಗಿದ್ದು, ಶೇಕಪ್ಪ ಕಳೆದ 5–6 ವರ್ಷದ ಹಿಂದೆ 2ನೇ ಮದುವೆ ಮಾಡಿಕೊಂಡಿದ್ದರು.

ಈ ಕಾರಣಕ್ಕೆ ಹಾಗೂ ಕುಡಿತದ ಚಟ ಹೊಂದಿದ್ದ ಎನ್ನುವ ಕಾರಣಕ್ಕೆ ಆಗಾಗ ಗಂಡ ಹೆಂಡತಿ ಮಧ್ಯೆ ಜಗಳವಾಗುತ್ತಿತ್ತು ಎನ್ನಲಾಗಿದೆ. ಪತ್ನಿ ನಾಗಮ್ಮ ಅನ್ಯರ ಮನೆಯಲ್ಲಿ ಕೆಲಸ ಮಾಡಿಕೊಂಡು ವಾಸವಿದ್ದಳು.





ಉದಯವಾಹಿನಿ ಚಿತ್ರ

**ಗಂಡ ಹೆಂಡತಿ ಮಧ್ಯೆ ಜಗಳ**

ಸೆ.28ರ ಶನಿವಾರದಂದು ನಾಗಮ್ಮಳ ತಮ್ಮ ಹಾಗೂ ಆತನ ಪತ್ನಿ ಮನೆಗೆ ಬಂದು ಇಬ್ಬರ ನಡುವೆ ರಾಜಿ ಸಂಧಾನ ಮಾಡಿಸಿದ್ದಾರೆ. ರಾತ್ರಿ ಊಟ ಮುಗಿಸಿ ನಾಗಮ್ಮಳ ತಮ್ಮ ತನ್ನ ಪತ್ನಿಯನ್ನು ಅಲ್ಲೇ ಬಿಟ್ಟು ಹೋಗಿದ್ದರು ಎನ್ನಲಾಗಿದೆ. ನಾಗಮ್ಮ ಹಾಗೂ ಶೇಕಪ್ಪ ಒಂದು ಕೊಣೆಯಲ್ಲಿ ಮಲಗಿದ್ದರು. ಈ ನಡುವೆ ಗಂಡ– ಹೆಂಡತಿ ಮಧ್ಯೆ ಜಗಳವಾಗಿದೆ. ಇದರಿಂದ ಕೋಪಗೊಂಡ ಶೇಕಪ ಪತ್ನಿಯ ಕುತ್ತಿಗೆಗೆ ಹಗ್ಗ ಬಿಗಿದು ಉಸಿರುಗಟ್ಟಿಸಿದ್ದಾನೆ. ನಂತರ ಕೊಡಲಿಯಿಂದ ಕುತ್ತಿಗೆಗೆ ಹೊಡೆದು ಬರ್ಬರವಾಗಿ ಕೊಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಮೃತ ನಾಗಮ್ಮ ಳಿಗೆ 3 ಜನ ಹೆಣ್ಣು ಮಕ್ಕಳಿದ್ದಾರೆ.

ಮೊದಲ ಮಗಳಿಗೆ ಮದುವೆಯಾಗಿದ್ದು, 2ನೇ ಮಗಳು ತವರಲ್ಲಿದ್ದು, 3ನೇ ಮಗಳೊಂದಿಗೆ ನಾಗಮ್ಮ ವಾಸವಿದ್ದಳು.ಆರೋಪಿ ಶೇಕಪ್ಪನನ್ನು ಪೊಲೀಸರು ಬಂಧಿಸಿದ್ದು, ತನಿಖೆ ಆರಂಭಿಸಿದ್ದಾರೆ.

## ನ್ಯಾಯಾಲಯ ಕಟ್ಟಡಕ್ಕೆ ಅನುದಾನ ಬಿಡುಗಡೆಗೆ ಒತ್ತಾಯ

• ಉದಯವಾಹಿನಿ, ಚಿಂಚೋಳಿ

ಪಟ್ಟಣದಲ್ಲಿ ಅತ್ಯಂತ ಹಳೆಯ ನ್ಯಾಯಾಲಯ ಕಟ್ಟಡವಿದ್ದು ಮಳೆಗಾಲದಲ್ಲಿ ಸೋರಿಕೆ ಆಗುತ್ತಿರುವುದ ರಿಂದ ಕಲಾಪ ನಡೆಸಲು ತುಂಬಾ ತೊಂದರೆ ಆಗುತ್ತಿದೆ ಈಗಾಗಲೇ ನೂತನ ನ್ಯಾಯಾಲಯ ಕಟ್ಟಡಕ್ಕೆ ಅನುಮತಿ ಸಿಕ್ಕಿದ್ದು ರಾಜ್ಯ ಸರ್ಕಾರವು ಅನುದಾನ ಬಿಡುಗಡೆಗೊಳಿಸಬೇಕು ಎಂದು ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಒತ್ತಾಯಿಸಿದರು.



ಪಟ್ಟಣದ ನ್ಯಾಯಾಲಯವು ಮಳೆ ಸೋರಿಕೆ ಆಗುತ್ತಿರುವುದರಿಂದ ತಾತ್ಕಾಲಿಕವಾಗಿ ನ್ಯಾಯಾಲಯ ಮೇಲ್ಛಾವಣಿ ಪ್ಲಾಸ್ಟಿಕ್ ಹಾಕಿ ಕಲಾಪ ನಡೆಸಲಾಗುತ್ತಿದೆ.

ನೂರು ವರ್ಷಗಳ ಹಿಂದೆ ಕಟ್ಟಿದ್ದ ನ್ಯಾಯಾಲಯವು ಗೋಡೆಗಳು ಬೀರುಕು ಬಿಟ್ಟಿವೆ ಮೇಲ್ಛಾವಣಿ ಸಿಮೆಂಟ್ ತಗಡನಿಂದ ಕೂಡಿದೆ ಅವುಗಳಿಗೆ ರಂಧ್ರ ಬಿದ್ದು ಸೋರುತ್ತಿವೆ ಹಾಗಾಗಿ ನೂತನ ನ್ಯಾಯಾಲಯ ಕಟ್ಟಡ ನಿರ್ಮಿಸಲು ಈಗಾಗಲೇ ಎಲ್ಲಾ ಅಧಿಕಾರಿಗಳಿಗೆ ಮಾಹಿತಿವಿದ್ದು ಸರ್ಕಾರಕ್ಕೆ ವರದಿ ನೀಡಿದರು. ಅನುದಾನ ಬಿಡುಗಡೆ ಮಾಡುತ್ತಿಲ್ಲಾ ಶೀಘ್ರದಲ್ಲೇ ಸರ್ಕಾರ ಅನುದಾನ ಬಿಡುಗಡೆಗೊಳಿಸಬೇಕು ಎಂದು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿ ಬಳಿಕ ದಾವಣಗೆರೆಯಲ್ಲಿ ಬಿಜೆಪಿ ನಾಯಕರ ಸಭೆ

### • ಬಸನಗೌಡ ಪಾಟೀಲ್ ಯತ್ನಾಳ್, ಪ್ರತಾಪ್ ಸಿಂಹ ಸೇರಿದಂತೆ ಹಲವು ಬಿಜೆಪಿ ನಾಯಕರ ಸಭೆ

• ಉದಯವಾಹಿನಿ, ದಾವಣಗೆರೆ

ಬಸನಗೌಡ ಪಾಟೀಲ್ ಯತ್ನಾಳ್, ಪ್ರತಾಪ್ ಸಿಂಹ ಸೇರಿದಂತೆ ಹಲವು ಬಿಜೆಪಿ ನಾಯಕರು ಭಾನುವಾರ ದಾವಣಗೆರೆಯಲ್ಲಿ ಸಭೆಯೊಂದನ್ನು ನಡೆಸಿದ್ದಾರೆ. ಆಗಸ್ಟ್ ತಿಂಗಳಿನಲ್ಲಿ ಬೆಳಗಾವಿಯ ಖಾಸಗಿ ರೆಸಾರ್ಟ್‌ನಲ್ಲಿ ಇದೇ ಮಾದರಿಯ ಸಭೆ ನಡೆದಿತ್ತು. ಬೆಳಗಾವಿಯ ಸಭೆಯಲ್ಲಿ ಪಾಲ್ಗೊಂಡಿದ್ದ ಕೆಲವು ನಾಯಕರು ಇಂದು ನಡೆದ ಸಭೆಗೆ ಗೈರಾಗಿದ್ದರು.

ಭಾನುವಾರ ದಾವಣಗೆರೆಯ ಜಿಎಂ ಐಟಿ ಅತಿಥಿ ಗೃಹದಲ್ಲಿ ಬಿಜೆಪಿ ನಾಯಕರ ಸಭೆ ನಡೆದಿದೆ.

ಈ ಸಭೆಯಲ್ಲಿ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ದಾವಣಗೆರೆಯ ಮಾಜಿ ಸಂಸದ ಜಿ. ಎಂ. ಸಿದ್ದೇಶ್ವರ, ಮೈಸೂರು–ಕೊಡಗು ಕ್ಷೇತ್ರದ ಮಾಜಿ ಸಂಸದ ಪ್ರತಾಪ್ ಸಿಂಹ, ಹರಿಹರದ ಶಾಸಕ ಬಿ. ಪಿ. ಹರೀಶ್, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಆಗಸ್ಟ್‌ನಲ್ಲಿ ಬಿಜೆಪಿ–ಜೆಡಿಎಸ್ ಪಕ್ಷದ 'ಮೈಸೂರು ಚಲೋ' ಪಾದಯಾತ್ರೆಯಿಂದ ದೂರವಾಗಿದ್ದ ನಾಯಕರು ಬೆಳಗಾವಿಯ ಖಾಸಗಿ ರೆಸಾರ್ಟ್‌ನಲ್ಲಿ ಸಭೆ ನಡೆಸಿದ್ದರು.

ಈಗ ಇದೇ ನಾಯಕರು ದಾವಣಗೆರೆಯಲ್ಲಿ ಸಭೆ ಸೇರಿರುವುದು ಕುತೂಹಲಕ್ಕೆ ಕಾರಣವಾಗಿದೆ. ಆದರೆ ಬೆಳಗಾವಿಯಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದ ಕೆಲವು ನಾಯಕರು ಇಂದಿನ ಸಭೆಯಲ್ಲಿ ಪಾಲ್ಗೊಂಡಿರಲಿಲ್ಲ.

> ಬಿಜೆಪಿ ನಾಯಕರ 'ಬಳ್ಳಾರಿ ಚಲೋ' ಪಾದಯಾತ್ರೆ ನಡೆಯುತ್ತದೆಯೇ? ಇದಕ್ಕೆ ಹೈಕಮಾಂಡ್ ನಾಯಕರು ಒಪ್ಪಿಗೆ ಕೊಡಲಿದ್ದಾರೆಯೇ?. ಬಿ. ವೈ. ವಿಜಯೇಂದ್ರ, ಬಿ. ಎಸ್. ಯಡಿಯೂರಪ್ಪ ಇಲ್ಲದೇ ಈ ನಾಯಕರು ಪಾದಯಾತ್ರೆ ಕೈಗೊಳ್ಳಲಿದ್ದಾರೆಯೇ? ಎಂಬುದು ಸದ್ಯದ ಪ್ರಶ್ನೆಯಾಗಿದೆ.



ಉದಯವಾಹಿನಿ ಚಿತ್ರ

**ಅನುದಾನ ದುರುಪಯೋಗ**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅನುದಾನ ದುರುಪಯೋಗ ಪ್ರಕರಣದಲ್ಲಿ ಈಗಾಗಲೇ ತನಿಖೆ ನಡೆಯುತ್ತಿದೆ. ಹಗರಣ ಬೆಳಕಿಗೆ ಬಂದ ಬಳಿಕ ಪರಿಶಿಷ್ಟ ವರ್ಗಗಳ ಕಲ್ಯಾಣ ಖಾತೆ ಸಚಿವರಾಗಿದ್ದ ಬಿ. ನಾಗೇಂದ್ರ ರಾಜೀನಾಮೆ ನೀಡಿದ್ದಾರೆ. ಅವರನ್ನು ಜಾರಿ ನಿರ್ದೇಶನಾಲಯ ಬಂಧಿಸಿದ್ದು, ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ.

**ಕುತೂಹಲ ಮೂಡಿಸಿದ ಸಭೆ:** ಬೆಳಗಾವಿಯಲ್ಲಿ ನಡೆದ ಸಭೆಯಲ್ಲಿ ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಅಣ್ಣಾಸಾಹೇಬ್ ಜೊಲ್ಲೆ, ಜೆಡಿಎಸ್‌ನ ಎನ್. ಆರ್. ಸಂತೋಷ್ ಸೇರಿದಂತೆ ವಿವಿಧ ನಾಯಕರು ಪಾಲ್ಗೊಂಡಿದ್ದರು. ಆದರೆ ಇಂದಿನ ಸಭೆಯಲ್ಲಿ ಪ್ರಮುಖವಾಗಿ ಪ್ರತಾಪ್ ಸಿಂಹ, ಬಸನಗೌಡ ಪಾಟೀಲ್ ಯತ್ನಾಳ್, ಜಿ. ಎಂ. ಸಿದ್ದೇಶ್ವರ ಪಾಲ್ಗೊಂಡಿದ್ದರು.


ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ. ವೈ. ವಿಜಯೇಂದ್ರ ನೇತೃತ್ವದಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಬದಲಿ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಬಿಜೆಪಿ–ಜೆಡಿಎಸ್ ನಾಯಕರು ಮೈಸೂರು ಚಲೋ' ಪಾದಯಾತ್ರೆ ನಡೆಸಿದ್ದರು.

ಇದೇ ಮಾದರಿಯಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅನುದಾನ ದುರುಪಯೋಗ ಪ್ರಕರಣದ ಬಗ್ಗೆ 'ಬಳ್ಳಾರಿ ಚಲೋ' ಪಾದಯಾತ್ರೆ ನಡೆಸಲು ಉದ್ದೇಶಿಸಲಾಗಿದೆ. ಗಣೇಶ ಚತುರ್ಥಿ ಬಳಿಕ ಪಾದಯಾತ್ರೆ ನಡೆಸಲು ಬೆಳಗಾವಿಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನ ಮಾಡಲಾಗಿತ್ತು. ಈಗ ಇದೇ ಸಭೆಯ ಮುಂದುವರೆದ ಭಾಗವಾಗಿ ದಾವಣಗೆರೆಯಲ್ಲಿ ಸಭೆಯನ್ನು ನಡೆಸಲಾಗಿದೆ. ಅಚ್ಚರಿ ಎಂದರೆ ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ. ವೈ. ವಿಜಯೇಂದ್ರ, ಮತ್ತು ಮಾಜಿ ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ವಿರೋಧಿಸುವ ನಾಯಕರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು. ಕಳೆದ ವಾರ ಬೆಂಗಳೂರಿನಲ್ಲಿ ಮಾಜಿ ಸಚಿವ ಕೆ. ಎಸ್. ಈಶ್ವರಪ್ಪ ನಿವಾಸದಲ್ಲಿಯೂ ಇದೇ ಮಾದರಿಯ ಸಭೆ ನಡೆದಿತ್ತು. ರಾಜ್ಯದ ಪ್ರಮುಖ ನಾಯಕರಿಲ್ಲದೇ ನಡೆಸುವ ಇಂತಹ ಸಭೆಗಳು ರಾಜ್ಯ ಬಿಜೆಪಿಯಲ್ಲಿ ಏನಾಗುತ್ತಿದೆ? ಎಂಬ ಪ್ರಶ್ನೆಯನ್ನು ಹುಟ್ಟು ಹಾಕಿವೆ.

**ರಾಜ್ಯ ಬಿಜೆಪಿಯಲ್ಲಿ ಏನಾಗುತ್ತಿದೆ?**

# ಮಧ್ಯರಾತ್ರಿಲಿ ಆಗ್ರಾ ರಸ್ತೆಲಿ ಮಹಿಳಾ ಎಸಿಪಿ ರಿಯಾಲಿಟಿ ಚೆಕ್

## ಉತ್ತರ ಪ್ರದೇಶದ ಆಗ್ರಾ ನಗರದ ಎಸಿಪಿ ಸುಕನ್ಯಾ ಶರ್ಮಾ ಸಾಹಸ, ಆಟೋ ಚಾಲಕರ ಜೊತೆಗೂ ಒಂಟಿಯಾಗಿ ಪ್ರಯಾಣಿಸಿ ಪರೀಕ್ಷೆ



ಪೊಲೀಸ್ ಸಹಾಯವಾಣಿ, ಆಟೋ ಚಾಲಕನ ಟೆಸ್ಟ್

**ಉತ್ತರ ಪ್ರದೇಶ:** ಬಿಳಿ ಶರ್ಟ್, ಕಪ್ಪು ಪ್ಯಾಂಟ್ ಧರಿಸಿದ ಯುವತಿ ಮಧ್ಯ ರಾತ್ರಿ ಉತ್ತರ ಪ್ರದೇಶದ ಆಗ್ರಾ ನಗರದ ರಸ್ತೆಗಳಲ್ಲಿ ನಡೆದು ಸಾಗುತ್ತಿದ್ದರು. ಆಕೆಗೆ 33 ವರ್ಷ ವಯಸ್ಸು.. ವಿಶ್ವವಿಖ್ಯಾತ ಪ್ರವಾಸಿ ತಾಣ ತಾಜ್ ಮಹಲ್ ಇರುವ ಆಗ್ರಾ ನಗರದ ರಸ್ತೆಗಳಲ್ಲಿ ನಡು ರಾತ್ರಿ ಒಂಟಿಯಾಗಿ ನಡೆದು ಹೋಗುವಾಗ ಆಕೆಗೆ ಭಯವಾಯ್ತು. ಏಕೆಂದರೆ ರಸ್ತೆಯಲ್ಲಿ ಕತ್ತಲು ಆವರಿಸಿತ್ತು. ಆಕೆಗೆ ಭಯವಾಯ್ತು.

**112 ಸಹಾಯವಾಣಿ ನೆರವಿಗೆ ಬರುತ್ತಾ?:** ಆಗ್ರಾ ಕಂಟೋನ್‌ಮೆಂಟ್ ರೈಲ್ವೆ ನಿಲ್ದಾಣದ ಹೊರಗಿದ್ದ ಆಕೆ ಕೂಡಲೇ ಪೊಲೀಸರ 112 ಸಹಾಯವಾಣಿಗೆ ಕರೆ ಮಾಡಿದರು. ಈ ವೇಳೆ ಕರೆ ಸ್ವೀಕರಿಸಿದ ಆಪರೇಟರ್, ಯುವತಿಗೆ ಸುರಕ್ಷಿತ ಸ್ಥಳಕ್ಕೆ ಹೋಗಿ ನಿಲ್ಲುವಂತೆ ಸೂಚನೆ ನೀಡಿದರು. ಆಕೆ ಎಲ್ಲಿದ್ದಾರೆ? ಯಾವ ರಸ್ತೆ ಇತ್ಯಾದಿ ಮಾಹಿತಿ ಕಲೆ ಹಾಕಿದರು. ಕೂಡಲೇ ಪೊಲೀಸ್ ಗಸ್ತು ಪಡೆಗೆ ಸುದ್ದಿ ಮುಟ್ಟಿಸಿದರು. ಕೂಡಲೇ ಪೊಲೀಸ್ ಗಸ್ತು ಪಡೆ ಸ್ಥಳಕ್ಕೆ ಧಾವಿಸಿತ್ತು. ಪೊಲೀಸ್ ಸಹಾಯವಾಣಿಗೆ ಕರೆ ಮಾಡಿದ ಕೆಲವೇ ನಿಮಿಷಗಳಲ್ಲಿ ಯುವತಿ ಎದುರು ಪೊಲೀಸ್ ಜೀಪ್ ಬಂದು ನಿಂತಿತ್ತು. ಜೀಪ್‌ನಿಂದ ಕೆಳಗಿಳಿದ ಸಿಬ್ಬಂದಿ ಯುವತಿಯನ್ನು ನೋಡಿ, ಎದೆಯುಬ್ಬಿಸಿ ಸೆಲ್ಯೂಟ್ ಹೊಡೆದರು! ಏಕೆಂದರೆ ಆಕೆ ಸಾಮಾನ್ಯ ಯುವತಿಯಲ್ಲ, ಸಹಾಯಕ ಪೊಲೀಸ್ ಆಯುಕ್ತೆ ಸುಕನ್ಯಾ ಶರ್ಮಾ. ಮೇಡಂ ನೀವು ಇಷ್ಟೊತ್ತಿನಲ್ಲಿ ಇಲ್ಲಿ ಏನು ಮಾಡುತ್ತಿದ್ದೀರಿ ಎಂದು ಗಸ್ತು ಪಡೆ ಸಿಬ್ಬಂದಿ ಕೇಳಿದಾಗ, ತಾವು ಆಗ್ರಾ ನಗರದ ಮಹಿಳೆಯರ ಸುರಕ್ಷತೆ, ಪೊಲೀಸ್ ಸಹಾಯವಾಣಿ ಹಾಗೂ ರಾತ್ರಿ ಪಾಳಿ ಗಸ್ತು ಪಡೆಯ ರಿಯಾಲಿಟಿ ಚೆಕ್ ನಡೆಸಿದ್ದಾಗಿ ಹೇಳಿದರು.

**ಇಷ್ಟಕ್ಕೇ ನಿಲ್ಲಲಿಲ್ಲ ಲೇಡಿ ಎಸಿಪಿ ಸಾಹಸ:** ಪೊಲೀಸ್ ಸಹಾಯವಾಣಿ ಹಾಗೂ ರಾತ್ರಿ ಪಾಳಿ ಗಸ್ತು ಪಡೆಯ ಕಾರ್ಯಕ್ಷಮತೆ ಕುರಿತು ಪ್ರತ್ಯಕ್ಷ ವರದಿ ಪಡೆದ ಬಳಿಕ ಅವರ ಕಾರ್ಯಕ್ಷಮತೆಗೆ ತಲೆದೂಗಿದ ಎಸಿಪಿ, ಬಳಿಕ ಗಸ್ತು ವಾಹನವನ್ನು ಮುಂದಕ್ಕೆ ಸಾಗಲು ಹೇಳಿ, ರಸ್ತೆಯಲ್ಲಿ ಒಂಟಿಯಾಗಿ ನಡೆದು ಸಾಗಿದರು. ಅಲ್ಲೊಂದು ಆಟೋ ಕಂಡು ಬಂತು. ತಮ್ಮ ಮನೆಗೆ ತ ಮ್ಮ ನ್ನು ಡ್ರಾಪ್ ಮಾಡುವಂತೆ ಆಟೋ ಚಾಲಕನಿಗೆ ವಿಳಾಸ ಹೇಳಿದರು. ಈ ವೇಳೆ ಆಟೋ ಚಾಲಕ ದರ ಎಷ್ಟಾಗುತ್ತದೆ ಎಂದು ಹೇಳಿದ. ಆಟೋ ಹೊರಟಿತು.

ಆಟೋ ಸಾಗುತ್ತಿರುವ ವೇಳೆ ಆತನ ಬಳಿ ಮಾತಿಗಿಳಿದ ಎಸಿಪಿ ಸುಕನ್ಯಾ ಶರ್ಮಾ, ತಾವು ಪೊಲೀಸ್ ಅಧಿಕಾರಿ ಎಂಬ ಗುಟ್ಟು ಬಿಟ್ಟುಕೊಡಲಿಲ್ಲ. ಆದರೆ, ಆಗ್ರಾ ನಗರದಲ್ಲಿ ಮಹಿಳೆಯರ ಸುರಕ್ಷತೆ ಹೇಗಿದೆ? ರಾತ್ರಿ ವೇಳೆ ಸುರಕ್ಷಿತವೇ? ಹೀಗೆ ಹಲವು ಪ್ರಶ್ನೆಗಳನ್ನ ಕೇಳಿದರು. ಜೊತೆಯಲ್ಲೇ ಆಟೋ ಚಾಲಕ ಸಮವಸ್ತ್ರ ಧರಿಸಿರಲಿಲ್ಲ. ಏಕೆ ಎಂದು ಕೇಳಿದಾಗ ಆತ ಈಗಷ್ಟೇ ಪೊಲೀಸರು ನನ್ನ ಪರಿಶೀಲನೆ ಮುಗಿಸಿದ್ದಾರೆ.ಎಸಿಪಿ ಸುಕನ್ಯಾ ಶರ್ಮಾ ಅವರ ಈ ಏಕಾಂಗಿ ಸಾ ಹಸದ ಕುರಿತಾಗಿ ಸಾಮಾಜಿಕ ಕಾರ್ಯಕರ್ತೆ ದೀಪಿಕಾ ನಾರಾಯಣ್ ಭಾರದ್ವಾಜ್ ಅವರು ಸಾಮಾಜಿಕ ಜಾಲತಾಣಗಳಲ್ಲಿ ಬರೆದುಕೊಳ್ಳುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ. ಮಹಿಳಾ ಸುರಕ್ಷತೆ ವಿಚಾರವಾಗಿ ಮೊದಲ ನಿಖರ ಹೆಜ್ಜೆ ಎಂದು ಅವರು ಬರೆದುಕೊಂಡಿದ್ದಾರೆ.

**ವಿನೂತನ ಸಾಹಸವೊಂದಕ್ಕೆ ಕೈ**

**ಮಧ್ಯ ರಾತ್ರಿಯಲ್ಲಿ ಒಂಟಿ ಹೆಣ್ಣು ಯಾವುದೇ ಭಯ ಅಥವಾ ಆತಂಕವಿಲ್ಲದೆ ರಸ್ತೆಯಲ್ಲಿ ಓಡಾಡುವಂತಹ ಪರಿಸ್ಥಿತಿ ದೇಶದಲ್ಲಿ ನಿರ್ಮಾಣವಾದಾಗ ಮಾತ್ರ ಭಾರತ ದೇಶಕ್ಕೆ ಸ್ವಾತಂತ್ರ್ಯ ಬಂದಂತೆ ಎಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಹೇಳಿದ್ದರು. ಗಾಂಧೀಜಿ ಅವರ ಕನಸಾದ ಮಹಿಳಾ ಸುರಕ್ಷತೆಯನ್ನು ನನಸು ಮಾಡುವ ನಿಟ್ಟಿನಲ್ಲಿ ಉತ್ತರ ಪ್ರದೇಶದ ಆಗ್ರಾ ನಗರದ ಮಹಿಳಾ ಎಸಿಪಿ ವಿನೂತನ ಸಾಹಸವೊಂದಕ್ಕೆ ಕೈ ಹಾಕಿದ್ದರು. ಆ ಸಾಹಸ ಏನು?**

# ವಿಶ್ವಸಂಸ್ಥೆಯಲ್ಲಿ ''ಪಾಪಿ''ಸ್ತಾನಕ್ಕೆ ಹಿಗ್ಗಾಮುಗ್ಗಾ ಜಾಡಿಸಿದ ಜೈಶಂಕರ್



**ವಿಶ್ವಸಂಸ್ಥೆ:** ಗಡಿಯಾಚೆಗಿನ ಭಯೋತ್ಪಾದನೆಗೆ ತಕ್ಕ ಪ್ರತೀಕಾರ ಎದುರಿಸಬೇಕಾಗುತ್ತದೆ ಎಂದು ಪಾಕಿಸ್ತಾನಕ್ಕೆ ಭಾರತೀಯ ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಖಡಕ್ ವಾರ್ನಿಂಗ್ ನೀಡಿದ್ದಾರೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದಲ್ಲಿ ಮಾತನಾಡಿದ ಅವರು, ಇತರ ದೇಶಗಳ ಮೇಲೆ ಭಯೋತ್ಪಾದಕ ದಾಳಿ ನಡೆಸಿದ ಪರಿಣಾಮ ಪಾಕಿಸ್ತಾನ ಈಗ ಕರ್ಮ ಎದುರಿಸುತ್ತಿದೆ ಎಂದು ಟೀಕಿಸಿದರು.

ಭಾರತದ ನಿಲುವನ್ನು ನಾನು ಸ್ಪಷ್ಟಪಡಿಸುತ್ತೇನೆ. ಪಾಕ್ನ ಗಡಿಯಾಚೆಗಿನ ಭಯೋತ್ಪಾದನಾ ನೀತಿ ಎಂದಿಗೂ ಯಶಸ್ವಿಯಾಗುವುದಿಲ್ಲ. ಅದಕ್ಕೆ ಖಂಡಿತಾಗಿಯೂ ತಕ್ಕ ಶಾಸ್ತಿ ಆಗಲಿದೆ ಎಂದು ಜೈಶಂಕರ್ ಎಚ್ಚರಿಕೆ ಕೊಟ್ಟರು. ಈ ಮೂಲಕ ಜಾಗತಿಕ ವೇದಿಕೆಯಲ್ಲೇ ಭಾರತ ಕಠಿಣ ಸಂದೇಶ ರವಾನಿಸಿದೆ.

ಪಾಕಿಸ್ತಾನ ಪ್ರಧಾನಿ ಮುಹಮ್ಮದ್ ಶೆಹಬಾಜ್ ಷರೀಫ್ ಅವರು ವಿಶ್ವಸಂಸ್ಥೆಯಲ್ಲಿ ಶುಕ್ರವಾರ ಜಮ್ಮು-ಕಾಶ್ಮೀರ ವಿಚಾರ ಪ್ರಸ್ತಾಪಿಸಿದ್ದರು. ತನ್ನ ಜನರಲ್ಲಿ ಮತಾಂಧತೆಯನ್ನು ಹುಟ್ಟುಹಾಕಿದ ದೇಶದಲ್ಲಿ, ಅದರ ಜಿಡಿಪಿಯನ್ನು ತೀವ್ರಗಾಮಿ ಮತ್ತು ಅದರ ರಫ್ತು ಪ್ರಮಾಣವನ್ನು ಭಯೋತ್ಪಾದನೆಯ ಮೂಲಕ ಮಾತ್ರ ಅಳೆಯಲು ಸಾಧ್ಯವಾಗುತ್ತದೆ ಎಂದು ಅವರು ವಾಗ್ದಾಳಿ ನಡೆಸಿದರು.

ಅನೇಕ ದೇಶಗಳು ತಮ್ಮ ನಿಯಂತ್ರಣಕ್ಕೆ ಮೀರಿದ ಪರಿಸ್ಥಿತಿಗಳಿಂದಾಗಿ ಆರ್ಥಿಕವಾಗಿ ಹಿಂದುಳಿದಿವೆ. ಆದರೆ ಕೆಲ ದೇಶಗಳು ವಿನಾಶಕಾರಿ ಪರಿಣಾಮಗಳ ಪ್ರಜ್ಞಾಪೂರ್ವಕ ಆಯ್ಕೆಗಳನ್ನು ಮಾಡುತ್ತವೆ. ನಮ್ಮ ನೆರೆಯ ರಾಷ್ಟ್ರವಾದ ಪಾಕಿಸ್ತಾನವೂ ಇದಕ್ಕೆ ಒಂದು ಪ್ರಮುಖ ನಿದರ್ಶನ. ದುರದೃಷ್ಟವಶಾತ್, ಅವರ ದುಷ್ಕೃತ್ಯಗಳು ಇತರರ ಮೇಲೂ ಪರಿಣಾಮ ಬೀರುತ್ತವೆ, ವಿಶೇಷವಾಗಿ ನೆರೆಹೊರೆಯವರ ಮೇಲೆ ಪರಿಣಾಮ ಬೀರುತ್ತವೆ ಎಂದು ಭಯೋತ್ಪಾದನೆ ಉತ್ತೇಜಿಸಿದ್ದರಿಂದ ಆಂತರಿಕವಾಗಿ ಎದುರಿಸುತ್ತಿರುವ ಪರಿಣಾಮಗಳ ಬಗ್ಗೆ ಜೈ ಶಂಕರ್ ವಿವರಿಸಿದರು.

ಜಾಗತಿಕ ಭಯೋತ್ಪಾದಕರನ್ನು ಅನುಮೋದಿಸುವುದಕ್ಕೆ ರಾಜಕೀಯ ಕಾರಣಗಳಿಗಾಗಿ ವಿಶ್ವಸಂಸ್ಥೆ ಅಡ್ಡಿಪಡಿಸಬಾರದು ಎಂದು ಚೀನಾ ಹೆಸರು ಹೇಳದೆ ತಿವಿದರು. ಭಯೋತ್ಪಾದನೆಯು ಜಾಗತಿಕ ಎಲ್ಲಾ ನಿಲುವುಗಳಿಗೂ ವಿರೋಧಿಯಾಗಿದೆ. ಆದ್ದರಿಂದ ಅದರ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳನ್ನು ದೃಢವಾಗಿ ವಿರೋಧಿಸಬೇಕು ಎಂದು ಜೈಶಂಕರ್ ಪ್ರತಿಪಾದಿಸಿದರು. ಜಮ್ಮು ಕಾಶ್ಮೀರದಲ್ಲಿ ಚುನಾವಣೆಗೆ ಅಡ್ಡಿಪಡಿಸಲು ಪಾಕಿಸ್ತಾನ ಭಯೋತ್ಪಾದನೆಯನ್ನು ಬಳಸುತ್ತಿದೆ ಎಂದು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರ ಆರೋಪಗಳಿಗೆ ವಿಶ್ವಸಂಸ್ಥೆಯಲ್ಲಿನ ಭಾರತೀಯ ರಾಜತಾಂತ್ರಿಕ ಅಧಿಕಾರಿ ಭಾವಿಕಾ ಮಂಗಳಾನಂದ ಪ್ರತ್ಯುತ್ತರ ನೀಡಿದ್ದಾರೆ.

> **ಇತರ ದೇಶಗಳ ಮೇಲಿನ ಭಯೋತ್ಪಾದಕ ದಾಳಿಗಳು ಮತ್ತು ಭಯೋತ್ಪಾದನೆಯನ್ನೇ ರಫ್ತು ಮಾಡಿರುವ ಪಾಕಿಸ್ತಾನ ಸದ್ಯ ಅದೇ ಭಯೋತ್ಪಾದನೆಗೆ ತಾನೇ ತುತ್ತಾಗುತ್ತಿದೆ. ಇದರಿಂದ ಆ ದೇಶ ಬೇರೆ ದೇಶದ ಮೇಲೆ ಗೂಬೆ ಕೂರಿಸುವಂತಿಲ್ಲ. ಇದು ಕರ್ಮ**
> **-ಎಸ್.ಜೈಶಂಕರ್, ಸಚಿವ**

# ಗುಜರಾತ್‌ನ ಸೋಮನಾಥ ದೇವಾಲಯದ ಸುತ್ತ ಅತಿಕ್ರಮಣವಾಗಿದ್ದ 9 ಮಸೀದಿ, ದರ್ಗಾಗಳು ತೆರವು



**ಗಾಂಧೀನಗರ:** ಗುಜರಾತ್‌ನ ಸೋಮನಾಥ ದೇವಾಲಯದ ಸುತ್ತ ಅತಿಕ್ರಮಣ ವಿರುದ್ಧ ಕಾರ್ಯಾಚರಣೆ ನಡೆಸಲಾಗಿದ್ದು, 9 ಮಸೀದಿ ಮತ್ತು ದರ್ಗಾ ಸೇರಿದಂತೆ 45 ವಸತಿ ಕಟ್ಟಡಗಳನ್ನು ತೆರವುಗೊಳಿಸಲಾಗಿದೆ. ಸೋಮನಾಥ ದೇವಾಲಯದ ಬಳಿಯ ಸರ್ಕಾರಿ ಭೂಮಿಯಲ್ಲಿ ಅಕ್ರಮ ಕಟ್ಟಡಗಳ ನಿರ್ಮಾಣವಾಗಿತ್ತು.

ಈ ಭೂಮಿಯಲ್ಲಿ ಐವತ್ತಕ್ಕೂ ಹೆಚ್ಚು ಕಟ್ಟಡಗಳು ಮತ್ತು ಧಾರ್ಮಿಕ ಕೇಂದ್ರಗಳನ್ನು ನಿರ್ಮಿಸಲಾಗಿದೆ. ಎಲ್ಲಾ ಅತಿಕ್ರಮಣ ತೆರವುಗೊಳಿಸುವ ಕಾರ್ಯಾಚರಣೆ ನಡೆಸಲಾಗುತ್ತಿದೆ.

ಜಿಲ್ಲಾಧಿಕಾರಿ ಡಿ.ಡಿ. ಸೋಮನಾಥದಲ್ಲಿನ ಅಕ್ರಮ ಒತ್ತುವರಿಯನ್ನು ತೆರವು ಮಾಡುವಂತೆ ಆಡಳಿತದಿಂದ ಬಹಳ ಹಿಂದೆಯೇ ನೋಟಿಸ್ ನೀಡಲಾಗಿತ್ತು ಎಂದು ಜಡೇಜಾ ಹೇಳಿದ್ದಾರೆ. ಆದರೆ, ಈ ಎಚ್ಚರಿಕೆಗಳ ಹೊರತಾಗಿಯೂ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ. ಉಜ್ಜಯಿನಿ ಕಾರಿಡಾರ್ ನಂತೆಯೇ, ಸೋಮನಾಥದಲ್ಲಿ ಹೊಸ ಕಾರಿಡಾರ್ ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ. ಈಗಾಗಲೇ ಕೇಂದ್ರ ಸರ್ಕಾರದಿಂದ ಅನುಮೋದನೆಯನ್ನು ನೀಡಲಾಗಿದೆ. ಸೋಮನಾಥ ದೇವಾಲಯದ ವಿವಿಧ ಅಭಿವೃದ್ಧಿ ಯೋಜನೆಗಳು ಪ್ರಗತಿಯಲ್ಲಿವೆ.

> **1.5 ಕಿಮೀ ದೂರದಲ್ಲಿರುವ ಸೋಮನಾಥ ದೇವಾಲಯದ ಬಳಿ 103 ಎಕರೆ ಸರ್ಕಾರಿ ಭೂಮಿಯನ್ನು ಆಕ್ರಮಿಸಿಕೊಂಡಿರುವುದು ಪೊಲೀಸ್ ಮತ್ತು ಆಡಳಿತಾತಕ ಕಾರ್ಯಾಚರಣೆಗೆ ಕಾರಣವಾಯಿತು. ಈ ಅತಿಕ್ರಮಣ ವಿರೋಧಿ ಕಾರ್ಯಾಚರಣೆ ಭಾಗವಾಗಿ 45 ವಸತಿ ಕಟ್ಟಡಗಳ ಜೊತೆಗೆ ಒಂಬತ್ತು ಧಾರ್ಮಿಕ ಸ್ಥಳಗಳನ್ನು ಕೆಡವಲಾಯಿತು. ಸುಮಾರು 320 ಕೋಟಿ ಮೌಲ್ಯದ ಅಂದಾಜು 102 ಎಕರೆ ಭೂಮಿ ಒತ್ತುವರಿ ತೆರವುಗೊಳಿಸಲಾಗಿದೆ.**

# ಚುನಾವಣಾ ಬಾಂಡ್ ಹಗರಣ; ಸಚಿವೆ ನಿರ್ಮಲಾ ರಾಜೀನಾಮೆ ನೀಡಲಿ: ಕಾಂಗ್ರೆಸ್



**ನವದೆಹಲಿ:** ಚುನಾವಣಾ ಬಾಂಡ್ ಮೂಲಕ ಸುಲಿಗೆ ಮಾಡಿದ್ದಾರೆ' ಎಂದು ಆರೋಪಿಸಿ ನೀಡಿದ್ದ ದೂರಿನ ಅನ್ವಯ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿರುದ್ಧ ಬೆಂಗಳೂರಿನಲ್ಲಿ ಎಫ್‌ಐಆರ್ ದಾಖಲಾಗಿದ್ದು ಅವರು ರಾಜೀನಾಮೆ ನೀಡಬೇಕು ಎಂದು ಕಾಂಗ್ರೆಸ್ ಭಾನುವಾರ ಒತ್ತಾಯಿಸಿದೆ. ಈ ಬಗ್ಗೆ ಕಾಂಗ್ರೆಸ್ ವಕ್ತಾರ, ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಹಾಗೂ ಪಕ್ಷದ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು ಇಲ್ಲಿ ಪತ್ರಿಕಾಗೋಷ್ಠಿ ನಡೆಸಿದರು.

ಬಿಜೆಪಿಯು ಪ್ರಜಾಪ್ರಭುತ್ವವನ್ನು ಕಡೆಗಣಿಸಿದೆ. ಇಬಿಎಸ್ ಎಂದರೆ, ಎಕ್ಸ್‌ಟಾರ್ಷನ್ ಬಿಜೆಪಿ ಸ್ಕೀಮ್ ಎಂದು ಅಭಿಷೇಕ್ ಮನು ಸಿಂಘ್ವಿ ಲೇವಡಿ ಮಾಡಿದರು. ಸಿನಿಮಾ 'ಚುನಾವಣಾ ಬಾಂಡ್‌ಗಳ ಮೂಲಕ ನಾಲ್ಕು ರೀತಿಯಲ್ಲಿ ಸುಲಿಗೆ ಮಾಡುವ ಪಿತೂರಿ ಮಾಡಲಾಗಿತ್ತು. ಅವುಗಳೆಂದರೆ: ಅನುಕೂಲ ಮಾಡಿಕೊಡುವ ಮುಂಚೆ ಮಾಡುವ ಸುಲಿಗೆ, ಅನುಕೂಲ ಮಾಡಿಕೊಟ್ಟ ಮೇಲೆ ಸುಲಿಗೆ ಮಾಡುವುದು, ಇ.ಡಿ, ಐ.ಟಿ ದಾಳಿಗೂ ಮುನ್ನ ಮಾಡುವ ಸುಲಿಗೆ, ನಕಲಿ ಕಂಪನಿಗಳ ಮೂಲಕ ಮಾಡುವ ಸುಲಿಗೆ. ಹೀಗೆ ವಿವಿಧ ರೀತಿಯಲ್ಲಿ ಉದ್ಯಮಿಗಳಿಂದ ಸುಲಿಗೆ ಮಾಡಲಾಗಿದೆ' ಎಂದು ಜೈರಾಮ್ ರಮೇಶ್ ಹೇಳಿದರು. 'ಈ ಯೋಜನೆ ಕುರಿತು ಸುಪ್ರೀಂ ಕೋರ್ಟ್ ನೇತೃತ್ವದಲ್ಲಿ ಎಸ್‌ಐಟಿ ತನಿಖೆ ನಡೆಯಬೇಕು ಎಂದು ನಾವು ಬಹಳ ಹಿಂದಿನಿಂದಲೇ ಆಗ್ರಹಿಸಿದ್ದೇವೆ. ಈಗಲೂ ಇದೇ ರೀತಿಯ ಒತ್ತಾಯ ಮಾಡುತ್ತೇವೆ. ಬೆಂಗಳೂರಿನಲ್ಲಿ ದಾಖಲಾದ ದೂರಿಗೂ ನಮ್ಮ ಪಕ್ಷಕ್ಕೂ ಯಾವುದೇ ಸಂಬಂಧವಿಲ್ಲ' ಎಂದರು.

> **ರಾಜಕೀಯವಾಗಿ ಕಾನೂನಾತ್ಮಕವಾಗಿ ಹಾಗೂ ನೈತಿಕವಾಗಿ ಹೊಣೆ ಹೊತ್ತು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು.**
> **-ಜೈರಾಮ್ ರಮೇಶ್, ಪ್ರಧಾನ ಕಾರ್ಯದರ್ಶಿ**

# ನಸ್ರುಲ್ಲಾ ಹತ್ಯೆ ಖಂಡಿಸಿ ಪ್ರಚಾರ ರದ್ದು



**ಜಮ್ಮು:** ಇಸ್ರೇಲ್ ಸೇನೆ ಲೆಬನಾನ್‌ನಲ್ಲಿ ಹಿಜ್ಬುಲ್ಲಾ ಉಗ್ರ ಸಂಘಟನೆ ಮುಖ್ಯಸ್ಥ ಹಸನ್ ನಸ್ರುಲ್ಲಾ ಹತ್ಯೆ ವಿರೋಧಿಸಿ ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಒಂದು ದಿನದ ಚುನಾವಣಾ ಪ್ರಚಾರ ರದ್ದುಗೊಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಅವರು ಜಮ್ಮು, ಕಾಶ್ಮೀರದಲ್ಲಿ ನಡೆಯಲಿರುವ ಕೊನೆಯ ಹಂತದ ಚುನಾವಣಾ ಪ್ರಚಾರ ರದ್ದುಗೊಳಿಸಿರುವುದಾಗಿ ಪ್ರಕಟಿಸಿದ್ದಾರೆ. ಎಕ್ಸ್ ಖಾತೆಯಲ್ಲಿ ಅವರು ಪಿಡಿಪಿ ಪಕ್ಷ ಪ್ಯಾಲೆಸ್ತೀನ್ ಮತ್ತು ಲೆಬನಾನ್ ಜನರೊಂದಿಗೆ ನಿಂತಿದೆ ಎಂದು ಹೇಳುವ ಮೂಲಕ ತನ್ನ ಪ್ರಚಾರವನ್ನು ರದ್ದುಗೊಳಿಸಿದ್ದಾರೆ

''ಲೆಬನಾನ್ ಮತ್ತು ಗಾಜಾದ ಹುತಾತ್ಮರಿಗೆ ವಿಶೇಷವಾಗಿ ಹಸನ್ ನಸ್ರುಲ್ಲಾ ಅವರೊಂದಿಗೆ ಒಗ್ಗಟ್ಟು ಸೂಚಿಸಲು ಇಂದು ಪ್ರಚಾರ ಅಭಿಯಾನ ರದ್ದುಗೊಳಿಸುತ್ತಿದ್ದೇನೆ. ಅಪಾರ ದುಃಖ ಮತ್ತು ಅನುಕರಣೀಯ ಪ್ರತಿರೋಧದ ಸಮಯದಲ್ಲಿ ನಾವು ಪ್ಯಾಲೆಸ್ತೀನ್ ಮತ್ತು ಲೆಬನಾನ್ ಜನರೊಂದಿಗೆ ನಿಲ್ಲುತ್ತೇವೆ ಎಂದಿದ್ದಾರೆ. ಉಗ್ರರ ಹತ್ಯೆಯನ್ನು ವಿರೋಧಿಸಿ ಇಂದು ಜಮ್ಮು ಮತ್ತು ಕಾಶ್ಮೀರದ ಕೆಲವು ಭಾಗಗಳಲ್ಲಿ ಪ್ರತಿಭಟನೆಗೆ ಕರೆ ನೀಡಲಾಗಿದೆ. ಈ ನಡುವೆ ಮೆಹಬೂಬ ಮುಫ್ತಿ ಅವರು ಹಿ ಜ್ಬುಲ್ಲಾ ಉಗ್ರ ಸಂಘಟನೆಯ ಮುಖ್ಯಸ್ಥನ ಹತ್ಯೆ ಹಿನ್ನೆಲೆಯಲ್ಲಿ ಪ್ರಚಾರ ರದ್ದು ಮಾಡಿದ್ದಾರೆ.

ನಸ್ರುಲ್ಲಾ ಅವರ ಮರಣದ ಘೋಷಣೆಯ ನಂತರ ಹಿಜ್ಬುಲ್ಲಾದ ಅಲ್-ಮನರ್ ಟಿವಿ ಕುರಾನ್ ಪದ್ಯಗಳನ್ನು ಪ್ರಸಾರ ಮಾಡಲು ಪ್ರಾರಂಭಿಸಿತು. ನಸ್ರಲ್ಲಾಹ್ ''ಅವರ ಸಹ ಹುತಾತ್ಮರನ್ನು ಸೇರಿಕೊಂಡಿದ್ದಾರೆ'' ಎಂದು ಗುಂಪು ಹೇಳಿದೆ.

ಬೈರುತ್‌ನ ಐದು ಗಂಟೆಗಳ ನಿರಂತರ ಸ್ಟ್ರೈಕ್‌ಗಳು ಬೈರುತ್‌ನ ದಾಳಿಯ ಮೇಲೆ ನಸ್ರುಲ್ಲಾವನ್ನು ಗುರಿಯಾಗಿಸಿ ಕೊಂಡು, ಹೆಜ್ಬೊಲ್ಲಾಹ್‌ನೊಂದಿಗಿನ ಸಂಘರ್ಷದ ಸಮಯದಲ್ಲಿ ನಗರದ ಮೇಲೆ ಇಸ್ರೇಲ್‌ನಿಂದ ಅತ್ಯಂತ ಶಕ್ತಿಶಾಲಿಯಾಗಿದೆ, ಈ ಸಂಘರ್ಷವು ನಿಯಂತ್ರಣದಿಂದ ಹೊರಗುಳಿಯಬಹುದೆಂಬ ಭಯ ತೀವ್ರವಾಗಿ ಹೆಚ್ಚಿಸಿದೆ.

> **ಇತ್ತೀಚಿನ ವಾರಗಳಲ್ಲಿ ಇಸ್ರೇಲ್ ಮತ್ತು ಲೆಬನಾನ್ ದಾಳಿಗಳು ಮತ್ತು ಪ್ರತಿದಾಳಿಗಳಲ್ಲಿ ತೊಡಗಿದ್ದರಿಂದ ಮಧ್ಯಪ್ರಾಚ್ಯ ಪೂರ್ಣ ಪ್ರಮಾಣದ ಯುದ್ಧದ ಅಂಚಿನಲ್ಲಿದೆ. ಮೂರು ದಶಕಗಳಿಗೂ ಹೆಚ್ಚು ಕಾಲ ಉಗ್ರಗಾಮಿ ಗುಂಪನ್ನು ಮುನ್ನಡೆಸಿದ್ದ ನಸ್ರಲ್ಲಾನನ್ನು ಹತ್ಯೆ ಮಾಡಲಾಗಿದ್ದು ಹೊಸ ಸಂಘರ್ಷಕ್ಕೆ ನಾಂದಿ ಹಾಡಿದೆ.**

# ಕಾಂಗ್ರೆಸ್ ಎಂದರೆ ಭ್ರಷ್ಟಾಚಾರ, ದುರಾಡಳಿತ, ಅಪರಾಧೀಕರಣ: ನಡ್ಡಾ




**ಚಂಡೀಗಢ:** ಹರಿಯಾಣ ವಿಧಾನಸಭೆ ಚುನಾವಣೆ ಹಿನ್ನೆಲೆ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು ಬಿರುಸಿನ ಪ್ರಚಾರದಲ್ಲಿ ತೊಡಗಿವೆ. ಕಾಂಗ್ರೆಸ್ ಎಂದರೆ ಭ್ರಷ್ಟಾಚಾರ, ದುರಾಡಳಿತ, ಅಪರಾಧೀಕರಣ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಭಾನುವಾರ ವಾಗ್ದಾಳಿ ನಡೆಸಿದ್ದಾರೆ. ಚುನಾವಣಾ ರ‍್ಯಾಲಿಯಲ್ಲಿ ಮಾತನಾಡಿದ ಅವರು, ಎರಡೂ ವರ್ಷಗಳಿಂದ ಅಧಿಕಾರದಲ್ಲಿದ್ದರೂ ಚುನಾವಣೆ ಸಂದರ್ಭದಲ್ಲಿ ನೀಡಲಾಗಿದ್ದ ಭರವಸೆಗಳನ್ನು ಈಡೇರಿಸಲು ಈವರೆಗೂ ಸಾಧ್ಯವಾಗಲಿಲ್ಲ. ಕಾಂಗ್ರೆಸ್ ನಾಯಕರು ಕೇವಲ ಹಗರಣದಲ್ಲಿ ತೊಡಗಿದ್ದಾರೆ. ರೈತರ ಭೂಮಿಗಳನ್ನೂ ಕಬಳಿಸಿದ್ದಾರೆ ಎಂದು ಕಿಡಿಕಾರಿದ್ದಾರೆ. ಕಾಂಗ್ರೆಸ್ ಯಾವ ಹಗರಣದಲ್ಲಿ ಭಾಗಿಯಾಗಿಲ್ಲ?, ಕಲ್ಲಿದ್ದಲು ಹಗರಣ, ಜಲಾಂತರ್ಗಾಮಿ ಹಗರಣ, ಅಕ್ಕಿ ಹಗರಣ, ಟ್ಯಾಂಕ್ ಹಗರಣ, ಹೆಲಿಕಾಪ್ಟರ್ ಹಗರಣ, 2-ಜಿ ಹಗರಣ ಸೇರಿದಂತೆ ಪ್ರತಿಯೊಂದು ಹಗರಣದಲ್ಲೂ ಭಾಗಿಯಾಗುವ ಮೂಲಕ ಭ್ರಷ್ಟಾಚಾರದಲ್ಲೇ ತೊಡಗಿದೆ' ಎಂದು ವ್ಯಂಗ್ಯವಾಡಿದ್ದಾರೆ.

ಸರ್ಕಾರಿ ಉದ್ಯೋಗಗಳಲ್ಲಿ 'ಖರ್ಚಿ-ಪರ್ಚಿ' ಮೂಲಕ ಉದ್ಯೋಗದಲ್ಲೂ ಭ್ರಷ್ಟಾಚಾರ ನಡೆದಿದೆ. ಆದರೆ ಭವಿಷ್ಯದ ಭರವಸೆ ಹೊಂದಿರುವ ಯುವಕರು ಸರದಿ ಸಾಲಿನಲ್ಲಿಯೇ ನಿಂತಿದ್ದಾರೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಎಂದರೆ ಭ್ರಷ್ಟಾಚಾರ, ದುರಾಡಳಿತ, ಅಪರಾಧೀಕರಣ, ವೋಟ್ ಬ್ಯಾಂಕ್ ರಾಜಕಾರಣ ಎಂದಿರುವ ನಡ್ಡಾ, ಮತ್ತೆ ನಿಮಗೆ ಆ ದಿನಗಳು ಬೇಕೆ' ಎಂದು ಪ್ರಶ್ನಿಸಿದ್ದಾರೆ.

> **ಹತ್ತು ವರ್ಷಗಳ ಹಿಂದೆ ಭಾರತವನ್ನು ಭ್ರಷ್ಟ ರಾಷ್ಟ್ರ ಎಂದು ಕರೆಯಲಾಗಿತ್ತು, ಆದರೆ ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಭಾರತ ವಿಶ್ವದ ಆರ್ಥಿಕತೆಯಲ್ಲಿ 11ನೇ ಸ್ಥಾನದಿಂದ ಐದನೇ ಸ್ಥಾನಕ್ಕೆ ಏರಿಕೆ ಕಂಡಿತ್ತು. ಮುಂಬರುವ ಕಾಲಘಟ್ಟದಲ್ಲಿ ಭಾರತವು ವಿಶ್ವದ ಮೂರನೇ ಆರ್ಥಿಕ ಶಕ್ತಿಯಾಗಲಿದೆ ಎಂದು ತಿಳಿಸಿದ್ದಾರೆ.**

# ಪ್ರಧಾನಿ ಮೋದಿ ಅವರನ್ನು ಅಧಿಕಾರದಿಂದ ಕೆಳಗಿಳಿಸುವವರೆಗೂ ಬದುಕಿರುತ್ತೇನೆ: ಖರ್ಗೆ



**ಜಮ್ಮು:** 'ಜಮ್ಮು, ಕಾಶ್ಮೀರದ ರಾಜ್ಯ ಸ್ಥಾನಮಾನವನ್ನು ಮರುಸ್ಥಾಪಿಸಲು ನಮ್ಮ ಹೋರಾಟ ಮುಂದುವರಿಯಲಿದೆ. ಆ ಹೋರಾಟವನ್ನು ನಾವು ಕೈಬಿಡುವುದಿಲ್ಲ. ನನಗೀಗ 83 ವರ್ಷ. ನಾನು ಅಷ್ಟು ಬೇಗ ಸಾಯುವುದಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಧಿಕಾರದಿಂದ ಕೆಳಗಿಳಿಸುವವರೆಗೂ ಬದುಕಿರುತ್ತೇನೆ' ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರದಲ್ಲಿ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಕಥುವಾ ಜಿಲ್ಲೆಯಲ್ಲಿ ಕಾಂಗ್ರೆಸ್ ಸಮಾವೇಶವನ್ನು ಉದ್ದೇಶಿಸಿ ಖರ್ಗೆ ಭಾನುವಾರ ಮಾತನಾಡಿದರು. ಸಿನಿಮಾ ಭಾಷಣದ ವೇಳೆ ಅಸ್ವಸ್ಥರಾದ ಖರ್ಗೆ ಅವರಿಗೆ ವೈದ್ಯಕೀಯ ನೆರವನ್ನು ಒದಗಿಸಲಾಯಿತು.

'ಬಿಜೆಪಿ ಸರ್ಕಾರವು ಜಮ್ಮು-ಕಾಶ್ಮೀರವನ್ನು ರಿಮೋಟ್ ಕಂಟ್ರೋಲ್ ಮೂಲಕ ನಿಯಂತ್ರಿಸುತ್ತಿದೆ' ಎಂದು ಅವರು ಆರೋಪಿಸಿದರು. 'ಕಣಿವೆ ರಾಜ್ಯದಲ್ಲಿ ಚುನಾವಣೆ ನಡೆಸಲು ಬಿಜೆಪಿ ಎಂದಿಗೂ ಬಯಸಿಲ್ಲ. ಸುಪ್ರೀಂ ಕೋರ್ಟ್ ಮಧ್ಯಪ್ರವೇಶದ ಬಳಿಕವಷ್ಟೇ ಚುನಾವಣೆ ನಡೆಸಲು ಮುಂದಾಗಿತ್ತು' ಎಂದು ಹೇಳಿದರು.

ಅಧಿಕಾರ ಇದ್ದರೂ ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನವನ್ನು ಮರುಸ್ಥಾಪಿಸಲು ಬಿಜೆಪಿ ಏಕೆ ವಿಳಂಬ ಮಾಡುತ್ತಿದೆ ಜಮ್ಮು ಕಾಶ್ಮೀರದ ಜನರಿಗಾಗಿ ನಾವು ಹೋರಾಡಲಿದ್ದೇವೆ. ಬಿಜೆಪಿ ಸರ್ಕಾರ ಸಂಪೂರ್ಣ ವೈಫಲ್ಯ ಕಂಡಿದೆ' ಎಂದು ಅವರು ಹೇಳಿದ್ದಾರೆ. ಜಮ್ಮು-ಕಾಶ್ಮೀರದ ಯುವ ಜನತೆಯ ಭವಿಷ್ಯಕ್ಕಾಗಿ ಮೋದಿ, ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ. ನಿಜ ಸಂಗತಿಯೆಂದರೆ ಕಳೆದ 10 ವರ್ಷಗಳಲ್ಲಿ ಯುವಜನತೆಯನ್ನು ಕತ್ತಲೆಯತ್ತ ತಳ್ಳಿ ಹಾಕಿದ್ದಾರೆ. ಇದಕ್ಕೆ ಮೋದಿ ಕೂಡ ಹೊಣೆಗಾರರು. ಪ್ರಧಾನಿ ಅವರು ಕಳೆದ 10 ವರ್ಷಗಳಲ್ಲಿ ಯುವಜನತೆಗಾಗಿ ಏನನ್ನೂ ಮಾಡಿಲ್ಲ' ಎಂದು ವಾಗ್ದಾಳಿ ನಡೆಸಿದ್ದಾರೆ.

# ಲೆಬನಾನ್ ವಿರುದ್ಧದ ಹೋರಾಟದಲ್ಲಿ ಇಸ್ರೇಲ್ ಮಹತ್ವದ ಗೆಲುವು


## ಹೆಜ್ಬೊಲ್ಲಾ ನಾಯಕ ಹಸನ್ ನಸ್ರಲ್ಲಾ ಹತ್ಯೆ ಬಳಿಕ ಇರಾನ್ ಮೇಲೆ ಕಣ್ಣು, ಇಸ್ರೇಲ್ ಪ್ರಧಾನಿ ಖಡಕ್ ವಾರ್ನಿಂಗ್

ವಾಪಸ್ ಕರೆ ತರೋದೇ ನಮ್ಮ ಧ್ಯೇಯ

**ಇಸ್ರೇಲ್:** ಲೆಬನಾನ್‌ನ ಹೆಜ್ಬೊಲ್ಲಾ ಉಗ್ರ ಸಂ ಘಟನೆ ಅಧಿನಾಯಕ ಹಸನ್ ನಸ್ರಲ್ಲಾನನ್ನು ಹೊಡೆದುರುಳಿಸಿದ ಬಳಿಕ ಇದೀಗ ಇಸ್ರೇಲ್ ಸೇನೆ ಇರಾನ್‌ಗೆ ನೇರಾ ನೇರ ಎಚ್ಚರಿಕೆ ನೀಡಿದೆ.ಹಮಾಸ್, ಹೆಜ್ಬೊಲ್ಲಾ ಹಾಗೂ ಹೌತಿ ಉಗ್ರ ಸಂ ಘಟನೆಗಳ ಬೆನ್ನಿಗೆ ನಿಂತು ಇಸ್ರೇಲ್ ವಿರುದ್ಧ ಪ ರೋಕ್ಷ ಸಮರ ನಡೆಸುತ್ತಿರುವ ಇರಾನ್‌ಗೆ ಚಾಟಿ ಬೀಸಿರುವ ಇಸ್ರೇಲ್ ಪ್ರಧಾನ ಮಂತ್ರಿ, ಬೆಂಜಮಿ ನ್ ನೆತನ್ಯಾಹು, ಮಧ್ಯ ಪ್ರಾಚ್ಯದಲ್ಲಿ ನಮ್ಮ ವ್ಯಾಪ್ತಿ ವಿಸ್ತಾರವಾಗುತ್ತಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಹಸನ್ ನಸ್ರಲ್ಲಾ ಹತ್ಯೆ ಮೂಲಕ ಇರಾನ್‌ಗೆ ಸ್ಪಷ್ಟ ಸಂದೇಶ ರವಾನೆ ಮಾಡಿರೋದಾಗಿ ನೆತನ್ಯಾಹು ಹೇಳಿದ್ದಾರೆ. ಹೆಜ್ಬೊಲ್ಲಾ ಉಗ್ರ ಸಂಘಟನೆ ಮುಖ್ಯ ಸ್ಥ ಹಸನ್ ನಸ್ರಲ್ಲಾನನ್ನು ಲೆಬನಾನ್ ರಾಜಧಾನಿ ಬೈರೂತ್‌ನಲ್ಲಿ ಹೊಡೆದುರುಳಿಸುವಂತೆ ನಾನೇ ಖುದ್ದಾಗಿ ಆದೇಶ ನೀಡಿದ್ದೆ ಎಂದಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ನಸ್ರಲ್ಲಾ ಹತ್ಯೆ ಮೂಲಕ ಲೆಬನಾನ್ ವಿರುದ್ಧದ ಹೋರಾಟದಲ್ಲಿ ಇಸ್ರೇಲ್ ಮಹತ್ವದ ಗೆಲುವು ಸಾಧಿಸಿದೆ ಎಂದು ಹೇಳಿದ್ದಾರೆ. 1980ರಿಂದ ಇಲ್ಲಿಯವರೆಗೆ ಇಸ್ರೇಲ್ ಮೇಲೆ ನಡೆದ ಹಲವು ಭಯೋತ್ಪಾದಕ ದಾಳಿಗಳಿಗೆ ಹೆಜ್ಬೊಲ್ಲಾ ಉಗ್ರ ಸಂಘಟನೆ ಮುಖ್ಯಸ್ಥ ಹಸನ್ ನಸ್ರಲ್ಲಾ ಕಾರಣನಾಗಿದ್ದ ಎಂದು ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

1983ರಲ್ಲಿ ಲೆಬನಾನ್ ದೇಶದ ಬೈರೂತ್‌ನಲ್ಲಿ ನಡೆದ ಬಾಂಬ್ ದಾಳಿಯಲ್ಲಿ 63 ಮಂದಿ ಸಾವನ್ನಪ್ಪಿದ್ದರು. ಈ ದಾಳಿಗೆ ಹಸನ್ ನಸ್ರಲ್ಲಾ ಕಾರಣನಾಗಿದ್ದ. ಅಮೆರಿಕ ರಾಯಭಾರ ಕಚೇರಿ ಸೇರಿದಂತೆ ಹಲವೆಡೆ ಬಾಂಬ್ ದಾಳಿ ನಡೆದಿತ್ತು. ಅಮೆರಿಕ ಹಾಗೂ ಫ್ರಾನ್ಸ್ ಸೇನೆಯ ಯೋಧರು ಈ ಭಯೋತ್ಪಾದಕ ದಾಳಿಯಲ್ಲಿ ಸಾವನ್ನಪ್ಪಿದ್ದರು.



> **ಏಕಕಾಲದಲ್ಲಿ ಹಮಾಸ್, ಹೆಜ್ಬೊಲ್ಲಾ ಹಾಗೂ ಹೌತಿ ಉಗ್ರರ ವಿರುದ್ಧ ಕಾದಾಟ ನಡೆಸುತ್ತಿರುವ ಇಸ್ರೇಲ್, ಈ ಎಲ್ಲಾ ಉಗ್ರ ಸಂಘಟನೆಗಳ ಬೆನ್ನಿಗೆ ನಿಂತಿರುವ ಇರಾನ್ ವಿರುದ್ಧ ನೇರಾ ನೇರ ವಾರ್ನಿಂಗ್ ಕೊಟ್ಟಿದೆ. ಮಧ್ಯ ಪ್ರಾಚ್ಯದ ಆಚೆಗೂ ನಮ್ಮ ವ್ಯಾಪ್ತಿ ವಿಸ್ತರಿಸುತ್ತಿದೆ ಎಂದಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಹೆಜ್ಬೊಲ್ಲಾ ಉಗ್ರ ಸಂಘಟನೆ ನಾಯಕ ಹಸನ್ ನಸ್ರಲ್ಲಾ ಹತ್ಯೆ ಮೂಲಕ ಇಸ್ರೇಲ್ ಮಹತ್ವದ ಮೇಲುಗೈ ಸಾಧಿಸಿದೆ ಎಂದಿದ್ದಾರೆ.**

- **ಹೆಜ್ಬೊಲ್ಲಾ ಉಗ್ರ ಸಂಘಟನೆ ಮುಖ್ಯಸ್ಥ ಹಸನ್ ನಸ್ರಲ್ಲಾ ಹತ್ಯೆ ಬಳಿಕ ಬೆಂಜಮಿನ್ ನೆತನ್ಯಾಹು ಮಾತು**
- **ಹಸನ್ ನಸ್ರಲ್ಲಾನನ್ನು ಹೊಡೆದುರುಳಿಸುವಂತೆ ನಾನೇ ಖುದ್ದಾಗಿ ಆದೇಶ ನೀಡಿದ್ದೆ**

ಈ ಹಿನ್ನೆಲೆಯಲ್ಲಿ ಉಗ್ರಗಾಮಿ ಹಸನ್ ನಸ್ರಲ್ಲಾ ಹತ್ಯೆಯಿಂದಾಗಿ ಹೆಜ್ಬೊಲ್ಲಾ ಉಗ್ರ ಸಂಘಟನೆಗೆ ಬಲವಾದ ಪೆಟ್ಟು ಬಿದ್ದಿದೆ ಎಂದು ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಒಂದು ವೇಳೆ ಹಸನ್ ನ ಸ್ರಲ್ಲಾ ಬದುಕಿದ್ದರೆ, ಹೆಜ್ಬೊಲ್ಲಾ ಉಗ್ರ ಸಂಘಟನೆ ಅತಿ ಶೀಘ್ರವಾಗಿ ತನ್ನ ಸಾಮರ್ಥ್ಯ ಹೆಚ್ಚಿಸಿಕೊ ಳ್ಳುತ್ತಿತ್ತು ಎಂದು ನೆತ ನ್ಯಾಹು ಹೇಳಿದ್ದಾರೆ. ಇಸ್ರೇಲ್ ದೇಶದ ಪ್ರಜೆಗಳು ಹಾಗೂ ಹಲ ವು ದೇಶದ ಪ್ರಜೆಗಳನ್ನು ಕೊಂದಿದ್ದ ಹಸನ್ ನಸ್ರಲ್ಲಾನನ್ನೇ ಹೊಡೆ ದುರುಳಿಸುವ ಮೂಲಕ ನಾವು ಮೇಲುಗೈ ಸಾಧಿಸಿದ್ದೇವೆ ಎಂದಿರುವ ಬೆಂಜಮಿನ್ ನೆತನ್ಯಾಹು, ಹಸನ್ ನಸ್ರುಲ್ಲಾ ಸಂಚಿನಿಂದಾಗಿ ನೂರಾರು ಅಮೆರಿಕನ್ನರು ಹಾಗೂ ಹತ್ತಾರು ಫ್ರಾನ್ಸ್ ಪ್ರಜೆಗಳು ಹತ್ಯೆಗೀಡಾಗಿದ್ದರು ಎಂದು ಲೆಕ್ಕ ಕೊಟ್ಟಿದ್ದಾರೆ. ಹೆಜ್ಬೊಲ್ಲಾ ಉಗ್ರ ಸಂಘಟನೆ ಮುಖ್ಯಸ್ಥ ಹಸನ್ ನಸ್ರಲ್ಲಾ ಹತ್ಯೆಯನ್ನು ಯುದ್ಧಕ್ಕೆ ಸಿಕ್ಕ ಐತಿಹಾಸಿಕ ತಿರುವು ಎಂದಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಗಾಜಾ ಪಟ್ಟಿಯ ಸುರಂಗಗಳ ಒಳಗೆ ಹಮಾಸ್ ಉಗ್ರರು ಇನ್ನೂ ಕೂಡಾ ಒತ್ತೆಯಾಳಾಗಿ ಉಳಿಸಿಕೊಂಡಿರುವ ಇಸ್ರೇಲ್ ಪ್ರಜೆಗಳ ಸುರಕ್ಷಿತ ವಾಪಸ್ಸಾತಿಯ ಆಶಯ ವ್ಯಕ್ತ ಪಡಿಸಿದರು. ನಾವು ಒಗ್ಗಟ್ಟಿನಿಂದ ಹೋರಾಟ ಮಾಡುತ್ತೇ ವೆ. ದೇವರ ನೆರವಿನಿಂದ ನಾವು ಗೆಲುವು ಸಾಧಿಸುತ್ತೇವೆ ಎಂದು ನೆತನ್ಯಾಹು ಹೇಳಿದ್ದಾರೆ.

ನಾವು ನಮ್ಮ ಶತ್ರುಗಳ ವಿರುದ್ಧದ ದಾಳಿಯನ್ನು ನಿರಂತರವಾಗಿ ಮುಂದುವರೆಸುತ್ತೇವೆ. ನಮ್ಮ ಪ್ರಜೆಗಳು ಮರಳಿ ಸುರಕ್ಷಿತವಾಗಿ ಮನೆಗೆ ಬರುವಂತೆ ಮಾಡುತ್ತೇವೆ. ಅಪಹರಣಕ್ಕೆ ಒಳಗಾದವರನ್ನು ವಾಪಸ್ ಕರೆ ತರೋದೇ ನಮ್ಮ ಧ್ಯೇಯ. ನಾವು ಎಂದಿಗೂ ಅವರನ್ನು ಮರೆತಿಲ್ಲ ಎಂದು ನೆತನ್ಯಾಹು ಹೇಳಿದ್ದಾರೆ.

## ಮಿನಿ ನ್ಯೂಸ್

### ವಿಷಕಾರಿ ಚುಚ್ಚುಮದ್ದು ಚುಚ್ಚಿಕೊಂಡು ವೈದ್ಯಕೀಯ ವಿದ್ಯಾರ್ಥಿ ಆತ್ಮಹತ್ಯೆ

**ಪ್ರಯಾಗ್ರಾಜ್:** ಇಲ್ಲಿನ ಸರ್ಕಾರಿ ಮೋತಿ ಲಾಲ್ ನೆಹರೂ ವೈದ್ಯಕೀಯ ಕಾಲೇಜಿನಲ್ಲಿ ಮಾಸ್ಟರ್ ಆಫ್ ಸರ್ಜರಿ ವ್ಯಾಸಂಗ ಮಾಡುತ್ತಿದ್ದ ವೈದ್ಯನೊಬ್ಬ ತನ್ನ ವಿಷಕಾರಿ ಇಂಜೆಕ್ಷನ್ ಚುಚಿಕೊಂಡು ಆತಹತ್ಯೆ ಮಾಡಿಕೊಂಡ ದುರಂತ ಘಟನೆ ನಡೆದಿದೆ. ಕಳೆದ ರಾತ್ರಿ ಎಸ್‌ಆರ್‌ಎನ್ ಆಸ್ಪತ್ರೆಯಲ್ಲಿ ಕರ್ತವ್ಯದಲ್ಲಿದ್ದ ಡಾ.ಕಾರ್ತಿಕೇಯ ಶ್ರೀವಾಸ್ತವ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಡಿಸಿಪಿ ಅಭಿ ಷೇಕ್ ಭಾರ್ತಿ ತಿಳಿಸಿದ್ದಾರೆ. ಉತ್ತರಾಖಂಡದ ಕೋಟ್ದ್ವಾರದವರಾದ ಡಾ. ಕಾರ್ತಿಕೇಯ ಶ್ರೀವಾಸ್ತವ ಆಸ್ಪತ್ರೆಯ ವಿಚಾರದಲ್ಲಿ ತಲೆಕೆಡಿಸಿಕೊಂಡು ಆತಹತ್ಯೆ ಮಾಡಿಕೊಳ್ಳುವ ಹಂತಕ್ಕೆ ಹೋಗಿದ್ದಾರೆ ಆಸ್ಪತ್ರೆಯ ಆವರಣದಲ್ಲಿ ನಿಲ್ಲಿಸಿದ್ದ ತಮ ಕಾರಿನಲ್ಲಿ ಬಂದು ಕೂತು ಪ್ರಾಣ ಬಿಟ್ಟಿದ್ದಾರೆ ಎಂದು ಎಸಿಪಿ ಕೊತ್ವಾಲಿ ಮನೋಜ್ ಕುಮಾರ್ ಸಿಂಗ್ ಹೇಳಿದ್ದಾರೆ. ಶ್ವಾನದಳ ಹಾಗೂ ತನಿಖಾ ತಂಡವನ್ನು ಸ್ಥಳಕ್ಕೆ ಬಂದು ಸಾ ಕ್ಷ್ಯಗಳನ್ನು ಸಂಗ್ರಹಿಸಲಾಗುತ್ತಿದೆ ಘಟನೆಯಿಂದ ಆಸ್ಪತ್ರೆ ಸಿಬ್ಬಂಧಿ ಆತಂಕಗೊಂಡಿದ್ದಾರೆ. ನಿಜವಾದ ಕಾರಣ ಪತ್ತೆ ಹಚ್ಚಲಾಗುತ್ತಿದೆ ಎಂದರು.

### ವಿಮಾನ ಪತನ ಹಲವರ ಸಾವು

**ವಾಷಿಂಗ್ಟನ್:** ಅಮೆರಿಕಾದ ಉತ್ತರ ಕೆರೊಲಿನಾದ ಮಾಂಟಿಯೊದಲ್ಲಿರುವ ರೈಟ್ ಬ್ರದರ್ಸ್ ನ್ಯಾಷನಲ್ ಮೆಮೋರಿಯಲ್ಸ್ ಫಸ್ಟ್ ಫ್ಲೈಟ್ ಏರ್‌ಪೋರ್ಟ್‌ನಲ್ಲಿ ಸಿಂಗಲ್ ಇಂಜಿನ್ ವಿಮಾನವೊಂದು ಪತನಗೊಂಡು ಹಲವಾರು ಜನರು ಸಾವನ್ನಪ್ಪಿದ್ದಾರೆ ಎಂದು ನ್ಯಾಷನಲ್ ಪಾರ್ಕ್ ಸರ್ವೀಸ್ ಈ ಮಾಹಿತಿಯನ್ನು ನೀಡಿದೆ. ಸಾವಿನ ಸಂಖ್ಯೆಯ ಬಗ್ಗೆ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ.ಮುಂದಿನ ಸೂಚನೆ ಬರುವವರೆಗೆ ವಿಮಾನ ನಿಲ್ದಾಣವನ್ನು ಮುಚ್ಚಲಾಗಿದೆ ಎಂದು ಪಾರ್ಕ್ ಸರ್ವೀಸ್ ತಿಳಿಸಿದೆ. ಶನಿವಾರ ಸಂಜೆ 5 ಗಂಟೆಗೆ ಈ ದುರ್ಘಟನೆ ಸಂಭವಿಸಿದೆ ಎಂದು ಪಾರ್ಕ್ ಸರ್ವೀಸ್ ಪ್ರಕಟಣೆಯಲ್ಲಿ ತಿಳಿಸಿದೆ.

ವಿಮಾನವು ವಿಮಾನ ನಿಲ್ದಾಣದಲ್ಲಿ ಇಳಿಯಲು ಪ್ರಯತ್ನಿಸುತ್ತಿದ್ದಾಗ ಅಪಘಾತ ಸಂಭವಿಸಿದೆ ಎಂದು ರಾಷ್ಟ್ರೀಯ ಪಾರ್ಕ್ ಸರ್ವೀಸ್ ಬಿಡುಗಡೆ ಮಾಡಿದೆ. ಅಪಘಾತದ ನಂತರ ವಿಮಾನವು ಬೆಂಕಿಗೆ ಆಹುತಿಯಾಗಿದೆ. ಕಿಲ್ ಡೆವಿಲ್ ಹಿಲ್ಸ್ ಅಗ್ನಿ ಶಾಮಕ ಇಲಾಖೆ, ಇತರ ಸ್ಥಳೀಯ ಅಗ್ನಿಶಾಮಕ ಇಲಾಖೆಗಳು ಬೆಂಕಿಯನ್ನು ನಂದಿಸಿದವು ಎಂದು ಪ್ರಕಟಣೆ ತಿಳಿಸಿದೆ. ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿಯು ಘಟನೆಯ ಬಗ್ಗೆ ತನಿಖೆ ನಡೆಸಲಿದೆ ಮತ್ತು ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್‌ಗೆ ಸಹ ಸೂಚಿಸಲಾಗಿದೆ ಎನ್ನಲಾಗಿದೆ.

### ಇಸ್ರೇಲಿ ದಾಳಿ ಹಸನ್ ನಸ್ರಲ್ಲಾಹ್ ಪುತ್ರಿ ಜೈನಾಬ್ ಹತ್ಯೆ

**ಬೈರುತ್:** ಲೆಬನಾನ್‌ನ ದಕ್ಷಿಣ ಬೈರುತ್‌ನಲ್ಲಿರುವ ಹಿಜ್ಬುಲ್ಲಾ ಭದ್ರಕೋಟೆಗಳನ್ನು ಗುರಿಯಾಗಿಸಿಕೊಂಡು ಇಸ್ರೇಲಿ ನಡೆಸಿದ ವೈಮಾನಿಕ ದಾಳಿಯಲ್ಲಿ ಉನ್ನತ ಹಿಜ್ಬುಲ್ಲಾ ನಾಯಕ ಹಸನ್ ನಸ್ರುಲ್ಲಾ ಅವರ ಪುತ್ರಿ ಜೈನಾಬ್ ನಸ್ರುಲ್ಲಾ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ, ಆದರೆ ಅವರ ಸಾವಿನ ಬಗ್ಗೆ ಇಸ್ರೇಲ್, ಹಿಜ್ಬುಲ್ಲಾ ಅಥವಾ ಲೆಬನಾನ್ ಅಧಿಕಾರಿಗಳಿಂದ ಯಾವುದೇ ಅಧಿಕೃತ ಮಾಹಿತಿ ಬಂದಿಲ್ಲ. ಒಂದು ವೇಳೆ ಝೈನಾಬ್ ಸಾವು ದೃಢಪಟ್ಟರೆ ಹೆಜ್ಬುಲ್ಲಾಗೆ ಈ ಸುದ್ದಿ ಭಾರೀ ಆಘಾತ ಉಂಟು ಮಾಡುತ್ತದೆ. ಹಿಜ್ಬುಲ್ಲಾ ಹೋರಾಟಗಾರರು ಸೇಡು ತೀರಿಸಿಕೊಳ್ಳಲು ಯಾವುದೇ ಮಿತಿಯನ್ನು ದಾಟಬಹುದು ಎಂದು ಅಂದಾಜಿಸಲಾಗಿದೆ.

ಇಸ್ರೇಲಿ ಸೈನ್ಯವು ಹಿಜ್ಬುಲ್ಲಾದ ನಾಯಕನನ್ನು ಗುರಿಯಾಗಿಸಿಕೊಂಡಿತು ಮತ್ತು ಬೈರುತ್‌ನಲ್ಲಿರುವ ಅದರ ಕೇಂದ್ರ ಕಛೇರಿಯ ಮೇಲೆ ದಾಳಿ ಮಾಡಿತು. ವರದಿಗಳನ್ನು ಪ್ರಕಾರ, ಹಲವಾರು ಎತ್ತರದ ಕಟ್ಟಡಗಳು ಒಂದರ ನಂತರ ಒಂದರಂತೆ ಬೃಹತ್ ಸ್ಫೋಟಗಳಿಂದ ನಾಶವಾಗಿವೆ. ಈ ಮಾಹಿತಿಯನ್ನು ಇಸ್ರೇಲ್ ಸೇನೆ ನೀಡಿದೆ. ದಾಳಿಯಲ್ಲಿ ಕನಿಷ್ಠ ಆರು ಮಂದಿ ಸಾವನ್ನಪ್ಪಿದ್ದು, 91 ಮಂದಿ ಗಾಯಗೊಂಡಿದ್ದಾರೆ ಎಂದು ಲೆಬನಾನ್ ಆರೋಗ್ಯ ಸಚಿವಾಲಯ ತಿಳಿಸಿದೆ. ಲೆಬನಾನಿನ ರಾಜಧಾನಿಯಲ್ಲಿ ನಡೆದ ಈ ದಾಳಿಯಿಂದಾಗಿ, ಸಂಘರ್ಷವು ಪೂರ್ಣ ಪ್ರಮಾಣದ ಯುದ್ಧವಾಗಿ ಬದಲಾಗುವ ಆತಂಕವು ಹೆಚ್ಚಾಗಿದೆ.

### ಪ್ರಯಾಗ್ ರಾಜ್ ರಾಣಿ ಶವ ಪತ್ತೆ

**ಪ್ರಯಾಗರಾಜ್:** ಪ್ರಯಾಗರಾಜ್‌ನ ಸ್ವರೂಪ್ ರಾಣಿ ವೈದ್ಯಕೀಯ ಕಾಲೇಜಿನಲ್ಲಿ ಕಿರಿಯ ವೈದ್ಯರ ಮೃತದೇಹ ಕಾರಿನಲ್ಲಿ ಪತ್ತೆಯಾಗಿದೆ. ಕಾರ್ತಿಕೇಯ ಶ್ರೀವಾಸ್ತವ (29) ಅನುಮಾನಾಸ್ಪದವಾಗಿ ಸಾವನ್ನಪ್ಪಿದ ಕಿರಿಯ ವೈದ್ಯರು.ಶನಿವಾರ ರಾತ್ರಿ ಆಸ್ಪತ್ರೆ ಆವರಣದಲ್ಲಿ ನಿಲ್ಲಿಸಿದ್ದ ಕಾರಿನಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ತಕ್ಷಣ ಅವರನ್ನು ಐಸಿಯುಗೆ ಕರೆದೊಯ್ದು ಚಿಕಿತ್ಸೆ ನೀಡಲಾಗಿತ್ತಾದರೂ ಆದಾಗಲೇ ಅವರು ಸಾವನ್ನಪ್ಪಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಕಾರಿನಲ್ಲಿ ಅರಿವಳಿಕೆಗೆ ಬಳಸುವ ಎರಡು ಇಂಜೆಕ್ಷನ್ ಬಾಟಲಿಗಳು ಮತ್ತು ಸಿರಿಂಜ್‌ಗಳು ಪತ್ತೆಯಾಗಿವೆ ಎನ್ನಲಾಗಿದೆ.ಪ್ರಾಥಮಿಕ ತನಿಖೆಯಿಂದ ಆತ್ಮಹತ್ಯೆ ಎಂದು ಶಂಕಿಸಲಾಗಿದೆ. ಪ್ರಯಾಗರಾಜ್ ಪೊಲೀಸರು ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ಉತ್ತರಾಖಂಡದ ಅಪ್ಪರ್ ಕಲಬಾರ್‌ನ ಕೋಟ್‌ದ್ವಾರ ನಿವಾಸಿ ಡಾ.ಕೃಷ್ಣ ಕುಮಾರ್ ಶ್ರೀವಾಸ್ತವ ಅವರ ಪುತ್ರ ಕಾರ್ತಿಕೇಯ ಅವರು ಎಸ್ ಆರ್‌ಎನ್‌ನ ಮೂಳೆಚಿಕಿತ್ಸಾ ವಿಭಾಗದಲ್ಲಿ ಕಿರಿಯ ವೈದ್ಯರಾಗಿದ್ದಾರೆ.

ಕಾರ್ತಿಕೇಯ ಶ್ರೀವಾಸ್ತವ ಅವರು ಎಸ್‌ಆರ್‌ಎನ್ ವೈದ್ಯಕೀಯ ಕಾಲೇಜಿನಲ್ಲಿ ಪಿಜಿ ಓದುತ್ತಿದ್ದರು. ಸ್ಟಾನ್ಲಿ ರಸ್ತೆಯಲ್ಲಿರುವ ಬಾಡಿಗೆ ಮನೆಯಲ್ಲಿ ಪೋಷಕರೊಂದಿಗೆ ವಾಸವಾಗಿದ್ದರು. ಡಾ.ಕಾರ್ತಿಕೇಯ ಶ್ರೀವಾಸ್ತವ ಅವರು ಶನಿವಾರ ಬೆಳಗ್ಗೆ 10 ಗಂಟೆಯಿಂದ ಕರ್ತವ್ಯದಲ್ಲಿದ್ದರು, ಡ್ಯೂಟಿ ಮುಗಿದರೂ ಮನೆಗೆ ಬಾರದ ಹಿನ್ನೆಲೆಯಲ್ಲಿ ಹುಡುಕಾಟ ಆರಂಭಿಸಲಾಗಿದೆ ಎಂದು ಪ್ರಯಾಗರಾಜ್ ಪೊಲೀಸರು ತಿಳಿಸಿದ್ದಾರೆ.

### ಇದೇ ಮೊದಲ ಬಾರಿಗೆ ಜಮೈಕಾ ಪ್ರಧಾನಿ ಭಾರತ ಪ್ರವಾಸ: 4 ದಿನ ಭೇಟಿ

**ನವದೆಹಲಿ:** ನಾಲ್ಕು ದಿನಗಳ ಭಾರತ ಪ್ರವಾಸಕ್ಕಾಗಿ ಜಮೈಕಾದ ಪ್ರಧಾನ ಮಂತ್ರಿ ಆಂಡ್ರೂ ಹೋಲ್‌ನೆಸ್ ಅವರು ಇಂದು ದೆಹಲಿಗೆ ಆಗಮಿಸಲಿದ್ದಾರೆ. ಈ ವೇಳೆ ಭಾರತ-ಜಮೈಕಾ ನಡುವಿನ ವ್ಯಾಪಾರ, ಹೂಡಿಕೆ ಸಂಬಂಧಿ ಮಾತುಕತೆ ನಡೆಸಿ, ಹಲವು ಒಪ್ಪಂದಗಳಿಗೆ ಅವರು ಸಹಿ ಹಾಕಲಿದ್ದಾರೆ ಎಂದು ವಿದೇಶಾಂಗ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಜಮೈಕಾದ ಪ್ರಧಾನಿಯೊಬ್ಬರು ಇದೇ ಮೊದಲ ಬಾರಿಗೆ ಭಾರತ ಪ್ರವಾಸ ಕೈಗೊಂಡಿದ್ದಾರೆ. ಜಮೈಕಾ ಪ್ರಧಾನ ಮಂತ್ರಿಯವರ ಈ ಭೇಟಿಯು ಉಭಯ ದೇಶಗಳ ನಡುವಿನ ದೀರ್ಘಕಾಲದ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಎಂದು ವಿದೇಶಾಂಗ ಇಲಾಖೆ ಹೇಳಿದೆ.

ಭೇಟಿಯ ವೇಳೆ ಆ್ಯಂಡ್ರೂ ಹೋಲ್‌ನೆಸ್ ಅವರು ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಜೊತೆ ಮಾತುಕತೆ ನಡೆಸಲಿದ್ದಾರೆ. ಕೆರಿಬಿಯನ್ ದ್ವೀಪ ರಾಷ್ಟ್ರವಾದ ಜಮೈಕಾದೊಂದಿಗೆ ಭಾರತ ಸ್ವಾತಂತ್ರಾಪೂರ್ವದಿಂದಲೂ ಸಂಬಂಧ ಹೊಂದಿದೆ.

# ಮಗನ ಜೊತೆಗಿನ ಫೋಟೋ ಹಂಚಿಕೊಂಡ ಪ್ರಣೀತಾ ಸುಭಾಷ್

ಬಹುಭಾಷಾ ನಟಿ ಪ್ರಣೀತಾ ಸುಭಾಷ್ ಅವರು ಮಗನ ಜೊತೆಗಿನ ಫೋಟೋ ಹಂಚಿಕೊಂಡಿದ್ದಾರೆ. ಡೆಲಿವರಿ ಬಳಿಕ ಮೊದಲ ಬಾರಿಗೆ ಮಗನ ಫೋಟೋ ಹಂಚಿಕೊಂಡಿದ್ದಾರೆ.

ಇತ್ತೀಚೆಗೆ ನಟಿ ಪ್ರಣೀತಾ ಎರಡನೇ ಮಗುವಿಗೆ ಜನ್ಮ ನೀಡಿದ್ದರು. ಮಗನ ಪಾಲನೆಯಲ್ಲಿ ಬ್ಯುಸಿಯಿದ್ದ ನಟಿ ಮಗುವಿನ ಜೊತೆಗಿನ ಫೋಟೋ ಶೇರ್ ಮಾಡಿ 40 ದಿನಗಳ ಕಾಲ ಆದರೂ ಯೋಗ್ಯವಾಗಿತ್ತು ಎಂದು ನಟಿ ಬರೆದುಕೊಂಡಿದ್ದಾರೆ. ಮಗನನ್ನು ತಬ್ಬಿ ಮುದ್ದಾಡುತ್ತಿರುವ ನಟಿಯ ಫೋಟೋ ನೋಡುಗರ ಗಮನ ಸೆಳೆದಿದೆ.

ಅಂದಹಾಗೆ, ಲಾಕ್‌ಡೌನ್ ವೇಳೆ 2021ರಲ್ಲಿ ಉದ್ಯಮಿ ನಿತಿನ್ ಜೊತೆ ಪ್ರಣೀತಾ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

2022ರಲ್ಲಿ 2ನೇ ಮಗುವಿನ ಜನ್ಮ ನೀಡಿದರು. ಆ ಮಗುವಿಗೆ ಆರ್ನಾ ಎಂದು ಹೆಸರನಿಟ್ಟಿದ್ದಾರೆ. 2 ವರ್ಷಗಳ ನಂತರ ಈಗ 2ನೇ ಮಗುವಿನ ಆಗಮನವಾಗಿದೆ. ಪ್ರಣೀತಾ ಅವರು ಕನ್ನಡ, ಮಲಯಾಳಂ, ತೆಲುಗು, ತಮಿಳು ಸೇರಿದಂತೆ ಹಲವು ಭಾಷೆಗಳಲ್ಲಿ ಅವರು ನಟಿಸಿದ್ದಾರೆ. ಮದುವೆ ಯಾದ್ಮೇಲೆಯೂ ನಟಿ ಆ್ಯಕ್ಟೀವ್ ಆಗಿದ್ದಾರೆ.



# ದೊಡ್ಮನೆ ಆಟಕ್ಕೆ ಎಂಟ್ರಿ ಕೊಟ್ಟಿರುವ ಸ್ಪರ್ಧಿಗಳ ಪಕ್ಕಾ ಲಿಸ್ಟ್



ಕಿರುತೆರೆಯ ಅತೀ ದೊಡ್ಡ ರಿಯಾಲಿಟಿ ಶೋ ಬಿಗ್ ಬಾಸ್ ಕನ್ನಡ ಸೀಸನ್ 11 (ಸೆ.29) ಸಂಜೆ 6 ಗಂಟೆಗೆ ಅದ್ದೂರಿಯಾಗಿ ಚಾಲನೆ ಸಿಗಲಿದೆ. ಅದಕ್ಕೂ ಮುನ್ನ ದೊಡ್ಮನೆಗೆ ಈಗಾಗಲೇ ಕಾಲಿಟ್ಟಿರುವ ಸ್ಪರ್ಧಿಗಳ ಪಕ್ಕಾ ಲಿಸ್ಟ್ ಇಲ್ಲಿದೆ. ಗೀತಾ' ಸೀರಿಯಲ್ ಮೂಲಕ ಮನೆ ಮಾತಾಗಿದ್ದ ನಟಿ ಭವ್ಯಾ ಗೌಡ ದೊಡ್ಮನೆಗೆ ಕಾಲಿಟ್ಟಿದ್ದಾರೆ. ಈ ಹಿಂದೆ ಮಿನಿ ಬಿಗ್ ಬಾಸ್‌ನಲ್ಲೂ ಇವರು ಒಂದು ವಾರಗಳ ಕಾಲ ಆಟ ಆಡಿದ್ದರು. ಇದು ಈ ಬಾರಿ ಅವರ ಕೈಹಿಡಿಯುತ್ತಾ ಸ್ವರ್ಗಕ್ಕೆ ಹೋಗುತ್ತಾರಾ ಅಥವಾ ನರಕಕ್ಕೆ ಹೋಗ್ತಾರಾ ಇಂದಿನ ಗ್ರ್ಯಾಂಡ್ ಲಾಂಚ್‌ನಲ್ಲಿ ಉತ್ತರ ಸಿಗಲಿದೆ.

'ಅಶ್ವಿನಿ ನಕ್ಷತ್ರ' ಸೀರಿಯಲ್‌ನಲ್ಲಿ ನಟಿ ಮಯೂರಿ ತಾಯಿಯಾಗಿ ನಟಿಸಿದ್ದ ಯಮುನಾ ಶ್ರೀನಿಧಿ ಅವರು ಹಲವು ಸಿನಿಮಾಗಳಲ್ಲಿ ಪೋಷಕ ಪಾತ್ರಗಳಲ್ಲಿ ನಟಿಸಿ ಸೈ ಎನಿಸಿಕೊಂಡಿದ್ದಾರೆ. ಗಿಚ್ಚಿ ಗಿಲಿಗಿಲಿ' ಖ್ಯಾತಿಯ ಧನರಾಜ್ ಆಚಾರ್ ಅವರು ದೊಡ್ಮನೆಗೆ ಕಾಲಿಟ್ಟಿರೋದು ಪಕ್ಕಾ ಆಗಿದೆ. ತುಕಾಲಿ ಸಂತೋಷ್ ಅವರಂತೆಯೇ ಧನರಾಜ್ ಕೂಡ ಕಾಮಿಡಿ ಮೂಲಕ ಜನರ ಮನ ಗೆಲ್ತಾರಾ ಕಾಯಬೇಕಿದೆ. ಸತ್ಯ' ಸೀರಿಯಲ್ ಮೂಲಕ ಮನೆ ಮಾತಾಗಿದ್ದ ಡೇರಿಂಗ್ ಲೇಡಿ ಗೌತಮಿ ಜಾದವ್ 'ಬಿಗ್' ಮನೆಗೆ ಕಾಲಿಟ್ಟಿದ್ದಾರೆ. ಸತ್ಯ ಪಾತ್ರದ ಸ್ಟೈಲಿನಲ್ಲಿಯೇ ನಟಿ ಎಂಟ್ರಿ ಕೊಟ್ಟಿದ್ದಾರೆ. ಮುದ್ದು ಮುಖದ ಚೆಲುವೆ ಅನುಷಾ ರೈ ಅವರು ದೊಡ್ಮನೆಗೆ ಕಾಲಿಟ್ಟಿದ್ದಾರೆ. ಖಡಕ್, ದಮಯಂತಿ, ರೈಡರ್ ಸಿನಿಮಾ ಸೇರಿದಂತೆ ಹಲವು ಚಿತ್ರಗಳಲ್ಲಿ ಅವರು ನಟಿಸಿದ್ದಾರೆ. ಖಳನಟ ಕೀರ್ತಿರಾಜ್ ಅವರ ಪುತ್ರ, ಧರ್ಮ ಕೀರ್ತಿರಾಜ್ ಅವರು ಖಡಕ್, ನವಗ್ರಹ, ಸುಮನ್, ಓ ಮನಸೇ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ. ಬಿಗ್ ಬಾಸ್ ಶೋ ಮೂಲಕ ಅವರು ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಕಿರುತೆರೆ ನಟ ಶಿಶಿರ್ ಶಾಸ್ತ್ರಿ ಅವರು ಸೊಸೆ ತಂದ ಸೌಭಾಗ್ಯ, ಕುಲವಧು, ಭಾರತಿ ಸೇರಿದಂತೆ ಹಲವು ಸೀರಿಯಲ್‌ನಲ್ಲಿ ನಟಿಸಿದ್ದಾರೆ. ತೆಲುಗಿನ ಧಾರಾವಾಹಿಗಳ ಮೂಲಕ ಗುರುತಿಸಿಕೊಂಡಿದ್ದಾರೆ.

# ಟ್ರೋಲ್ ಮಾಡಿದ್ದ ಧನರಾಜ್ ದೊಡ್ಮನೆ ಸ್ವರ್ಗಕ್ಕೆ ಎಂಟ್ರಿ



ಗಿಚ್ಚಿಗಿಲಿಗಿಲಿ' ಖ್ಯಾತಿಯ ಧನರಾಜ್ ಆಚಾರ್ ಬಿಗ್ ಬಾಸ್ ಮನೆಗೆ 3ನೇ ಸ್ಪರ್ಧಿಯಾಗಿ ಕಾಲಿಟ್ಟಿದ್ದಾರೆ. ಬಿಗ್ ಬಾಸ್‌ನೇ ಟ್ರೋಲ್ ಮಾಡಿ ಸೋಶಿಯಲ್ ಮೀಡಿಯಾದಲ್ಲಿ ಹೈಲೆಟ್ ಆಗಿದ್ದ ಧನರಾಜ್ ದೊಡ್ಮನೆಗೆ ಎಂಟ್ರಿ ಕೊಟ್ಟಿದ್ದಾರೆ. ಬಿಗ್ ಬಾಸ್ ಅನ್ನೇ ಅನುಕರಣೆ ಮಾಡುವಂತ ಕಾಮಿಡಿ ವಿಡಿಯೋವನ್ನು ಮಾಡಿ ಸೋಶಿಯಲ್ ಮೀಡಿಯಾದಲ್ಲಿ ಧನ ರಾಜ್ ಹಂಚಿಕೊಂಡಿದ್ದರು.

ಈ ವಿಡಿಯೋ ಭಾರೀ ಲೈಕ್ಸ್, ವಿವ್ಸ್ ಗಿಟ್ಟಿಸಿಕೊಂಡಿತ್ತು. ಇದನ್ನೇ ದೊಡ್ಮನೆಗೆ ನಟ ಕಾಲಿಟ್ಟ ವೇಳೆ, ಸುದೀಪ್ ತೋರಿಸಿ ಕ್ಲಾಸ್ ತೆಗೆದುಕೊಂಡಿದ್ದಾರೆ. ಟ್ರೋಲ್ ಮಾಡಿದ ನಟನಿಗೆ ಪ್ರಶ್ನಿಸಿ ಮಾತನಾಡಿದ ಸುದೀಪ್, ಆ ನಂತರ ಇದು ತಮಾಷೆಗಾಗಿ ಎಂದು ಧನರಾಜ್ ಕಾಲೆಳೆದಿದ್ದಾರೆ.

ನೀವು ಬಿಗ್ ಬಾಸ್‌ನ ಟ್ರೋಲ್ ಮಾಡಬೋದಾ ನಾನು ಚಮಕ್ ಕೊಡ್ತೀನಿ ಎಂದು ಸುದೀಪ್ ಸ್ಪರ್ಧಿಗೆ ತಮಾಷೆ ಮಾಡಿದ್ದಾರೆ. ಆ ನಂತರ ವಿಶೇಷ ಅಧಿಕಾರ ಪಡೆದಿದ್ದ ಭವ್ಯಾ ಮತ್ತು ಯಮುನಾ ನಿರ್ಧಾರ ಮೇರೆಗೆ ಧನ ರಾಜ್ ಸ್ವರ್ಗಕ್ಕೆ ಕಾಲಿಟ್ಟಿದ್ದಾರೆ.

# ವಿಶೇಷ ಅಧಿಕಾರದೊಂದಿಗೆ ಸ್ವರ್ಗದ ಮನೆಗೆ ಕಾಲಿಟ್ಟ ಭವ್ಯಾ, ಯಮುನಾ



ಬಿಗ್ ಬಾಸ್ ಮನೆಗೆ ಭವ್ಯಾ ಮತ್ತು ಯಮುನಾ ಕಾಲಿಟ್ಟಿದ್ದಾರೆ. ಮೊದಲ ಇಬ್ಬರೂ ಸ್ಪರ್ಧಿಗಳಾಗಿರುವ ಭವ್ಯಾ ಮತ್ತು ಯಮುನಾಗೆ ದೊಡ್ಮನೆಯ ಸ್ವರ್ಗಕ್ಕೆ ಎಂಟ್ರಿ ಗಿಟ್ಟಿಸಿಕೊಂಡಿದ್ದಾರೆ.

ಭವ್ಯಾ ಮೊದಲ ಸ್ಪರ್ಧಿಯಾಗಿದ್ರೆ, ಎರಡನೇ ಸ್ಪರ್ಧಿಯಾಗಿ ಬಿಗ್ ಬಾಸ್‌ಗೆ ಎಂಟ್ರಿ ಕೊಟ್ಟಿದ್ದಾರೆ. ಮೊದಲ ಎರಡು ಸ್ಪರ್ಧಿಗಳಾಗಿರುವ ಕಾರಣ ಇಬ್ಬರೂ ಸೀದಾ ದೊಡ್ಮನೆಯ ಸ್ವರ್ಗಕ್ಕೆ ಕಾಲಿಡಲು ಅವಕಾಶ ನೀಡಲಾಗಿದೆ. ಭವ್ಯಾ ಮತ್ತು ಯಮುನಾ ಅವರು ಬಿಗ್ ಬಾಸ್ ಮನೆಯ ಅದ್ದೂರಿತನ ನೋಡಿ ಸಂಭ್ರಮಿಸಿದ್ದಾರೆ.

ಜೊತೆಗೆ ಇಬ್ಬರಿಗೂ ವಿಶೇಷ ಅಧಿಕಾರವನ್ನು ಕೊಟ್ಟಿದ್ದಾರೆ. ಬರುವ ಸ್ಪರ್ಧಿಗಳು ನಡೆ, ನುಡಿ ನೋಡಿ ಅವರು ಸ್ವರ್ಗಕ್ಕೆ ಹೋಗಬೇಕೋ ನರಕಕ್ಕೆ ಎಂದು ಅಭಿಪ್ರಾಯ ತಿಳಿಸಬೇಕು. ಇನ್ನೂ ಇಬ್ಬರೂ ಕೂಡ ಗಟ್ಟಿ ಸ್ಪರ್ಧಿಗಳಾಗಿದ್ದು, ದೊಡ್ಮನೆಯ ಆಟ ಹೇಗಿರಲಿದೆ ಎಂಬುದನ್ನು ಕಾದುನೋಡಬೇಕಿದೆ.

ಅಂದಹಾಗೆ, ಮೋಕ್ಷಿತಾ ಪೈ, ಭವ್ಯಾ ಗೌಡ, ಚೈತ್ರಾ ಕುಂದಾಪುರ, ಅನುಷಾ ರೈ, ಧರ್ಮ ಕೀರ್ತಿರಾಜ್, ಉಗ್ರಂ ಮಂಜು, ಧನರಾಜ್ ಆಚಾರ್, ಐಶ್ವರ್ಯಾ ಸಿಂದೋಗಿ, ಯಮುನಾ ಶ್ರೀನಿಧಿ, ತ್ರಿವಿಕ್ರಮ್, ಶಿಶಿರ್ ಶಾಸ್ತ್ರಿ, ಗೋಲ್ಡ್ ಸುರೇಶ್, ಗೌತಮಿ, ಮಾನಸಾ, ರಂಜಿತ್ ಬಿಗ್ ಬಾಸ್‌ಗೆ ಎಂಟ್ರಿ ಕೊಟ್ಟಾಗಿದೆ. ಅಧಿಕೃತವಾಗಿ ಇನ್ನೂ ಅನಾವರಣ ಆಗಬೇಕಿದೆ.

# 2 ವರ್ಷಗಳ ನಂತರ ಬೆಳ್ಳಿಪರದೆಗೆ ಮರಳಿದ ಸಾಯಿ ಪಲ್ಲವಿ

ನಟನೆ, ಡ್ಯಾನ್ಸಿಂಗ್ ಅಪಾರ ಅಭಿಮಾನಿಗಳ ಮನಗೆದ್ದಿರುವ ಸಾಯಿ ಪಲ್ಲವಿ ಇದೀಗ ಎರಡು ವರ್ಷಗಳ ನಂತರ ಬೆಳ್ಳಿಪರದೆಗೆ ಮರಳಿದ್ದಾರೆ. 'ಅಮರನ್' ಚಿತ್ರದ ಮೂಲಕ ಮತ್ತೆ ನಟಿ ಸದ್ದು ಮಾಡುತ್ತಿದ್ದಾರೆ. ನಟಿಯ ಕ್ಯಾರೆಕ್ಟರ್ ಟೀಸರ್ ರಿವೀಲ್ ಚಿತ್ರತಂಡ ಸರ್ಪ್ರೈಸ್ ನೀಡಿದೆ. ಶಿವಕಾರ್ತಿಕೇಯನ್ ನಟನೆಯ ಅಮರನ್ ಚಿತ್ರದಲ್ಲಿ ಸಾಯಿ ಪಲ್ಲವಿ ಹೀರೋಯಿನ್ ಆಗಿ ನಟಿಸಿದ್ದಾರೆ. ವೀರಯೋಧ ಮೇಜರ್ ಮುಕುಂದ ವರದರಾಜನ್ ಬಯೋಪಿಕ್ ಆಗಿದೆ. ಇದರಲ್ಲಿ ವೀರಯೋಧನಾಗಿ ಶಿವಕಾರ್ತಿಕೇಯನ್ ನಟಿಸಿದ್ರೆ, ಅವರ ಪತ್ನಿ ರೆಬೆಕಾ ವರ್ಗೀಸ್ ಪಾತ್ರದಲ್ಲಿ ಸಾಯಿ ಪಲ್ಲವಿ ಜೀವ ತುಂಬಿದ್ದಾರೆ.

ಇನ್ನೂ ಚಿತ್ರದಲ್ಲಿ ನಟಿಯ ಕ್ಯಾರೆಕ್ಟರ್ ಟೀಸರ್ 1:22 ನಿಮಿಷವಿದ್ದು, ಸಾಯಿ ಪಲ್ಲವಿ ಗುಂಗುರು ಕೂದಲು ಬಿಟ್ಟು ನಯಾ ಲುಕ್‌ನಲ್ಲಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ.



# ಆರ್‌ಸಿಬಿ ಸೇರ್ತಾರಾ ಕೆಎಲ್ ರಾಹುಲ್ ಶಾಕಿಂಗ್ ಹೇಳಿಕೆ ನೀಡಿದ ಕನ್ನಡಿಗ ಗೌತಮ್

ನಿನ್ನೆಯಷ್ಟೇ ಬಿಸಿಸಿಐ, ಮುಂಬರುವ ಐಪಿಎಲ್ ಮೆಗಾ ಹರಾಜಿಗೆ ಸಂಬಂಧಿಸಿದಂತೆ ಹೊಸ ನಿಯಮಗಳನ್ನು ಬಿಡುಗಡೆಗೊಳಿಸಿದೆ. ಆ ಪ್ರಕಾರವಾಗಿ ಫ್ರಾಂಚೈಸಿಗಳಿಗೆ ಹರಾಜಿಗೂ ಮುನ್ನ ಐವರು ಆಟಗಾರರನ್ನು ತಂಡದಲ್ಲಿ ಉಳಿಸಿಕೊಳ್ಳಲು, ಹರಾಜಿನಲ್ಲಿ ಒಬ್ಬ ಆಟಗಾರನನ್ನು ರೈಟ್ ಮ್ಯಾಚ್ ಕಾರ್ಡ್ ಬಳಸಿ ಮತ್ತೆ ತನ್ನ ತಂಡಕ್ಕೆ ಸೇರಿಸಿಕೊಳ್ಳಲು ಅನುಮತಿ ನೀಡಿದೆ. ಇದರೊಂದಿಗೆ ಐಪಿಎಲ್ ಮೆಗಾ ಹರಾಜಿನ ಬಗ್ಗೆ ಸಾಕಷ್ಟು ಕುತೂಹಲ ಮೂಡಿದೆ. ಈ ನಡುವೆ ಕ್ರಿಕೆಟ್ ಅಭಿಮಾನಿಗಳಂತೂ ತಮ್ಮ ನೆಚ್ಚಿನ ಆಟಗಾರರನ್ನು ಯಾವ ಫ್ರಾಂಚೈಸಿ ಖರೀದಿಸಬಹುದೆಂದು ಕುತೂಹಲಭರಿತರಾಗಿ ಕಾಯುತ್ತಿದ್ದಾರೆ. ಈ ಎಲ್ಲಾ ಕುತೂಹಲಗಳಿಗೂ ಉತ್ತರ ಸಿಗಬೇಕಾದರೇ ಮುಂದೆ ನಡೆಯುವ ಐಪಿಎಲ್ ಹರಾಜು ಪ್ರಕ್ರಿಯೆವರೆಗೆ ಕಾಯಲೇಬೇಕಿದೆ.

**ರಾಹುಲ್ ಬಗ್ಗೆ ಊಹಾಪೋಹಗಳು:** ಈ ನಡುವೆ ಕನ್ನಡಿಗರ ನೆಚ್ಚಿನ ತಂಡ ಆರ್‌ಸಿಬಿ ಯಾವೆಲ್ಲಾ ಪ್ರಸ್ತುತ ಆಟಗಾರರಿಗೆ ಟಾಟಾ ಬೈ ಬೈ ಹೇಳಬಹುದು ಮೆಗಾ ಹರಾಜಿನಲ್ಲಿ ರೆಡ್ ಆರ್ಮಿಯನ್ನು ಯಾರು ಸೇರಿಕೊಳ್ಳಬಹುದು ಎಂದು ಫ್ಯಾನ್ಸ್ ಯೋಚಿಸುವಂತಾಗಿದೆ. ಅದರಲ್ಲೂ ಕರ್ನಾಟಕದ ಆಟಗಾರರನ್ನು ಆರ್‌ಸಿಬಿ ತನ್ನ ತೆಕ್ಕೆಗೆ ಸೇರಿಸಿಕೊಳ್ಳುತ್ತೆ ಅಂದ್ರೆ ಕನ್ನಡಿಗರಿಗಂತೂ ಎಲ್ಲಿಲ್ಲದ ಖುಷಿ. ಹೀಗಿರುವಾಗ ಕಳೆದ ಕೆಲ ತಿಂಗಳುಗಳಿಂದ ಕನ್ನಡಿಗ ಕೆಎಲ್ ರಾಹುಲ್ ಮತ್ತೆ ಆರ್‌ಸಿಬಿ ಜೆರ್ಸಿಯಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆಯಿದೆ ಎಂದು ಸುದ್ದಿಯೊಂದು ಹರಿದಾಡುತ್ತಿದ್ದು, ಅದರ ಕುರಿತಾಗಿ ರಾಹುಲ್ ಅವರ ಸಹ ಆಟಗಾರ ಕೃಷ್ಣಪ್ಪ ಗೌತಮ್ ಎಕ್ಸ್‌ಕ್ಲೂಸಿವ್ ಮಾಹಿತಿಯೊಂದನ್ನು ನೀಡಿದ್ದಾರೆ.

**ಶಾಕಿಂಗ್ ಹೇಳಿಕೆ ನೀಡಿದ ಗೌತಮ್**

**ಪ್ರಸ್ತುತ ಲಕ್ನೋ ತಂಡದಲ್ಲಿ ರಾಹುಲ್ ಜೊತೆ ಇರುವಇನ್ನೋರ್ವ ಕನ್ನಡಿಗ ಕೆ ಗೌತಮ್, ರಾಹುಲ್ ಆರ್‌ಸಿಬಿ ಸೇರುವ ಬಗ್ಗೆ ಇರುವ ವದಂತಿಗಳ ಬಗ್ಗೆ ಜಿಯೋ ಸಿನಿಮಾದಲ್ಲಿ ಮಾತನಾಡಿದ್ದಾರೆ. ಅದರಲ್ಲಿ ಅವರು 'ಕೆಎಲ್ ರಾಹುಲ್‌ನಿಂದಾಗಿಯೇ ಲಕ್ನೋ ಟೀಂ ಬಿಲ್ಡ್ ಆಗಿದೆ. ಅವರು ಲೀಡರ್ ಮಾತ್ರವಲ್ಲ. ಫೇಸ್ ಆಫ್ ದಿ ಟೀಮ್ ಕೂಡ ಅವರೇ. ಎಲ್‌ಎಸ್‌ಜಿ ಅಂದಾಕ್ಷಣ ತಕ್ಷಣ ತಲೆಗೆ ಹೊಳೆಯುವುದೇ ಅವರು. ಏರು-ಪೇರು ಮೇಲೆ ಕೆಳಗೆ ಎಲ್ಲನೂ ಸಾಮಾನ್ಯ. ಜಸ್ಟ್ ಯಾವುದೋ ಒಂದು ಘಟನೆ ನಡೆದಿದೆ ಅಂದ ಮಾತ್ರಕ್ಕೆ ರಾಹುಲ್‌ನನ್ನು ಬಿಡ್ತಾರೆ ಅನ್ನೋ ಹಾಗಿಲ್ಲ. ಗಾಸಿಪ್ ನಡೀತಾನೆ ಇರುತ್ತೆ ಏನು ಮಾಡಕ್ಕಾಗಲ್ಲ. ಫ್ರಾಂಚೈಸಿಯಿಂದ ಕೆಎಲ್ ರಾಹುಲ್‌ಗೆ ತುಂಬಾ ವ್ಯಾಲ್ಯೂ ಕೊಡ್ತಾರೆ. ಹೀಗಾಗಿ ಆರ್‌ಸಿಬಿ ತಂಡಕ್ಕೆ ಬರೋದು ತುಂಬಾ ಕಷ್ಟ ಇದೆ' ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.**

**ಲಕ್ನೋ ತಂಡಕ್ಕೆ ರಾಹುಲ್ ಗುಡ್ ಬೈ:** ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕನಾಗಿರುವ ಕೆಎಲ್ ರಾಹುಲ್ ತಮ್ಮ ತಂಡವನ್ನು 2022 ಹಾಗೂ 2023ರ ಐಪಿಎಲ್ ಸೀಸನ್‌ಗಳಲ್ಲಿ ಪ್ಲೇ ಆಫ್‌ವರೆಗೆ ಕರೆತಂದಿದ್ದರು. ಅಲ್ಲದೇ, ಸ್ವತಃ ಬ್ಯಾಟಿಂಗ್‌ನಲ್ಲಿ ಅತಿ ಹೆಚ್ಚು ಸ್ಕೋರರ್ ಅನಿಸಿದ್ದರು. ಕಳೆದ ಐಪಿಎಲ್‌ನಲ್ಲಿ ಅಷ್ಟೇನು ಪ್ರದರ್ಶನ ನೀಡದ ರಾಹುಲ್ ಗಾಯದಿಂದ ಹೊರಗುಳಿಯಬೇಕಾಯ್ತು. ಈ ಮಧ್ಯೆ ಪಂದ್ಯವೊಂದರ ಅಂತಿಮ ಹಂತದಲ್ಲಿ ಲಕ್ನೋ ಫ್ರಾಂಚೈಸಿಯ ಮಾಲೀಕ ಸಂಜೀವ್ ಗೋಯೆಂಕ ಸ್ಟೇಡಿಯಂನಲ್ಲಿಯೇ ರಾಹುಲ್‌ನನ್ನು ತರಾಟೆಗೆತ್ತಿಕೊಂಡಿದ್ದು ಎಲ್ಲೆಡೇ ಭಾರಿ ಸುದ್ದಿಯಾಗಿತ್ತು. ಇದರಿಂದಾಗಿ ಕೆಎಲ್ ರಾಹುಲ್, ಲಕ್ನೋ ತಂಡವನ್ನು ತೊರೆಯುತ್ತಾರೆ ಎಂದೆಲ್ಲ ವದಂತಿಗಳು ಹಬ್ಬಲು ಶುರುವಾದವು.

ಇತ್ತ, ಆರ್‌ಸಿಬಿಯೂ ಮುಂದಿನ ಸೀಸನ್‌ಗಳಿಗೆ ನಾಯಕನ ಹುಡುಕಾಟದಲ್ಲಿದ್ದು, ಕೆಎಲ್ ರಾಹುಲ್‌ನನ್ನು ಹರಾಜಿನಲ್ಲಿ ಆರ್‌ಸಿಬಿ ಖರೀದಿಸಿದರೆ ಕರುನಾಡ ತಂಡವನ್ನು ಕನ್ನಡಿಗನೊಬ್ಬ ಮುನ್ನಡೆಸಿದಂತಾಗುತ್ತದೆ ಎಂದು ಆರ್‌ಸಿಬಿ ಅಭಿಮಾನಿಗಳು ಸಂತಸ ವ್ಯಕ್ತಪಡಿಸುತ್ತಿದ್ದಾರೆ. ಅಷ್ಟೇ ಅಲ್ಲದೇ, ದಿನೇಶ್ ಕಾರ್ತಿಕ್‌ನಿಂದ ತೆರವಾಗಿರೋ ವಿಕೆಟ್ ಕೀಪರ್ ಸ್ಥಾನವನ್ನೂ ರಾಹುಲ್ ಸಮರ್ಥವಾಗಿ ನಿಭಾಯಿಸಬಲ್ಲರು ಎಂದರಿತಿರುವ ಆರ್‌ಸಿಬಿ ಮ್ಯಾನೇಜ್‌ಮೆಂಟ್ ಕೂಡ ಅವರನ್ನು ಸಂಪರ್ಕಿಸಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸುದ್ದಿ ಹರಡಿವೆ. ರಾಹುಲ್ ಎಲ್‌ಎಸ್‌ಜಿ ತಂಡದಿಂದ ಹೊರಬರುವುದು ಪಕ್ಕಾ ಎಂದು ಹೇಳಲಾಗುತ್ತಿರುವ ಸಂದರ್ಭದಲ್ಲಿಯೇ ಮತ್ತೊಬ್ಬ ಕನ್ನಡಿಗ ಕೆ ಗೌತಮ್ ಈ ಬಗ್ಗೆ ಬಹು ಮುಖ್ಯವಾದ ವಿಷಯವನ್ನು ಹಂಚಿಕೊಂಡಿದ್ದಾರೆ.



# ಹರಾಜಿಗೂ ಮುನ್ನ ಆರ್‌ಸಿಬಿ ಉಳಿಸಿಕೊಳ್ಳಬಹುದಾದ ಐವರು ಆಟಗಾರರರು ಇವರೇ..



ಐಪಿಎಲ್ 2025 ರ ಮೊದಲು ಮೆಗಾ ಹರಾಜು ನಡೆಯಲಿದೆ. ಅದಕ್ಕೂ ಮುನ್ನ ಆಟಗಾರರನ್ನು ಉಳಿಸಿಕೊಳ್ಳಲು ಬಿಸಿಸಿಐ ನಿಯಮಗಳನ್ನು ಹೊರಡಿಸಿದೆ.

ಅದರಂತೆ ಪ್ರತಿ ಫ್ರಾಂಚೈಸಿ ಗರಿಷ್ಠ ಐವರು ಆಟಗಾರರನ್ನು ತಂಡದಲ್ಲಿ ಉಳಿಸಿಕೊಳ್ಳಬಹುದು. ಇದರಲ್ಲಿ ಒಮ್ಮೆಯೂ ಐಪಿಎಲ್ ಪ್ರಶಸ್ತಿ ಗೆಲ್ಲದ ಆರ್‌ಸಿಬಿ ಫ್ರಾಂಚೈಸಿ ಹರಾಜಿಗೂ ಮುನ್ನ ಯಾವ್ಯಾವ ಆಟಗಾರನನ್ನು ಉಳಿಸಿಕೊಳ್ಳಬಹುದು ಎಂಬುದರ ಬಗ್ಗೆ ಒಂದಿಷ್ಟು ಮಾಹಿತಿ ಇಲ್ಲಿದೆ.

ವಿರಾಟ್ ಕೊಹ್ಲಿ ಐಪಿಎಲ್ ಮೊದಲ ಸೀಸನ್‌ನಿಂದ ಆರ್‌ಸಿಬಿ ಪರ ಆಡುತ್ತಿದ್ದಾರೆ.

ಲೀಗ್ ಇತಿಹಾಸದಲ್ಲಿ ಎಲ್ಲಾ ಸೀಸನ್‌ನಲ್ಲೂ ಒಂದೇ ತಂಡದ ಪರ ಕಣಕ್ಕಿಳಿದ ಏಕೈಕ ಆಟಗಾರ ಕೊಹ್ಲಿ. ಹೀಗಾಗಿ ವಿರಾಟ್ ಮತ್ತೊಮ್ಮೆ ಆರ್ಸಿಬಿಯ ಭಾಗವಾಗುವುದು ಬಹುತೇಕ ಖಚಿತವಾಗಿದೆ.

ಟೀಂ ಇಂಡಿಯಾದ ಪ್ರಮುಖ ವೇಗದ ಬೌಲರ್ ಮೊಹಮ್ಮದ್ ಸಿರಾಜ್ ಅವರನ್ನು ಆರ್‌ಸಿಬಿ ಉಳಿಸಿಕೊಳ್ಳುವುದು ಬಹುತೇಕ ಖಚಿತ. ಸಿರಾಜ್ ಎಲ್ಲಾ ಮೂರು ಮಾದರಿಗಳಲ್ಲಿ ಭಾರತ ತಂಡದ ಭಾಗವಾಗಿದ್ದಾರೆ. ಹೊಸ ಚೆಂಡು ಹಾಗೂ ಡೆತ್ ಓವರ್‌ಗಳಲ್ಲಿ ಅದ್ಭುತವಾಗಿ ಬೌಲಿಂಗ್ ಮಾಡಬಲ್ಲರು. ಅಂತಹ ಪರಿಸ್ಥಿತಿಯಲ್ಲಿ, ಫ್ರ್ಯಾಂಚೈಸ್ ಅವರನ್ನು ತಂಡದಿಂದ ಕೈಬಿಡುವ ಯೋಚನೆ ಮಾಡುವುದಿಲ್ಲ.

ಇಂಗ್ಲೆಂಡ್‌ನ ಸ್ಫೋಟಕ ಬ್ಯಾಟ್ಸ್‌ಮನ್ ವಿಲ್ ಜಾಕ್ಸ್ ಕಳೆದ ಐಪಿಎಲ್‌ನಲ್ಲಿ ಸಿಡಿಲಬ್ಬರದ ಶತಕ ಬಾರಿಸಿದ್ದರು. ಇದಲ್ಲದೇ ಬೌಲಿಂಗ್‌ನಲ್ಲೂ ಎರಡು ವಿಕೆಟ್ ಪಡೆದಿದ್ದರು. ಜಾಕ್ಸ್ ತನ್ನ ಸ್ಫೋಟಕ ಬ್ಯಾಟಿಂಗ್‌ನಿಂದ ಪಂದ್ಯದ ದಿಕ್ಕು ಬದಲಿಸುವ ಸಾಮರ್ಥ್ಯ ಹೊಂದಿದ್ದಾರೆ. ಇದೇ ಕಾರಣಕ್ಕೆ ಆರ್‌ಸಿಬಿ ಅವರನ್ನು ತಂಡದಲ್ಲಿ ಉಳಿಸಿಕೊಳ್ಳಬಹುದು.

ಆಸ್ಟ್ರೇಲಿಯಾದ ಆಲ್ ರೌಂಡರ್ ಕ್ಯಾಮರೂನ್ ಗ್ರೀನ್ ಕೂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿ ಉಳಿಯಬಹುದು. ಕಳೆದ ಐಪಿಎಲ್‌ನಲ್ಲಿ ಟ್ರೇಡಿಂಗ್ ಮೂಲಕ ಮುಂಬೈ ಇಂಡಿಯನ್ಸ್ ತಂಡದಿಂದ ಆರ್‌ಸಿಬಿಗೆ ಸೇರಿಕೊಂಡಿದ್ದ ಗ್ರೀನ್, ಆಲ್ ರೌಂಡರ್ ಪಾತ್ರವನ್ನು ಉತ್ತಮವಾಗಿ ನಿರ್ವಹಿಸಿದ್ದರು. ಅಲ್ಲದೆ ಗ್ಲೆನ್ ಮ್ಯಾಕ್ಸ್‌ವೆಲ್ ಅವರನ್ನು ಬಿಡುಗಡೆ ಮಾಡುವ ಮೂಲಕ ಫ್ರಾಂಚೈಸ್ ಗ್ರೀನ್ ಅವರನ್ನು ತಂಡದಲ್ಲಿ ಉಳಿಸಿಕೊಳ್ಳಬಹುದು.

ರಜತ್ ಪಾಟಿದಾರ್ ಸ್ಪಿನ್ ಹಾಗೂ ಪೇಸ್ ಬೌಲಿಂಗ್ ವಿರುದ್ಧ ಉತ್ತಮವಾಗಿ ಬ್ಯಾಟ್ ಮಾಡುವ ಸಾಮರ್ಥ್ಯ ಹೊಂದಿದ್ದಾರೆ. ಐಪಿಎಲ್‌ನ ಕಳೆದ 24 ಇನ್ನಿಂಗ್ಸ್‌ಗಳಲ್ಲಿ, ಅವರು 35 ರ ಸರಾಸರಿ ಮತ್ತು 159 ಸ್ಟ್ರೈಕ್ ರೇಟ್‌ನಲ್ಲಿ 799 ರನ್ ಗಳಿಸಿದ್ದಾರೆ. ಇದರಲ್ಲಿ 51 ಬೌಂಡರಿ ಹಾಗೂ 54 ಸಿಕ್ಸರ್‌ಗಳು ಸೇರಿವೆ. ಅಂತಹ ಪರಿಸ್ಥಿತಿಯಲ್ಲಿ, ಅವರು ತಂಡದಲ್ಲಿ ಉಳಿಯುವುದು ಬಹುತೇಕ ಖಚಿತವಾಗಿದೆ.

# ದುರ್ಬಲ ಸ್ಕಾಟ್ಲೆಂಡ್ ಮುಂದೆ ಮಂಡಿಯೂರಿದ ಪಾಕಿಸ್ತಾನ

ಮಹಿಳಾ ಟಿ20 ವಿಶ್ವಕಪ್ ಮುಂದಿನ ತಿಂಗಳು ಅಕ್ಟೋಬರ್ 3 ರಿಂದ ಯುಎಇನಲ್ಲಿ ಆರಂಭವಾಗಲಿದೆ. ಆದರೆ ಅದಕ್ಕೂ ಮುನ್ನ ಅಭ್ಯಾಸ ಪಂದ್ಯಗಳು ನಡೆಯುತ್ತಿವೆ. ಅದರಂತೆ ನಡೆದ ಅಭ್ಯಾಸ ಪಂದ್ಯದಲ್ಲಿ ಪಾಕಿಸ್ತಾನ ಮಹಿಳಾ ಕ್ರಿಕೆಟ್ ತಂಡ, ಕ್ರಿಕೆಟ್ ಶಿಶು ಸ್ಕಾಟ್ಲೆಂಡ್ ಮಹಿಳಾ ತಂಡದ ವಿರುದ್ಧ ಹೀನಾಯ ಸೋಲನ್ನು ಅನುಭವಿಸಿದೆ. ಟಿ20 ವಿಶ್ವಕಪ್‌ಗೂ ಮುನ್ನ ಪಾಕಿಸ್ತಾನ ತಂಡ ಸ್ಕಾಟ್ಲೆಂಡ್‌ನಂತಹ ದುರ್ಬಲ ತಂಡದ ವಿರುದ್ಧ ಸೋತಿರುವುದು ತಂಡಕ್ಕೆ ಆರಂಭಿಕ ಆಘಾತ ನೀಡಿದೆ.

ಈ ಅಭ್ಯಾಸ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 132 ರನ್ ಗಳಿಸಿತು.

ತಂಡದ ಪರ ಅಗ್ರ ಕ್ರಮಾಂಕ ರನ್ ಕಲೆಹಾಕುವಲ್ಲಿ ಎಡವಿತು. ಇದರಿಂದಾಗಿ ತಂಡಕ್ಕೆ ಆರಂಭಿಕ ಆಘಾತ ಎದುರಾಯಿತು. ತಂಡದ ಪರ ಹೋರಾಟದ ಇನ್ನಿಂಗ್ಸ್ ಕಟ್ಟಿದ ಮುನಿಬಾ ಮತ್ತು ಒಮೈಮಾ ತಂಡಕ್ಕೆ ಉತ್ತಮ ಜೊತೆಯಾಟ ನೀಡಿದರು. ಈ ಪಂದ್ಯದಲ್ಲಿ ಒಮೈಮಾ 30 ರನ್ ಮತ್ತು ಮುನಿಬಾ 27 ರನ್ ಗಳಿಸಿದರು.

ಸುಲಭವಾಗಿ ಗುರಿ ಬೆನ್ನಟ್ಟಿದ ಸ್ಕಾಟ್ಲೆಂಡ್ 133 ರನ್‌ಗಳ ಗುರಿ ಬೆನ್ನಟ್ಟಿದ ಸ್ಕಾಟ್ಲೆಂಡ್ ತಂಡ ಕೇವಲ 2 ವಿಕೆಟ್ ಕಳೆದುಕೊಂಡು 18 ಓವರ್‌ಗಳಲ್ಲೇ ಸುಲಭವಾಗಿ ಜಯದ ನಗೆ ಬೀರಿತು. ಸ್ಕಾಟ್ಲೆಂಡ್ ಪರ ಅದ್ಭುತ ಬ್ಯಾಟಿಂಗ್ ಮಾಡಿದ ಸಾರಾ 52 ಎಸೆತಗಳಲ್ಲಿ 60 ರನ್‌ಗಳ ಅತ್ಯಧಿಕ ಇನ್ನಿಂಗ್ಸ್ ಆಡಿದರೆ, ಹೋರ್ಲಿ ಕೂಡ 48 ರನ್‌ಗಳ ಗೆಲುವಿನ ಕಾಣಿಕೆ ನೀಡಿದರು.



# ಬೆಂಗಳೂರಲ್ಲಿ ನೂತನ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ ಲೋಕಾರ್ಪಣೆ



ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ನಿರ್ಮಾಣಗೊಂಡಿರುವ ನೂತನ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿಯನ್ನು ಲೋಕಾರ್ಪಣೆ ಮಾಡಲಾಗಿದೆ. ಈ ಉದ್ಘಾಟನಾ ಸಮಾರಂಭದಲ್ಲಿ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ, ಮಂಡಳಿಯ ಅಧ್ಯಕ್ಷ ರೋಜರ್ ಬಿನ್ನಿ, ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ, ಎನ್‌ಸಿಎಸ್ ನಿರ್ದೇಶಕ ವಿವಿಎಸ್ ಲಕ್ಷ್ಮಣ್, ಟೀಂ ಇಂಡಿಯಾ ಆಟಗಾರರಾದ ಹಾರ್ದಿಕ್ ಪಾಂಡ್ಯ ಮತ್ತು ಮೊಹಮ್ಮದ್ ಶಮಿ ಉಪಸ್ಥಿತರಿದ್ದರು. ಹಲವು ವಿಶಿಷ್ಟಗಳಿಂದ ಕೂಡಿರುವ ಈ ಅಕಾಡೆಮಿಗೆ ನೂತನ ಹೆಸರಿಟ್ಟಿದ್ದು, ಸೆಂಟರ್ ಆಫ್ ಎಕ್ಸಲೆನ್ಸ್ ಎಂದು ಮರು ನಾಮಕರಣ ಮಾಡಲಾಗಿದೆ.

**ಏನೆಲ್ಲ ವಿಶೇಷತೆಗಳಿವೆ:** ನೂತನ ಎನ್‌ಸಿಎಯಲ್ಲಿ ಆಟಗಾರರ ಅಭ್ಯಾಸಕ್ಕೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಇದು 40 ಎಕರೆ ಪ್ರದೇಶದಲ್ಲಿ ಹರಡಿಕೊಂಡಿದ್ದು, ಇಲ್ಲಿ 3 ಮೈದಾನ ಹಾಗೂ ಒಟ್ಟು 86 ಪಿಚ್‌ಗಳನ್ನು ಸಿದ್ಧಪಡಿಸಲಾಗಿದೆ. ಎಲ್ಲಾ ಮೂರು ಮೈದಾನಗಳನ್ನು ಇಂಗ್ಲಿಷ್ ಕೌಂಟಿ ಮೈದಾನದ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ. ಇವುಗಳಲ್ಲಿ 45 ಹೊರಾಂಗಣ ಪಿಚ್‌ಗಳು ಸೇರಿವೆ. ಇಲ್ಲಿ ಅನೇಕ ಆಟಗಾರರು ಒಂದೇ ಸಮಯದಲ್ಲಿ ಅಭ್ಯಾಸ ಮಾಡಬಹುದು.ಈ ಪಿಚ್‌ಗಳ ತಯಾರಿಕೆಯಲ್ಲಿ ಭಾರತದ ಪರಿಸ್ಥಿತಿಗಳ ಜೊತೆಗೆ ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ ಮತ್ತು ಇಂಗ್ಲೆಂಡ್‌ನಂತಹ ಪರಿಸ್ಥಿತಿಗಳನ್ನೂ ಗಮನದಲ್ಲಿಟ್ಟುಕೊಳ್ಳಲಾಗಿದೆ.

ಇದರೊಂದಿಗೆ ಭಾರತೀಯ ಆಟಗಾರರು ವಿದೇಶಿ ಪ್ರವಾಸಕ್ಕೆ ತೆರಳುವ ಮುನ್ನ ಭಾರತದಲ್ಲಿ ಅಭ್ಯಾಸ ನಡೆಸಲು ಸಾಧ್ಯವಾಗುತ್ತದೆ. ಹೊಸ ಎನ್‌ಸಿಎಯಲ್ಲಿ ಒಳಾಂಗಣ ಅಭ್ಯಾಸ ಸೌಲಭ್ಯವನ್ನು ಏರ್ಪಡಿಸಲಾಗಿದ್ದು, ಇದರಿಂದ ಮಳೆಯ ಸಂದರ್ಭದಲ್ಲಿ ಅಭ್ಯಾಸಕ್ಕೆ ಯಾವುದೇ ಅಡ್ಡಿಯಾಗುವುದಿಲ್ಲ.

**ಆಧುನಿಕ ಪುನರ್ವಸತಿ ಸೌಲಭ್ಯ:** ಅಭ್ಯಾಸದ ಜೊತೆಗೆ ಆಟಗಾರರಿಗೆ ರಿಫ್ರೆಶ್‌ಮೆಂಟ್, ರಿಹ್ಯಾಬ್ ಮತ್ತು ತರಬೇತಿಗಾಗಿ ಹಲವು ಸೌಲಭ್ಯಗಳನ್ನು ಸಹ ಸಿದ್ಧಪಡಿಸಲಾಗಿದೆ. ವಾಸ್ತವವಾಗಿ, ಬಿಸಿಸಿಐ ಒಲಿಂಪಿಕ್ ಗಾತ್ರದ ಈಜುಕೊಳವನ್ನು ನಿರ್ಮಿಸಿದೆ, ಇದರಲ್ಲಿ ಆಟಗಾರರು ತಮ್ಮನ್ನು ತಾವು ರಿಫ್ರೆಶ್ ಮಾಡಿಕೊಳ್ಳಬಹುದು. ಇದಲ್ಲದೇ ಆಟಗಾರರ ರಿಹ್ಯಾಬ್‌ಗಾಗಿ ಕ್ರೀಡಾ ವಿಜ್ಞಾನ ಸೌಲಭ್ಯ ಮತ್ತು ಆಧುನಿಕ ತರಬೇತಿ ಸೌಲಭ್ಯಗಳಿದ್ದು, ಗಾಯ ನಿರ್ವಹಣೆಗೆ ನೆರವಾಗಲಿದೆ. ಎನ್‌ಸಿಎಯಲ್ಲಿ ಆಟಗಾರರು ಉಳಿದುಕೊಳ್ಳಲು ಉತ್ತಮ ಸೌಲಭ್ಯಗಳಿರುವ 70 ಕೊಠಡಿಗಳನ್ನೂ ಸಿದ್ಧಪಡಿಸಲಾಗಿದೆ. ಕ್ರಿಕೆಟ್ ಅಲ್ಲದೆ ಇತರೆ ಕ್ರೀಡೆಗಳಿಗೂ ತರಬೇತಿ ನೀಡುವ ಸೌಲಭ್ಯಗಳಿವೆ. ಅಂದರೆ ಒಲಿಂಪಿಕ್ಸ್ ಮತ್ತು ಏಷ್ಯನ್ ಗೇಮ್ಸ್‌ನಂತಹ ದೊಡ್ಡ ಕಾರ್ಯಕ್ರಮಗಳಿಗೂ ಸಿದ್ಧತೆಗಳನ್ನು ಮಾಡಬಹುದು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966